ಸಂಪುಟ: 05 ಸಂಚಿಕೆ: 145 ಪುಟಗಳು: 08 ಗುರುವಾರ 07 ಆಗಸ್ಟ್ 2025 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

**ಮುಂಜಾನೆ ಮಾತು**
ದೊಡ್ಡ ಗುರಿ, ಜ್ಞಾನದ ಸಂಪಾದನೆ, ಕಠಿಣ ಪರಿಶ್ರಮ ಮತ್ತು ದೃಢ ಹಾಗೂ ಸತತ ಪ್ರಯತ್ನ ಎಂಬ ನಾಲ್ಕು ವಿಷಯಗಳನ್ನು ಅನುಸರಿಸಿದರೆ ಏನು ಬೇಕಾದರೂ ಸಾಧಿಸಬಹುದು.


# ಉದಯ ವಾಹಿನಿ
UV ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ


## ಸಹಾಯಕ ಆಯುಕ್ತರ ಹುದ್ದೆಗಳಿಗೆ ಐಎಎಸ್ ಅಧಿಕಾರಿಗಳ ನೇಮಕ

• ಉದಯವಾಹಿನಿ, ಬೆಂಗಳೂರು

ರಾಜ್ಯದ ಮೂರು ಜಿಲ್ಲೆಗಳ ಸಹಾಯಕ ಆಯುಕ್ತರ ಹುದ್ದೆಗಳಿಗೆ ಐಎಎಸ್ ಅಧಿಕಾರಿಗಳನ್ನು ನೇಮಕ ಮಾಡಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ. ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಉತ್ತರ ಕನ್ನಡ ಜಿಲ್ಲೆಯ ಕುಮಟಾ ಉಪವಿಭಾಗದ ಸಹಾಯಕ ಆಯುಕ್ತರಾಗಿ ಪಿ.ಶ್ರವಣ್ ಕುಮಾರ್ (ಐಎಎಸ್) ಅವರನ್ನು ನೇಮಕ ಮಾಡಲಾಗಿದೆ. ಚಾಮರಾಜನಗರ ಜಿಲ್ಲೆಯ ಕೊಳ್ಳೇಗಾಲ ಉಪ ವಿಭಾಗದ ಸಹಾಯಕ ಆಯುಕ್ತರಾಗಿ ದಿನೇಶ್ ಕುಮಾರ್ ಮೀನಾ (ಐಎಎಸ್) ಅವರನ್ನು ನೇಮಿಸಲಾಗಿದೆ. ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರು ಉಪ ವಿಭಾಗದ ಸಹಾಯಕ ಆಯುಕ್ತರಾಗಿ ಮೀನಾಕ್ಷಿ ಆರ್ಯ (ಐಎಎಸ್) ಅವರನ್ನು ಸರ್ಕಾರ ನೇಮಕ ಮಾಡಿದೆ.

## ಜುಲೈ 8ರಂದು ಅಂತಿಮ ವರದಿ ಸಲ್ಲಿಕೆ: ಡಾ.ಎಂ.ಸಿ. ಸುಧಾಕರ್

• ಉದಯವಾಹಿನಿ, ಬೆಂಗಳೂರು

ರಾಜ್ಯ ಶಿಕ್ಷಣ ನೀತಿ (ಎಸ್‌ಇಪಿ) ಸಿದ್ಧವಾಗಿದ್ದು, ಎಸ್‌ಇಪಿ ಆಯೋಗ ಜುಲೈ 8ರಂದು ಸರ್ಕಾರಕ್ಕೆ ಅಂತಿಮ ವರದಿ ಸಲ್ಲಿಸುತ್ತಿದೆ. ಜಯಚಾಮರಾಜೇಂದ್ರ ಪಾಲಿಟೆಕ್ನಿಕ್ (ಎಸ್‌ಜೆಪಿ) ಆವರಣದಲ್ಲಿ ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್ ಕಟ್ಟಡಕ್ಕೆ ಶಿಲಾನ್ಯಾಸ ನೆರವೇರಿಸಿದ ನಂತರ ಈ ಕುರಿತು ಮಾಹಿತಿ ನೀಡಿದ ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ. ಸುಧಾಕರ್, 'ಎಸ್‌ಇಪಿ ಅಂತಿಮ ವರದಿ ಸಿದ್ಧವಾಗಿದೆ.

ಈ ಕುರಿತು ಉನ್ನತ ಶಿಕ್ಷಣ ಹಾಗೂ ಶಾಲಾ ಶಿಕ್ಷಣ ಸಚಿವರಿಗೆ ಪ್ರಾಥಮಿಕ ಮಾಹಿತಿ ನೀಡಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸಮಯ ಪಡೆದು ವರದಿ ಸ್ವೀಕರಿಸಲಾಗುವುದು' ಎಂದರು. ತರಾತುರಿಯಲ್ಲಿ ಸಿದ್ಧಪಡಿಸಿದ್ದ ರಾಷ್ಟ್ರೀಯ ಹೊಸ ಶಿಕ್ಷಣ ನೀತಿಗೆ ಪರ್ಯಾಯವಾಗಿ ರಾಜ್ಯ ಶಿಕ್ಷಣ ನೀತಿ ರೂಪಿಸಲು ಸುಖದೇವ್ ಥೋರಟ್ ಅಧ್ಯಕ್ಷತೆಯಲ್ಲಿ ಆಯೋಗ ರಚಿಸಲಾಗಿತ್ತು. ಕಾಂಗ್ರೆಸ್ ಪಕ್ಷ ಚುನಾವಣೆಯಲ್ಲಿ ನೀಡಿದ್ದ ಭರವಸೆಯಂತೆ ನಡೆದುಕೊಂಡಿತ್ತು. ವರದಿ ಸ್ವೀಕರಿಸಿದ ನಂತರ ಸಂಪುಟ ಸಭೆಯಲ್ಲಿ ಚರ್ಚೆ ನಡೆಸಿ, ಜಾರಿಗೊಳಿಸಲಾಗುವುದು ಎಂದು ಮಾಹಿತಿ ನೀಡಿದರು.

## ಬಿಎಂಸಿಆರ್‌ಐ ಆಸ್ಪತ್ರೆಗಳಿಗೆ ಸಿದ್ದರಾಮಯ್ಯ ದಿಢೀರ್ ಭೇಟಿ

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯಡಿ ಕಾರ್ಯನಿರ್ವಹಿಸುತ್ತಿರುವ ಆಸ್ಪತ್ರೆಗಳಿಗೆ ದಿಢೀರ್ ಭೇಟಿ ನೀಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಚಿಕಿತ್ಸಾ ವ್ಯವಸ್ಥೆಯನ್ನು ಪರಿಶೀಲಿಸಿದರು.ಗ್ಯಾಸ್ಟ್ರೋಎಂಟರಾಲಜಿ ವಿಜ್ಞಾನ ಮತ್ತು ಅಂಗಾಂಗ ಕಸಿ ಸಂಸ್ಥೆ (ಐಗಾಟ್), ವಾಣಿವಿಲಾಸ ಆಸ್ಪತ್ರೆ ಹಾಗೂ ವಿಕ್ಟೋರಿಯಾ ಆಸ್ಪತ್ರೆಯಲ್ಲಿನ ಅಪಘಾತ ಮತ್ತು ತುರ್ತು ಆರೈಕೆ ಕೇಂದ್ರಕ್ಕೆ ಭೇಟಿ ನೀಡಿದರು. ವೈದ್ಯಕೀಯ ಶಿಕ್ಷಣ ಸಚಿವ ಶರಣಪ್ರಕಾಶ ಪಾಟೀಲ ಅವರಿಗೆ ಸಾಥ್ ನೀಡಿದರು. ಸಕಾಲದಲ್ಲಿ ಸೂಕ್ತ ಚಿಕಿತ್ಸೆ ದೊರಕುತ್ತಿದೆಯೆ? ಚಿಕಿತ್ಸೆ ಪಡೆಯುವಲ್ಲಿ ಏನಾದರೂ ಅಡೆತಡೆಗಳಿವೆಯೆ? ಆಸ್ಪತ್ರೆಯ ವೈದ್ಯರು ಮತ್ತು ಸಿಬ್ಬಂದಿ ಸ್ಪಂದನೆ ಹೇಗಿದೆ ಎಂದು ರೋಗಿಗಳು ಹಾಗೂ ಅವರ ಸಹಾಯಕರನ್ನು ಪ್ರಶ್ನಿಸಿದರು.

## ಧರ್ಮಸ್ಥಳ: ಗುರುತಿಸದ ಜಾಗಕ್ಕೆ ಕರೆದೊಯ್ದ ಸಾಕ್ಷಿ ದೂರುದಾರ

• ಉದಯವಾಹಿನಿ, ಮಂಗಳೂರು

ಧರ್ಮಸ್ಥಳ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದ ಅಪರಾಧ ಕೃತ್ಯಗಳ ಮೃತದೇಹಗಳನ್ನು ಹೂತು ಹಾಕಲಾಗಿದೆ ಎಂಬ ಆರೋಪಕ್ಕೆ ಸಂಬಂಧಿಸಿದ ಪ್ರಕರಣದ ತನಿಖೆ ನಡೆಸುತ್ತಿರುವ ವಿಶೇಷ ತನಿಖಾ ತಂಡವು (ಎಸ್‌ಐಟಿ) ನೇತ್ರಾವತಿ ಸ್ನಾನಘಟ್ಟದ ಸಮೀಪ ಹೆದ್ದಾರಿ ಪಕ್ಕದ ಕಾಡಿನೊಳಗೆ ಶೋಧಕಾರ್ಯಕ್ಕಾಗಿ ಬುಧವಾರ ತೆರಳಿತು.

ಸಾಕ್ಷಿ ದೂರುದಾರ ಇದುವರೆಗೆ ತೋರಿಸಿದ್ದ 13ನೇ ಜಾಗವನ್ನು ಹೊರತುಪಡಿಸಿ, ಉಳಿದೆಲ್ಲ ಜಾಗಗಳಲ್ಲಿ ಎಸ್‌ಐಟಿ ಶೋಧ ಕಾರ್ಯ ಪೂರ್ಣಗೊಳಿಸಿದೆ. ಅಲ್ಲದೇ ಆತ ಮೊದಲ ದಿನ ತೋರಿಸಿದ್ದ ಜಾಗಗಳ ಹೊರತಾಗಿ, ಸೋಮವಾರ ತೋರಿಸಿದ್ದ ಬೇರೆ ಜಾಗದಲ್ಲೂ ಶೋಧ ಕಾರ್ಯ ನಡೆಸಿದೆ. ನೇತ್ರಾವತಿ ಸ್ನಾನಘಟ್ಟದ ಪಕ್ಕದ ಬಯಲಿನಲ್ಲಿರುವ 13ನೇ ಜಾಗದಲ್ಲಿ ಬುಧವಾರ ಶೋಧ ನಡೆಸಲಾಗುತ್ತದೆ ಎಂದು ನಿರೀಕ್ಷಿಸಲಾಗಿತ್ತು. ಆದರೆ, ಎಸ್‌ಐಟಿ ತಂಡವು ಸಾಕ್ಷಿ ದೂರುದಾರ ತೋರಿಸಿದ್ದ. 12ನೇ ಜಾಗವಿರುವ ಕಡೆಯಿಂದ ಕಾಡಿನ ಒಳಗೆ ತೆರಳಿದೆ. 'ಇದೇ ಕಾಡಿನಲ್ಲಿ ಸಾಕ್ಷಿ ದೂರುದಾರ ಮತ್ತೊಂದು ಜಾಗವನ್ನು ತೋರಿಸಿದ್ದು ಅಲ್ಲಿ ಇಂದು ಶೋಧ ಕಾರ್ಯ ನಡೆಸಲಾಗುತ್ತದೆ' ಎಂದು ಎಸ್ ಐಟಿ ಮೂಲಗಳು ತಿಳಿಸಿವೆ. ಇಂದು ಕಾಡಿನೊಳಗೆ ಅಗೆಯುವ ಸ್ಥಳಕ್ಕೆ ಎಸ್‌ಐಟಿ ಎಸ್.ಪಿ ಜಿತೇಂದ್ರ ಕುಮಾರ್ ದಯಾಮ, ಪುತ್ತೂರು ಉಪವಿಭಾಗಾಧಿಕಾರಿ ಸ್ಟೆಲ್ಲಾ ವರ್ಗೀಸ್, ವಿಧಿವಿಜ್ಞಾನ ತಜ್ಞರು ಹಾಗೂ ಸಾಕ್ಷಿದೂರುದಾರ ಹಾಗೂ ಆತನ ವಕೀಲರು, ಭದ್ರತಾ ಸಿಬ್ಬಂದಿ, ಅಂದಾಜು 20 ಕಾರ್ಮಿಕರು ಕಾಡಿನೊಳಗೆ ತೆರಳಿದ್ದಾರೆ. ನೆಲ ಅಗೆಯುವ ಯಂತ್ರವನ್ನು ಇಂದು ಸ್ಥಳಕ್ಕೆ ತರಿಸಿಕೊಂಡಿಲ್ಲ.

# ಉತ್ತರ ಕಾಶಿ ಜನರು ದಿಗ್ಭ್ರಾಂತಿ

ನಾಪತ್ತೆಯಾಗಿದ್ದ ಕೇರಳದ 28 ಪ್ರವಾಸಿಗರು ಸೇಫ್



## ಧರಾಲಿ ನಂತ್ರ ಮೂರು ಗಂಟೆಗಳ ಬಳಿಕ ಮತ್ತೊಂದು ಮೇಘಸ್ಫೋಟ



## ಗಂಗೋತ್ರಿಗೆ ಹೊರಟ ಬಳಿಕ ಸಂಪರ್ಕ ಕಡಿತ

1 ಉತ್ತರಕಾಶಿಯ ಬಡ್ಕೋಟ್ ತಹಶೀಲ್ ಪ್ರದೇಶದ ಬನಾಲ್ ಪಟ್ಟಿಯಲ್ಲಿ, ಭಾರಿ ಮಳೆ


2 ಇಡೀ ಜನವಸತಿ ಪ್ರದೇಶವೊಂದು ಕ್ಷಣಾರ್ಧದಲ್ಲಿ ನಾಶ

3 ಉತ್ತರಾಖಂಡದಲ್ಲಿ ಮೇಘಸ್ಫೋಟ

• ಉದಯವಾಹಿನಿ, ಉತ್ತರಕಾಶಿ


ಉತ್ತರಾಖಂಡದ ಉತ್ತರಕಾಶಿ ಜಿಲ್ಲೆಯಲ್ಲಿರುವ ಧರಾಲಿ ಗ್ರಾಮದಲ್ಲಿ ಸಂಭವಿಸಿದ ಭೀಕರ ಮೇಘಸ್ಫೋಟ ಹಾಗೂ ಆ ಬಳಿಕ ಸೃಷ್ಟಿಯಾದ ದಿಢೀರ್ ಪ್ರವಾಹದಿಂದಾಗಿ ಅರ್ಧಹಳ್ಳಿಯೇ ಭೂಸಮಾಧಿಯಾಗಿದ್ದು, ಭಾರೀ ಪ್ರಮಾಣದ ಆಸ್ತಿಪಾಸ್ತಿ, ಜೀವ ಹಾನಿಯಾಗಿದೆ. ಘಟನೆಯಲ್ಲಿ ಕನಿಷ್ಠ 4 ಜನರು ಸಾವನ್ನಪ್ಪಿದ್ದು, 60-70 ಜನರು ನಾಪತ್ತೆಯಾಗಿದ್ದಾರೆ. ಖೀರ್ ಗಂಗಾ ನದಿಯ ಅಚ್ಚುಕಟ್ಟು ಪ್ರದೇಶದಲ್ಲಿ ಸಂಭವಿಸಿದ ಮೇಘಸ್ಫೋಟದಿಂದಾಗಿ ಭಾರೀ ಪ್ರವಾಹ ಹಾಗೂ ಗುಡ್ಡಕುಸಿತ ಉಂಟಾಗಿ ಅಪಾರ ಕೆಸರು ಮಿಶ್ರಿತ ನೀರು ಧರಾಲಿ ಗ್ರಾಮಕ್ಕೆ ನುಗ್ಗಿದೆ. ಹಿಂದೂಗಳ ಪವಿತ್ರ ಚಾರ್‌ಧಾಮ್‌ಗಳಲ್ಲಿ ಒಂದಾಗಿರುವ ಗಂಗೋತ್ರಿಗೆ ಸಾಗುವ ಮಾರ್ಗದಲ್ಲೇ ಇರುವ ಈ ಗ್ರಾಮದಲ್ಲಿ ಹಲವು ಮನೆಗಳು, ಹೋಟೆಲ್‌ಗಳು, ಹೋಮ್ ಸ್ಟೇ, ವಾಹನಗಳು ಪ್ರವಾಹದ ತೀವ್ರತೆಗೆ ಕೊಚ್ಚಿಕೊಂಡು ಹೋಗಿವೆ. ನದಿಯ ಕೆಳಪಾತ್ರದಲ್ಲಿ ಬರುವ ಕಟ್ಟಡಗಳೆಲ್ಲಾ ಪ್ರವಾಹದ ತೀವ್ರತೆಗೆ ತರಗೆಲೆಗಳಂತೆ ಉರುಳಿಬಿದ್ದಿದ್ದು, ಅಳಿದುಳಿದ ಕಟ್ಟಡಗಳು ಭೂಸಮಾಧಿಯಾಗಿವೆ.

ಧರಾಲಿ ಗ್ರಾಮ ಮಾತ್ರವಲ್ಲದೇ, ಖೀರ್‌ಗಂಗಾ ನದಿ ಪಾತ್ರದಲ್ಲಿ ಸಂಭವಿಸಿದ ಮೇಘಸ್ಫೋಟದಿಂದಾಗಿ ಒಂದೇ ಬೆಟ್ಟದ ಎರಡು ಕಡೆ ಪ್ರವಾಹ ಸೃಷ್ಟಿಯಾಗಿದೆ. ಒಂದು ಪ್ರವಾಹ ಖೀರ್‌ಗಂಗಾ ನದಿಯ ಮೂಲಕ ಧರಾಲಿ ಗ್ರಾಮವನ್ನು ಆವರಿಸಿಕೊಂಡಿದ್ದರೆ, ಇನ್ನೊಂದು ಸುಕ್ಕಿ ಗ್ರಾಮದ ಮೇಲೆ ನುಗ್ಗಿದೆ. ಪ್ರವಾಹ ಪೀಡಿತ ಎರಡೂ ಗ್ರಾಮಗಳಲ್ಲೀ ಭಾರೀ ಪ್ರಮಾಣ ಮಳೆ ಸುರಿಯುತ್ತಿರುವ ಕಾರಣ ಪರಿಹಾರದ ಕೆಲಸಗಳಿಗೆ ಅಡ್ಡಿಯಾಗಿದೆ. ನವದೆಹಲಿ, ಉತ್ತರಾಖಂಡದ ಉತ್ತರಕಾಶಿಯಲ್ಲಿ ಭಾರೀ ಪ್ರವಾಹ ಉಂಟಾಗಿದೆ. ಉತ್ತರಕಾಶಿಯ ಮೇಘಸ್ಫೋಟದಲ್ಲಿ 28 ಕೇರಳದ ಪ್ರವಾಸಿಗರು ನಾಪತ್ತೆಯಾಗಿದ್ದರು. ಇದೀಗ ಅವರನ್ನು ಪತ್ತೆಹಚ್ಚಲಾಗಿದ್ದು, ಅವರೆಲ್ಲರೂ ಸೇಫ್ ಆಗಿದ್ದಾರೆ. ಕೇರಳದ ಸ್ಥಳೀಯರನ್ನು ಒಳಗೊಂಡ 28 ಸದಸ್ಯರ ಪ್ರವಾಸಿಗರ ಗುಂಪು ಉತ್ತರಾಖಂಡದ ಉತ್ತರಕಾಶಿ ಜಿಲ್ಲೆಯಲ್ಲಿ ಸಂಭವಿಸಿದ ಭೀಕರ ಮಣ್ಣು ಕುಸಿತದ ನಂತರ ಕಾಣೆಯಾಗಿತ್ತು. ಪ್ರವಾಸಿಗರು ಕೊನೆಯದಾಗಿ ಉತ್ತರಕಾಶಿಯಿಂದ ಗಂಗೋತ್ರಿಗೆ ತೆರಳುವಾಗ ಸಂಪರ್ಕ ಸಾಧಿಸಿದ್ದಾರೆ ಎಂದು ಸಂಬಂಧಿಕರು ಹೇಳಿದ್ದರು. ಈ ಮಾರ್ಗವು ನಂತರ ಮಾರಕ ಭೂಕುಸಿತಗಳು ಮತ್ತು ಹಠಾತ್ ಪ್ರವಾಹಕ್ಕೆ ಒಳಗಾಯಿತು. ಈ ಗುಂಪು ಪ್ರಮುಖ ವಿಪತ್ತು ತಾಣವಾದ ಗಂಗೋತ್ರಿಯಿಂದ ಸುಮಾರು 4 ಕಿ.ಮೀ ದೂರದಲ್ಲಿ ಸಿಲುಕಿಕೊಂಡಿರುವುದು ಕಂಡುಬಂದಿದೆ. ಕೇರಳದ ಈ ಎಲ್ಲಾ ವ್ಯಕ್ತಿಗಳು ತೀರ್ಥಯಾತ್ರೆಗೆ ಹೋಗಿದ್ದರು. ರಸ್ತೆಗಳು ಕೊಚ್ಚಿಹೋಗಿದ್ದರಿಂದ ಅಲ್ಲೇ ಸಿಲುಕಿಕೊಂಡರು. ಇದರಿಂದ ಅವರಿಗೆ ಹೊರಗೆ ಬರಲು ಸಾಧ್ಯವಾಗಲಿಲ್ಲ. ಉತ್ತರಾಖಂಡದ ಉತ್ತರಕಾಶಿ ಜಿಲ್ಲೆಯಲ್ಲಿ ಸಂಭವಿಸಿದ ಮೇಘಸ್ಫೋಟವು ದುಃಖ ಮತ್ತು ಆತಂಕದ ಅಲೆಯನ್ನು ಹುಟ್ಟುಹಾಕಿದೆ. ಉತ್ತರಾಖಂಡದಲ್ಲಿ ಮೇಘಸ್ಫೋಟದ ನಂತರ ಸಿಲುಕಿಕೊಂಡಿದ್ದ ಕೇರಳದ ಒಟ್ಟು 28 ಜನರು ಸುರಕ್ಷಿತರಾಗಿದ್ದಾರೆ ಎಂದು ರಕ್ಷಣಾ ಕಾರ್ಯಗಳು ದೃಢಪಡಿಸಿವೆ. ಇದನ್ನು ಉತ್ತರಾಖಂಡ ಮಲಯಾಳಿ ಸಮಾಜ ಅಧ್ಯಕ್ಷ ದಿನೇಶ್ ದೃಢಪಡಿಸಿದ್ದಾರೆ. ಭಾರತೀಯ ಸೇನೆ, ಐಟಿಬಿಪಿ, ಎನ್‌ಡಿಆರ್‌ಎಫ್ ಮತ್ತು ಎಸ್‌ಡಿಆರ್‌ಎಫ್ ತಂಡಗಳ ನೇತೃತ್ವದಲ್ಲಿ ರಕ್ಷಣಾ ಕಾರ್ಯಾಚರಣೆಗಳು ಭರದಿಂದ ಸಾಗುತ್ತಿವೆ. ಆದರೆ, ಕೊಚ್ಚಿಹೋದ ರಸ್ತೆಗಳು ಮತ್ತು ಕುಸಿದ ಸೇತುವೆಗಳು ಪ್ರಯತ್ನಗಳಿಗೆ ಅಡ್ಡಿಯಾಗಿವೆ. ಧರಾಲಿಯಿಂದ ಇಲ್ಲಿಯವರೆಗೆ 130ಕ್ಕೂ ಹೆಚ್ಚು ಜನರನ್ನು ರಕ್ಷಿಸಲಾಗಿದೆ. ಕೇರಳದ ಪ್ರವಾಸಿಗರ ಗುಂಪು ಸೇರಿದಂತೆ 100ಕ್ಕೂ ಹೆಚ್ಚು ಜನರು ಇನ್ನೂ ಪತ್ತೆಯಾಗಿಲ್ಲ. ಡೆಹ್ರಾಡೂನ್‌ನಲ್ಲಿರುವ ವಿಪತ್ತು ಕಾರ್ಯಾಚರಣೆ ಕೇಂದ್ರವು ನಿರಂತರ ಸಹಾಯವನ್ನು ನೀಡುತ್ತಿರುವುದರಿಂದ ಅಧಿಕಾರಿಗಳು ದಿನದ 24 ಗಂಟೆಯೂ ಕೆಲಸ ಮಾಡುತ್ತಿದ್ದಾರೆ. ಇಂದು ಉತ್ತರಾಖಂಡದ ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿ ಪರಿಹಾರ ಕಾರ್ಯಾಚರಣೆಗಳ ಮೇಲ್ವಿಚಾರಣೆಗಾಗಿ ಉತ್ತರಕಾಶಿಗೆ ಭೇಟಿ ನೀಡಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಸಾಧ್ಯವಿರುವ ಬೆಂಬಲವನ್ನು ಭರವಸೆ ನೀಡಿದ್ದಾರೆ.



### ಹಿಮಾಚಲ ಪ್ರದೇಶಲ್ಲೂ ಪ್ರವಾಹ

ಹಿಮಾಚಲ ಪ್ರದೇಶದಲ್ಲಿಯೂ ಹಠಾತ್ ಪ್ರವಾಹಗಳು ಅನಾಹುತಗಳನ್ನು ಸೃಷ್ಟಿಸಿವೆ. ಕಿನ್ನೌರ್ ಜಿಲ್ಲೆಯ ಕೈಲಾಸ ಯಾತ್ರೆಯ ಚಾರಣ ಮಾರ್ಗದಲ್ಲಿ ಸಂಭವಿಸಿದ ಪ್ರವಾಹದಲ್ಲಿ ನೂರಾರು ಯಾತ್ರಿಕರು ಸಿಲುಕಿಕೊಂಡಿದ್ದಾರೆ. ಪ್ರವಾಹದಿಂದಾಗಿ ಚಾರಣ ಮಾರ್ಗಗಳು ನಾಶವಾಗಿರುವುದರಿಂದ ರಕ್ಷಣಾ ಕಾರ್ಯಾಚರಣೆಗೆ ತೀವ್ರ ಅಡೆತಡೆ ಉಂಟಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಪ್ರತಿಕೂಲ ಪರಿಸ್ಥಿತಿಗಳನ್ನು ಗಮನದಲ್ಲಿಟ್ಟುಕೊಂಡು, ಕಿನ್ನೌರ್ ಕೈಲಾಸ ಯಾತ್ರೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗುತ್ತಿದೆ.



**ಗಂಗೋತ್ರಿ ಪ್ರವಾಸಕ್ಕೆ ತೆರಳಿದ್ದ ಕೇರಳದ 28 ಪ್ರವಾಸಿಗರು ನಾಪತ್ತೆ**

**ರಣಭೀಕರ ಮೇಘಸ್ಫೋಟಕ್ಕೆ ತತ್ತರಿಸಿದ ಉತ್ತರಾಖಂಡ್**

### ಸಂಚಾರ ಅಸ್ತವ್ಯಸ್ಥ

ಭಾರೀ ಮಳೆ ಮತ್ತು ಪ್ರವಾಹದ ಪರಿಣಾಮ ಉತ್ತರಾಖಂಡದ ವಿವಿಧೆಡೆ 5 ರಾಷ್ಟ್ರೀಯ ಹೆದ್ದಾರಿ, 7 ರಾಜ್ಯ ಹೆದ್ದಾರಿ ಸೇರಿ 163 ರಸ್ತೆಗಳಲ್ಲಿ ಸಂಚಾರ ಬಂದ್ ಮಾಡಲಾಗಿದೆ. ಪ್ರಧಾನಿ ನರೇಂದ್ರ ಮೋದಿ,ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಉತ್ತರಾಖಂಡ ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿ ಅವರಿಗೆ ಕರೆ ಮಾಡಿ ವಿವರ ಪಡೆದಿದ್ದು, ಪರಿಹಾರ ಕಾರ್ಯಕ್ಕೆ ಕೇಂದ್ರದಿಂದ ಎಲ್ಲಾ ರೀತಿಯ ನೆರವು ನೀಡುವ ಭರವಸೆ ನೀಡಿದ್ದಾರೆ. ಇದರ ಬೆನ್ನಲ್ಲೇ ಏಳು ರಕ್ಷಣಾ ತಂಡವನ್ನು ಉತ್ತರಾಖಂಡಕ್ಕೆ ಕಳುಹಿಸಿಕೊಡಲಾಗಿದೆ. ಈ ನಡುವೆ, ಸಂತ್ರಸ್ತರ ರಕ್ಷಣೆಗೆ ಯೋಧರು, ಎನ್‌ಡಿಆರ್‌ಎಫ್, ಎಸ್‌ಡಿಆರ್‌ಎಫ್ ಸಿಬ್ಬಂದಿ ಸ್ಥಳಕ್ಕೆ ದೌಡಾಯಿಸಿದ್ದು, ಇಂಡೋ ಟಿಬೆಟಿಯನ್ ಬಾರ್ಡರ್ ಪೊಲೀಸ್ ಪಡೆ ಕೂಡ ತನ್ನ ತಂಡ ಕಳುಹಿಸಿಕೊಟ್ಟಿದೆ.

### ಉ.ಪ್ರದೇಶದ 17 ಜಿಲ್ಲೆಗಳಲ್ಲಿ ಪ್ರವಾಹ

ಮುಂಗಾರು ಚುರುಕುಗೊಂಡಿದ್ದು ಉತ್ತರ ಪ್ರದೇಶದ ವಿವಿಧೆಡೆ ಮಳೆಯ ಆರ್ಭಟ ಜೋರಾಗಿದೆ. ಒಟ್ಟು 17 ಜಿಲ್ಲೆಗಳಲ್ಲಿ ಪ್ರವಾಹ ಪರಿಸ್ಥಿತಿ ಉಂಟಾಗಿದ್ದು, ಮಳೆ ಸಂಬಂಧಿತ ಅವಘಡಗಳಲ್ಲಿ ಈವರೆಗೆ 12 ಮಂದಿ ಮೃತಪಟ್ಟಿದ್ದಾರೆ ಎಂದು ರಾಜ್ಯ ಸರಕಾರವು ತಿಳಿಸಿದೆ. ಗಂಗಾ ನದಿ ತಟದಲ್ಲಿರುವ ಪ್ರದೇಶಗಳು ಮುಳುಗಡೆಯಾಗುತ್ತಿವೆ. ಪ್ರಯಾಗ್‌ರಾಜ್ ನಗರದ ಸಲೋರಿ, ರಾಜಪುರ, ದಾರಗಂಜ, ಬಘಾಡಾ ಮುಂತಾದ ಪ್ರದೇಶಗಳು ಮುಳುಗಿಹೋಗಿವೆ. ಮಿರ್ಜಾಪುರ, ವಾರಾಣಸಿ, ಅಯೋಧ್ಯೆ, ಚಂದೌಲಿ, ಬಲ್ಲಿಯಾದ ಪರಿಸ್ಥಿತಿಯೂ ತೀರಾ ಹದಗೆಟ್ಟಿದೆ. ಅನೇಕ ಜಿಲ್ಲೆಗಳಲ್ಲಿ ಶಾಲಾ - ಕಾಲೇಜುಗಳಿಗೆ ರಜೆ ಘೋಷಣೆ ಮಾಡಲಾಗಿದೆ. ಪ್ರಯಾಗ್ ರಾಜ್‌ನ ತ್ರಿವೇಣಿ ಸಂಗಮದಲ್ಲಿ ನೀರು ಅಪಾಯದ ಮಟ್ಟದಲ್ಲಿ ಹರಿಯುತ್ತಿದೆ. ಉಕ್ಕಿದ ಗಂಗೆ, ಯಮುನೆಯಿಂದ ಪ್ರವಾಹ ಪರಿಸ್ಥಿತಿ ನಿರ್ಮಾಣವಾಗಿದೆ.

# ಮದರಸಾ ಮೌಲ್ವಿಗಳಿಗೆ ಕನ್ನಡ ಪಾಠ: ಜಮೀರ್ ಅಹ್ಮದ್ ಖಾನ್ ಮೆಚ್ಚುಗೆ

• ಉದಯವಾಹಿನಿ, ಮಂಗಳೂರು

ರಾಜ್ಯದ ಮದರಸಾ ಮೌಲ್ವಿಗಳಿಗೆ ಕನ್ನಡ ಪಾಠ ಕಲಿಸುವ ನಿಟ್ಟಿನಲ್ಲಿ ಮದರಸಾಗಳಿಂದ 200 ಜನರನ್ನು ಆಯ್ಕೆ ಮಾಡಿದ್ದೇವೆ. 3 ತಿಂಗಳ ಒಳಗೆ ಅವರಿಗೆ ಕನ್ನಡ ಕಲಿಸುತ್ತೇವೆ. ಕನ್ನಡ ರಾಜ್ಯ ನಮ್ಮದು, ನಮಗೆಲ್ಲಾ ಕನ್ನಡ ಬರಬೇಕು. ಎಲ್ಲಾ ಮಸೀದಿ ಗುರುಗಳಿಗೂ ಕನ್ನಡ ಕಲಿಸುತ್ತೇವೆ ಎಂದು ಸಚಿವ ಜಮೀರ್ ಅಹ್ಮದ್ ಖಾನ್ ಹೇಳಿದರು.

**ನಾನು ಮೊದಲು ಹಿಂದೂಸ್ತಾನಿ, ಕನ್ನಡಿಗ, ಆಮೇಲೆ ಮುಸ್ಲಿಂ:** ಜಾತಿ ಮಾಡಿದ್ರೆ ದೇವರು ಕ್ಷಮಿಸಲ್ಲ ಜಮೀರ್ ಅಹ್ಮದ್ ಖಾನ್ ರಾಜ್ಯದಲ್ಲಿರುವ ಮದರಸಾ ಶಿಕ್ಷಕರಿಗೆ ಕನ್ನಡ ಬೋಧಿಸುವ ಅಭಿಯಾನವನ್ನು ರಾಜ್ಯ ಅಲ್ಪಸಂಖ್ಯಾತ ಆಯೋಗ ಹಮ್ಮಿಕೊಂಡಿದೆ. ಇದರ ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗಿಯಾಗಿ ಮಾತನಾಡಿದ ಅವರು, ಕನ್ನಡದ ಮಹತ್ವದ ಬಗ್ಗೆ ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸಿದರು. ಅಲ್ಪಸಂಖ್ಯಾತರ ಸಾಮೂಹಿಕ ವಿವಾಹಕ್ಕೆ 50 ಸಾವಿರ ಕೊಡುತ್ತೇವೆ. ಸಿಎಂ ಸಿದ್ದರಾಮಯ್ಯ ಅವರು ಬಜೆಟ್ ನಲ್ಲಿ ಘೋಷಣೆ ಮಾಡಿದ್ದರು. ಈ ನಿಟ್ಟಿನಲ್ಲಿ ಈಗ ಆದೇಶ ಆಗಿದೆ. ಮೌಲಾನಾ ಅಬ್ದುಲ್ ಕಲಾಂ ಸ್ಕೂಲ್ ಸೇರಿದಂತೆ ಪ್ರತಿಭಾನ್ವಿತರಿಗೆ ಸಹಾಯ ಮಾಡುತ್ತೇವೆ ಎಂದು ತಿಳಿಸಿದರು. ಇಲಾಖೆ ವತಿಯಿಂದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಹಣ ಸಹಾಯ ಮಾಡುತ್ತಿದ್ದೇವೆ. 214 ವಿದ್ಯಾರ್ಥಿಗಳಿಗೆ ವೈಯಕ್ತಿಕವಾಗಿ ಲ್ಯಾಪ್ ಟಾಪ್ ಕೊಡುತ್ತಿದ್ದೇನೆ. ಸಾಮೂಹಿಕವಾಗಿ ವಿವಾಹ ಆಗಿವವರು ಬಡವರು.



ಈ ನಿಟ್ಟಿನಲ್ಲಿ ಅಲ್ಪಸಂಖ್ಯಾತರಲ್ಲಿ ಸಾಮೂಹಿಕ ವಿವಾಹ ಮಾಡುವವರಿಗೆ ಸಹಾಯ ಮಾಡುತ್ತೇವೆ ಎಂದು ತಿಳಿಸಿದರು. ರಾಹುಲ್ ಗಾಂಧಿ ರಾಜ್ಯಕ್ಕೆ ಆಗಮಿಸುತ್ತಿರುವ ವಿಚಾರವಾಗಿ ಇದೇ ಸಂದರ್ಭದಲ್ಲಿ ಮಾತನಾಡಿದ ಅವರು, ಚುನಾವಣೆಯಲ್ಲಿ ಅಕ್ರಮ ನಡೆದಿದೆ ಎಂಬ ಉದಾಹರಣೆ ಇದೆ. ಮಹದೇವಪುರ ಕ್ಷೇತ್ರದಲ್ಲಿ 1.15 ಲಕ್ಷ ಬಿಜೆಪಿಗೆ ಲೀಡ್ ಬಂದಿದೆ.

ಏನೇನೂ ಅಭಿವೃದ್ಧಿ ಮಾಡಿಲ್ಲ, ಆದರೂ ಅಷ್ಟು ಲೀಡ್ ಹೇಗೆ ಬಂತು ಹೀಗಾಗಿ ರಾಹುಲ್ ಗಾಂಧಿ ಪ್ರತಿಭಟನೆ ಮಾಡ್ತಿದ್ದಾರೆ ಎಂದು ವಿವರಿಸಿದರು. ಮದರಸಾ ಶಿಕ್ಷಕರು ಮತ್ತು ಮಕ್ಕಳಿಗೆ ಕನ್ನಡ ಕಲಿಸುವ ವಿಚಾರವಾಗಿ ಕನ್ನಡ ಅಭಿವೃದ್ಧಿ ಪ್ರಾಧಿಕಾರ ಮುಂದಾಗಿತ್ತು. ಈ ಸಂಬಂಧಿಸಿದಂತೆ ಪ್ರಾಧಿಕಾರದ ಅಧ್ಯಕ್ಷ ಪುರುಷೋತ್ತಮ ಬಿಳಿಮಲೆ ಮುಂದಾಗಿದ್ದರು. ಆದರೆ ಅದು ಅಂದು ವಿವಾದಕ್ಕೆ ಕಾರಣವಾಗಿತ್ತು.

### 180 ಶಿಕ್ಷಕರುಗಳಿಗೆ ಕನ್ನಡ ಕಲಿಕಾ ಅಭಿಯಾನ

ಇದೀಗ ಮದರಸಾಗಳಲ್ಲಿ ಬೋಧಿಸುತ್ತಿರುವ ಸುಮಾರು 180 ಶಿಕ್ಷಕರುಗಳಿಗೆ ಕನ್ನಡ ಕಲಿಕಾ ಅಭಿಯಾನವನ್ನು ಉದ್ಘಾಟಿಸಲಾಗಿದೆ. ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ್ದ ಬಿಳಿಮಲೆ, ಅಲ್ಪಸಂಖ್ಯಾತ ಮತ್ತು ಬಹುಸಂಖ್ಯಾತ ಸಮುದಾಯಗಳ ನಡುವಿನ ಸಾಮರಸ್ಯವನ್ನು ಕದಡುವ ವಿಭಜಕ ರಾಜಕಾರಣ ವಿಜೃಂಭಿಸುತ್ತಿದೆ. ಇಂತಹ ದಿನದಲ್ಲಿ ಭಾಷೆಯ ಮೂಲಕವೇ ಸಂವಹನ ಗಟ್ಟಿಯಾಗಬೇಕಿದೆ. ಈ ಕಾರಣಕ್ಕಾಗಿ ಅಲ್ಪಸಂಖ್ಯಾತ ಸಮುದಾಯಕ್ಕೆ ಕನ್ನಡವನ್ನು ಕಲಿಸುವ ಪ್ರಯತ್ನಕ್ಕೆ ಕನ್ನಡ ಅಭಿವೃದ್ಧಿ ಪ್ರಾಧಿಕಾರ ಮುಂದಾಗಿದೆ ಎಂದಿದ್ದರು.

## ಯೂಟ್ಯೂಬರ್‌ಗಳಿಗೆ, ಮಾಧ್ಯಮ ಸಿಬ್ಬಂದಿಗೆ ಗುಂಪಿನಿಂದ ಹಲ್ಲೆ ಆರೋಪ

# ಧರ್ಮಸ್ಥಳದಲ್ಲಿ ಪರ-ವಿರೋಧ ಗಲಾಟೆ

• ಉದಯವಾಹಿನಿ, ದಕ್ಷಿಣ ಕನ್ನಡ

ಧರ್ಮಸ್ಥಳದಲ್ಲಿ ನಾಲ್ವರು ಯೂಟ್ಯೂಬರ್‌ಗಳು ಮತ್ತು ಮಾಧ್ಯಮ ಸಿಬ್ಬಂದಿ ಮೇಲೆ ಅಪರಿಚಿತರು ಹಲ್ಲೆ ನಡೆಸಿದ ಆರೋಪ ಕೇಳಿ ಬಂದಿದ್ದು, ಪರಿಣಾಮ ಸ್ಥಳದಲ್ಲಿ ಉದ್ವಿಗ್ನ ಸ್ಥಿತಿ ನಿರ್ಮಾಣವಾದ ಘಟನೆ ಬುಧವಾರ ನಡೆದಿದೆ.

ಅಜಯ್ ಅಂಚನ್, ಅಭಿಷೇಕ್, ವಿಜಯ್ ಮತ್ತು ಇನ್ನೋರ್ವರು ಹಲ್ಲೆಗೆ ಒಳಗಾದ ಯೂಟ್ಯೂಬರ್‌ಗಳು ಎಂದು ತಿಳಿದು ಬಂದಿದೆ. ಅಪರಿಚಿತರು ಯೂಟ್ಯೂಬರ್ ಗಳಿಗೆ ಹಲ್ಲೆ ನಡೆಸಿರುವ ಬಗ್ಗೆ ಮಾಹಿತಿ ಲಭ್ಯವಾಗುತ್ತಿದ್ದಂತೆಯೇ ಪೊಲೀಸರು ಸ್ಥಳಕ್ಕೆ ಧಾವಿಸಿ, ಭದ್ರತೆ ಒದಗಿಸಿದರು. ಹಲ್ಲೆಗೊಳಗಾದ ಯೂಟ್ಯೂಬರ್‌ಗಳು ಉಜಿರೆಯ ಖಾಸಗಿ ಆಸ್ಪತ್ರೆಗೆ ದಾಖಲಾಗಿದ್ದಾರೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ. ಈ ಘಟನೆಗೆ ಸಂಬಂಧಿಸಿದಂತೆ ದ.ಕ ಜಿಲ್ಲಾ ಎಸ್ ಪಿ ಅರುಣ್ ಕುಮಾರ್ ಅವರ ಕಚೇರಿ ಪತ್ರಿಕಾ ಪ್ರಕಟಣೆ ನೀಡಿದ್ದು,

ಧರ್ಮಸ್ಥಳದಲ್ಲಿ ಇಂದು ನಡೆದ ಘರ್ಷಣೆಗೆ ಸಂಬಂಧಿಸಿದಂತೆ ಸ್ಥಳದಲ್ಲಿ ಪರಿಸ್ಥಿತಿ ಪ್ರಸ್ತುತ ಶಾಂತವಾಗಿದ್ದು, ಸೇರಿದ್ದ ಜನರನ್ನು ಚದುರಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಘಟನೆಗೆ ಸಂಬಂಧಿಸಿದಂತೆ ಯೂಟ್ಯೂಬರ್‌ಗಳ ಮೇಲೆ ನಡೆದ ಹಲ್ಲೆ ಮತ್ತು ಅವರುಗಳ ಎರಡು ವಾಹನಗಳಿಗೆ ಹಾನಿ ನಡೆಸಿದ ಬಗ್ಗೆ ಹಾಗೂ ಖಾಸಗಿ ನ್ಯೂಸ್ ಚಾನೆಲ್‌ನ ವರದಿಗಾರನ ಮೇಲೆ ನಡೆದ ಹಲ್ಲೆ ಸಂಬಂಧಿಸಿದಂತೆ ಪ್ರಕರಣವನ್ನು ದಾಖಲಿಸಲಾಗುತ್ತಿದೆ. ಧರ್ಮಸ್ಥಳ ಪಾಂಗಾಳದಲ್ಲಿ (ಲಾಠಿ ಚಾರ್ಜ್ ನಡೆದ ಸ್ಥಳದಲ್ಲಿ), ಧರ್ಮಸ್ಥಳ ದೇವಸ್ಥಾನ ಪೊಲೀಸ್ ಠಾಣಾ ಆವರಣದಲ್ಲಿ ಮತ್ತು ಆಸ್ಪತ್ರೆಯ ಮುಂದೆ ಕಾನೂನುಬಾಹಿರವಾಗಿ ಗುಂಪು ಸೇರಿರುವ ಬಗ್ಗೆ ಪ್ರಕರಣ ದಾಖಲಿಸಲಾಗುತ್ತಿದೆ.



ಹಲ್ಲೆಗೊಳಗಾದವರು ಚಿಕಿತ್ಸೆಗಾಗಿ ದಾಖಲಾಗಿರುವ ಆಸ್ಪತ್ರೆಯ ವೈದ್ಯರೊಂದಿಗೆ ವಿಚಾರಿಸಲಾಗಿ, ಪ್ರಾಥಮಿಕ ಆರೋಗ್ಯ ತಪಾಸಣೆಯಲ್ಲಿ ಯಾವುದೇ ಗಂಭೀರ ಗಾಯಗಳಾಗಿರುವುದು ಕಂಡುಬಂದಿಲ್ಲ ಎಂಬುದಾಗಿ ಮೌಖಿಕವಾಗಿ ತಿಳಿಸಿರುತ್ತಾರೆ. ಈ ದಿನ ನಡೆದ ಘಟನೆಗಳಿಗೆ ಸಂಬಂಧಿಸಿದ ವಿಡಿಯೋಗಳನ್ನು ಪರಿಶೀಲಿಸಿ, ಪ್ರಕರಣ ದಾಖಲಿಸಿಕೊಂಡು ಮುಂದಿನ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಪೊಲೀಸರು ತಿಳಿಸಲಾಗಿದೆ.




**ಗುಂಪು ಚದುರಿಸಲು ಪೊಲೀಸರ ಹರಸಾಹಸ:** ಈ ಹಲ್ಲೆ ಖಂಡಿಸಿ ಪಾಂಗಳ ಕ್ರಾಸ್ ಬಳಿ ಭಾರೀ ಜನ ಸೇರಿದ್ದು, ಎರಡೂ ಕಡೆಯ ಗುಂಪಿನ ಯುವಕರನ್ನು ಚದುರಿಸಲು ಪೊಲೀಸರ ಹರಸಾಹಸ ಪಟ್ಟಿದ್ದಾರೆ. ಸ್ಥಳದಲ್ಲಿ ಉದ್ವಿಗ್ನ ಪರಿಸ್ಥಿತಿ ಉಂಟಾಗುತ್ತಿದ್ದಂತೆ ಪೊಲೀಸರು ಕೂಡಾ ಹೆಚ್ಚಿನ ಸಂಖ್ಯೆಯಲ್ಲಿ ಧಾವಿಸಿದ್ದಾರೆ.

ಎರಡೂ ಗುಂಪುಗಳಿಂದ ಕಲ್ಲು ತೂರಾಟ ನಡೆದಿದೆ ಎನ್ನಲಾಗಿದ್ದು, ಇದನ್ನು ತಡೆಯಲು ಪೊಲೀಸರು ಲಘು ಲಾಠಿ ಪ್ರಹಾರ ಮಾಡಲಾಗಿದೆ ಎಂದು ವರದಿಯಾಗಿದೆ.

### ಧರ್ಮಸ್ಥಳ ಕೇಸ್, ಹೊಸ ಆರೋಪ

ಧರ್ಮಸ್ಥಳದ ಆರಣ್ಯ ಭಾಗಗಳಲ್ಲಿ ಶವ ಹೂತಿಡಲಾಗಿದೆ ಎನ್ನುವ ಕೇಸ್ ಇದೀಗ ಭಾರೀ ಸಂಚಲನ ಮೂಡಿಸಿದೆ. ಎಸ್‌ಐಟಿ ಈ ಬಗ್ಗೆ ತನಿಖೆ ಕೂಡ ನಡೆಸುತ್ತಿದೆ. ಇದೀಗ ಅನನ್ಯಾ ಭಟ್ ಅವರ ತಾಯಿ ಸುಜಾತಾ ಭಟ್ ಪರ ವಕೀಲ ಮಂಜುನಾಥ್ ಹೊಸ ಆರೋಪ ಮಾಡಿದ್ದಾರೆ. ಇದ್ದಕ್ಕಿದ್ದಂತೆ ಯಾವತ್ತೂ ಇಲ್ಲದ ಜಿಪಿಆರ್ ಯಂತ್ರಗಳ ಕೃತಕ ಅಭಾವ ಸೃಷ್ಟಿ ಬಗ್ಗೆ ವಕೀಲ ಮಂಜುನಾಥ್ ಗಂಭೀರ ಆರೋಪ ಮಾಡಿದ್ದಾರೆ. ಈ ಯಂತ್ರಗಳನ್ನ ಒದಗಿಸುವ ಖಾಸಗಿ ಕಂಪನಿಗಳ ಮೇಲೆ ಒತ್ತಡ ಅಥವಾ ಬೆದರಿಕೆ ಹಾಕಲಾಗಿದೆ ಎಂದು ಆರೋಪ ಮಾಡ್ತಿದ್ದಾರೆ. ನಿಜಕ್ಕೂ ಜಿಪಿಆರ್ ತಂತ್ರಜ್ಞಾನದ ಕೊರತೆ ಹಾಗೂ ಲಭ್ಯತೆಯ ಕೊರತೆ ಅನುಮಾನ ವ್ಯಕ್ತಪಡಿಸಿದ್ದಾರೆ ಎನ್ನಲಾಗ್ತಿದೆ.



**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.03 ₹/L ಬಂಗಾರ: ₹10,233/Gram24ct ₹9,380/Gram22ct ಬೆಳ್ಳಿ: ₹116.00/Gram

# ಆಗಸ್ಟ್ 15ರ ಒಳಗೆ ಹೆಬ್ಬಾಳ ಜಂಕ್ಷನ್ ಉದ್ಘಾಟನೆ

## ಬೆಂಗಳೂರು ಹೆಬ್ಬಾಳ ಟ್ರಾಫಿಕ್ ತಪ್ಪಿಸಲು 1.5 ಕಿಮೀ ಹೊಸ ಟನಲ್ ರೋಡ್ ನಿರ್ಮಾಣ; ಎಲ್ಲಿಂದ ಎಲ್ಲಿಗೆ?

• ಉದಯವಾಹಿನಿ, ಬೆಂಗಳೂರು

ಹೆಬ್ಬಾಳ ನಾಗಾವರ ಕಡೆ ಎಸ್ಟೀಮ್ ಮಾಲ್‌ನಿಂದ ಪಶುವೈದ್ಯಕೀಯ ಕಾಲೇಜು ತನಕ ಹೊಸ ಟನಲ್ ರಸ್ತೆ ಮಾಡಲಾಗುವುದು ಎಂದು ಬೆಂಗಳೂರು ಅಭಿವೃದ್ಧಿ ಸಚಿವ, ಡಿಕೆಶಿ ತಿಳಿಸಿದ್ದಾರೆ. ಹೊಸದಾಗಿ ನಿರ್ಮಾಣವಾಗಿರುವ ಹೆಬ್ಬಾಳ ಜಂಕ್ಷನ್ ಉದ್ಘಾಟನೆ ಬಗ್ಗೆ ಮಾತನಾಡಿ ಅವರು, ಆಗಸ್ಟ್ 15ರ ಒಳಗೆ ಮುಖ್ಯಮಂತ್ರಿಯವರ ದಿನಾಂಕ ಪಡೆದು ಉದ್ಘಾಟನೆ ಮಾಡಲಾಗುವುದು. ಈಗ ಕೆಆರ್ ಪುರಂ ನಿಂದ ಮೇಖ್ರಿ ವೃತ್ತದ ಕಡೆ ಮಾತ್ರ ಲೋಕಾರ್ಪಣೆ ಮಾಡಲಾಗುವುದು. ಇನ್ನೊಂದು ಭಾಗದ ಮೇಲ್ಸೇತುವೆಯನ್ನು ಆನಂತರ ಮಾಡಲಾಗುವುದು ಎಂದು ಹೇಳಿದರು.




ಪ್ರಯಾಣಿಕರ ಸಂಖ್ಯೆ ಹೆಚ್ಚಿದೆ ಆದರೆ ಕೇವಲ ಮೂರೇ ಮೆಟ್ರೋ ರೈಲುಗಳಿವೆ ಎಂದು ಕೇಳಿದಾಗ, ಕೆಲವು ಕಾರಣಾಂತರಗಳಿಂದ ರೈಲುಗಳು ಬಂದಿಲ್ಲ. ಚೀನಾದಿಂದ ಒಂದಷ್ಟು ರೈಲುಗಳನ್ನು ತೆಗೆದುಕೊಂಡಿದ್ದರು. ಆದರೆ ಅದರಲ್ಲಿ ಒಂದಷ್ಟು ತೊಡಕುಗಳಿವೆ. ಈಗ ಇಟಾನಗರ ಸೇರಿದಂತೆ ಇತರೆಡೆಯಿಂದ ರೈಲುಗಳು ಬರಬೇಕು.



ಅಲ್ಲಿಂದ ಬಂದ ನಂತರ ರೈಲು ಕಾರ್ಯಾಚರಣೆ ಅವಧಿ ಹೆಚ್ಚಳ ಮಾಡಲಾಗುವುದು ಎಂದರು. ಈ ಮಾರ್ಗ ಸಂಪೂರ್ಣಗೊಳ್ಳಲು ದುಡಿದ ಎಲ್ಲಾ ಅಧಿಕಾರಿಗಳು, ಗುತ್ತಿಗೆದಾರರು, ಕಾರ್ಮಿಕರನ್ನು ರಾಜ್ಯ ಸರ್ಕಾರದವತಿಯಿಂದ ಅಭಿನಂದಿನೆ ತಿಳಿಸುತ್ತೇನೆ. ಈ ಹಿಂದಿನ ಎಂಡಿಯವರಾದ ಮಹೇಶ್ವರ್ ರಾವ್ ಅವರು ಹಾಗೂ ಅನೇಕ ಸಿಬ್ಬಂದಿ ಇದಕ್ಕಾಗಿ ದುಡಿದಿದ್ದಾರೆ ಎಂದರು. ಟನಲ್ ರಸ್ತೆ ಟೆಂಡರ್ ಅಲ್ಲಿ ಅದಾನಿ ಕಂಪೆನಿ ಕೂಡ ಭಾಗವಹಿಸಲಿದೆ ಎಂದು ಕೇಳಿದಾಗ, ನೀವು ಸಹ ಭಾಗವಹಿಸಿ ಎಂದು ಉತ್ತರಿಸಿದರು.

ಬೆಂಗಳೂರಿನ ರಸ್ತೆಗಳನ್ನು ಹೊಸದಾಗಿ ಡಾಂಬರೀಕರಣ ಮಾಡಲಾಗುತ್ತಿದೆ ಎಂದು ಕೇಳಿದಾಗ, ಮಾಡಲಾಗುತ್ತಿದೆ, ಬೆಂಗಳೂರಿನ ಅಭಿವೃದ್ಧಿಗೆ ಎಷ್ಟು ಮಾಡಿದರು ಸಾಲದು. ಅಧಿವೇಶನದ ವೇಳೆ ಇದರ ಬಗ್ಗೆ ಮಾತನಾಡುವೆ. ಅಧಿಕಾರಿಗಳಿಗೆ ಒಂದಷ್ಟು ಡೆಡ್ ಲೈನ್ ನೀಡಿದ್ದೇವೆ ಎಂದರು. ಎರಡನೇ ಹಂತದ ನಗರಗಳಿಗೆ ಆದ್ಯತೆ ನೀಡುವ ಬಗ್ಗೆ ಕೇಳಿದಾಗ, ಇದರ ಬಗ್ಗೆ ಹೊಸ ಆಲೋಚನೆ ಇದೆ, ಇದನ್ನು ಮುಂದೆ ತಿಳಿಸುತ್ತೇನೆ ಎಂದರು.

### 1.5 ಕಿ.ಮೀ ಉದ್ದದ ಹೊಸ ಟನಲ್

**ಹೆಬ್ಬಾಳ ನಾಗಾವರ ಕಡೆ ಎಸ್ಟೀಮ್ ಮಾಲ್ ನಿಂದ ಪಶು ವೈದ್ಯಕೀಯ ತನಕ ಹೊಸ ಟನಲ್ ರಸ್ತೆ ಮಾಡಲಾಗುವುದು. ಇದನ್ನು ಸದ್ಯದಲ್ಲೇ ಸಂಚಿವ ಸಂಪುಟದ ಮುಂದೆ ಮಂಡಿಸಲಾಗುತ್ತದೆ. ಮುಖ್ಯ ಟನಲ್ ರಸ್ತೆ ಬೇರೆ, ಈ 1.5 ಕಿಮೀ ಉದ್ದದ ಟನಲ್ ರಸ್ತೆ ಬೇರೆ ಇರಲಿದೆ. ಇದನ್ನು ಎರಡು ವರ್ಷದಲ್ಲಿ ಪೂರ್ಣಗೊಳಿಸಲಾಗುವುದು ಎಂದರು.**

### ಬೆಂಗಳೂರು ಉತ್ತಮವಾಗಿದ್ದು, ಹೆಚ್ಚು ಜನ ಆಗಮನ

**ಬೆಂಗಳೂರಿನಲ್ಲಿ ಸಂಚಾರ ದಟ್ಟಣೆ ಹೆಚ್ಚಾಗುತ್ತಿರುವ ಬಗ್ಗೆ ಕೇಳಿದಾಗ, ಇಡೀ ದೇಶದ ಎಲ್ಲಾ ಭಾಗದ ಜನ, ಗ್ರಾಮೀಣ ಭಾಗದ ಜನ ಎಲ್ಲರೂ ಇಲ್ಲಿಗೆ ಬರುತ್ತಿದ್ದಾರೆ. ಒಳ್ಳೆ ವಾತಾವರಣ, ಕಾವೇರಿ ನೀರು, ಉತ್ತಮ ಸಂಸ್ಥೆಗಳಿವೆ, ಬೆಂಗಳೂರು ಬಿಟ್ಟು ಹೋಗುತ್ತಿಲ್ಲ. ಮೆಟ್ರೋ ನಿಲ್ದಾಣ ಇರುವ ಕಡೆ ವಾಹನ ನಿಲ್ದಾಣಗಳಿಗೂ ಹೆಚ್ಚುವರಿ 3-4 ಎಕರೆ ಪ್ರದೇಶಗಳನ್ನು ಸ್ವಾಧೀನ ಪಡಿಸಿಕೊಳ್ಳಬೇಕು ಎಂದು ಮೆಟ್ರೋ ಪ್ರಾಧಿಕಾರಕ್ಕೆ ಸೂಚನೆ ನೀಡಿದ್ದೇನೆ. ಕೆಳಗೆ ನಿಲ್ದಾಣ ಮಾಡಿ ಮೇಲೆ ವಾಣಿಜ್ಯ ಉದ್ದೇಶಕ್ಕೆ ಬಳಸಿಕೊಳ್ಳಲಿ ಎಂದು ಹೇಳಿದರು.**

---

# ಆಗಸ್ಟ್ 11 ರಿಂದ ರಾಜ್ಯ ಮುಂಗಾರು ಅಧಿವೇಶನ ಆರಂಭ

• ಉದಯವಾಹಿನಿ, ಬೆಂಗಳೂರು

ಆಗಸ್ಟ್ 11 ರಂದು ಆರಂಭವಾಗಲಿರುವ ರಾಜ್ಯ ವಿಧಾನಮಂಡಲದ ಮುಂಗಾರು ಅಧಿವೇಶನ ಹಿನ್ನೆಲೆಯಲ್ಲಿ ಸಭೆ ನಡೆಸಿದ ಪ್ರತಿಪಕ್ಷ ಬಿಜೆಪಿ ನಾಯಕರು, ವಿಧಾನಸಭೆ ಮತ್ತು ಪರಿಷತ್ತಿನಲ್ಲಿ ಪ್ರಸ್ತಾಪಿಸಬೇಕಾದ ವಿಷಯಗಳ ಬಗ್ಗೆ ಚರ್ಚಿಸಿದರು. ಚಿನ್ನಸ್ವಾಮಿ ಕ್ರೀಡಾಂಗಣದ ಹೊರಭಾಗದಲ್ಲಿ 11 ಮಂದಿಯನ್ನು ಬಲಿತೆಗೆದುಕೊಂಡ ಕಾಲ್ತುಳಿತ, ರಸಗೊಬ್ಬರ ಕೊರತೆ, ಸಿದ್ದರಾಮಯ್ಯನವರು ಲಾಟರಿ ಹೊಡೆದು ಅಧಿಕಾರಕ್ಕೆ ಬಂದರು ಎಂಬ ಕಾಂಗ್ರೆಸ್ ಶಾಸಕ ಬಿ.ಆರ್.ಪಾಟೀಲ್ ಹೇಳಿಕೆ, ಬೆಂಗಳೂರು ಅಭಿವೃದ್ಧಿಗೆ ಸಂಬಂಧಿಸಿದ ಸಮಸ್ಯೆಗಳು ಸೇರಿದಂತೆ ಕನಿಷ್ಠ ಒಂಬತ್ತು ವಿಷಯಗಳನ್ನು ಮುಂದಿಟ್ಟುಕೊಂಡು ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರದ ವಿರುದ್ಧ ಮುಗಿಬೀಳಲು ಬಿಜೆಪಿ ನಿರ್ಧರಿಸಿತು.

TNIE ಯೊಂದಿಗೆ ಮಾತನಾಡಿದ ಹಿರಿಯ ಬಿಜೆಪಿ, ಮಾಜಿ ಸಚಿವ ಸುರೇಶ್ ಕುಮಾರ್, ಶುಕ್ರವಾರ ತಮ್ಮ ಪಕ್ಷ ಮತ್ತು ಜೆಡಿಎಸ್ ಸಭೆ ನಡೆಸಲಿದ್ದು, ಅಧಿವೇಶನದಲ್ಲಿ ಎನ್‌ಡಿಎ ಜಂಟಿಯಾಗಿ ತೆಗೆದುಕೊಳ್ಳಬೇಕಾದ ವಿಷಯಗಳನ್ನು ಅಂತಿಮಗೊಳಿಸಲಿದೆ ಎಂದು ಹೇಳಿದರು. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಮಾತನಾಡಿ, ಈ ಬಾರಿಯ ಮುಂಗಾರು ಮಳೆಯಲ್ಲಿ ರೈತರನ್ನು ಸಂಕಷ್ಟಕ್ಕೆ ದೂಡಿರುವ ರಸಗೊಬ್ಬರದ ಕೊರತೆಯ ಬಗ್ಗೆ ಪ್ರತಿಪಕ್ಷಗಳು ಪ್ರಮುಖವಾಗಿ ಗಮನಹರಿಸಲಿವೆ. ಬೆಂಗಳೂರು ಕಾಲ್ತುಳಿತ ಪ್ರಕರಣವನ್ನೂ ಅಧಿವೇಶನದಲ್ಲಿ ಪ್ರಸ್ತಾಪಿಸಲಾಗುವುದು ಎಂದರು.

---

# ಇ-ಖಾತಾ: ವಲಯದ ಹೊರಗೂ ಪರಿಶೀಲನೆ

• ಉದಯವಾಹಿನಿ, ಬೆಂಗಳೂರು

ಇ-ಖಾತಾ ನೀಡುವ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಕಾಪಾಡಿಕೊಂಡು, ಭ್ರಷ್ಟಾಚಾರ ನಿಯಂತ್ರಿಸಲು ಫಸ್ಟ್ ಇನ್ ಫಸ್ಟ್ ಔಟ್ (ಎಫ್‌ಐಎಫ್‌ಒ) ವ್ಯವಸ್ಥೆಯನ್ನು ಜಾರಿಗೆ ತರಲಾಗಿದೆ ಎಂದು ಬಿಬಿಎಂಪಿ ಕಂದಾಯ ವಿಭಾಗದ ವಿಶೇಷ ಆಯುಕ್ತ ಮುನೀಶ್ ಮೌದ್ಗಿಲ್ ತಿಳಿಸಿದರು. ಇ-ಖಾತಾ ಪ್ರಕ್ರಿಯೆಯಲ್ಲಿ ನಾಗರಿಕರು ಮತ್ತು ಅಧಿಕಾರಿಗಳ ನಡುವಿನ ನೇರ ಸಂಪರ್ಕವನ್ನು ಕಡಿಮೆಗೊಳಿಸಲಾಗುತ್ತದೆ. ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿದ ಮೇಲೆ, ಬಿಬಿಎಂಪಿ ವ್ಯಾಪ್ತಿಯಲ್ಲಿರುವ ಅಧಿಕಾರಿಗಳಿಗೆ ರ್‍ಯಾಂಡಮ್ ಆಗಿ ವರ್ಗಾವಣೆಯಾಗುತ್ತದೆ. ಅವರು ಮೂರು ದಿನದಲ್ಲಿ ಅರ್ಜಿಯನ್ನು ವಿಲೇವಾರಿ ಮಾಡುತ್ತಾರೆ ಎಂದು ಮಾಹಿತಿ ನೀಡಿದರು. ಆನ್‌ಲೈನ್‌ನಲ್ಲಿ ಅರ್ಜಿಗಳು ಕೆಲವು ವಲಯ ಅಥವಾ ಉಪ ವಿಭಾಗದಲ್ಲಿ ಹೆಚ್ಚಿರುತ್ತವೆ. ಕೆಲವು ಕಡೆ ಕಡಿಮೆ ಇರುತ್ತವೆ. ಹೀಗಾಗಿ, ಬಿಬಿಎಂಪಿ ವ್ಯಾಪ್ತಿಯಲ್ಲಿ ಸಲ್ಲಿಕೆಯಾಗುವ ಅರ್ಜಿಗಳನ್ನು ' ಮೊದಲು ಬಂದ ಅರ್ಜಿಯೆಂದು ಪರಿಗಣಿಸಿ, ಸಹಾಯಕ ಕಂದಾಯ ಅಧಿಕಾರಿ, ಉಪ ಕಂದಾಯ ಅಧಿಕಾರಿಗಳಿಗೆ ವರ್ಗವಾಗುತ್ತದೆ. ಆಯಾ ಉಪ ವಿಭಾಗದ ಅರ್ಜಿ ಅವರಿಗೇ ಎಆರ್‌ಒ ಹೋಗಬೇಕೆಂದೇನೂ ಇಲ್ಲ. ಯಾರಲ್ಲಿ ಕಡಿಮೆ ಕಡತಗಳಿರುತ್ತವೋ ಅವರಿಗೆ ಸ್ವಯಂಚಾಲಿತವಾಗಿ ಅರ್ಜಿ ರವಾನೆಯಾಗುತ್ತದೆ ಎಂದು ಹೇಳಿದರು. ಈ ವ್ಯವಸ್ಥೆಯಿಂದ ನಾಗರಿಕರು ತಮ್ಮ ವ್ಯಾಪ್ತಿಯ ಕಂದಾಯ ಅಧಿಕಾರಿಗಳನ್ನು ಸಂಪರ್ಕಿಸುವಂತಿಲ್ಲ. ಬಿಬಿಎಂಪಿ ವ್ಯಾಪ್ತಿಯಲ್ಲಿರುವ ಯಾವ ಕಂದಾಯ ವಿಭಾಗದ ಅಧಿಕಾರಿಯಾದರೂ ಆನ್‌ಲೈನ್ ಅರ್ಜಿಯನ್ನು ಪರಿಗಣಿಸಿ, ಇ-ಖಾತಾಗೆ ಅನುಮೋದನೆ ನೀಡುತ್ತಾರೆ. ಇದರಿಂದ ಮಧ್ಯವರ್ತಿಗಳನ್ನು ತಡೆದಂತಾಗುತ್ತದೆ ಎಂದು ಮುನೀಶ್ ತಿಳಿಸಿದರು. ಆನ್‌ಲೈನ್‌ನಲ್ಲಿ ಅರ್ಜಿ ಹಂಚಿಕೆಯಾದ ಮೂರು ದಿನಗಳಲ್ಲಿ ಅಧಿಕಾರಿ ಅದನ್ನು ವಿಲೇವಾರಿ ಮಾಡಬೇಕು. ಇಲ್ಲದಿದ್ದರೆ ಮುಂದಿನ ಹಂತದ ಅಧಿಕಾರಿಗೆ ಅರ್ಜಿ ರವಾನೆಯಾಗುತ್ತದೆ. ಅವರೂ ಮೂರು ದಿನದಲ್ಲಿ ಅರ್ಜಿ ವಿಲೇವಾರಿ ಮಾಡದಿದ್ದರೆ, ಸ್ವಯಂಚಾಲಿತವಾಗಿ ಇ-ಖಾತಾ ಅನುಮೋದನೆಯಾಗುತ್ತದೆ ಎಂದರು. ಇ-ಖಾತಾ, ಹೊಸ ಖಾತಾ ಹಾಗೂ ಕಂದಾಯ ವಿಭಾಗಕ್ಕೆ ಸಂಬಂಧಿಸಿದ 50 ಆನ್‌ಲೈನ್ ಅರ್ಜಿಗಳನ್ನು ಪ್ರತಿ ಅಧಿಕಾರಿಗೆ ನಿತ್ಯವೂ ಹಂಚಲಾಗುತ್ತದೆ. ಅವುಗಳನ್ನು ಅವರು ವಿಲೇವಾರಿ ಮಾಡಿದ ನಂತರ ಮತ್ತೆ ಅರ್ಜಿ ಹಂಚಿಕೆ ಪ್ರಕ್ರಿಯೆ ಆರಂಭವಾಗುತ್ತದೆ ಎಂದು ಹೇಳಿದರು.




---

# ಬ್ಯಾಂಕ್ ಗ್ಯಾರಂಟಿ: ರೂ.1.90 ಕೋಟಿ ವಂಚನೆ

• ಉದಯವಾಹಿನಿ, ಬೆಂಗಳೂರು

ಬ್ಯಾಂಕ್ ಗ್ಯಾರಂಟಿ ಕೊಡಿಸುವುದಾಗಿ ಆಮಿಷವೊಡ್ಡಿ ಗುತ್ತಿಗೆದಾರರೊಬ್ಬರಿಗೆ ರೂ.1.90 ಕೋಟಿ ವಂಚಿಸಲಾಗಿದೆ.ಗಂಗಾನಗರದ ನಿವಾಸಿ, ಗುತ್ತಿಗೆದಾರ ಹೇಮಂತ್ ಮುದ್ದಪ್ಪ ಅವರ ದೂರು ಆಧರಿಸಿ, ಸಿಸಿಬಿ ಪೊಲೀಸರು ಚೆನ್ನೈನ ಬಲರಾಮನ್, ಅರಸು ಸುಬ್ರಮಣ್ಯಂ ಅಲಿಯಾಸ್ ಸಂಜಯ್ ಎಂಬುವವರ ವಿರುದ್ಧ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದಾರೆ. ಹೇಮಂತ್ ಅವರು 2023ರಲ್ಲಿ ಮೈಸೂರು ಮಹಾನಗರ ಪಾಲಿಕೆ ಹಾಗೂ ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ಘನ ತ್ಯಾಜ್ಯ ಸಂಸ್ಕರಣೆ, ವಿಲೇವಾರಿಗಾಗಿ ಕರೆದಿದ್ದ ಟೆಂಡರ್‌ನಲ್ಲಿ ಗುಜರಾತ್‌ನ ಡಿ.ಎಚ್. ಪಟೇಲ್ ಕಂಪನಿಯ ಅಧಿಕೃತ ಪ್ರತಿನಿಧಿಯಾಗಿ ಭಾಗವಹಿಸಿದ್ದರು. ಕಾಮಗಾರಿಯ ಪರವಾನಗಿ. ಕಾರ್ಯಾದೇಶ ಪಡೆಯಲು ಪಾಲಿಕೆಗೆ ಟೆಂಡರ್ ಮೌಲ್ಯದ ಶೇಕಡ 10ರಷ್ಟು ಬ್ಯಾಂಕ್ ಖಾತರಿಯನ್ನು ನೀಡಬೇಕಿತ್ತು. ಇದಕ್ಕಾಗಿ ಆನ್‌ಲೈನ್‌ನಲ್ಲಿ ಗ್ಯಾರಂಟಿ ನೀಡುವ ಖಾಸಗಿ ಬ್ಯಾಂಕ್‌ಗಳ ಕುರಿತು ಹುಡುಕಾಟ ನಡೆಸಿದ್ದರು' ಎಂದು ಪೊಲೀಸರು ತಿಳಿಸಿದ್ದಾರೆ. ಯುರೊ ಎಕ್ಸಿಮ್ ಬ್ಯಾಂಕ್‌ನಲ್ಲಿ ಅಗತ್ಯ ಮಾಹಿತಿಗಳನ್ನು ದಾಖಲಿಸಿದ್ದರು. ಈ ಬ್ಯಾಂಕ್‌ನ ಮಾಜಿ ವ್ಯವಸ್ಥಾಪಕ ಎಂದು ಹೇಳಿಕೊಂಡು ಬಲರಾಮನ್, ಹೇಮಂತ್‌ಗೆ ಕರೆ ಮಾಡಿದ್ದ. ಇತ್ತೀಚೆಗೆ ಯುರೊ ಎಕ್ಸಿಮ್ ಬ್ಯಾಂಕ್‌ನ ಕೆಲಸ ಬಿಟ್ಟಿದ್ದು, ಹಲವರಿಗೆ ಬ್ಯಾಂಕ್ ಖಾತರಿ ಒದಗಿಸಿರುವುದಾಗಿ ಹೇಳಿ, ಕೆಲ ಪಿಡಿಎಫ್‌ನ ಪ್ರತಿಗಳನ್ನು ಕಳಿಸಿದ್ದ. ಇದನ್ನು ಹೇಮಂತ್ ನಂಬಿದ್ದರು' ಎಂದು ಹೇಳಿದ್ದಾರೆ.

---

# ರಾಜ್ಯಾದ್ಯಂತ 2,000 ಮದರಸಾಗಳಲ್ಲಿ ಕನ್ನಡ ಕಲಿಕೆ ಆರಂಭ

• ಉದಯವಾಹಿನಿ, ಬೆಂಗಳೂರು

ಕನ್ನಡ ಅಭಿವೃದ್ಧಿ ಪ್ರಾಧಿಕಾರ (ಕೆಡಿಎ) ಸುಮಾರು 2,000 ಮದರಸಾಗಳಲ್ಲಿ ಕನ್ನಡ ಭಾಷಾ ಶಿಕ್ಷಣವನ್ನು ಪರಿಚಯಿಸುವ ಕಾರ್ಯಕ್ರಮ ಆರಂಭಿಸಿದೆ. 180 ಮದರಸಾ ಶಿಕ್ಷಕರಿಗೆ ತರಬೇತಿಯೊಂದಿಗೆ ಬೆಂಗಳೂರಿನಲ್ಲಿ ಈ ಕಾರ್ಯಕ್ರಮ ಆರಂಭವಾಯಿತು.

ತರಬೇತಿಯನ್ನು ಉದ್ಘಾಟಿಸಿ ಮಾತನಾಡಿದ ಕೆಡಿಎ ಅಧ್ಯಕ್ಷ ಪುರುಷೋತ್ತಮ್ ಬಿಳಿಮಲೆ, ರಾಜ್ಯ ಭಾಷೆಯ ಮೂಲಕ ಸಮುದಾಯಗಳ ನಡುವೆ ಸಂವಹನ ಮತ್ತು ತಿಳುವಳಿಕೆಯನ್ನು ಬಲಪಡಿಸುವ ಗುರಿ ಹೊಂದಲಾಗಿದೆ ಎಂದು ಹೇಳಿದರು. ಕನ್ನಡ ಕಲಿಕೆಯು ಅಲ್ಪಸಂಖ್ಯಾತ ಸಮುದಾಯಗಳು ರಾಜ್ಯದ ಸಾಮಾಜಿಕ ಮತ್ತು ಸಾಂಸ್ಕೃತಿಕ ಜೀವನದಲ್ಲಿ ಹೆಚ್ಚು ಆಳವಾಗಿ ತೊಡಗಿಸಿಕೊಳ್ಳಲು ನೆರವಾಗುತ್ತದೆ.

ವಿದ್ಯಾರ್ಥಿಗಳಿಗೆ ಕನ್ನಡ ಭಾಷಾ ಸೌಹಾರ್ದತೆಯ ಬುನಾದಿಗಳು ಎಂಬ ಶೀರ್ಷಿಕೆಯಡಿ 100 ಪುಸ್ತಕಗಳನ್ನು ಪ್ರಕಟಿಸಲು ಕೆಡಿಎ ಕಾರ್ಯೋನ್ಮುಖವಾಗಿದ್ದು, ಶೀಘ್ರದಲ್ಲೇ ಬಿಡುಗಡೆ ಮಾಡಲಾಗುವುದು ಎಂದು ಅವರು ತಿಳಿಸಿದರು.




ಇದಕ್ಕೆ ಪ್ರತಿಕ್ರಿಯಿಸಿದ ಅಲ್ಪಸಂಖ್ಯಾತರ ಕಲ್ಯಾಣ ಸಚಿವ ಜಮೀರ್ ಅಹಮದ್, ಇಲಾಖೆ ಅಗತ್ಯ ಕ್ರಮ ಕೈಗೊಳ್ಳಲಿದೆ. ಮಸೀದಿಗಳಲ್ಲಿ ಕೆಲಸ ಮಾಡುವ ಮೌಲ್ವಿಗಳಿಗೂ ಕನ್ನಡ ಪಾಠ ಕಲಿಸಲಾಗುವುದು ಎಂದು ತಿಳಿಸಿದರು.

**ಪ್ರಸ್ತುತ ಸ್ವಾಯತ್ತವಾಗಿ ಕಾರ್ಯನಿರ್ವಹಿಸುತ್ತಿರುವ ಉರ್ದು ಅಕಾಡೆಮಿಯನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವ್ಯಾಪ್ತಿಗೆ ತರುವಂತೆ ಬಿಳಿಮಲೆ ಸಲಹೆ ನೀಡಿದರು. ಇತರ ಭಾಷಾ ಅಕಾಡೆಮಿಗಳು ಈಗಾಗಲೇ ಇಲಾಖೆಯ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದು, ನಿಯಮಿತವಾಗಿ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸುತ್ತವೆ ಮತ್ತು ಉರ್ದು ಅಕಾಡೆಮಿಯನ್ನು ಈ ರೀತಿ ಮಾಡುವುದರಿಂದ ಸಾರ್ವಜನಿಕ ಸಂಬಂಧಿತ ಕಾರ್ಯಕ್ರಮಗಳಲ್ಲಿ ಹೆಚ್ಚಿನ ರೀತಿಯಲ್ಲಿ ತೊಡಗಿಸಿಕೊಳ್ಳಲು ಅವಕಾಶ ಇರುತ್ತದೆ ಎಂದರು.**

---

# 2-3 ದಿನಗಳಲ್ಲಿ SEP ವರದಿ ಸಿಎಂಗೆ ಸಲ್ಲಿಕೆ

• ಉದಯವಾಹಿನಿ, ಬೆಂಗಳೂರು

ಪ್ರೊ.ಸುಖದೇವ್ ಥೋರಟ್ ನೇತೃತ್ವದಲ್ಲಿ ರಚನೆ ಆಗಿರುವ ರಾಜ್ಯ ಶಿಕ್ಷಣ ನೀತಿಯ ಅಂತಿಮ ವರದಿಯನ್ನು 2-3 ದಿನಗಳಲ್ಲಿ ಸಿಎಂ ಸಿದ್ದರಾಮಯ್ಯ ಅವರಿಗೆ ಸಲ್ಲಿಸುತ್ತೇವೆ ಎಂದು ಉನ್ನತ ಶಿಕ್ಷಣ ಸಚಿವ ಡಾ.ಸುಧಾಕರ್ ತಿಳಿಸಿದರು.



ಬೆಂಗಳೂರಿನಲ್ಲಿ ಮಾತನಾಡಿದ ಅವರು, ರಾಜ್ಯ ಶಿಕ್ಷಣ ನೀತಿಯ ವರದಿ ಸಿದ್ಧವಾಗಿದೆ. ಇವತ್ತು ಉನ್ನತ ಶಿಕ್ಷಣ ಇಲಾಖೆ, ಶಾಲಾ ಶಿಕ್ಷಣ ಇಲಾಖೆ ಮತ್ತು ಎಸ್‌ಇಪಿ ಸಮಿತಿ ಸಭೆ ಇದೆ. ಇಲ್ಲಿ ಚರ್ಚೆ ಮಾಡಿದ ನಂತರ ಸಮಯ ತೆಗೆದುಕೊಂಡು ವರದಿಯನ್ನು ಸಿಎಂಗೆ ಕೊಡ್ತೀವಿ. 2-3 ದಿನಗಳಲ್ಲಿ ಸಿಎಂಗೆ ವರದಿ ಸಲ್ಲಿಕೆ ಆಗಬಹುದು ಎಂದರು.

2021ರಲ್ಲಿ ಉನ್ನತ ಶಿಕ್ಷಣ ಇಲಾಖೆಯಲ್ಲಿ ಎನ್‌ಇಪಿ (ರಾಷ್ಟ್ರೀಯ ಶಿಕ್ಷಣ ನೀತಿ) ಅನುಷ್ಠಾನ ಮಾಡಲಾಗಿದೆ. ರಾಜ್ಯದಲ್ಲಿ ಎಸ್‌ಇಪಿ ಮಧ್ಯಂತರ ವರದಿ ಆಧಾರದ ಮೇಲೆ ಉನ್ನತ ಶಿಕ್ಷಣ ಇಲಾಖೆಯಲ್ಲಿ ಅನುಷ್ಠಾನ ಆಗಿದೆ.

ಶಾಲಾ ಶಿಕ್ಷಣದಲ್ಲಿ ಎಸ್‌ಇಪಿ ಅನುಷ್ಠಾನ ಆಗಿಲ್ಲ. ಎಸ್‌ಇಪಿ ಸಮಿತಿ ವರದಿ ಕೊಟ್ಟ ಬಳಿಕ ಶಾಲಾ ಶಿಕ್ಷಣ ಹಂತದಲ್ಲಿ ಜಾರಿ ಮಾಡಲಾಗುತ್ತದೆ. ಶಾಲಾ ಶಿಕ್ಷಣದಲ್ಲಿ ಅನುಷ್ಠಾನಗೊಳಿಸುವ ಬಗ್ಗೆ ಸಿಎಂ ತೀರ್ಮಾನ ಮಾಡುತ್ತಾರೆ ಎಂದು ಹೇಳಿದರು.

---

# ವಿಕ್ಟೋರಿಯಾ, ವಾಣಿವಿಲಾಸ್ ಆಸ್ಪತ್ರೆಗೆ ಸಿಎಂ ದಿಢೀರ್ ಭೇಟಿ, ಪರಿಶೀಲನೆ

• ಉದಯವಾಹಿನಿ, ಬೆಂಗಳೂರು

ಮುಖ್ಯಮಂತ್ರಿ ಸಿದ್ದರಾಮಯ್ಯ ನಗರದ ವಿಕ್ಟೋರಿಯಾ ಮತ್ತು ವಾಣಿವಿಲಾಸ್ ಸಾರ್ವಜನಿಕ ಆಸ್ಪತ್ರೆಗಳಿಗೆ ದಿಢೀರ್ ಭೇಟಿ ನೀಡಿ, ಪರಿಶೀಲನೆ ನಡೆಸಿದರು. ವೈದ್ಯಕೀಯ ಶಿಕ್ಷಣ ಸಚಿವ ಶರಣುಪ್ರಕಾಶ್ ಪಾಟೀಲ್ ಅವರೊಂದಿಗೆ ವಿಕ್ಟೋರಿಯಾ ಆಸ್ಪತ್ರೆಗೆ ಭೇಟಿ ನೀಡಿದ ಸಿಎಂ, ಆಸ್ಪತ್ರೆಯ ಒಳರೋಗಿಗಳು, ಹೊರರೋಗಿಗಳು ಮತ್ತು ಅವರ ಸಹಾಯಕರೊಂದಿಗೆ ಮಾತಾಡಿದರು. ಇದೇ ವೇಳೆ ರೋಗಿಗಳ ಜೊತೆ ವೈದ್ಯರು ಸಹಾನುಭೂತಿಯಿಂದ ವರ್ತಿಸಬೇಕು ಎಂದು ಸೂಚನೆ ನೀಡಿದರು.

ನಂತರ ಮಾಧ್ಯಮಗಳೊಂದಿಗೆ ಮಾತಾಡಿದ ಸಿಎಂ, ತಮ್ಮೊಂದಿಗೆ ಮಾತಾಡಿದ ರೋಗಿಗಳು, ಅವರ ಸಹಾಯಕರು ಆಸ್ಪತ್ರೆಗಳಲ್ಲಿ ಸಿಗುತ್ತಿರುವ ಸೇವೆ ಬಗ್ಗೆ ತೃಪ್ತಿ ವ್ಯಕ್ತಪಡಿಸಿದರು. ವೈದ್ಯರು ಹಾಗೂ ಬೇರೆ ಸಿಬ್ಬಂದಿ ಚೆನ್ನಾಗಿ ನೋಡಿಕೊಳ್ಳುತ್ತಿದ್ದಾರೆ ಅಂತ ಹೇಳಿದರು ಎಂದರು. ಯಾರೂ ವೈದ್ಯರ ಬಗ್ಗೆ ಆರೋಪ ಮಾಡಿಲ್ಲ. ವೈದ್ಯರು ನಮ್ಮನ್ನು ಚೆನ್ನಾಗಿ ನೋಡಿಕೊಳ್ಳುತ್ತಿದ್ದಾರೆ. ಊಟ ಚೆನ್ನಾಗಿ ಕೊಡುತ್ತಿದ್ದಾರೆ ಎಂದು ಹೇಳಿದ್ದಾರೆ ಎಂದು ಸಿಎಂ ತಿಳಿಸಿದರು.




ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಗೆ ದಿಢೀರ್ ಭೇಟಿ ನೀಡಿ, ರೋಗಿಗಳಿಗೆ ಸಕಾಲದಲ್ಲಿ ಸೂಕ್ತ ಚಿಕಿತ್ಸೆ ದೊರಕುತ್ತಿದೆಯೇ? ಚಿಕಿತ್ಸೆ ಪಡೆಯುವಲ್ಲಿ ಏನಾದರೂ ಅಡೆತಡೆಗಳಿವೆಯೇ? ಆಸ್ಪತ್ರೆಯ ವೈದ್ಯರು ಮತ್ತು ಸಿಬ್ಬಂದಿಗಳ ಸ್ಪಂದನೆ ಹೇಗಿದೆ ಎಂಬುದನ್ನು ಸ್ವತಃ ರೋಗಿಗಳಿಂದಲೇ ಮಾಹಿತಿ ಪಡೆದೆ. ಸರ್ಕಾರಿ ಆಸ್ಪತ್ರೆಗೆ ಬರುವ ರೋಗಿಗಳಲ್ಲಿ ಬಹುತೇಕರು ಬಡವರು. ಖಾಸಗಿ ಆಸ್ಪತ್ರೆಯ ವೆಚ್ಚ ಭರಿಸಲಾಗದ ಕಾರಣಕ್ಕಾಗಿ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಾರೆ. ಆರ್ಥಿಕ ಪರಿಸ್ಥಿತಿಯ ಕಾರಣಕ್ಕೆ ಯಾವೊಬ್ಬ ರೋಗಿಯು ಗುಣಮಟ್ಟದ ಚಿಕಿತ್ಸೆಯಿಂದ ವಂಚಿತನಾಗಬಾರದೆಂದು ಸರ್ಕಾರಿ ಆಸ್ಪತ್ರೆಗಳಿಗೆ ಅಗತ್ಯ ವೈದ್ಯಕೀಯ ಸಿಬ್ಬಂದಿ ಹಾಗೂ ಸಲಕರಣೆಗಳನ್ನು ಒದಗಿಸಲಾಗಿದೆ. ಆದ್ದರಿಂದ ಸರ್ಕಾರಿ ಆಸ್ಪತ್ರೆಗಳು ಕೂಡ ಖಾಸಗಿ ಆಸ್ಪತ್ರೆಗಳಂತೆ ಉತ್ತಮ ಸೇವೆ, ಉತ್ಕೃಷ್ಟ ಸೌಲಭ್ಯ ಒದಗಿಸಲೇಬೇಕು.

**ವಿಕ್ಟೋರಿಯಾ ಆಸ್ಪತ್ರೆಯಲ್ಲಿ ಅಂಗಾಂಗ ಕಸಿ ಉಚಿತವಾಗಿ ಮಾಡಿಕೊಡಲಾಗುತ್ತಿದೆ. ಖಾಸಗಿ ಆಸ್ಪತ್ರೆಯಲ್ಲಿ ಇದಕ್ಕೆ ಲಕ್ಷಾಂತರ ರೂ. ವೆಚ್ಚ ಆಗುತ್ತದೆ. ಹೀಗಾಗಿ ಹಾಸಿಗೆಗಳ ಸಂಖ್ಯೆಯನ್ನು ಹೆಚ್ಚಳ ಮಾಡಲು ಬೇಡಿಕೆ ಇದೆ. ಈ ಬಗ್ಗೆ ಪ್ರಸ್ತಾವನೆ ಇದೆ. ಸರ್ಕಾರ ಅದನ್ನು ಪರಿಗಣಿಸುತ್ತದೆ ಎಂದು ಹೇಳಿದರು.**

---

# ದೇಶಿ ನಿರ್ಮಿತ ಸೆಮಿಕಂಡಕ್ಟರ್ ಚಿಪ್ ಶೀಘ್ರದಲ್ಲೇ ಬಿಡುಗಡೆ

• ಉದಯವಾಹಿನಿ, ಬೆಂಗಳೂರು

ಎಲೆಕ್ಟ್ರಾನಿಕ್ಸ್ ಉತ್ಪಾದನೆ ಮತ್ತು ಡಿಜಿಟಲ್ ನಾವೀನ್ಯತೆಯಲ್ಲಿ ಭಾರತವು ಬೆಳವಣಿಗೆ ಹಾದಿಯಲ್ಲಿದೆ ಎಂದು ಕೇಂದ್ರ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ, ಕಳೆದ ದಶಕದಲ್ಲಿ ದೇಶದ ಎಲೆಕ್ಟ್ರಾನಿಕ್ಸ್ ರಫ್ತಿನಲ್ಲಿ ಎಂಟು ಪಟ್ಟು ಬೆಳವಣಿಗೆ ಮತ್ತು ಮೊದಲ ಸ್ವದೇಶಿ ಸೆಮಿಕಂಡಕ್ಟರ್ ಚಿಪ್‌ನ್ನು ಉತ್ಪಾದಿಸುವ ಸಾಧನೆಯನ್ನು ತೋರಿಸುತ್ತದೆ.

ದೇವನಹಳ್ಳಿಯಲ್ಲಿ ಸ್ಯಾಪ್ ಲ್ಯಾಬ್ಸ್ ಇಂಡಿಯಾದ ಹೊಸ ಇನ್ನೋವೇಶನ್ ಪಾರ್ಕ್ ಉದ್ಘಾಟಿಸಿ ಮಾತನಾಡಿದ ಕೇಂದ್ರ ಸಚಿವರು, ಬುಲೆಟ್ ರೈಲು 54 ಸೆಕೆಂಡುಗಳಲ್ಲಿ 0ಯಿಂದ 100 ಕಿಮೀ ವೇಗವನ್ನು ಹೆಚ್ಚಿಸುತ್ತದೆ, ಆದರೆ ವಂದೇ ಭಾರತ್ ರೈಲು ಅದನ್ನು 52 ಸೆಕೆಂಡುಗಳಲ್ಲಿ ಮಾಡುತ್ತದೆ. ಭಾರತವು ತಂತ್ರಜ್ಞಾನದಲ್ಲಿ ಬೆಳವಣಿಗೆ ಹೊಂದುತ್ತಿರುವ ವೇಗವನ್ನು ಸೂಚಿಸುತ್ತದೆ.




ಅದು ಆರ್ಟಿಫಿಷಿಯಲ್ ಇಂಟೆಲಿಜೆನ್ಸ್, ಚಿಪ್-ತಯಾರಿಕೆ ಅಥವಾ ಡಿಜಿಟಲ್ ಮೂಲಸೌಕರ್ಯವಾಗಿರಬಹುದು ಎಂದು ಹೇಳಿದರು. ವಿಕಸಿತ ಭಾರತ 2047 ದೃಷ್ಟಿಕೋನಕ್ಕೆ ಭಾರತದ ಇತ್ತೀಚಿನ ತಂತ್ರಜ್ಞಾನ ಬೆಳವಣಿಗೆ ನಿಕಟವಾಗಿ ಹೊಂದಿಕೆಯಾಗುತ್ತದೆ ಎಂದು ಹೇಳಿದರು.

**ಕಳೆದ 11 ವರ್ಷಗಳಲ್ಲಿ, ಭಾರತವು 11ನೇ ಅತಿದೊಡ್ಡ ಆರ್ಥಿಕತೆಯಿಂದ ಶೀಘ್ರದಲ್ಲೇ ಮೂರನೇ ಅತಿದೊಡ್ಡ ಆರ್ಥಿಕತೆಗೆ ತಲುಪಿದೆ. ಇದು ಭೌಗೋಳಿಕ ರಾಜಕೀಯ, ಭೂ ಅರ್ಥಶಾಸ್ತ್ರ ಮತ್ತು ಭೂತಂತ್ರಜ್ಞಾನದಲ್ಲಿ ತ್ವರಿತ ಬದಲಾವಣೆಯ ಅವಧಿಯಾಗಿದ್ದು, ಭಾರತವು ಸ್ಥಿರ ನಾಯಕತ್ವದೊಂದಿಗೆ ಅದನ್ನು ಮುನ್ನಡೆಸುತ್ತಿದೆ ಎಂದರು.**

34,000 ಕ್ಕೂ ಹೆಚ್ಚು ಗ್ರಾಫಿಕ್ಸ್ ಸಂಸ್ಕರಣಾ ಘಟಕ ಈಗ ಸಾರ್ವಜನಿಕ-ಖಾಸಗಿ ಸಹಭಾಗಿತ್ವದ ಅಡಿಯಲ್ಲಿ ತರಲಾಗಿದೆ. ಕಾಲೇಜುಗಳಾದ್ಯಂತ ವಿದ್ಯಾರ್ಥಿಗಳು, ಸಂಶೋಧಕರು ಮತ್ತು ಆರಂಭಿಕ ಹಂತದ ಸ್ಟಾರ್ಟ್‌ಅಪ್‌ಗಳಿಗೆ ಕಂಪ್ಯೂಟಿಂಗ್ ಪ್ರವೇಶವನ್ನು ನೀಡುತ್ತದೆ ಎಂದರು.

---

# ಜಾಮೀನು ರದ್ದು ಮಾಡಬೇಡಿ: ಸುಪ್ರೀಂಗೆ ಪವಿತ್ರಾ ಗೌಡ ಮನವಿ

• ಉದಯವಾಹಿನಿ, ಬೆಂಗಳೂರು

ನನಗೆ ಮಗಳಿದ್ದಾಳೆ. ಹೈಕೋರ್ಟ್ ನೀಡಿದ ಜಾಮೀನು ರದ್ದು ಮಾಡಬೇಡಿ ಎಂದು ಸುಪ್ರೀಂ ಕೋರ್ಟ್‌ಗೆ ಪವಿತ್ರಾ ಗೌಡ ಮನವಿ ಮಾಡಿದ್ದಾರೆ. ರೇಣುಕಾಸ್ವಾಮಿ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ದರ್ಶನ್ ಸೇರಿ 7 ಆರೋಪಿಗಳಿಗೆ ಹೈಕೋರ್ಟ್ ನೀಡಿದ ಜಾಮೀನನ್ನು ರದ್ದು ಮಾಡುವಂತೆ ಬೆಂಗಳೂರು ಪೊಲೀಸರು ಸುಪ್ರೀಂ ಕೋರ್ಟ್‌ಗೆ ಮನವಿ ಮಾಡಿದ್ದರು. ವಾದ-ಪ್ರತಿವಾದ ಆಲಿಸಿದ ಕೋರ್ಟ್ ಈಗ ತೀರ್ಪನ್ನು ಕಾಯ್ದಿರಿಸಿದೆ. ಜುಲೈ 24 ರಂದು ನಡೆದ ಕೊನೆಯ ವಿಚಾರಣೆಯ ಸಂದರ್ಭದಲ್ಲಿ ನ್ಯಾಯಮೂರ್ತಿ ಜೆ.ಬಿ. ಪರ್ದಿವಾಲಾ, ನ್ಯಾಯಮೂರ್ತಿ ಆರ್. ಮಹದೇವನ್ ಅವರಿದ್ದ ಪೀಠ ನಿಮ್ಮ ವಾದ-ಪ್ರತಿವಾದವನ್ನು ಮೂರು ಪುಟಗಳಲ್ಲಿ ಸಂಕ್ಷಿಪ್ತವಾಗಿ ಒಂದು ವಾರದಲ್ಲಿ ತಿಳಿಸಿ ಎಂದು ಸೂಚಿಸಿದ್ದರು. ಅದರಂತೆ ಪವಿತ್ರಾ ಗೌಡ, ದರ್ಶನ್ ಮತ್ತು ಬೆಂಗಳೂರು ಪೊಲೀಸರ ಪರ ವಕೀಲರು ಲಿಖಿತ ರೂಪದಲ್ಲಿ ವಾದವನ್ನು ನ್ಯಾಯಾಲಯಕ್ಕೆ ಸಲ್ಲಿಸಿದ್ದಾರೆ.



**ಪವಿತ್ರಾ ಗೌಡ ವಾದ ಏನು:** ನಾನು ರೇಣುಕಾಸ್ವಾಮಿಯಿಂದ ಲೈಂಗಿಕ ಕಿರುಕುಳಕ್ಕೆ ಒಳಗಾಗಿದ್ದೇನೆ. ಘಟನೆ ನಡೆದ ದಿನ ಇತರೇ ಆರೋಪಿಗಳ ಜೊತೆ ಯಾವುದೇ ಸಂವಹನ ನಡೆಸಿಲ್ಲ. ರೇಣುಕಾಸ್ವಾಮಿಯ ಅಪಹರಣ ಮತ್ತು ಕೊಲೆಯ ಸಂಚಿನಲ್ಲಿ ಭಾಗಿಯಾಗಿದ್ದೇನೆ ಎಂದು ಸಾಬೀತುಪಡಿಸಲು ಪ್ರಾಸಿಕ್ಯೂಷನ್ ವಿಫಲವಾಗಿದೆ. ರೇಣುಕಾ ಸ್ವಾಮಿ ಕೊಲೆಗೂ ನನಗೂ ಯಾವುದೇ ಸಂಬಂಧ ಇಲ್ಲ. ರೇಣುಕಾ ಸ್ವಾಮಿಯ ಮೃತ ದೇಹದ ಮೇಲಿನ ಗಾಯಗಳು ನನ್ನಿಂದ ಆಗಿಲ್ಲ ಎಂದು ಚಾರ್ಜ್‌ಶೀಟ್‌ನಲ್ಲಿ ಉಲ್ಲೇಖವಾಗಿದೆ. ನಾನು ಒಬ್ಬಂಟಿ ಪೋಷಕಳಾಗಿದ್ದು ನನಗೆ 10ನೇ ತರಗತಿಯಲ್ಲಿ ಓದುತ್ತಿರುವ ಮಗಳನ್ನು ನೋಡಿಕೊಳ್ಳಬೇಕಿದೆ. ಅಷ್ಟೇ ಅಲ್ಲದೇ ವಯಸ್ಸಾದ ಪೋಷಕರು ಇದ್ದು, ಅವರಿಗೆ ನಾನೇ ಆಧಾರವಾಗಿದ್ದೇನೆ. ನನಗೆ ಯಾವುದೇ ಕ್ರಿಮಿನಲ್ ಹಿನ್ನೆಲೆ ಇಲ್ಲ, ನನ್ನ ಬಂಧನಕ್ಕೆ ಕಾರಣಗಳನ್ನು ಪೊಲೀಸರು ಲಿಖಿತವಾಗಿ ನೀಡಿಲ್ಲ. ಮಹಿಳೆಯಾಗಿರುವುದರಿಂದ ಜಾಮೀನು ರದ್ದು ಮಾಡಬಾರದು ಎಂದು ಮನವಿ ಮಾಡುತ್ತಿದ್ದೇನೆ.

---

# ಆಯುಷ್ಮಾನ್ ಆರೋಗ್ಯ ಸೇವೆ ಯೋಜನೆ

## ರಾಜ್ಯ ಸರ್ಕಾರವೇ ಯೋಜನೆಯ ಶೇಕಡ 75ರಷ್ಟು ವೆಚ್ಚ ಭರಿಸಬೇಕಾದ ಪರಿಸ್ಥಿತಿ ನಿರ್ಮಾಣ

• ಉದಯವಾಹಿನಿ, ಬೆಂಗಳೂರು

ಜನರಿಗೆ ಆರೋಗ್ಯ ಭರವಸೆ ಒದಗಿಸುವ ಆಯುಷ್ಮಾನ್ ಭಾರತ್ ಯೋಜನೆಯ ಅನುದಾನಕ್ಕೆ ಸಂಬಂಧಿಸಿ ರಾಜ್ಯ, ಕೇಂದ್ರ ಸರ್ಕಾರದ ನಡುವೆ ಸಂಘರ್ಷ ಏರ್ಪಟ್ಟಿದೆ. ಕೇಂದ್ರದಿಂದ ಹೆಚ್ಚಿನ ನೆರವು ಸಿಗದ ಕಾರಣ ಸದ್ಯ ರಾಜ್ಯ ಸರ್ಕಾರವೇ ಯೋಜನೆಯ ಶೇಕಡ 75ರಷ್ಟು ವೆಚ್ಚ ಭರಿಸಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ರಾಜ್ಯ ಸರ್ಕಾರದ ಸಹಭಾಗಿತ್ವದಲ್ಲಿ ಅನುಷ್ಠಾನಗೊಂಡಿರುವ ಕೇಂದ್ರ ಸರ್ಕಾರದ ಈ ಯೋಜನೆಯಡಿ, ಐದು ವರ್ಷಗಳಲ್ಲಿ ರೂ.7,239 ಕೋಟಿ ಬಳಕೆ ಮಾಡಲಾಗಿದೆ.

ಕೇಂದ್ರದಿಂದ ರೂ.2.056.60 ಕೋಟಿ ಅನುದಾನ ಬಿಡುಗಡೆಯಾಗಿದ್ದರೆ, ಉಳಿದ ರೂ.5,183.19 ಕೋಟಿ ಹಣವನ್ನು ರಾಜ್ಯ ಸರ್ಕಾರವೇ ಭರಿಸಿದೆ. ಯೋಜನೆಯ ನಿಯಮದ ಪ್ರಕಾರ, ಕೇಂದ್ರ ಸರ್ಕಾರ ಶೇ 60ರಷ್ಟು, ರಾಜ್ಯ ಸರ್ಕಾರ ಶೇ 40ರಷ್ಟು ಅನುದಾನ ಒದಗಿಸಬೇಕು. ಕೇಂದ್ರದಿಂದ ಹೆಚ್ಚಿನ ಅನುದಾನದ ನಿರೀಕ್ಷೆಯಲ್ಲಿರುವ ಕಾಂಗ್ರೆಸ್ ನೇತೃತ್ವದ ರಾಜ್ಯ ಸರ್ಕಾರ, ಯೋಜನೆಯ ಪರಿಣಾಮಕಾರಿ ಜಾರಿಗೆ 60ರಷ್ಟು ಅನುದಾನ ಒದಗಿಸುವಂತೆ ಕೇಂದ್ರ ಆರೋಗ್ಯ ಸಚಿವಾಲಯಕ್ಕೆ ಮನವಿ ಮಾಡಿದೆ.

ಆಯುಷ್ಮಾನ್ ಮಿಷನ್ ಅಡಿ 2018ರಲ್ಲಿ ಪ್ರಾರಂಭವಾಗಿರುವ ಈ ಯೋಜನೆಯನ್ನು, ರಾಜ್ಯದಲ್ಲಿ ಆಯುಷ್ಮಾನ್ ಭಾರತ್-ಆರೋಗ್ಯ ಕರ್ನಾಟಕ' ಹೆಸರಿನಲ್ಲಿ ಅನುಷ್ಠಾನ ಮಾಡಲಾಗಿದೆ.




ಯೋಜನೆಯಡಿ ಬಿಪಿಎಲ್ ಕುಟುಂಬದವರಿಗೆ ವರ್ಷಕ್ಕೆ ರೂ. 5 ಲಕ್ಷದವರೆಗೆ ಆರೋಗ್ಯ ವಿಮೆಗೆ ಅವಕಾಶವಿದೆ. ರಾಜ್ಯದಲ್ಲಿ 62.09 ಲಕ್ಷ ಕುಟುಂಬಗಳು ಆಯುಷ್ಮಾನ್ ಭಾರತ್ ಯೋಜನೆ ವ್ಯಾಪ್ತಿಗೆ ಬರಲಿವೆ. ಉಳಿದ ಕುಟುಂಬಗಳನ್ನು ಆರೋಗ್ಯ ಕರ್ನಾಟಕ ಯೋಜನೆಯಡಿ ಸೇರ್ಪಡೆ ಮಾಡಲಾಗಿದೆ.

ಎಪಿಎಲ್ ಕುಟುಂಬದ ಸದಸ್ಯರಿಗೆ ಗರಿಷ್ಠ ರೂ.1.50 ಲಕ್ಷ ಚಿಕಿತ್ಸಾ ವೆಚ್ಚ ನಿಗದಿ ಮಾಡಿದ್ದು, ಶೇ 30ರಷ್ಟು ಹಣವನ್ನು ಪಾವತಿಸಲಾಗುತ್ತದೆ. ಪರಿಷ್ಕರಣೆಯಾಗದ ಪ್ಯಾಕೇಜ್: ಯೋಜನೆಯಡಿ ಚಿಕಿತ್ಸಾ ಪ್ಯಾಕೇಜ್‌ಗಳ ದರ ಕಡಿಮೆ ಎಂಬ ಕಾರಣಕ್ಕೆ ಕೆಲವು ಖಾಸಗಿ ಆಸ್ಪತ್ರೆಗಳು ನೋಂದಣಿಗೆ ಅಷ್ಟಾಗಿ ಆಸಕ್ತಿ ತೋರುತ್ತಿಲ್ಲ. ಖಾಸಗಿ ಆಸ್ಪತ್ರೆಗಳ ಸಂಘಟನೆಯು ದರ ಪರಿಷ್ಕರಿಸುವಂತೆ ರಾಜ್ಯ ಸರ್ಕಾರವನ್ನು ಆಗ್ರಹಿಸುತ್ತಲೇ ಬಂದಿದೆ. ಸದ್ಯದ ಪರಿಸ್ಥಿತಿಯಲ್ಲಿ ದರ ಪರಿಷ್ಕರಿಸಿದರೆ ಯೋಜನೆಯಡಿ ಶೇ 90ರಷ್ಟು ಅನುದಾನವನ್ನು ರಾಜ್ಯ ಸರ್ಕಾರವೇ ಭರಿಸಬೇಕಾಗುತ್ತದೆ. ಆದ್ದರಿಂದ ದರ ಪರಿಷ್ಕರಣೆ ಪ್ರಸ್ತಾವ ಸಾಕಾರಗೊಂಡಿಲ್ಲ. ಈ ಅನುದಾನದ ಸಂಘರ್ಷದಿಂದಲೇ 70 ವರ್ಷ ಮೇಲ್ಪಟ್ಟವರಿಗೆ ಆರೋಗ್ಯ ವಿಮೆ ಒದಗಿಸುವ, ಆಯುಷ್ಮಾನ್ ವಯೋ ವಂದನಾ ಯೋಜನೆಯೂ ರಾಜ್ಯದಲ್ಲಿ ಜಾರಿಯಾಗಿಲ್ಲ. ಯೋಜನೆಯಡಿ ಚಿಕಿತ್ಸಾ ಪ್ಯಾಕೇಜ್ ದರ ಪರಿಷ್ಕರಣೆ ಮಾಡುವ ಪ್ರಸ್ತಾವ ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿದೆ. ದರ ಪರಿಷ್ಕರಿಸಿದರೆ ಹೆಚ್ಚಿನ ಅನುದಾನವನ್ನು ರಾಜ್ಯವೇ ಭರಿಸಬೇಕಾಗುತ್ತದೆ. ಆರ್ಥಿಕ ಇಲಾಖೆ ಅನುಮೋದನೆ ನೀಡಿದಲ್ಲಿ ಪರಿಷ್ಕರಣೆಯಾಗಲಿದೆ' ಎಂದು ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್‌ನ ಅಧಿಕಾರಿಯೊಬ್ಬರು ತಿಳಿಸಿದರು.

ಈ ಹಣವನ್ನು ಆಸ್ಪತ್ರೆಗಳ ಅಭಿವೃದ್ಧಿ, ವೈದ್ಯರು ವೈದ್ಯಕೀಯ ಸಿಬ್ಬಂದಿಗೆ ಪ್ರೋತ್ಸಾಹ ಧನ ಒದಗಿಸಲು ಬಳಸಿಕೊಳ್ಳಲಾಗುತ್ತಿದೆ. ಇದರಿಂದಾಗಿ ಸರ್ಕಾರಿ ಆಸ್ಪತ್ರೆಗಳಲ್ಲಿ ಯೋಜನೆಯಡಿ ವಿವಿಧ ಚಿಕಿತ್ಸೆ ಹಾಗೂ ಶಸ್ತ್ರಚಿಕಿತ್ಸೆಗೆ ಆದ್ಯತೆ ನೀಡಲಾಗುತ್ತಿದೆ.

### ಕೋಟಿ ದಾಟಿದ ಪ್ರಕರಣ

**ರಾಜ್ಯದಲ್ಲಿ ಆಯುಷ್ಮಾನ್ ಭಾರತ್-ಆರೋಗ್ಯ ಕರ್ನಾಟಕ ಯೋಜನೆಯಡಿ ಚಿಕಿತ್ಸೆ ಪಡೆದುಕೊಳ್ಳುವವರ ಸಂಖ್ಯೆ ವರ್ಷದಿಂದ ವರ್ಷಕ್ಕೆ ಹೆಚ್ಚುತ್ತಲೇ ಇದೆ. 2020ರಲ್ಲಿ ಯೋಜನೆಯಡಿ ಚಿಕಿತ್ಸೆ ಪಡೆದವರ ವಾರ್ಷಿಕ ಸಂಖ್ಯೆ ಎಂಟು ಲಕ್ಷದ ಅಸುಪಾಸಿನಲ್ಲಿದ್ದರೆ ಆ ಸಂಖ್ಯೆ 2024ರಲ್ಲಿ 35 ಲಕ್ಷ ದಾಟಿದೆ. ಐದು ವರ್ಷಗಳಲ್ಲಿ 1.09 ಕೋಟಿ ಪ್ರಕರಣಗಳಲ್ಲಿ ಚಿಕಿತ್ಸೆ ಒದಗಿಸಲಾಗಿದೆ. ಯೋಜನೆಯಡಿ ಸರ್ಕಾರಿ ಆಸ್ಪತ್ರೆಗಳಿಗೂ ಚಿಕಿತ್ಸೆಗೆ ಅನುಸಾರ ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ಹಣ ಬಿಡುಗಡೆ ಮಾಡುತ್ತಿದೆ.**

**ಯೋಜನೆಯಡಿ ರಾಜ್ಯ ಸರ್ಕಾರವೇ ಶೇ 75 ರಷ್ಟು ಅನುದಾನ ಒದಗಿಸುತ್ತಿದೆ. ಕೇಂದ್ರದ ಪಾಲು ಶೇ 25ರಷ್ಟು ಮಾತ್ರ. ಚಿಕಿತ್ಸಾ ಪ್ಯಾಕೇಜ್ ದರ ಪರಿಷ್ಕರಿಸಿದರೆ ಕೇಂದ್ರದ ಪಾಲು ಇನ್ನಷ್ಟು ಕಡಿಮೆ ಆಗಲಿದೆ.**
-ದಿನೇಶ್ ಗುಂಡೂರಾವ್
ಆರೋಗ್ಯ ಸಚಿವ

---

# ಆಹಾರ ಪದಾರ್ಥಗಳಲ್ಲಿ ನೈಸರ್ಗಿಕ ಬಣ್ಣ ಬಳಕೆ: ಎನ್‌ಕೆಪಿ ಎಂಪೈರ್ ವೆಂಚರ್ಸ್

• ಉದಯವಾಹಿನಿ, ಬೆಂಗಳೂರು

ಆಹಾರ ಪದಾರ್ಥಗಳ ಗುಣಮಟ್ಟದಲ್ಲಿ ಯಾವುದೇ ರಾಜಿ ಮಾಡಿಕೊಳ್ಳದೆ, ನೈಸರ್ಗಿಕ ಬಣ್ಣ ಬಳಕೆಗೆ ಆದ್ಯತೆ ನೀಡಿದ್ದೇವೆ' ಎಂದು ಎನ್‌ಕೆಪಿ ಎಂಪೈರ್ ವೆಂಚರ್ಸ್ ತಿಳಿಸಿದೆ. ಇತ್ತೀಚೆಗೆ ಎಂಪೈರ್ ರೆಸ್ಟೋರೆಂಟ್‌ನ ಚಿಕನ್ ಕಬಾಬ್ ಮಾದರಿ ಸಂಗ್ರಹಿಸಿದ್ದ ಆಹಾರ ಸುರಕ್ಷತಾ ಅಧಿಕಾರಿಗಳು, ಆ ಮಾದರಿಗಳು ರಾಜ್ಯ ಆಹಾರ ಪ್ರಯೋಗಾಲಯದಲ್ಲಿ ಪರೀಕ್ಷೆಗೆ ಒಳಪಡಿಸಿದ್ದರು. ಅಸುರಕ್ಷಿತ ಬಣ್ಣ ಬಳಕೆಗೆ ಸಂಬಂಧಿಸಿದಂತೆ ನೋಟಿಸ್ ನೀಡಿದ್ದರು. ಈ ಬಗ್ಗೆ ಸ್ಪಷ್ಟನೆ ನೀಡಿರುವ ರೆಸ್ಟೋರೆಂಟ್ ವ್ಯವಸ್ಥಾಪಕರು, ನಾವು ಬಳಕೆ ಮಾಡುತ್ತಿದ್ದ ಕೃತಕ ಬಣ್ಣವು ಭಾರತೀಯ ಆಹಾರ ಸುರಕ್ಷತೆ, ಗುಣಮಟ್ಟ ಪ್ರಾಧಿಕಾರದ ಮಾನ್ಯತೆ ಹೊಂದಿತ್ತು. ಆದರೂ ನೀಡಲಾದ ಸೂಚನೆ ಅನುಸಾರ ಆ ಬಣ್ಣ ಬಳಕೆಯನ್ನು ಸ್ಥಗಿತಗೊಳಿಸಿದ್ದೇವೆ. ಈಗ ನೈಸರ್ಗಿಕ ಬಣ್ಣವನ್ನು ಮಾತ್ರ ಬಳಸುತ್ತಿದ್ದೇವೆ' ಎಂದು ಹೇಳಿದ್ದಾರೆ. ಗ್ರಾಹಕರು ವದಂತಿಗಳಿಗೆ ಕಿವಿಗೊಡಬಾರದು. ಆರು ದಶಕಗಳಿಂದ ಗುಣಮಟ್ಟದ ಮತ್ತು ರುಚಿಯಾದ ಆಹಾರ ಪದಾರ್ಥಗಳನ್ನು ಒದಗಿಸುತ್ತಿದ್ದೇವೆ' ಎಂದು ತಿಳಿಸಿದ್ದಾರೆ.

# ಪ್ರಜ್ವಲ್ ರೇವಣ್ಣ ತರ ಪ್ರತಾಪ್ ಸಿಂಹಂದು ವಿಡಿಯೋಗಳಿವೆ; ಎಂ. ಲಕ್ಷ್ಮಣ್

• ಉದಯವಾಹಿನಿ, ಮೈಸೂರು

**ಎಸ್‌ಐಟಿ ತನಿಖೆಗೆ ಕೊಟ್ರೆ ಜೈಲೇ**



ಮಾಜಿ ಸಂದ ಪ್ರಜ್ವಲ್ ರೇವಣ್ಣ ತರ ಪ್ರತಾಪ್ ಸಿಂಹದೂ ವಿಡಿಯೋಗಳಿವೆ ಎಸ್‌ಐಟಿ ತನಿಖೆಗೆ ಕೊಟ್ರೆ ಪ್ರತಾಪ್ ಸಿಂಹನೂ ಜೈಲಿಗೆ ಹೋಗ್ತಾರೆ ಎಂದು ಕಾಂಗ್ರೆಸ್ ವಕ್ತಾರ ಎಂ ಲಕ್ಷ್ಮಣ್ ಗಂಭೀರ ಆರೋಪ ಮಾಡಿದ್ದಾರೆ. ಬುಧವಾರ ಮೈಸೂರಿನಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಎಂ ಲಕ್ಷ್ಮಣ್, ಸಂಸತ್ ನಲ್ಲಿ ನಡೆದ ಸ್ಮೋಕ್ ಬಾಂಬ್ ಘಟನೆಯಲ್ಲಿ ಪೊಲೀಸರು ಪ್ರತಾಪ್ ಸಿಂಹ ಮೊಬೈಲ್ ಜಪ್ತಿ ಮಾಡಿದ್ದರು. ಆ ಮೊಬೈಲ್ ಬಗ್ಗೆ ಎಸ್‌ಐಟಿಗೆ ತನಿಖೆಗಳು ಕೊಟ್ಟರೆ ಪ್ರಜ್ವಲ್ ಒಳಗೆ ಹೋದಂತೆ ಪ್ರತಾಪ್ ಸಿಂಹ ಒಳಗೆ ಹೋಗುತ್ತಾರೆ. ನನ್ನ ಬಳಿಯೂ ಈ ಬಗ್ಗೆ ಆಧಾರಗಳಿವೆ. ಅವರ ಮೊಬೈಲ್ ನಲ್ಲಿ ನಗ್ನ ಚಿತ್ರಗಳು, ನಗ್ನ ವೀಡಿಯೋ ಇವೆ. ಅಮಿತ್ ಶಾ ಇದನ್ನು ನೋಡಿ ದಂಗಾಗಿದ್ದಾರೆ ಎಂದು ಹೇಳಿದ್ದಾರೆ. ವಿಡಿಯೋ ಇರೋದಕ್ಕೆ ಅವರ ಗೃಹ ಸಚಿವರು ಪ್ರತಾಪ್ ಸಿಂಹ ಮೊಬೈಲ್ ಸೀಜ್ ಮಾಡಿಸಿದ್ರು. ಪ್ರತಾಪ್ ಸಿಂಹ ಅಶ್ಲೀಲ ವಿಡಿಯೋಗಳು ನನ್ನ ಮೊಬೈಲ್‌ನಲ್ಲೇ ಇವೆ ಎಂದು ಲಕ್ಷ್ಮಣ್ ತಿಳಿಸಿದರು.

**ಕೆಆರ್‌ಎಸ್‌ಗೆ ಅಡಿಗಲ್ಲು ಹಾಕಿದ್ದು ಟಿಪ್ಪು:** ಕೆಆರ್‌ಎಸ್‌ಗೆ ಅಡಿಗಲ್ಲು ಹಾಕಿದ್ದು ಟಿಪ್ಪು ಎಂಬ ಸಚಿವ ಎಚ್.ಸಿ. ಮಹದೇವಪ್ಪ ಹೇಳಿಕೆಯಲ್ಲಿ ಯಾವ ತಪ್ಪು ಇಲ್ಲ. ಮಹದೇವಪ್ಪ ಹೇಳಿದ್ದು ನೂರಕ್ಕೆ ನೂರು ಸತ್ಯ. ಅಣೆಕಟ್ಟು ಕಟ್ಟಿದ್ದು ಮಹಾರಾಜರು. ಆದರೆ, ಅದಕ್ಕೆ ಮೊದಲು ಅದೇ ಜಾಗದಲ್ಲಿ ಬ್ಯಾರೇಜ್ ಕಟ್ಟಿದ್ದು ಟಿಪ್ಪು. ಮೋವಿ ಡ್ಯಾಂ ಅಂತಾ ಹೆಸರಿಟ್ಟು 6 ಟಿಎಂಸಿ ನೀರು ಸಂಗ್ರಹಣದ ಬ್ಯಾರೇಜ್ ಅನ್ನು ಟಿಪ್ಪು ಕಟ್ಟಿದ್ದರು. ಶ್ರೀರಂಗಪಟ್ಟಣ, ಕೆ.ಆರ್. ನಗರ ಭಾಗಕ್ಕೆ ಇದರಿಂದ ನೀರು ಹರಿಸುತ್ತಿದ್ದರು. ನಂತರ ಇದೇ ಜಾಗದಲ್ಲೇ ಕೆಆರ್‌ಎಸ್ ಅಣೆಕಟ್ಟು ಕಟ್ಟಲಾಗಿದೆ. ಇದಕ್ಕೆ ಶಾಸನದ ಸಾಕ್ಷಿ ಇದೆ ಎಂದು ಸಮರ್ಥನೆ ಮಾಡಿಕೊಂಡರು. ನಾಲ್ವಡಿ ಅರಸಿರಿಗೂ ಹಾಲಿ ಸಂಸದರಿಗೆ ಹೋಲಿಕೆ ಬೇಡ. ರಾಜಕಾರಣಕ್ಕಾಗಿ ಬಂದವರು. ಸಿದ್ದರಾಮಯ್ಯ ಮೈಸೂರಿಗೆ ನೀರು ಕೊಟ್ಟಿದ್ದಾರೆ. ಆಸ್ಪತ್ರೆ ಕಟ್ಟಿಸಿದ್ದಾರೆ. ರಸ್ತೆ ಮಾಡಿಸಿದ್ದಾರೆ. ರಾಜ ಪ್ರಭುತ್ವದಲ್ಲಿ ನಾಲ್ವಡಿ ಅವರು ಕೆಲಸ ಮಾಡಿದರು. ಪ್ರಜಾಪ್ರಭುತ್ವದಲ್ಲಿ ಸಿದ್ದರಾಮಯ್ಯ ಮೈಸೂರಿಗೆ ಕೆಲಸ ಮಾಡಿದ್ದಾರೆ. ಯತೀಂದ್ರ ಹೇಳಿಕೆಯಲ್ಲಿ ಯಾವ ತಪ್ಪು ಇಲ್ಲ ಎಂದರು.

**ಬಿಜೆಪಿ ಮತಗಳ್ಳತನ ಮಾಡಿದೆ ಎಂದ ಕಾಂಗ್ರೆಸ್ ಮುಖಂಡ**

**ಮೈಸೂರು ಲೋಕಸಭಾ ಚುನಾವಣೆಯಲ್ಲಿ ಬಹಳ ಲೋಪವಾಗಿದೆ. ಬಿಜೆಪಿ ಇವಿಎಂನಲ್ಲಿ ಮತಗಳ್ಳತನ ಮಾಡಿದೆ. ಒಟ್ಟು 2202 ಬೂತ್‌ನಲ್ಲಿ 292 ಬೂತ್ ಗಳಲ್ಲಿ ಮತಗಳ್ಳತನ ಆಗಿದೆ. 292 ಇವಿಎಂ ಯಂತ್ರದಲ್ಲಿ ರಿಗ್ಗಿಂಗ್ ಆಗಿದೆ. 292 ಬೂತ್‌ಗಳಲ್ಲಿ 1 ಲಕ್ಷ 45 ಸಾವಿರ ಮತಗಳಿವೆ. ಅದರಲ್ಲಿ 22 ಸಾವಿರ ಮತ ಮಾತ್ರ ಕಾಂಗ್ರೆಸ್‌ಗೆ ಬಂದಿವೆ. ಕಳೆದ ನಾಲ್ಕು ಚುನಾವಣೆಯಲ್ಲಿ ಇದೇ ಬೂತ್‌ಗಳಲ್ಲಿ ಕಾಂಗ್ರೆಸ್‌ಗೆ ಶೇಕಡಾ 50 - 60 ಮತ ಬಂದಿದ್ದವು. ಒಂದು ಬೂತ್ ವ್ಯಾಪ್ತಿಯಲ್ಲಿ 15 ಮನೆ ಕಾಂಗ್ರೆಸ್ ಕಾರ್ಯಕರ್ತರದು. ಅಲ್ಲಿ 750 ಮತಗಳಲ್ಲವೆ. ಆದರೆ ಕಾಂಗ್ರೆಸ್ ಬಂದಿದ್ದು ಬರೀ ಏಳು ಮತ ಮಾತ್ರ. ಎನ್.ಆರ್. ಕ್ಷೇತ್ರದ ಶಾಂತಿ ನಗರದಲ್ಲೂ ಇದೇ ರೀತಿ ಆಗಿದೆ ಎಂದು ಆರೋಪ ಮಾಡಿದರು.**

# ರಸಗೊಬ್ಬರಕ್ಕಾಗಿ ರೈತರ ಪರದಾಟ

• ಉದಯವಾಹಿನಿ, ಬಾಗೇಪಲ್ಲಿ

ಕಳೆದ ಕೆಲವು ದಿನಗಳಿಂದ ಉತ್ತಮ ಮಳೆಯಾಗುತ್ತಿರುವ ಕಾರಣ, ತಾಲ್ಲೂಕಿನಾದ್ಯಂತ ಬಿತ್ತನೆ ಕಾರ್ಯಗಳು ಆರಂಭವಾಗಿದೆ. ಆದರೆ, ರೈತರಿಗೆ ಅಗತ್ಯವಿರುವಷ್ಟು ರಸಗೊಬ್ಬರ ಲಭ್ಯವಾಗುತ್ತಿಲ್ಲ. ಇದರಿಂದಾಗಿ ತಾಲ್ಲೂಕಿನ ಹೋಬಳಿಗಳಾದ ಕಸಬಾ, ಮಿಟ್ಟೇಮರಿ, ಗೂಳೂರು ರೈತ ಸಂಪರ್ಕ ಕೇಂದ್ರ, ಖಾಸಗಿ ಅಂಗಡಿಗಳ ಮುಂದೆ ರಸಗೊಬ್ಬರ ಪಡೆಯಲು ರೈತರು ಸಾಲುಗಟ್ಟಿ ನಿಲ್ಲುವ ಅನಿವಾರ್ಯತೆ ಎದುರಾಗಿದೆ. ರೈತ ಸಂಪರ್ಕ ಕೇಂದ್ರಗಳು ಮತ್ತು ಖಾಸಗಿ ಅಂಗಡಿಗಳಿಗೆ ಅಗತ್ಯ ಪ್ರಮಾಣದಷ್ಟು ರಸಗೊಬ್ಬರವನ್ನು ಸರ್ಕಾರ ಪೂರೈಕೆ ಮಾಡದಿರುವುದೇ ರೈತರ ಈ ಪರಿಸ್ಥಿತಿಗೆ ಕಾರಣ ಎಂದು ಸ್ಥಳೀಯರು ದೂರುತ್ತಾರೆ. ತಾಲ್ಲೂಕಿನಲ್ಲಿ ಒಟ್ಟಾರೆ 39,592 ಮಂದಿ ಕೃಷಿಕರಿದ್ದಾರೆ. ಈ ಪೈಕಿ 6,086 ಮಂದಿ ದೊಡ್ಡ ರೈತರು, 23,773 ಮಂದಿ ಸಣ್ಣ ರೈತರಿದ್ದಾರೆ. ತಾಲ್ಲೂಕಿನಲ್ಲಿ ಒಟ್ಟು 22,892 ಹೆಕ್ಟರ್ ಕೃಷಿಭೂಮಿ ಇದೆ. ಈ ಪೈಕಿ ನೀರಾವರಿ-1,493 ಹೆಕ್ಟರ್, ಖುಷಿ- 27,399 ಹೆಕ್ಟರ್, ಏಕದಳ, ದ್ವಿದಳ, ಎಣ್ಣೆ ಕಾಳುಗಳು ಮತ್ತು ವಾಣಿಜ್ಯ ಬೆಳೆಗಳನ್ನು ಬೆಳೆಯುವ ಗುರಿ ಇದೆ. 77 ಹೆಕ್ಟರ್‌ಗಳಲ್ಲಿ ಭತ್ತ, ರಾಗಿ 570 ಹೆಕ್ಟರ್, 13,900 ಹೆಕ್ಟರ್ ಪ್ರದೇಶದಲ್ಲಿ ಮುಸಕಿನಜೋಳ ಹಾಗೂ 172 ಹೆಕ್ಟರ್‌ನಲ್ಲಿ ಜೋಳ ಬಿತ್ತನೆ ಮಾಡುವ ಗುರಿ ಇದೆ. ಮುಂಗಾರು, ಹಿಂಗಾರಿನ ಮಳೆ ಆಗಿದೆ. ರೈತರು ಕೃಷಿ ಚಟುವಟಿಕೆಗಳಲ್ಲಿ ತೊಡಗಿದ್ದಾರೆ. ತಾಲ್ಲೂಕಿನಲ್ಲಿ ಅತಿಹೆಚ್ಚು ನೆಲಗಡಲೆ, ಮುಸಕಿನಜೋಳ, ಭತ್ತ, ರಾಗಿ, ತೊಗರಿ ಸೇರಿದಂತೆ ಧಾನ್ಯಗಳ ಕೃಷಿ ಬೆಳೆಗಳನ್ನು ಬೆಳೆಯುತ್ತಾರೆ. ಕಳೆದ ಒಂದು ವಾರದಿಂದ ತುಂತುರು ಮಳೆ ಆಗಿದೆ.

ರೈತರು ಬೆಳೆದ ನೆಲಗಡಲೆ, ಜೋಳದ ಬೆಳೆಗಳಲ್ಲಿ ಕಳೆ ತೆಗೆದಿದ್ದಾರೆ. ಇದೀಗ ರಸಗೊಬ್ಬರ ಸಿಂಪಡಿಸಲು ಮುಂದಾಗಿದ್ದಾರೆ. ಆದರೆ, ತಾಲ್ಲೂಕಿನ ಕಸಬಾ, ಮಿಟ್ಟೇಮರಿ, ಪಾತಪಾಳ್ಯ, ಗೂಳೂರು ರೈತ ಸಂಪರ್ಕ ಕೇಂದ್ರಗಳಲ್ಲಿ ಅಗತ್ಯಕ್ಕೆ ತಕ್ಕಷ್ಟು ರಸಗೊಬ್ಬರ ಪೂರೈಕೆಯಾಗಿಲ್ಲ. ಹೀಗಾಗಿ, ಪ್ರತಿದಿನ ರಸಗೊಬ್ಬರ ಪಡೆಯಲು ರೈತರು ಬೆಳಗಿನ ಜಾವದಿಂದಲೇ ರೈತ ಸಂಪರ್ಕ ಕೇಂದ್ರ ಹಾಗೂ ಖಾಸಗಿ ರಸಗೊಬ್ಬರ ಅಂಗಡಿಗಳ ಮುಂದೆ ಸಾಲುಗಟ್ಟಿ ನಿಲ್ಲುವ ಅನಿವಾರ್ಯತೆ ಎದುರಾಗಿದೆ. ಇಷ್ಟಾಗ್ಯೂ, ಬೆಳೆಗಳಿಗೆ ಪೌಷ್ಟಿಕಾಂಶ ನೀಡುವ ಡಿಎಪಿ, ಯೂರಿಯಾ ಸೇರಿದಂತೆ ಇನ್ನಿತರ ರಸಗೊಬ್ಬರ ಮೂಟೆ ಸಿಗುವ ಗ್ಯಾರಂಟಿ ಇಲ್ಲ ಎನ್ನುತ್ತಾರೆ ಸಾಲುಗಟ್ಟಿ ನಿಂತ ರೈತರೊಬ್ಬರು ಅಳಲು ತೋಡಿಕೊಂಡರು. ಕೂಡಲೇ ಸರ್ಕಾರ ತಾಲ್ಲೂಕಿಗೆ ಅಗತ್ಯವಿರುವಷ್ಟು ರಸಗೊಬ್ಬರಗಳನ್ನು ಪೂರೈಸಬೇಕು. ಇಲ್ಲದಿದ್ದರೆ, ಕೃಷಿ ಕಚೇರಿ ಎದುರು ಅನಿರ್ದಿಷ್ಟಾವಧಿ ಪ್ರತಿಭಟನೆ ನಡೆಸಲಾಗುವುದು ಎಂದು ರೈತರು ಸರ್ಕಾರಕ್ಕೆ ಎಚ್ಚರಿಕೆ ನೀಡಿದರು.

## ನನೆಗುದಿಗೆ ಬಿದ್ದ ಪ್ರಾಧಿಕಾರದ ಬಡಾವಣೆಗಳಲ್ಲಿ ಕಳ್ಳರ ಪಾಲಾಗುತ್ತಿವೆ ಮೂಲ ಸೌಕರ್ಯಗಳು

# ಕೋಟ್ಯಂತರ ಬೆಲೆ ಬಾಳುವ ವಿದ್ಯುತ್ ಸೌಕರ್ಯ ಮಾಯ

• ಉದಯವಾಹಿನಿ, ರಾಮನಗರ

ಒಂದೆಡೆ ಅತಂತ್ರ ಸ್ಥಿತಿಯಲ್ಲಿದ್ದ ಮೂರು ಬಡಾವಣೆಗಳ ಪುನರ್ ನಿರ್ಮಾಣಕ್ಕೆ ರಾಮನಗರ ನಗರಾಭಿವೃದ್ಧಿ ಪ್ರಾಧಿಕಾರ ಮುಂದಾಗುತ್ತಿದ್ದರೆ, ಮತ್ತೊಂದೆಡೆ ಈಗಾಗಲೇ ಅನುಷ್ಠಾನಗೊಂಡಿದ್ದ ಕೋಟ್ಯಂತರ ಬೆಲೆ ಬಾಳುವ ವಿದ್ಯುತ್ ಮೂಲ ಸೌಕರ್ಯಗಳು ಕಣ್ಮರೆಯಾಗಿವೆ. 2008ರಲ್ಲಿ ರಚನೆಯಾಗಿ ನಾನಾ ಕಾನೂನು ಸಂಕೋಲೆಯಲ್ಲಿ ಸಿಲುಕಿದ್ದ ಪ್ರಾಧಿಕಾರದ ಹೆಲ್ತ್ ಸಿಟಿ, ಕಣ್ವ ಜೀಗೇನಹಳ್ಳಿ ಅರ್ಕಾವತಿ ಬಡಾವಣೆಗಳು ವಾಸಯೋಗ್ಯ ಬಡಾವಣೆಗಳಾಗಿಲ್ಲ. ಇತ್ತೀಚೆಗೆ ಕಾನೂನು ತೊಡಕುಗಳನ್ನು ನಿವಾರಿಸಿ 1700ಕ್ಕೂ ಅಧಿಕ ನಿವೇಶನದಾರರಿಗೆ ಈಗಷ್ಟೇ ಖಾತೆ ನೀಡಲು ಚಾಲನೆ ನೀಡಲಾಗಿದೆ.

**ಅಂದಾಜು ಪಟ್ಟಿ ತಯಾರಿ**

ಈ ಹಂತದಲ್ಲಿ ಅಳಿದುಳಿದಿದ್ದ ವಿದ್ಯುತ್ ಮೂಲಸೌಕರ್ಯಗಳು ಕಳ್ಳರ ಪಾಲಾಗುತ್ತಿವೆ.

**2.5ಲಕ್ಷ ರೂ.ಅಭಿವೃದ್ಧಿ ಶುಲ್ಕ:** ಈ ಹಂತದಲ್ಲಿ ಬಡಾವಣೆಗಳನ್ನು ಸಂಪೂರ್ಣವಾಗಿ ಅಭಿವೃದ್ಧಿಗೊಳಿಸಲು ಕೋಟ್ಯಂತರರೂ. ಬೇಕಾಗಿದೆ. ಸದ್ಯ ಪ್ರಾಧಿಕಾರ ಅನುದಾನ ಭರಿಸಲು ಸಶಕ್ತವಾಗಿಲ್ಲ. ಇದಕ್ಕಾಗಿ ನಿವೇಶನದಾರರಿಂದ ಚ.ಅಡಿಗೆ 200ರಂತೆ ಅಂದರೆ ಸುಮಾರು ಒಂದು 30X40 ನಿವೇಶನಕ್ಕೆ 2.50 ಲಕ್ಷ ರೂ. ಅಭಿವೃದ್ಧಿ ಶುಲ್ಕ ಪಾವತಿ ಮಾಡಿಸಿಕೊಳ್ಳಲು ನಗರಾಭಿವೃದ್ಧಿಗೆ ಇಲಾಖೆ ಷರತ್ತು ವಿಧಿಸಿದೆ.

**89 ಕೋಟಿ ಅನುದಾನ ಅಗತ್ಯ:** 1625 ನಿವೇಶನಗಳು ಹಂಚಿಕೆ ಆಗಿರುವ ಮೂರು ಬಡಾವಣೆಗಳಿಗೆ ವಿದ್ಯುತ್ ವ್ಯವಸ್ಥೆ ಕಲ್ಪಿಸಲು ರೂ. 7.20 ಕೋಟಿ, ರಸ್ತೆ ಅಭಿವೃದ್ಧಿಗೆ 10.12 ಕೋಟಿ, ನೀರು ಸರಬರಾಜು ವ್ಯವಸ್ಥೆ ಕಲ್ಪಿಸಲು 21.30 ಕೋಟಿ, ಒಳಚರಂಡಿ ವ್ಯವಸ್ಥೆಗೆ 50 ಕೋಟಿ, ಅಂದಾಜು ಪಟ್ಟಿ ತಯಾರಿಕೆಗೆ 15 ಲಕ್ಷ ಒಟ್ಟು 89 ಕೋಟಿ ವೆಚ್ಚದಲ್ಲಿ ಬಡಾವಣೆಗಳನ್ನು ಅಭಿವೃದ್ಧಿಪಡಿಸಲು ಅಂದಾಜು ಪಟ್ಟಿ ರಚಿಸಲಾಗಿದೆ.

**ಮಾಯವಾಯ್ತು ಕೋಟಿ ಬೆಲೆಯ ಮೂಲ ಸೌಕರ್ಯ:** ಪ್ರಸ್ತುತ ಅಂದಾಜು ಪಟ್ಟಿಯ ಪ್ರಕಾರ ನನೆಗುದಿಗೆ ಬಿದ್ದ ಮೂರು ಬಡಾವಣೆಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲು 7 ಕೋಟಿ 20 ಲಕ್ಷ ರೂ. ಅನುದಾನ ಬೇಕಿದೆ. ಪ್ರತಿ ಬಡಾವಣೆಗೆ 2.5 ಕೋಟಿ ರೂ. ಬೇಕು. ರಾಮನಗರದ ಜೀಗೇನಹಳ್ಳಿ ಅರ್ಕಾವತಿ ಬಡಾವಣೆಯಲ್ಲಿ 2016ರಲ್ಲಿ ವಿದ್ಯುತ್ ಮೂಲ ಸೌಕರ್ಯಗಳನ್ನು ಒಗದಿಸಲು 1ಕೋಟಿ 20 ಲಕ್ಷ ರೂ. ಅನುದಾನ ಸುರಿಯಲಾಗಿತ್ತು. ಕಾಮಗಾರಿಯೂ ಮುಕ್ತಾಯಗೊಂಡು ಹಣ ಖರ್ಚಾಯಿತು. ಅಂದು ಅಭಿವೃದ್ಧಿಗೊಂಡ ಮೂಲ ಸೌಕರ್ಯಗಳು ಬುಧವಾರ ಮಂಗಮಾಯವಾಗಿವೆ.

ವಿದ್ಯುತ್ ಪರಿವರ್ತಕ, ವಿದ್ಯುತ್ ಪ್ಯಾನಲ್ ಬೋರ್ಡ್, ವಿದ್ಯುತ್ ತಂತಿ, ಕೇಬಲ್‌ಗಳನ್ನು ಅಳವಡಿಸಲಾಗಿತ್ತು. ಇದೀಗ ಇವೆಲ್ಲವೂ ಗುಜರಿ ಪಾಲಾಗಿವೆ. ಅಳಿದುಳಿದವು ಉಪಯೋಗಕ್ಕೆ ಬಾರದಾಗಿವೆ. ವಿದ್ಯುತ್ ಮೋಟಾರ್‌ಗಳು ಕಳುವಾಗಿವೆ. ಮತ್ತೊಮ್ಮೆ ಲೇಔಟ್ ಅಭಿವೃದ್ಧಿ ಯಾಗುವ ಬಗ್ಗೆ ಅರಿತಿರುವ ಕಳ್ಳರು ಮತ್ತೊಂದು ಸುತ್ತಿನ ಕಳ್ಳತನಕ್ಕೆ ಮುಂದಾಗಿದ್ದಾರೆ.

ಉದಯವಾಹಿನಿ ಚಿತ್ರ




**19ಕೋಟಿ ಆದಾಯ ಸಂಗ್ರಹ**

**ಪ್ರಾಧಿಕಾರದ ಷರತ್ತನ್ನು ಒಪ್ಪಿದ್ದ 800ಕ್ಕೂ ಅಧಿಕ ನಿವೇಶನದಾರರು ಅಭಿವೃದ್ಧಿ ಶುಲ್ಕ ಪಾವತಿ ಮಾಡಿದ್ದಾರೆ. ಇನ್ನೂ ಅರ್ಧದಷ್ಟು ಮಂದಿ ಅಭಿವೃದ್ಧಿ ಶುಲ್ಕ ಪಾವತಿ ಮಾಡಬೇಕಿದೆ. ಈವರೆಗೆ 19 ಕೋಟಿ ಅಭಿವೃದ್ಧಿ ಶುಲ್ಕ ಸಂಗ್ರಹವಾಗಿದೆ. ಇಲ್ಲಿ ಸಂದಾಯವಾಗುವ ಕೋಟ್ಯಂತರ ರೂ. ಹಣದಲ್ಲಿ ಲೇಔಟ್ ಅಭಿವೃದ್ಧಿ ಮಾಡಲು ಪ್ರಾಧಿಕಾರ ಮುಂದಾಗಿದೆ.**

**ಬಡಾವಣೆಗಳಲ್ಲಿ ಈಗಾಗಲೇ ಅಳವಡಿಸಲಾಗಿದ್ದ ವಿದ್ಯುತ್ ಉಪಕರಣಗಳು ಕಳುವಾದ ಕುರಿತು ಠಾಣೆಗೆ ದೂರು ನೀಡಲಾಗಿದೆ. ಇಬ್ಬರನ್ನು ಬಂಧಿಸಿ ಪೊಲೀಸರು ಕ್ರಮ ಕೈಗೊಂಡಿದ್ದಾರೆ. ಮತ್ತೊಮ್ಮೆ ಇದು ಪುನರಾವರ್ತನೆಯಾಗುತ್ತಿದೆ ಎಂಬ ದೂರುಗಳು ಕೇಳಿಬಂದಿವೆ. ಈ ಸಂಬಂಧ ಮತ್ತೊಂದು ಪ್ರಕರಣ ದಾಖಲಿಸಲು ಅಧಿಕಾರಿಗಳಿಗೆ ಸೂಚಿಸಿದ್ದೇವೆ. ಅಲ್ಲಿ ಸದ್ಯ ಸೆಕ್ಯುರಿಟಿ ಗಾರ್ಡ್‌ಗಳನ್ನು ಹಾಕಲು ಸಾಧ್ಯವಿಲ್ಲ. ಶೀಘ್ರ ಬಡಾವಣೆಗಳನ್ನು ಅಭಿವೃದ್ಧಿ ಮಾಡಲಾಗುವುದು.**

**-ಎ.ಬಿ. ಚೇತನ್ ಕುಮಾರ್, ಅಧ್ಯಕ್ಷರು ನಗರಾಭಿವೃದ್ಧಿ ಪ್ರಾಧಿಕಾರ.**

# ಎಸ್‌ಸಿ, ಎಸ್‌ಟಿ ಸಮುದಾಯ ಸ್ಪರ್ಧಿಸಲು ಅವಕಾಶ ನೀಡಿ

• ಉದಯವಾಹಿನಿ, ಚಿಕ್ಕಬಳ್ಳಾಪುರ

ಮುಂಬರುವ ಚಿಕ್ಕಬಳ್ಳಾಪುರ ಜಿಲ್ಲಾ ಸಹಕಾರ ಹಾಲು ಒಕ್ಕೂಟದ (ಚಿಮುಲ್) ಚುನಾವಣೆಯಲ್ಲಿ ಚಿಕ್ಕಬಳ್ಳಾಪುರ ವಿಧಾನಸಭೆ ಕ್ಷೇತ್ರದಿಂದ ಸ್ಪರ್ಧಿಸಲು ಪರಿಶಿಷ್ಟ ಜಾತಿ ಮತ್ತು ಪಂಗಡದವರಿಗೆ ಅವಕಾಶ ನೀಡಬೇಕೆಂದು ಪರಿಶಿಷ್ಟ ಜಾತಿ, ಪಂಗಡ ಮತ್ತು ಹಿಂದುಳಿದ ವರ್ಗದ ಮುಖಂಡರು ಒತ್ತಾಯಿಸಿದರು. ನಗರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ದಲಿತ ಸಂಘರ್ಷ ಸಮಿತಿ ರಾಜ್ಯ ಸಂಚಾಲಕ ಸುಧಾ ವೆಂಕಟೇಶ್ , ಹಾಲು ಒಕ್ಕೂಟದಲ್ಲಿ ಇದುವರೆಗೂ ಬಲಾಢ್ಯರೇ ಆಡಳಿತ ನಡೆಸುತ್ತಿದ್ದಾರೆ. ಹೀಗಾಗಿ ಈ ಬಾರಿ ನಡೆಯುವ ಚುನಾವಣೆಯಲ್ಲಿ ಕ್ಷೇತ್ರದಲ್ಲಿ ತೀರಾ ಹಿಂದುಳಿದಿರುವ ಪರಿಶಿಷ್ಟ ಜಾತಿ, ಪಂಗಡದವರಿಗೆ ಸ್ಪರ್ಧಿಸಲು ಅವಕಾಶ ನೀಡಬೇಕೆಂದು ಆಗ್ರಹಿಸಿದರು.

ಸಹಕಾರ ಸಂಘಗಳಲ್ಲಿ ಮೇಲ್ವರ್ಗದವರಿಗೆ ಮಾತ್ರ ಅವಕಾಶ ನೀಡಲಾಗುತ್ತಿದೆ. ಪರಿಶಿಷ್ಟ ಜಾತಿ, ಪಂಗಡದವರು ಸಹಕಾರ ಕ್ಷೇತ್ರದಲ್ಲಿ ಮುಂಚೂಣಿಯಲ್ಲಿ ಇದ್ದಾರೆ. ಹೀಗಾಗಿ ಈ ಬಾರಿ ಚಿಮುಲ್ ಚುನಾವಣೆಯಲ್ಲಿ ಪರಿಶಿಷ್ಟ ಜಾತಿ, ಪಂಗಡದವರಿಗೆ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್, ಶಾಸಕ ಪ್ರದೀಪ್ ಈಶ್ವರ್ ಅವಕಾಶ ಕಲ್ಪಿಸಬೇಕೆಂದು ಮನವಿ ಮಾಡಿದರು. ಚಿಮುಲ್ ಚುನಾವಣೆಯಲ್ಲಿ ಈ ಬಾರಿ ಜಿಲ್ಲೆಯಿಂದ 13 ನಿರ್ದೇಶಕ ಸ್ಥಾನಗಳಿವೆ. ಸಹಕಾರ ಕ್ಷೇತ್ರದಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡದವರಿಗೆ ಅವಕಾಶ ನೀಡದೆ ಮೂಲೆಗೆ ತಳ್ಳುವ ಕೆಲಸ ಮಾಡಲಾಗುತ್ತಿದೆ. ಕಾಂಗ್ರೆಸ್ ಗೆಲುವಿನಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡದವರ ಪಾತ್ರ ಹೆಚ್ಚಿದ್ದು ಚಿಮುಲ್ ಮಾತ್ರವಲ್ಲ, ಸಹಕಾರ ಸಂಘಗಳ ಚುನಾವಣೆಯಲ್ಲಿ ಸ್ಪರ್ಧಿಸಲು ಹೆಚ್ಚಿನ ಅವಕಾಶ ನೀಡಬೇಕೆಂದು ಆಗ್ರಹಿಸಿದರು.

ಮುಖಂಡ ಡ್ಯಾನ್ಸ್ ಶ್ರೀನಿವಾಸ್ ಮಾತನಾಡಿ, ಚಿಕ್ಕಬಳ್ಳಾಪುರ ಕ್ಷೇತ್ರದಲ್ಲಿ ಶೇ.80ಕ್ಕೂ ಹೆಚ್ಚು ಮಂದಿ ಪರಿಶಿಷ್ಟ ಜಾತಿ ಮತ್ತು ಪಂಗಡವರು ಕಾಂಗ್ರೆಸ್ ಪಕ್ಷಕ್ಕೆ ಮತ ಚಲಾಯಿಸಿ ಗೆಲ್ಲಿಸಿದ್ದಾರೆ. ಕ್ಷೇತ್ರದಲ್ಲಿ ಅವರ ಪರಿಸ್ಥಿತಿ ತೀರಾ ಕೆಳಮಟ್ಟದಲ್ಲಿದೆ. ಹೀಗಾಗಿ ಶಾಸಕ ಪ್ರದೀಪ್ ಈಶ್ವರ್ ದಲಿತರ ಕಾಲೊನಿಗಳಿಗೆ ಹೆಚ್ಚಿಗೆ ಭೇಟಿ ನೀಡಿ ಅವರ ಸಮಸ್ಯೆಗಳನ್ನು ಆಲಿಸುತ್ತಿದ್ದಾರೆ. ಈ ಬಾರಿ ಚಿಮುಲ್ ಚುನಾವಣೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡದವರಿಗೆ ಸ್ಪರ್ಧಿಸಲು ಅವಕಾಶ ನೀಡಬೇಕು. ಇಲ್ಲವಾದಲ್ಲಿ ಬಂಡಾಯವಾಗಿ ಅಭ್ಯರ್ಥಿಗಳನ್ನು ಕಣಕ್ಕಿಳಿಸುತ್ತೇವೆ ಎಂದು ಎಚ್ಚರಿಸಿದರು. ವಾಲ್ಮೀಕಿ ನಾಯಕ ಸಂಘದ ಗವಿರಾಯಪ್ಪ ಮಾತನಾಡಿ, ಕ್ಷೇತ್ರದ ಹಾಲು ಉತ್ಪಾದಕರ ಸಹಕಾರ ಸಂಘಗಳಲ್ಲಿ ಸಾಕಷ್ಟು ಮಂದಿ ಪರಿಶಿಷ್ಟ ಜಾತಿ, ಪಂಗಡದವರೇ ಹೆಚ್ಚು ಅಧ್ಯಕ್ಷರಾಗಿದ್ದಾರೆ. ನಮ್ಮ ಕ್ಷೇತ್ರದಲ್ಲಿ ಹೆಚ್ಚಿನ ಬಲವಿದ್ದು, ಚಿಮುಲ್ ಚುನಾವಣೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡದ ಇಬ್ಬರಿಗೆ ಸ್ಪರ್ಧಿಸಲು ಅವಕಾಶ ನೀಡಬೇಕು. ಜಿಲ್ಲಾ ಉಸ್ತುವಾರಿ ಸಚಿವರು, ಶಾಸಕರು ನಮ್ಮ ಬೇಡಿಕೆಯನ್ನು ಈಡೇರಿಸುತ್ತಾರೆ ಎನ್ನುವ ವಿಶ್ವಾಸವಿದೆ. ಇಲ್ಲವಾದಲ್ಲಿ ನಾವೆಲ್ಲರೂ ಸೇರಿ ಒಂದು ತೀರ್ಮಾನ ತೆಗೆದುಕೊಳ್ಳುತ್ತೇವೆ ಎಂದರು.

ಉದಯವಾಹಿನಿ ಚಿತ್ರ





**13 ನಿರ್ದೇಶಕ ಸ್ಥಾನ**

# ಸೂಕ್ತ ಕಾನೂನು ಕ್ರಮಕ್ಕೆ ಮನವಿ

• ಉದಯವಾಹಿನಿ, ನಂಜನಗೂಡು

ನಂಜನಗೂಡು ತಾಲ್ಲೂಕು ತರಗನಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘದ ನಿರ್ದೇಶಕರು ಬುಧವಾರ ಸಭೆ ಮಾಡಲು ಹೋದಾಗ ಸ್ಥಳೀಯರ ಜೊತೆ ಹಲ್ಲೆ ಗಲಾಟೆ ನಂತರ ಸ್ಥಳೀಯ ಹಾಲು ಉತ್ಪಾದಕರು ಮೈಸೂರಿನ ಅಸಿಸ್ಟೆಂಟ್ ರಿಜಿಸ್ಟರ್ ಕಚೇರಿ ಮುಂದೆ ಜಮಾಯಿಸಿ ಸೂಕ್ತ ಕಾನೂನು ಕ್ರಮಕ್ಕೆ ಆಗ್ರಹಿಸಿ ಮನವಿ ಸಲ್ಲಿಕೆ. ಸಹಕಾರ ಇಲಾಖೆಯ ಅಧಿಕಾರಿಗಳು ಮಾಡಿರುವ ಆದೇಶವನ್ನು ಪಾಲಿಸಲು ಸಹಕಾರ ಅಧಿಕಾರಿಗಳು ಇಲಾಖೆಗಳ ಜೊತೆ ವ್ಯವಹರಿಸಿ ಗ್ರಾಮದಲ್ಲಿ ಉಂಟಾಗಿರುವ ಸಮಸ್ಯೆಯನ್ನು ಬಗೆಹರಿಸಲು ಕ್ರಮ ಕೈಗೊಳ್ಳಬೇಕು ಏಕೆಂದರೆ ಆಡಳಿತ ಮಂಡಳಿಯು ಆರು ತಿಂಗಳ ಹಿಂದೆ ತಾತ್ಕಾಲಿಕ ಕಾರ್ಯದರ್ಶಿಯನ್ನು ನೇಮಕಗೊಳಿಸಿಕೊಂಡಿದ್ದು ಅಸಿಸ್ಟೆಂಟ್ ರಿಜಿಸ್ಟರ್ ರವರು 17 ವರ್ಷದಿಂದ ಕಾರ್ಯನಿರ್ವಹಿಸುವ ಮೇಲೆ ಮಾಡಿರುವ ಆರೋಪಗಳಿಗೆ ಸೂಕ್ತ ದಾಖಲೆಗಳಿಲ್ಲವೆಂದು ಪರಿಗಣಿಸಿಕೊಂಡು 17 ವರ್ಷದಿಂದ ಕಾರ್ಯನಿರ್ವಹಿಸುವ ಅಧಿಕಾರಿಯನ್ನು ಕಾರ್ಯನಿರ್ವಹಣಾಧಿಕಾರಿಯಾಗಿ ನೇಮಕ ಮಾಡಿಕೊಳ್ಳಬೇಕೆಂದು ಆದೇಶವನ್ನು ನೀಡಿದ್ದಾರೆ ಅದನ್ನು ಪಾಲಿಸಲು ಹೊರಟಂತ ನಿರ್ದೇಶಕರ ಮೇಲೆ ಇಂದು ಅಲ್ಲಿ ಆಗಿದೆ ಆದ್ದರಿಂದ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಈ ಕೃತ್ಯದಲ್ಲಿ ಭಾಗಿಯಾಗಿರುವ ಮೇಲೆ ಎಂದು ಒತ್ತಾಯಿಸಿದರು.

ಉದಯವಾಹಿನಿ ಚಿತ್ರ



**ಶಾಂತಿ ಸುವ್ಯವಸ್ಥೆ ಕಾಪಾಡುವುದು ಸಂಘಟನೆಗಳ ಜವಾಬ್ದಾರಿ ಆದರೆ ಸಂಘಟನೆಗಳ ಹೆಸರಿನಲ್ಲಿ ಈರೀತಿ ಗೂಂಡಾಗಿರಿ ಮಾಡುವುದು ಸರಿಯಲ್ಲ ಹಲ್ಲೆ ಗಲಾಟೆಯಲ್ಲಿ ಭಾಗವಹಿಸಿದವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಂಡು ಗ್ರಾಮದಲ್ಲಿ ಶಾಂತಿ ನೆಲೆಸಲು ಜಿಲ್ಲಾಡಳಿತ ಕ್ರಮ ಕೈಗೊಳ್ಳಬೇಕೆಂದು**

**-ಹಳ್ಳಿಕೆರೆಹುಂಡಿ ಭಾಗ್ಯರಾಜ್ ಕಬ್ಬು ಬೆಳೆಗಾರ ಸಂಘದ ರಾಜ್ಯಾಧ್ಯಕ್ಷ**

# ಸರ್ಕಾರಿ ಶಾಲೆ ಮುಚ್ಚಲು ಸರ್ಕಾರದ ನಿರ್ಲಕ್ಷ್ಯವೇ ಕಾರಣ

• ಉದಯವಾಹಿನಿ, ಶ್ರೀರಂಗಪಟ್ಟಣ

ಸರ್ಕಾರಿ ಶಾಲೆಗಳ ಬಗ್ಗೆ ರಾಜ್ಯ ಸರ್ಕಾರ ನಿರ್ಲಕ್ಷ್ಯ ಧೋರಣೆ ತಾಳಿದ್ದು ಒಂದೊಂದಾಗಿ ಶಾಲೆಗಳು ಮುಚ್ಚುತ್ತಿವೆ ಎಂದು ಬಿಜೆಪಿ ಮುಖಂಡ ಇಂಡುವಾಳು ಸಚ್ಚಿದಾನಂದ ಆರೋಪಿಸಿದರು. ಪ್ರಸಕ್ತ ಸಾಲಿನಲ್ಲಿ ಸರ್ಕಾರಿ ಕೋಟಾದಡಿ ಎಂಬಿಬಿಎಸ್ ಕೋರ್ಸ್‌ಗೆ ಪ್ರವೇಶ ಪಡೆದಿರುವ ತಾಲ್ಲೂಕಿನ ಎಂ. ಶೆಟ್ಟಹಳ್ಳಿ ಗ್ರಾಮದ ಮಹೇಶ್ ಅವರ ಮಗ ಜೀವನ್ ಅವರಿಗೆ ಎನ್. ಶಂಕರೇಗೌಡ ಚಾರಿಟಬಲ್ ಟ್ರಸ್ಟ್ ವತಿಯಿಂದ ಲ್ಯಾಪ್‌ಟಾಪ್ ವಿತರಿಸಿ ಅವರು ಮಾತನಾಡಿದರು. ಸರ್ಕಾರಿ ಶಾಲೆಗಳಲ್ಲಿ ಪ್ರತಿಭಾವಂತ ಶಿಕ್ಷಕ ವರ್ಗವಿದೆ. ಆದರೆ ಸೂಕ್ತ ಕಟ್ಟಡ, ಶುದ್ಧ ಕುಡಿಯುವ ನೀರು, ಪ್ರಯೋಗಶಾಲೆ, ಶೌಚಾಲಯ, ಕ್ರೀಡಾ ಪರಿಕರಗಳು ಇತರ ಮೂಲ ಸೌಕರ್ಯಗಳ ಕೊರತೆ ಇದೆ. ಹಾಗಾಗಿ ಪೋಷಕರು ಮಕ್ಕಳನ್ನು ಸರ್ಕಾರಿ ಶಾಲೆಗಳಿಗೆ ಸೇರಿಸಲು ಹಿಂದೇಟು ಹಾಕುತ್ತಿದ್ದಾರೆ ಎಂದರು.

ಜಿಲ್ಲೆಯಲ್ಲಿ 10 ವರ್ಷಗಳ ಈಚೆಗೆ 351 ಸರ್ಕಾರಿ ಶಾಲೆಗಳು ಮುಚ್ಚಿವೆ. ಈ ತಾಲ್ಲೂಕಿನಲ್ಲಿ 15 ಶಾಲೆಗಳು ಬಂದ್ ಆಗಿವೆ. ಪ್ರಸಕ್ತ ಸಾಲಿನಲ್ಲೂ 3 ಶಾಲೆಗಳು ಮುಚ್ಚಿ ಹೋಗಿವೆ. ಸರ್ಕಾರ ನಿರ್ಲಕ್ಷ್ಯತನ ಮುಂದುವರಿಸಿದರೆ ಇನ್ನು 10 ವರ್ಷಗಳಲ್ಲಿ ಶೇ 50ರಷ್ಟು ಸರ್ಕಾರಿ ಶಾಲೆಗಳು ಮುಚ್ಚುವ ಸಂಭವವಿದೆ ಎಂದು ಅವರು ಕಳವಳ ವ್ಯಕ್ತಪಡಿಸಿದರು. ಶಿಕ್ಷಣ, ಆರೋಗ್ಯ ಕ್ಷೇತ್ರಗಳನ್ನು ಆದ್ಯತೆಯ ವಲಯಗಳೆಂದು ಪರಿಗಣಿಸಿ ಸರ್ಕಾರ ಹೆಚ್ಚಿನ ಅನುದಾನ ಒದಗಿಸಬೇಕು ಅವರು ಒತ್ತಾಯಿಸಿದರು.

ಉದಯವಾಹಿನಿ ಚಿತ್ರ



# ರಸ್ತೆ ಕಾಮಗಾರಿ: ವಾಹನ ದಟ್ಟಣೆಯಿಂದ ಜನ ಹೈರಾಣ

• ಉದಯವಾಹಿನಿ, ಕನಕಪುರ

ನಗರದಲ್ಲಿ ರಾಷ್ಟ್ರೀಯ ಹೆದ್ದಾರಿ ಅಭಿವೃದ್ಧಿ ಪ್ರಾಧಿಕಾರದಿಂದ ಕಾಂಕ್ರೀಟ್ ರಸ್ತೆ ನಿರ್ಮಾಣವಾಗುತ್ತಿದ್ದು, ಒಂದು ಕಡೆ ರಸ್ತೆಯಲ್ಲಿ ದ್ವಿಮುಖ ಸಂಚಾರದಿಂದ ವಾಹನ ಸವಾರರಿಗೆ ತೊಂದರೆಯಾಗುತ್ತಿದೆ. ಕನಕಪುರದ ಎಂ.ಜಿ.ರಸ್ತೆಗೆ ಕಾಂಕ್ರೀಟ್ ಹಾಕುತ್ತಿದ್ದು, ರಸ್ತೆಯಲ್ಲಿ ಸಂಚರಿಸುವವರಿಗೆ ಕಿರಿಯಾಗುತ್ತಿದೆ. ನಗರದ ನಾರಾಯಣಪ್ಪನ ಕೆರೆಯಿಂದ ತುಂಗಣಿ ಬೈಪಾಸ್ ಜಂಕ್ಷನ್‌ವರೆಗೆ ಸುಮಾರು 36 ಕೋಟಿ ವೆಚ್ಚದಲ್ಲಿ ಅಭಿವೃದ್ಧಿಪಡಿಸಲಾಗುತ್ತಿದೆ.

1 ತಿಂಗಳ ಹಿಂದೆ ಕಾಂಕ್ರೀಟ್ ರಸ್ತೆ ಕಾಮಗಾರಿಗೆ ಚಾಲನೆ ನೀಡಲಾಗಿದೆ. ಒಂದು ಭಾಗಕ್ಕೆ ಕಾಂಕ್ರೀಟ್ ಹಾಕಿದ್ದು, ಇನ್ನೊಂದು ಕಡೆ ದ್ವಿಮುಖ ಸಂಚಾರದಿಂದ ವಾಹನ ದಟ್ಟಣೆ ಹೆಚ್ಚಾಗಿದ್ದು ಜನ ಬೇಸತ್ತಿದ್ದಾರೆ. ರಸ್ತೆ ಕಾಮಗಾರಿ ಆರಂಭಿಸುವುದಕ್ಕೂ ಮುನ್ನಾ ಪರ್ಯಾಯ ವ್ಯವಸ್ಥೆ ಮಾಡದೆ ಕಾಮಗಾರಿ ಪ್ರಾರಂಭಿಸಿದ್ದು, ವಾಹನ ದಟ್ಟಣೆಯಿಂದ ಜನ ಹಿಡಿಶಾಪ ಹಾಕುತ್ತಿದ್ದಾರೆ. ಜೊತೆಗೆ ಅಂಗಡಿ, ಹೋಟೆಲ್ ಮುಂಭಾಗ ಅಡ್ಡಾದಿಡ್ಡಿಯಾಗಿ ವಾಹನ ನಿಲ್ಲಿಸುತ್ತಿದ್ದು, ವಾಹನ ಸಂಚಾರಕ್ಕೆ ಅಡ್ಡಿಯಾಗುತ್ತಿದೆ.

ವಾಹನ ದಟ್ಟಣೆಯಿಂದ ಜನ ಒದ್ದಾಡುತ್ತಿದ್ದರೂ ನಗರಾಡಳಿತ, ತಾಲ್ಲೂಕು ಆಡಳಿತವಾಗಲಿ ಕ್ರಮ ವಹಿಸದಿರುವುದು ನಾಗರಿಕರ ಆಕ್ರೋಶಕ್ಕೆ ಕಾರಣವಾಗಿದೆ. ವಾಹನ ದಟ್ಟಣೆ ನಿಯಂತ್ರಣಕ್ಕೆ ಪೊಲೀಸ್ ಸಿಬ್ಬಂದಿ ನಿಯೋಜನೆಗೊಳಿಸಬೇಕು. ಅಂಗಡಿ, ಹೋಟೆಲ್ ಮುಂದೆ ನಿಲ್ಲಿಸುವ ವಾಹನಗಳನ್ನು ಮುಲಾಜಿಲ್ಲದೆ ತೆರವುಗೊಳಿಸಿ ವಾಹನ ಸಂಚಾರಕ್ಕೆ ಅನುವು ಮಾಡಿಕೊಡಬೇಕೆಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

ಉದಯವಾಹಿನಿ ಚಿತ್ರ



**ಸುಗಮ ಸಂಚಾರಕ್ಕೆ ಸಾರ್ವಜನಿಕರು ಸಹಕರಿಸಿ**

**ರಸ್ತೆ ಕಾಮಗಾರಿಯಿಂದ ಒಂದೇ ರಸ್ತೆಯಲ್ಲಿ ವಾಹನ ಹಾಗೂ ಸಾರ್ವಜನಿಕರು ಸಂಚರಿಸಬೇಕಿದೆ. ಹಾಗಾಗಿ ಅಂಗಡಿ ಹೋಟೆಲ್‌ಗಳ ಮುಂಭಾಗ ವಾಹನಗಳನ್ನು ನಿಲ್ಲಿಸದೆ ಸುಗಮ ಸಂಚಾರಕ್ಕೆ ಸಾರ್ವಜನಿಕರು ಸಹಕರಿಸಬೇಕು. ಹೆಚ್ಚಿನ ಸಿಬ್ಬಂದಿ ನಿಯೋಜನೆ ಮಾಡಿದ್ದು ವಾಹನ ದಟ್ಟಣೆ ಸಮಸ್ಯೆಯಾಗದಂತೆ ನೋಡಿಕೊಳ್ಳಲಾಗುವುದು.**

# ಅಧಿಕಾರಿಗಳ ವಿರುದ್ಧ ಧಿಕ್ಕಾರ ಕೂಗಿ ಪ್ರತಿಭಟನೆ

## ಅಂತರ್ಜಲ ಅಭಿವೃದ್ಧಿ ಶಾಶ್ವತ ನೀರಾವರಿ ಯೋಜನೆಗಾಗಿ ರೈತ ಸಂಘಟನೆ ಆಗ್ರಹ

• ಉದಯವಾಹಿನಿ, ಹನೂರು

ತಾಲ್ಲೂಕಿನ ಮಾರ್ಟಳ್ಳಿ ಗ್ರಾಮ ಪಂ. ಕುರಟ್ಟಿ ಹೊಸೂರು, ಶೆಟ್ಟಳ್ಳಿ ಗ್ರಾಮ ಪಂ. ಪಂಚಾಯಿತಿ ವ್ಯಾಪ್ತಿಯಲ್ಲಿ ಅಂತರ್ಜಲ ಅಭಿವೃದ್ಧಿಗಾಗಿ ಶಾಶ್ವತ ನೀರಾವರಿ ಯೋಜನೆ ಜಾರಿ ಮಾಡುವಂತೆ ಹಾಗೂ ಇನ್ನಿತರ ಸಮಸ್ಯೆ ಬಗೆ ಹರಿಸುವಂತೆ ಕರ್ನಾಟಕ ರಾಜ್ಯ ರೈತ ಸಂಘಟನೆಯಿಂದ ಬೃಹತ್ ಪ್ರತಿಭಟನಾ ಬೈಕ್ ರ್‍ಯಾಲಿ ನಡೆಯಿತು. ಕರ್ನಾಟಕ ರಾಜ್ಯ ರೈತ ಸಂಘಟನೆ ರೈತರು ಸಾರ್ವಜನಿಕರು ನಾಲ್ ರೋಡ್ ಸರ್ಕಲ್ ಬಳಿ ಜಮಾವಣೆಗೊಂಡು ಇಲ್ಲಿಂದ ನೂರಾರು ಬೈಕ್ ರ್‍ಯಾಲಿ ಮೂಲಕ ಪ್ರತಿಭಟನಾ ಮೆರವಣಿಗೆ ಸಾಗಿ ವಡಕೆಹಳ್ಳ, ಕೌದಳ್ಳಿ ಗ್ರಾಮದ ಮೂಲಕ ತೆರಳಿ ಶೆಟ್ಟಳ್ಳಿ ಕೊರಟಿಹೊಸೂರು ಮಾರ್ಗವಾಗಿ ದಂಟಳ್ಳಿ ಗ್ರಾಮದವರೆಗೂ ಸಾಗಿತು. ಸರ್ಕಾರ ಅಧಿಕಾರಿಗಳ ವಿರುದ್ಧ ಧಿಕ್ಕಾರ ಕೂಗಿ ಪ್ರತಿಭಟನೆ ನಡೆಸಿದರು.

ನಂತರ ಪ್ರತಿಭಟನಾ ನಿರತ ರೈತರು ಕಾವೇರಿ ನದಿಗೆ ತೆರಳಿ ನೀರಿನಲ್ಲಿ ಇಳಿದು ಪ್ರತಿಭಟನೆ ನಡೆಸಿ ಸರ್ಕಾರದ ಗಮನ ಸೆಳೆಯುವಲ್ಲಿ ಯತ್ನಿಸುವ ಮುಂದಾದರು. ಈ ವೇಳೆ ತಹಶೀಲ್ದಾರ್ ಕೆ.ಎನ್. ಚೈತ್ರಾ, ಪೊಲೀಸ್ ಅಧಿಕಾರಿಗಳ ನೇತೃತ್ವದಲ್ಲಿ ರೈತರನ್ನು ತಡೆದು ದಂಟಳ್ಳಿ ಗ್ರಾಮದ ಹತ್ತಿರ ಪ್ರತಿಭಟನೆ ಮಾಡಲು ಅವಕಾಶ ಕಲ್ಪಿಸಲಾಯಿತು. ಹನೂರು ತಾಲ್ಲೂಕು ರಾಮಾಪುರ ಹೋಬಳಿ ವ್ಯಾಪ್ತಿಯ ಮಾರ್ಟಳ್ಳಿ ಗ್ರಾಮ ಪಂ. ಕುರಟ್ಟಿ ಹೊಸೂರು ಗ್ರಾಮ ಪಂ, ಶೆಟ್ಟಳ್ಳಿ ಗ್ರಾಮ ಪಂ. ವ್ಯಾಪ್ತಿಯ ಒಟ್ಟು ಭೌಗೋಳಿಕ ವಿಸ್ತೀರ್ಣ ಸಾವಿರಾರೂ ಎಕರೆ ಪ್ರದೇಶ ಹೊಂದಿದ್ದು ಕೃಷಿ ಭೂಮಿ ಕೂಡ ಸಾವಿರಾರು ಎಕರೆ ಪ್ರದೇಶವನ್ನು ಹೊಂದಿದೆ ಮೂರು ಪಂಚಾಯಿತಿಗಳಿಂದ 37 ಸಾವಿರಕ್ಕೂ ಅಧಿಕ ಜನಸಂಖ್ಯೆ ಹೊಂದಿದ್ದಾರೆ.

ಈ ಭಾಗದ ರೈತರು ಅತಿ ಹೆಚ್ಚು ಜನ ಕೃಷಿ ಜೀವನ ನಡೆಸಿ ಬದುಕು ಕಟ್ಟಿ ಕೊಂಡಿರುತ್ತಾರೆ ಆದರೆ ಕಳೆದ 22 ವರ್ಷಗಳಿಂದ ಇಲ್ಲಿಯ ತನಕ ವರ್ಷದಿಂದ ವರ್ಷಕ್ಕೆ ಮಳೆ ಪ್ರಮಾಣ ತುಂಬಾ ಕಡಿಮೆ ಆಗಿ ಸಾವಿರಾರು ಎಕರೆ ಕೃಷಿ ಪ್ರದೇಶ ಮಳೆ ಇಲ್ಲದೆ ಬರಡಾಗಿ ಅಂತರ್ಜಲ ಮಟ್ಟ 1300 ಕ್ಕೂ ಹೆಚ್ಚು ಅಡಿಗೆ ಕುಸಿದಿದ್ದು ಕುಡಿಯುವ ನೀರಿಗೂ ಆಹಾಕಾರ ಉಂಟಾಗಿ ಜನರಿಗೆ ಅಂತರ್ಜಲದಲ್ಲಿ ಶುದ್ಧ ಕುಡಿಯುವ ನೀರು ದೊರಕದೆ ಅನೇಕ ರೀತಿಯ ರೋಗಗಳಿಗೆ ತುತ್ತಾಗಿದ್ದಾರೆ. ಈಗಾಗಲೇ ಅನೇಕ ಬಾರಿ ದಂಟಳ್ಳಿ ಮಾರ್ಗವಾಗಿ ಕಾವೇರಿ ನದಿಯಿಂದ ಅಂತರ್ಜಲ ಅಭಿವೃದ್ಧಿಗೆ ಯೋಜನೆ ರೂಪಿಸಿ ರೈತರ ಬದುಕು ಹಸನು ಮಾಡಿ ಎಂದು ಮನವಿಗಳನ್ನು ಸಲ್ಲಿಸಲಾಗಿದೆ ಆದರೂ ಯವುದೇ ಪ್ರಯೋಜನ ಆಗಿರುವುದಿಲ್ಲ ಜನಮಾತ್ರ ದಿನೆ ದಿನೆ ಜೀವನಕ್ಕಾಗಿ ಪ್ರತಿ ದಿನ ತಮ್ಮ ಊರುಗಳನ್ನು ಬಿಟ್ಟು ಪಕ್ಕದ ರಾಜ್ಯಗಳಾದ ತಮಿಳುನಾಡು, ಕೇರಳ, ನಮ್ಮ ರಾಜ್ಯದ ಇನ್ನಿತರ ಕಡೆಗಳಿಗೆ ಕೃಷಿ ಭೂಮಿಯನ್ನು ಬಿಟ್ಟು ಗುಳೆಹೋಗುತ್ತಿದ್ದಾರೆ. ಪಂಚಾಯಿತಿಗಳಲ್ಲಿ, ಉದ್ಯೋಗ ಖಾತ್ರಿ ಯೋಜನೆ ಸರಿಯಾಗಿ ಮಾನವ ಶ್ರಮಗಳಿಂದ ನಡೆಯುತ್ತಿಲ್ಲ, ಜೀವನಕ್ಕಾಗಿ ಬೇರೆ ಕಡೆ ಗುಳೆ ಹೋಗಿರುವ ರೈತರು, ಕೂಲಿ ಕಾರ್ಮಿಕರು ವಾಪಸ್ಸು ತಮ್ಮ ಗ್ರಾಮಗಳಲ್ಲಿ ವಾಸ ಮಾಡಲು ಈ ಕೆಳಕಂಡ ಯೋಜನೆಗಳನ್ನು ತುರ್ತಾಗಿ ಜಾರಿಗೆ ತರಬೇಕಾಗಿ ಒತ್ತಾಯಿಸಿ ಪ್ರತಿಭಟನೆ ನಡೆಸಿದರು. ಕರ್ನಾಟಕ ರಾಜ್ಯ ರೈತ ಸಂಘಟನೆ ಪ್ರತಿಭಟಿಸಿ ತಮ್ಮ ಹಕ್ಕುಗಳು ಸಮಸ್ಯೆ ಬೇಡಿಕೆಗಳನ್ನು ಈಡೇರಿಸುವಂತೆ ಸರ್ಕಾರದ ಗಮನ ಸೆಳೆಯುವಂತೆ ತಹಶೀಲ್ದಾರ್ ಚೈತ್ರ ಕೆ.ಎನ್. ಅವರಿಗೆ ಮನವಿ ಪತ್ರ ಸಲ್ಲಿಸಿದರು.



ಉದಯವಾಹಿನಿ ಚಿತ್ರ

**ಕುಡಿಯುವ ನೀರಿಗೂ ಆಹಾಕಾರ**

**ಸರ್ಕಾರದ ಗಮನಕ್ಕೆ ತರಲಾಗುವುದು**

**ಮನವಿಯನ್ನು ಸ್ವೀಕರಿಸಿದ ತಹಶೀಲ್ದಾರ್ ಅವರು ಪ್ರತಿಕ್ರಿಯಿಸಿ ರೈತರ ಸಮಸ್ಯೆ ಮನವಿ ಸಲ್ಲಿಸಿರುವ ಬಗ್ಗೆ ಸರ್ಕಾರದ ಗಮನಕ್ಕೆ ತರಲಾಗುವುದು ಹಾಗೂ ಈ ಬಗ್ಗೆ ಸಂಬಂಧಪಟ್ಟ ಮೇಲಾಧಿಕಾರಿಗಳ ಗಮನಕ್ಕೆ ತಂದು ಮುಂದಿನ ದಿನಗಳಲ್ಲಿ ಬಗೆಹರಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು. ನಂತರ ಪ್ರತಿಭಟನೆಯನ್ನು ಕೈ ಬಿಡಲಾಯಿತು. ರಾಮಪುರ ಪೊಲೀಸ್ ಠಾಣೆ ಅಧಿಕಾರಿಗಳು ಸಿಬ್ಬಂದಿಗಳು ಹಾಜರಿದ್ದು ಸರ್ಕಲ್ ಇನ್ಸ್ಪೆಕ್ಟರ್ ಚಿಕ್ಕರಾಜು ಶೆಟ್ಟಿ ಅವರ ನೇತೃತ್ವದಲ್ಲಿ ಪ್ರತಿಭಟನಾ ಮೆರವಣಿಗೆ ಹಾಗೂ ಪ್ರತಿಭಟನಾ ಸ್ಥಳದಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಮಾಡಲಾಗಿತ್ತು.**

# ಮಿನಿ ನ್ಯೂಸ್

## ಚಾಮುಂಡಿ ಬೆಟ್ಟಕ್ಕೆ ದರ್ಶನ್ ಭೇಟಿ

• ಉದಯವಾಹಿನಿ, ಮೈಸೂರು

ನಟ ದರ್ಶನ್ ಬುಧವಾರ ಸಂಜೆ ದಿಢೀರ್ ಮೈಸೂರಿಗೆ ಆಗಮಿಸಿ ಚಾಮುಂಡಿದೇವಿ ದರ್ಶನ ಪಡೆದಿದ್ದಾರೆ. ಈ ಹಿಂದೆ ಆಷಾಢ ಶುಕ್ರವಾರಕ್ಕೆ ಕುಟುಂಬದ ಜೊತೆ ಆಗಮಿಸಿದ್ದ ದರ್ಶನ್ ಇದೀಗ ಏಕಾಂಗಿಯಾಗಿ ಆಗಮಿಸಿ ತಾಯಿ ಚಾಮುಂಡಿ ಪಾದಕ್ಕೆರಗಿದ್ದಾರೆ.ದರ್ಶನ್ ಈ ಭೇಟಿ ಹಲವು ಕಥೆಗಳನ್ನ ಹುಟ್ಟುಹಾಕಿದೆ. ವಾರದ ಹಿಂದೆ ದರ್ಶನ್ ಅಸ್ಸಾಂನ ಗುವಾಹಟಿಯ ಕಾಮಾಕ್ಯದೇವಿ ದರ್ಶನ ಮಾಡಿ ಬಂದಿದ್ದರು. ಇದೀಗ ಮತ್ತೋರ್ವ ಶಕ್ತಿ ಸ್ವರೂಪಿಣಿಯ ಸ್ಮರಣೆ ಮಾಡಿದ್ದಾರೆ.

ಸಾಮಾನ್ಯವಾಗಿ ದರ್ಶನ್ ಆಷಾಢ ಮಾಸದ ಶುಕ್ರವಾರ ಹಾಗೂ ಮೈಸೂರಿನಲ್ಲಿ ಚಿತ್ರೀಕರಣ ಹೊರತಾಗಿ ಚಾಮುಂಡಿ ಬೆಟ್ಟಕ್ಕೆ ಭೇಟಿ ಕೊಡೋದಿಲ್ಲ. ಆದರೀಗ ಶ್ರಾವಣ ಮಾಸದ ಬುಧವಾರ ದಿಢೀರ್ ಚಾಮುಂಡಮ್ಮನ ಆಶೀರ್ವಾದ ಬೇಡಿರುವುದು ವಿಶೇಷ. ಸದ್ಯದಲ್ಲೇ ದರ್ಶನ್‌ಗೆ ನೀಡಿರುವ ಜಾಮೀನಿನ ರದ್ದು ಕೋರಿ ಸಲ್ಲಿಸಲಾದ ಅರ್ಜಿಯ ಆದೇಶ ಹೊರಬೀಳುತ್ತೆ. ಇದೇ ಆತಂಕದಲ್ಲೇ ಇರುವ ದರ್ಶನ್ ನೆಮ್ಮದಿಗಾಗಿ ದೇವಾನ್ ದೇವತೆಗಳ ಮೊರೆ ಹೋಗುತ್ತಿದ್ದಾರೆ ಅನ್ನೋ ಮಾತು ಕೇಳಿಬರುತ್ತಿದೆ. ಇಷ್ಟಲ್ಲದೇ ರಮ್ಯಾಗೆ ಅಶ್ಲೀಲ ಸಂದೇಶ ಕಳುಹಿಸಿದ ವ್ಯಕ್ತಿಗಳ ಬಂಧನವಾಗಿದ್ದು, ಅವರು ದರ್ಶನ್ ಅಭಿಮಾನಿಗಳು ಎಂದು ತನಿಖೆಯಲ್ಲಿ ಬಯಲಾಗುತ್ತಿದೆ. ಇದು ದರ್ಶನ್ ಹೆಸರಿಗೆ ಮತ್ತೆ ಕಳಂಕ ತಂದಿಟ್ಟಿದೆ. ಇದೆಲ್ಲದರ ಚಿಂತೆಯಲ್ಲಿರುವ ದರ್ಶನ್, ದಿಢೀರ್ ಚಾಮುಂಡಿ ಬೆಟ್ಟಕ್ಕೆ ಭೇಟಿ ನೀಡಿ ದೇವಿ ದರ್ಶನ ಪಡೆದಿದ್ದಾರೆ.


## ಲಾಕ್‌ಡೌನ್ ವೇಳೆ ಪೊಲೀಸರ ಮೇಲೆ ಹಲ್ಲೆ: 23 ಮಂದಿಗೆ 1ವರ್ಷ ಜೈಲು

• ಉದಯವಾಹಿನಿ, ತುಮಕೂರು

ಕೋವಿಡ್ ಲಾಕ್‌ಡೌನ್ ಸಮಯದಲ್ಲಿ ಪೊಲೀಸ್ ಸಿಬ್ಬಂದಿ ಮೇಲೆ ಹಲ್ಲೆ ನಡೆಸಿದ್ದ 23 ಮಂದಿಗೆ ಗುಬ್ಬಿ ಪಟ್ಟಣದ ಎಸಿಜೆ ಮತ್ತು ಜೆಎಂಎಫ್‌ಸಿ ನ್ಯಾಯಾಲಯ 1 ವರ್ಷ ಜೈಲು ಶಿಕ್ಷೆ, ತಲಾ 15 ಸಾವಿರ ದಂಡ ವಿಧಿಸಿದೆ. 2021ರ ಜುಲೈ 3ರಂದು ಗುಬ್ಬಿ ತಾಲ್ಲೂಕಿನ ಚಿಕ್ಕಕುನ್ನಾಲ ಗ್ರಾಮದಲ್ಲಿ ಪೊಲೀಸ್ ಸಿಬ್ಬಂದಿ ಮೇಲೆ ಹಲ್ಲೆ ನಡೆಸಿದ್ದರು. ಲಾಕ್‌ಡೌನ್ ವೇಳೆ ಮಧ್ಯಾಹ್ನ 2 ಗಂಟೆ ವರೆಗೆ ಮಾತ್ರ ಅಂಗಡಿ ತೆರೆಯಲು ಅವಕಾಶ ಕಲ್ಪಿಸಲಾಗಿತ್ತು. ಸಮಯ ಮೀರಿದರೂ ಅದೀರ್ ಅಹ್ಮದ್ ಅಂಗಡಿ ಮುಚ್ಚಿರಲಿಲ್ಲ. ಅಂಗಡಿ ಮುಚ್ಚುವಂತೆ ಸೂಚಿಸಿದ ಪೊಲೀಸರ ಮೇಲೆ ಹಲ್ಲೆ ನಡೆಸಿದ್ದ. ಈತನ ಜತೆಗೆ 22 ಜನ ಸೇರಿಕೊಂಡು ಸಮವಸ್ತ್ರದಲ್ಲಿದ್ದ ಸಿಬ್ಬಂದಿಯನ್ನು ಎಳೆದಾಡಿದ್ದರು. ಕಲ್ಲಿನಿಂದ ಹಲ್ಲೆ ಮಾಡಿದ್ದರು. ಸರ್ಕಾರಿ ವಾಹನಕ್ಕೂ ಹಾನಿ ಮಾಡಿದ್ದರು. ಈ ಕುರಿತು ಸಿ.ಎಸ್.ಪುರ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಇನ್ಸ್‌ಪೆಕ್ಟರ್ ಎಫ್.ಕೆ.ನದಾಫ್ ತನಿಖೆ ಪೂರ್ಣಗೊಳಿಸಿ ನ್ಯಾಯಾಲಯಕ್ಕೆ ದೋಷಾರೋಪ ಪಟ್ಟಿ ಸಲ್ಲಿಸಿದ್ದರು. ವಿಚಾರಣೆ ನಡೆಸಿದ ನ್ಯಾಯಾಲಯವು ಆರೋಪಿಗಳಿಗೆ ಒಟ್ಟು 3.45 ಲಕ್ಷ ದಂಡ ವಿಧಿಸಿದೆ. ದಂಡದ ಮೊತ್ತದಲ್ಲಿ ಪೊಲೀಸ್ ಸಿಬ್ಬಂದಿಗೆ ತಲಾ 15 ಸಾವಿರ ಪರಿಹಾರ ನೀಡುವಂತೆ ಆದೇಶಿಸಿದೆ.

## ಡಿಕೆಶಿ ಶ್ರಮ, ಹೋರಾಟಕ್ಕೆ ಪ್ರತಿಫಲ ಸಿಗಬೇಕು: ಇಕ್ಬಾಲ್ ಹುಸೇನ್

• ಉದಯವಾಹಿನಿ, ರಾಮನಗರ



ಡಿ.ಕೆ.ಶಿವಕುಮಾರ್ ನಮ್ಮ ನಾಯಕರು. ಅವರ ಶ್ರಮ, ಹೋರಾಟಕ್ಕೆ ಪ್ರತಿಫಲ ಸಿಗಬೇಕು ಎಂದು ಶಾಸಕ ಇಕ್ಬಾಲ್ ಹುಸೇನ್ ಹೇಳಿದ್ದಾರೆ. ಡಿಸಿಎಂ ಡಿಕೆಶಿ ಸಿಎಂ ಆಗಬೇಕು ಎಂಬ ವಿಚಾರ ಚರ್ಚೆ ಕುರಿತು ರಾಮನಗರದಲ್ಲಿ ಮಾತನಾಡಿದ ಅವರು, ಆ ಸಂದರ್ಭದಲ್ಲಿ ಅದನ್ನ ಹೇಳಿದ್ದಿನಿ. ಆ ಹೇಳಿಕೆಗೆ ಈಗಲೂ ನಾನು ಬದ್ಧವಾಗಿದ್ದೇನೆ. ಈಗಲೂ ನನ್ನ ಹೇಳಿಕೆಯನ್ನ ನಾನು ಸಮರ್ಥಿಸಿಕೊಳ್ಳುತ್ತೇನೆ. ಡಿಕೆಶಿಯವರಿಗೆ ಸ್ಥಾನಮಾನ, ಗೌರವ ಕೊಡಿ ಅಂತ ಕೇಳೋಕೆ ನನಗೆ ಹಕ್ಕಿಲ್ವಾ? ನಾನು ಈ ಜಿಲ್ಲೆಯಲ್ಲಿ ಹುಟ್ಟಿದ್ದಿನಿ, ಅವರು ನಮ್ಮ ಜೊತೆ ಹುಟ್ಟಿದ್ದಾರೆ.

ಅವರ ಹೋರಾಟಕ್ಕೆ ಬೆಲೆ ಇಲ್ವಾ ಎಂದು ಪ್ರಶ್ನಿಸಿದ ಇಕ್ಬಾಲ್ ಹುಸೇನ್, ಪರೋಕ್ಷವಾಗಿ ಡಿಕೆಶಿಗೆ ಸಿಎಂ ಸ್ಥಾನ ಸಿಗಬೇಕು ಎಂದ್ರು ಆಗ್ರಹಿಸಿದರು. ಇನ್ನೂ ಆ.8ಕ್ಕೆ ಚುನಾವಣಾ ಅಕ್ರಮದ ವಿರುದ್ಧ ಕಾಂಗ್ರೆಸ್ ಹೋರಾಟ ವಿಚಾರ ಕುರಿತು ಪ್ರತಿಕ್ರಿಯಿಸಿದ ಅವರು, ಚುನಾವಣಾ ಆಯೋಗದ ಹೋರಾಟಕ್ಕೆ ಹೈಕಮಾಂಡ್ ರೂಪುರೇಷೆ ನೀಡಿದೆ. ರಾಷ್ಟ್ರೀಯ ನಾಯಕರ ನೇತೃತ್ವದಲ್ಲಿ ಪ್ರತಿಭಟನೆ ನಡೆಯುತ್ತಿದೆ. ಅವರಿಗೆ ಶಕ್ತಿತುಂಬುವ ಕೆಲಸವನ್ನ ನಾವು ಮಾಡುತ್ತೇವೆ. ನಮ್ಮ ಜಿಲ್ಲೆಯಿಂದ ಸುಮಾರು 20ಸಾವಿರ ಮಂದಿ ಭಾಗಿಯಾಗುತ್ತಿದ್ದೇವೆ. ಅವರ ಹೋರಾಟಕ್ಕೆ ನಾವು ಬೆಂಬಲ ಕೊಡುತ್ತೇವೆ. ಇವಿಎಂ ತೊಂದರೆಯಾ? ಏನು ಆಗಿದೆ ಎಂಬುದು ನಮಗೆ ಗೊತ್ತಿಲ್ಲ, ಯಾವ ರೀತಿ ಅಕ್ರಮ ಆಗಿದೆ ಎಂಬುದರ ಬಗ್ಗೆ ನಮ್ಮ ರಾಷ್ಟ್ರನಾಯಕರು ಮಾಹಿತಿ ಕೊಡುತ್ತಾರೆ ಎಂದು ತಿಳಿಸಿದರು.

## ಕಾರ್ಮಿಕರ ಕಲ್ಯಾಣಕ್ಕೆ ಇಂಧನದ ಮೇಲೆ ಸೆಸ್ ವಿಧಿಸಲು ಮನವಿ

• ಉದಯವಾಹಿನಿ, ಮೈಸೂರು

ಅಸಂಘಟಿತ ವಲಯದ ಕಾರ್ಮಿಕರ ಕಲ್ಯಾಣಕ್ಕೆ ಪೆಟ್ರೋಲ್, ಡಿಸೇಲ್ ಮೇಲೆ ಹೆಚ್ಚುವರಿಯಾಗಿ ಸೆಸ್ ವಿಧಿಸಬೇಕು ಎಂದು ಕಾರ್ಮಿಕ ಸಚಿವ ಸಂತೋಷ್ ಲಾಡ್ ಹೇಳಿದರು. ನಗರದ ಕಲಾಮಂದಿರದಲ್ಲಿ ಬುಧವಾರ ಕಾರ್ಮಿಕ ಇಲಾಖೆ, ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ , ಜಿಪಂ ಮತ್ತು ಜಿಲ್ಲಾಡಳಿತದ ಆಶ್ರಯದಲ್ಲಿ ನಡೆದ ಜಿಲ್ಲೆಯ ವಿವಿಧ ವರ್ಗಗಳ ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಣೆ. ವಿವಿಧ ಯೋಜನೆಗಳ ಕುರಿತು ಅರಿವು ಕಾರ್ಯಕ್ರಮದಲ್ಲಿ ಮಾತನಾಡಿದರು. ರಾಜ್ಯ ಸರಕಾರ ಪೆಟ್ರೋಲ್ ಮತ್ತು ಡಿಸೇಲ್ ಮೇಲೆ ಹೆಚ್ಚುವರಿಯಾಗಿ 50 ಪೈಸೆಯಿಂದ 1 ರೂ. ಸೆಸ್ ವಿಸುವ ಮೂಲಕ ಸಂಗ್ರಹವಾಗುವ ಹಣವನ್ನು ಕಾರ್ಮಿಕ ಕಲ್ಯಾಣಕ್ಕೆ ನೀಡಬೇಕು, ಎಂದು ಮನವಿ ಮಾಡಿದರು. ದೇಶದಲ್ಲಿ ಶೇ. 90ರಷ್ಟು ಮಂದಿ ಅಸಂಘಟಿತ ವಲಯದಲ್ಲಿದ್ದಾರೆ. ರಾಜ್ಯದಲ್ಲಿ ಶೇ. 83ರಷ್ಟು ಅಸಂಘಟಿತ ವಲಯದ ಕಾರ್ಮಿಕರಿದ್ದು, ಅವರಿಗೆ ಸಾಮಾಜಿಕ ಭದ್ರತೆಯೊಂದಿಗೆ ಸೂಕ್ತ ಸೌಲಭ್ಯ ಕಲ್ಪಿಸಬೇಕಾಗಿದೆ. ಅದಕ್ಕೆ ಸಾವಿರಾರು ಕೋಟಿ ರೂ. ಅಗತ್ಯವಾಗಿದ್ದು, ಪೆಟ್ರೋಲ್, ಡಿಸೇಲ್ ಮೇಲೆ ಹೆಚ್ಚುವರಿಯಾಗಿ ಸೆಸ್ ವಿಧಿಸುವ ಮೂಲಕ ಹಣ ಸಂಗ್ರಹಿಸಿ ಕಾರ್ಮಿಕರ ಕಲ್ಯಾಣಕ್ಕೆ ನೀಡಬೇಕು. ಸಾರಿಗೆ ವಲಯದಲ್ಲಿ 25 ಲಕ್ಷಕ್ಕೂ ಅಧಿಕ ಮಂದಿ ಕೆಲಸ ಮಾಡುತ್ತಿದ್ದಾರೆ. ಅವರಿಗೆ ಟ್ರಾನ್ಸ್‌ಪೋರ್ಟ್ ಬೋರ್ಡ್‌ನಿಂದ ಸ್ಮಾರ್ಟ್ ಕಾರ್ಡ್ ನೀಡಲಾಗುತ್ತಿದೆ. ಅಪಘಾತದಿಂದ ಕಾರ್ಮಿಕರು ಮೃತಪಟ್ಟರೆ ಅವರ ಕುಟುಂಬದವರಿಗೆ 5 ಲಕ್ಷ ರೂ. ಪರಿಹಾರ ಸಿಗಲಿದೆ, ಎಂದರು. ಶಾಸಕ ಡಿ. ರವಿಶಂಕರ್ ಮಾತನಾಡಿ, ಅಸಂಘಟಿತ ವಲಯದಲ್ಲಿರುವ ಕಾರ್ಮಿಕರನ್ನು ಹೆಚ್ಚಿನ ಸಂಖ್ಯೆಯಲ್ಲಿ ಇಲಾಖೆಯ ಯೋಜನೆಯಡಿ ನೋಂದಣಿ ಮಾಡುವ ಮೂಲಕ ಅವರಿಗೆ ಸ್ಮಾರ್ಟ್ ಕಾರ್ಡ್ ವಿತರಿಸಬೇಕು. ಹೋಬಳಿ ಮಟ್ಟದಲ್ಲಿ ವಿಶೇಷ ಅಭಿಯಾನ ನಡೆಸಬೇಕು, ಎಂದು ಸಲಹೆ ನೀಡಿದರು.

## ಅಂತರಾಳದಿಂದ... EDITORIAL

# ನೆನಪಿನಲ್ಲಿ ಉಳಿಯುವಂಥ ಸರಣಿ; ಟೆಸ್ಟ್ ಕ್ರಿಕೆಟ್‌ಗೆ ಮರಳಿ ಯೌವನ



ಟ್ವೆಂಟಿ-20 ಕ್ರಿಕೆಟ್‌ನ ಈ ಯುಗದಲ್ಲಿ ಟೆಸ್ಟ್ ಆಟಕ್ಕೆ ಸಂಪೂರ್ಣ ವೃದ್ಧಾಪ್ಯ ಅವರಿಸಿದ್ದು, ಇನ್ನೇನು ಅದು ತನ್ನ ಅಸ್ತಿತ್ವವನ್ನೇ ಕಳೆದುಕೊಳ್ಳಲಿದೆ' ಎಂಬ ಮಾತು ಇತ್ತೀಚಿನ ವರ್ಷಗಳಲ್ಲಿ ಬಲವಾಗಿ ಕೇಳಿಬರುತ್ತಿತ್ತು. ಒಂದುಕಾಲಕ್ಕೆ 'ಷೇಕ್ಸ್‌ಪಿಯರ್‌ನ ಕಾವ್ಯದಷ್ಟೇ ಮುದ ನೀಡುವ ದೃಶ್ಯಕಾವ್ಯ ಎಂಬ ಬಣ್ಣನೆಗೆ ಒಳಗಾಗಿದ್ದ ಕ್ರಿಕೆಟ್‌ನ ಈ ಮಾದರಿಯು ತಲುಪಿದ್ದ ದೈನೇಸಿ ಸ್ಥಿತಿಗೆ ಈ ಮಾತು ದ್ಯೋತಕವಾಗಿತ್ತು. ಆದರೆ, ಭಾರತ ಇಂಗ್ಲೆಂಡ್ ತಂಡಗಳ ನಡುವೆ ಮೊನ್ನೆಯಷ್ಟೆ ಮುಕ್ತಾಯವಾದ ಆ್ಯಂಡರ್ಸನ್ ತೆಂಡೂಲ್ಕರ್ ಸರಣಿಯು ಅಂತಹ ಕೊರಗಿಗೆ ಯಾವುದೇ ಕಾರಣವಿಲ್ಲ ಎಂದು ಸಾಬೀತುಪಡಿಸಿದೆ; ಟೆಸ್ಟ್ ಕ್ರಿಕೆಟ್‌ಗೆ ಮರಳಿ ಯೌವನ ಪ್ರಾಪ್ತಿಯಾಗಿದೆ ಎಂಬುದಾಗಿಯೂ ಸಾರಿದೆ. ಕ್ರಿಕೆಟ್ ಪಂಡಿತರು ಇದುವರೆಗೆ ವ್ಯಕ್ತಪಡಿಸಿದ್ದ ಹಲವು ಅನಿಸಿಕೆಗಳು ಹುಸಿ ಎಂಬುದನ್ನೂ ಈ ಸರಣಿ ಎತ್ತಿತೋರಿದೆ. ಟೆಸ್ಟ್ ಪಂದ್ಯಗಳು ಇನ್ನು ಐದು ದಿನಗಳವರೆಗೆ ನಡೆಯುವುದಿಲ್ಲ ಎಂದು ಹೇಳಲಾಗುತ್ತಿತ್ತು. ಅಂತರರಾಷ್ಟ್ರೀಯ ಕ್ರಿಕೆಟ್ ಸಮಿತಿ (ಐಸಿಸಿ) ಕೂಡ ಈ ಮಾದರಿಯ ಆಟವನ್ನು ನಾಲ್ಕು ದಿನಗಳಿಗೆ ಮೊಟಕುಗೊಳಿಸಲು ಚಿಂತನೆ ನಡೆಸಿತ್ತು. ಐದು ಪಂದ್ಯಗಳ ಈ ಸರಣಿಯ ಪ್ರತೀ ಪಂದ್ಯವೂ ಐದು ದಿನಗಳವರೆಗೆ ನಡೆದಿದೆ. ಟೆಸ್ಟ್ ಪಂದ್ಯ ನೋಡಲು ಜನ ಬರುವುದಿಲ್ಲ ಎಂಬ ವಿಷಯವೂ ಚರ್ಚೆಗೆ ಒಳಗಾಗಿತ್ತು. ಆದರೆ, ಭಾರತ ಇಂಗ್ಲೆಂಡ್ ತಂಡಗಳ ಎಲ್ಲಾ ಪಂದ್ಯಗಳ ಟಿಕೆಟ್‌ಗಳೂ 'ಸೋಲ್ಡ್ ಔಟ್' ಆಗಿ, ಕ್ರೀಡಾಂಗಣಗಳು ಭರ್ತಿ ತುಂಬಿದ್ದವು. ಟೆಸ್ಟ್ ಪಂದ್ಯ ರೋಚಕತೆಯಿಂದ ಕೂಡಿರುವುದಿಲ್ಲ ಎಂಬ ವಿಶ್ಲೇಷಣೆ ಜೋರಾಗಿತ್ತು. ಓವಲ್‌ನಲ್ಲಿ ನಡೆದ ಕೊನೆಯ ಪಂದ್ಯವು ಯಾವುದೇ ಟ್ವೆಂಟಿ-20 ಪಂದ್ಯಕ್ಕೂ ಕಡಿಮೆ ಇಲ್ಲದಂತೆ ರೋಚಕತೆಯಿಂದ ಕೂಡಿತ್ತು. ಈ ಪಾರಂಪರಿಕ ಮಾದರಿಯನ್ನು ಉಳಿಸಿಕೊಳ್ಳಲು ಐಸಿಸಿಯು ಆರು ವರ್ಷಗಳ ಹಿಂದೆ ವಿಶ್ವ ಟೆಸ್ಟ್ ಚಾಂಪಿಯನ್‌ಷಿಪ್ (ಡಬ್ಲ್ಯುಟಿಸಿ) ಆರಂಭಿಸಿರುವುದು ಫಲ ನೀಡಿರುವಂತಿದೆ. ಫಲಿತಾಂಶವನ್ನು ಪಡೆಯಲೇ ಬೇಕು ಎಂಬ ಮಹತ್ವಾಕಾಂಕ್ಷೆಯ ಆಟದಲ್ಲಿ ಸ್ಪರ್ಧಾತ್ಮಕತೆ ಹೆಚ್ಚಾಗಿದೆ. ಭಾರತ ತಂಡದ ಸುದೀರ್ಘ ಅವಧಿಯ ಇಂಗ್ಲೆಂಡ್ ಪ್ರವಾಸವು 2-2ರ ಸಮಬಲದಿಂದ ಅಂತ್ಯಕಂಡಿದೆ. ಓವಲ್‌ನಲ್ಲಿ ನಡೆದ ಕೊನೆಯ ಪಂದ್ಯದಲ್ಲಿ ಶುಭಮನ್ ಗಿಲ್ ಪಡೆಯು ಆರು ರನ್‌ಗಳ ಅಂತರದ ಮೂಲಕ ಇಂಗ್ಲೆಂಡ್ ತಂಡದಿಂದ ಗೆಲುವನ್ನು ಕಸಿದುಕೊಂಡಿರುವುದು ಸ್ಪರ್ಧೆಯ ತೀವ್ರತೆಗೆ ಹಿಡಿದ ಕನ್ನಡಿಯಾಗಿದೆ. ಭಾರತ ತಂಡವು ಆಸ್ಟ್ರೇಲಿಯಾ ತಂಡವನ್ನು ಅದರ ನೆಲದಲ್ಲಿ ಕೆಲವು ಬಾರಿ ಸೋಲಿಸಿದೆ. ಆದರೆ, ಇಂಗ್ಲೆಂಡ್ ತಂಡವು ತನ್ನ ನೆಲದಲ್ಲಿ ಭಾರತಕ್ಕೆ ಸದಾ ಕಬ್ಬಿಣದ ಕಡಲೆಯಾಗಿ ಪರಿಣಮಿಸಿದೆ. ಇಂಗ್ಲೆಂಡ್ ನೆಲದಲ್ಲಿ ಆ ತಂಡದ ವಿರುದ್ಧ ಇದುವರೆಗೆ ಮೂರು ಸರಣಿಗಳಲ್ಲಿ ಮಾತ್ರ ಭಾರತಕ್ಕೆ ಗೆಲುವು ಒಲಿದಿದೆ. 2 ತಿಂಗಳುಗಳ ಹಿಂದೆ ಗಿಲ್ ನೇತೃತ್ವದ ಯುವಪಡೆ ಲಂಡನ್ ವಿಮಾನವನ್ನು ಏರಲು ಹೊರಟಾಗ ಹೆಚ್ಚಿನ ನಿರೀಕ್ಷೆಗಳೇನೂ ಇರಲಿಲ್ಲ. ರೋಹಿತ್ ಶರ್ಮಾ, ವಿರಾಟ್ ಕೊಹ್ಲಿ, ಆರ್. ಅಶ್ವಿನ್ ಅವರಿಲ್ಲದ ಅನನುಭವಿ ತಂಡ ಎಂಬ ಹಣೆಪಟ್ಟಿಯನ್ನೂ ಅದು ಹಚ್ಚಿಕೊಂಡಿತ್ತು. ಆದರೆ, ಗಿಲ್ ಬಳಗ ಇಂಗ್ಲಿಷ್ ನಾಡಿನಲ್ಲಿ ತೇಲುತ್ತಿದ್ದ ಮೋಡಗಳ ಅಡಿಯಲ್ಲಿ ತೋರಿದ ಹೋರಾಟ ಅನನ್ಯವಾದುದು. ಇಂಗ್ಲೆಂಡ್‌ನ ಬಾಜ್‌ಬಾಲ್ (ಆಕ್ರಮಣಕಾರಿ ಬ್ಯಾಟಿಂಗ್) ಶೈಲಿಯು ಭಾರತದ ಯೋಜನೆಗಳನ್ನು ತಲೆಕೆಳಗು ಮಾಡುವಂತಿತ್ತಾದರೂ ಭಾರತೀಯ ಬೌಲರ್‌ಗಳು ಪುಟಿದೆದ್ದು ಯಶಗಳಿಸಿದ ರೀತಿ ಗಮನಾರ್ಹವಾಗಿತ್ತು.

> **ಟ್ವೆಂಟಿ-20 ಪಂದ್ಯಗಳ ಅಬ್ಬರದಿಂದ, ಅದರಲ್ಲೂ ಐಪಿಎಲ್ ಬೇಡುವ ಕಾಲಾವಕಾಶದ ಕಾರಣದಿಂದ, ಕ್ರಿಕೆಟ್ ಆಟಗಾರರಿಗೆ ಈಗ ವಿಶ್ರಾಂತಿ ಎನ್ನುವುದೇ ಇಲ್ಲ. ಅದು ಆಟಗಾರರಲ್ಲಿ ಹೆಚ್ಚುತ್ತಿರುವ ಗಾಯದ ಸಮಸ್ಯೆಯ ಮೂಲಕ ವ್ಯಕ್ತವಾಗುತ್ತಲೇ ಇದೆ. ಅಗ್ರಮಾನ್ಯ ಬೌಲರ್ ಜಸ್‌ಪ್ರೀತ್ ಬೂಮ್ರಾ ಸರಣಿಯ ಮೂರು ಪಂದ್ಯಗಳಲ್ಲಿ ಮಾತ್ರ ಆಡಿದರು. ಪ್ರಮುಖ ಬೌಲರ್‌ಗಳ ಅನುಪಸ್ಥಿತಿಯಲ್ಲಿ ಬೌಲಿಂಗ್ ಹೊಣೆ ಹೊತ್ತ ಮೊಹಮ್ಮದ್ ಸಿರಾಜ್ ಐದೂ ಪಂದ್ಯಗಳಲ್ಲಿ ಕೆಚ್ಚೆದೆಯ ಹೋರಾಟ ಪ್ರದರ್ಶಿಸಿದರು.**

ಸರಣಿಯಲ್ಲಿ ಅತ್ಯಧಿಕ ರನ್‌ಗಳಿಸಿದ ಆಟಗಾರನಾಗಿ ಗಿಲ್ ಹೊರಹೊಮ್ಮಿದರು. ಕೆ.ಎಲ್. ರಾಹುಲ್, ಯಶಸ್ವಿ ಜೈಸ್ವಾಲ್ ತಮ್ಮ ಮೇಲಿಟ್ಟ ವಿಶ್ವಾಸವನ್ನು ಉಳಿಸಿಕೊಂಡರು. ರವೀಂದ್ರ ಜಡೇಜ, ವಾಷಿಂಗ್ಟನ್ ಸುಂದರ್, ಆಲ್‌ರೌಂಡರ್‌ಗಳ ಮಹತ್ವವನ್ನು ಮನವರಿಕೆ ಮಾಡಿಕೊಟ್ಟರು. ರೂಪಾಂತರದ ಹಾದಿಯಲ್ಲಿರುವ ಭಾರತ ತಂಡ, ಆರಂಭಿಕ ಹಂತದ ಕೆಲವು ಸಮಸ್ಯೆಗಳನ್ನು ಎದುರಿಸಿದರೂ ದೊಡ್ಡ ಶಕ್ತಿಯಾಗಿ ಹೊರಹೊಮ್ಮುವ ಭರವಸೆ ಮೂಡಿಸಿತು. ಇಂಗ್ಲೆಂಡ್ ತಂಡದ ನಾಯಕ ಬೆನ್ ಸ್ಟೋಕ್ಸ್ ಅವರ ಭರ್ಜರಿ ಆಲ್‌ರೌಂಡ್ ಆಟ, ಜೋ ರೂಟ್ ಅವರ ಇನಿಂಗ್ಸ್ ಕಟ್ಟುವ ರೀತಿ ಕೂಡ ಕ್ರಿಕೆಟ್ ಪ್ರಿಯರ ಮನಸೂರೆಗೊಂಡಿತು. ಗಾಯದ ಕಾರಣದಿಂದ ಒಂಟಿಕೈಯಲ್ಲಿ ಆಡಲಿಳಿದ ಕ್ರಿಸ್ ವೋಕ್ಸ್ ಅವರ ಚಿತ್ರ, ಬಹುಕಾಲ ನೆನಪಿನಲ್ಲಿ ಉಳಿಯುವಂಥದ್ದು.

# ವರಮಹಾಲಕ್ಷ್ಮಿ ಹಬ್ಬದ ಸಂಭ್ರಮ

• ಶ್ರೀ. ವಿನೋದ ಕಾಮತ್,



2025 ರಲ್ಲಿ ಶ್ರೀ ವರಮಹಾಲಕ್ಷ್ಮಿ ವ್ರತವನ್ನು ಶ್ರಾವಣ ಶುಕ್ಲದ ಎರಡನೇ ಶುಕ್ರವಾರದಂದು, ಅಂದರೆ ಆಗಸ್ಟ್ 08 ರಂದು ಆಚರಿಸಲಾಗುವುದು. ಸರ್ವೇಸಾಮಾನ್ಯವಾಗಿ ಹಬ್ಬ, ಆಚರಣೆಗಳನ್ನು ವೈಯಕ್ತಿಕವಾಗಿ ಆಚರಿಸುವಾಗ ಅದು ವ್ರತವಾಗುತ್ತದೆ. ಒಟ್ಟಿಗೆ ಒಂದು ಕಡೆ ಸೇರಿ ಆಚರಿಸುವಾಗ ಅದು ಉತ್ಸವವಾಗುತ್ತದೆ.

ನಮ್ಮ ಅನೇಕ ವ್ರತಗಳು ಚಾತುರ್ಮಾಸದ ನಾಲ್ಕು ತಿಂಗಳಿನಲ್ಲಿ ಬರುತ್ತವೆ. ಅದರಲ್ಲಿಯೂ ಶ್ರಾವಣ ಮಾಸವು ಮಹತ್ವದ್ದಾಗಿದೆ. ಶ್ರಾವಣದಲ್ಲಿ ಬರುವಂತಹ ಶ್ರೀ ವರಮಹಾಲಕ್ಷ್ಮಿ ವ್ರತವು ಸುಮಂಗಲೆಯರಿಗೆ ಒಂದು ಮಹತ್ವದ ವ್ರತವಾಗಿದೆ. ಅಸುರರಿಂದ ರಕ್ಷಣೆಯಾಗಲು, ಸಕಲ ಸಂಪತ್ತು ಪ್ರಾಪ್ತವಾಗಲು ಪ್ರತಿಯೊಬ್ಬರೂ ಒಂದಲ್ಲ ಒಂದು ರೀತಿಯಲ್ಲಿ ಶಕ್ತಿಯ ಉಪಾಸನೆಯನ್ನು ಮಾಡುವುದು ಆವಶ್ಯಕವಾಗಿದೆ ಎಂದು ಶಾಸ್ತ್ರಗಳಲ್ಲಿ ಹೇಳಲಾಗಿದೆ. ಅದರಲ್ಲಿ ಶ್ರೀ ವರಮಹಾಲಕ್ಷ್ಮಿ ವ್ರತವೂ ಒಂದು.

**ವರಮಹಾಲಕ್ಷ್ಮಿ ವ್ರತದ ಹಿನ್ನೆಲೆ:** ಕೈಲಾಸದಲ್ಲಿ ಶಿವ ಪಾರ್ವತಿಯ ನಡುವಿನ ಸಂವಾದ - ಪಾರ್ವತಿದೇವಿಯು ಶಿವನಲ್ಲಿ ಈ ರೀತಿ ಕೇಳುತ್ತಾಳೆ ಲೋಕದಲ್ಲಿ ಯಾವ ವ್ರತದಿಂದ ಎಲ್ಲಾ ಕಷ್ಟಗಳು ಪರಿಹಾರವಾಗಲು ಸಾಧ್ಯವಿದೆಯೋ, ಯಾವ ವ್ರತದಿಂದ ಸರ್ವ ಸಂಪತ್ತುಗಳು ಪ್ರಾಪ್ತವಾಗಲು ಸಾಧ್ಯವಿದೆಯೋ, ಅಂತಹ ವ್ರತವೇನಾದರೂ ಇದ್ದರೆ, ಆ ವ್ರತದ ಬಗ್ಗೆ ತಿಳಿಸುವ ದಯೆ ಮಾಡಿ' ಎಂದು. ಈ ಕೋರಿಕೆಯನ್ನು ಆಲಿಸಿದ ಶಂಕರನು ಪಾರ್ವತಿದೇವಿಗೆ ಮುಂದಿನ ಕಥೆಯನ್ನು ಹೇಳುತ್ತಾನೆ. ಹಿಂದೊಮ್ಮೆ ಪುರಾಣಕಾಲದಲ್ಲಿ ಕುಂಡಿನಾಪುರ ಎಂಬ ಸಂಪದ್ಭರಿತವಾದ ಊರಿನಲ್ಲಿ ಚಾರುಮತಿ ಎಂಬ ಓರ್ವ ಬ್ರಾಹ್ಮಣ ಸ್ತ್ರೀಯು ಅವಳ ಪತಿಯೊಂದಿಗೆ ವಾಸಿಸುತ್ತಿದ್ದಳು. ಮನೆಯಲ್ಲಿ ಕಡು ಬಡತನವಿದ್ದರೂ ಚಾರುಮತಿಯು ಭಕ್ತಿಯಲ್ಲಿ ಶ್ರೀಮಂತಳಾಗಿದ್ದಳು. ಅವಳ ಅನನ್ಯ ಭಕ್ತಿಗೆ ಪ್ರಸನ್ನಳಾದ ಶ್ರೀ ವರಮಹಾಲಕ್ಷ್ಮಿ ದೇವಿಯು ಅವಳ ಕನಸಿನಲ್ಲಿ ದರ್ಶನವನ್ನು ನೀಡಿ ಮುಂದಿನ ವರವನ್ನಿತ್ತಳು. ಶ್ರಾವಣ ಮಾಸದ ಹುಣ್ಣಿಮೆಯ ಹತ್ತಿರದ ಶುಕ್ರವಾರದಂದು ಅಂದರೆ 2ನೇ ಶುಕ್ರವಾರದಂದು ಯಾರು ಈ ವ್ರತವನ್ನು ಭಕ್ತಿ ಭಾವದಿಂದ ಆಚರಿಸಿ ಏನನ್ನೂ ಬೇಡಿದರೆ, ಅವರಿಗೆ ಅದು ಪ್ರಾಪ್ತವಾಗುತ್ತದೆ. ಆ ದಿನ ಸಂಜೆ ನಾನು ಭೂಲೋಕಕ್ಕೆ ಇಳಿದು ಬರುವೆನು. ಆ ಸಮಯದಲ್ಲಿ ಯಾರ ಮನೆಯ ಬಾಗಿಲಿನಲ್ಲಿ ದೀಪ ಬೆಳಗಿಸಿ ನನ್ನನ್ನು ಯಾರು ಭಕ್ತಿಯಿಂದ ಬರಮಾಡಿಕೊಳ್ಳುತ್ತಾರೆಯೋ ಅವರ ಮನೆಯಲ್ಲಿ ನಾನು ನೆಲೆಸಿ ಸಕಲ ಸಂಪತ್ತುಗಳನ್ನು ನೀಡುವೆನು' ಎಂದು ಹೇಳಿ ದೇವಿ ವರಮಹಾಲಕ್ಷ್ಮಿಯು ಅದೃಶ್ಯಳಾದಳು. ತನಗೆ ದೇವಿ ನೀಡಿದ ದರ್ಶನದ ಬಗ್ಗೆಯೂ, ವರದ ಬಗ್ಗೆಯೂ ಚಾರುಮತಿ ಬೆಳಗಾಗುತ್ತಲೇ ಊರಿನವರೆಲ್ಲರಿಗೂ ಹೇಳುತ್ತಾಳೆ. ಇವಳ ಮಾತನ್ನು ಕೇಳಿದ ಊರಿನವರು ಚಾರುಮತಿಗೆ ಭ್ರಮೆಯಾಗಿದೆ, ಬುದ್ಧಿ ಭ್ರಷ್ಟವಾಗಿದೆ ಎಂದು ಹೇಳಿ ಹೀಯಾಳಿಸುತ್ತಾರೆ. ಆದರೆ ಅಂದು ಶ್ರಾವಣ ಮಾಸದ ಎರಡನೇ ಶುಕ್ರವಾರವಾಗಿತ್ತು.

ಚಾರುಮತಿಯು ದೇವಿಯ ಆಜ್ಞೆಯಂತೆ ಮನೆಯನ್ನು ಶುಚಿಗೊಳಿಸಿ, ದೀಪ ಬೆಳಗಿಸಿ, ಮನೆಯನ್ನು ಯಥಾ ಶಕ್ತಿ ದೀಪಗಳಿಂದ ಅಲಂಕರಿಸಿ ಶ್ರೀ ದೇವಿಯ ಆಗಮನಕ್ಕೆ ಭಕ್ತಿ ಭಾವದಿಂದ ಕಾದುಕುಳಿತಳು.

ಶ್ರೀ ದೇವಿಯು ಭೂಲೋಕಕ್ಕೆ ಇಳಿದಾಗ, ಇತರರ ಮನೆಯಲ್ಲಿ ಅವಳನ್ನು ಬರಮಾಡಿಕೊಳ್ಳಲು ದೀಪಗಳು ಇರಲಿಲ್ಲ. ಆದುದರಿಂದ ದೀಪಗಳಿಂದ ಝಗಝಗಿಸುವ ಭಕ್ತೆ ಚಾರುಮತಿಯ ಮನೆಗೆ ಬಂದು ದೇವಿಯು ಶಾಶ್ವತವಾಗಿ ಅಲ್ಲೇ ನೆಲೆಸುತ್ತಾಳೆ. ಶ್ರೀ ದೇವಿಯ ಆಗಮನದಿಂದ ಚಾರುಮತಿಯ ಮನೆಯ ಬಡತನವೆಲ್ಲ ದೂರವಾಗಿ ಅಲ್ಲಿ ಸುಖ-ಶಾಂತಿ-ನೆಮ್ಮದಿ ನೆಲೆಸುತ್ತವೆ, ಮನೆತನವು ಸಂಪದ್ಭರಿತವಾಗುತ್ತದೆ. ಚಾರುಮತಿಯ ಮೇಲಾದ ಶ್ರೀ ದೇವಿಯ ಕೃಪೆಯನ್ನು ಕಂಡ ಊರಿನ ಇತರ ಸುಮಂಗಲೆಯರೂ ಕೂಡ ವರಮಹಾಲಕ್ಷ್ಮಿ ವ್ರತವನ್ನು ಆಚರಿಸಿ ಇಷ್ಟಾರ್ಥ ಸಿದ್ಧಿಗಳನ್ನು ಮಾಡಿಕೊಳ್ಳುತ್ತಾರೆ. ಇಂದಿಗೂ ಕೂಡ ಯಾರು ಶ್ರದ್ಧೆ-ಭಕ್ತಿಯಿಂದ ಶ್ರೀ ವರಮಹಾಲಕ್ಷ್ಮಿ ವ್ರತವನ್ನು ಆಚರಿಸುತ್ತಾರೆಯೋ ಅವರ ಮೇಲೆ ಶ್ರೀ ದೇವಿಯ ಕೃಪೆಯು ಖಂಡಿತವಾಗಿಯೂ ಇರುತ್ತದೆ.

# ಪರ್ಪಲ್ ಎಕಾನಮಿ ಸಮಾಜ ನಿರ್ಮಾಣದ ದಿಟ್ಟ ಹೆಜ್ಜೆ

25 Years EnAble India Celebration of Human Spirit

• ಉದಯವಾಹಿನಿ, ಬೆಂಗಳೂರು

ಅಂಗವಿಕಲರ ಅಗತ್ಯಗಳನ್ನು ಪೂರೈಸುವ ಮೂಲಕ ಹೊಸ ಆರ್ಥಿಕ ಅವಕಾಶಗಳನ್ನು ತೆರೆದಿಡುವ ಚರ್ಚಾ ವೇದಿಕೆ ಪರ್ಪಲ್ ಡೈಲಾಗ್‌ನಲ್ಲಿ ಭಾರತದ ಪ್ರತಿಷ್ಠಿತ ಆತಿಥ್ಯೋದ್ಯಮ ವೈಮಾನಿಕ ಬ್ರ್ಯಾಂಡ್‌ಗಳು ಭಾಗಿಯಾದವು. ಇದು ಎನೇಬಲ್ ಇಂಡಿಯಾದಿಂದ ಆಯೋಜಿತ ಕಾರ್ಯಕ್ರಮ.

ಎನೇಬಲ್ ಇಂಡಿಯಾದ ಸಂಸ್ಥಾಪಕಿ ಶಾಂತಿ ರಾಘವನ್ ಮಾತನಾಡಿ, ಪರ್ಪಲ್ ಎಕಾನಮಿ ಡೈಲಾಗ್ಸ್ ಒಳಗೊಂಡ ಸಮಾಜ ನಿರ್ಮಾಣದ ದಿಟ್ಟ ಹೆಜ್ಜೆ. ನಮ್ಮ ಆರ್ಥಿಕ ಮತ್ತು ಸಾಮಾಜಿಕ ಕಾರ್ಯತಂತ್ರಗಳಲ್ಲಿ ಅಂಗವಿಕಲರು ಸೇರಿದಂತೆ ಎಲ್ಲರನ್ನೂ ಒಳಗೊಳ್ಳುವುದು ನಿಜವಾದ ಸುಸ್ಥಿರ ಅಭಿವೃದ್ಧಿ ಎಂದು ನಾವು ನಂಬುತ್ತೇವೆ ಎಂದರು.

ಲಲಿತ್ ಅಶೋಕ್ ಈ ಕಾರ್ಯಕ್ರಮವನ್ನು ಆಯೋಜಿಸಿತು. ತಾಜ್ ಅಕ್ಸಾ ಏರ್, ಲೆಮನ್ ಟ್ರೀ ಮುಂತಾದ ಪ್ರಮುಖ ಬ್ರ್ಯಾಂಡ್‌ಗಳು ಭಾಗಿಯಾಗಿದ್ದವು. ಈ ಮಾತುಕತೆ ಎನೇಬಲ್ ಇಂಡಿಯಾದಿಂದ ಎರಡು ತಿಂಗಳಿಗೊಮ್ಮೆ ನಡೆಯುವ ಕಾರ್ಯಕ್ರಮವಾಗಿದೆ.



# ಚೈನೀಸ್ ಹೋಟೆಲ್ ಸ್ಟೈಲ್‌ನಲ್ಲಿ ಮಸಾಲ ಪಾಸ್ತಾ: ಹೇಗೆ ಮಾಡಬೇಕು?

ನೀವು ಮನೆಯಲ್ಲಿದ್ದಾಗ ಸುಲಭವಾಗಿ ಹಾಗೆ ಬಹಳ ರುಚಿ ರುಚಿಯಾಗಿ ಯಾವುದಾದರು ಮಸಾಲೆ ಭರಿತ ಸೈಡ್ಸ್ ಅನ್ನು ಸವಿಯಲು ಇಷ್ಟಪಡುವ ಮಂದಿಯಾದರೆ ಹಲವು ಖಾದ್ಯ ಸವಿದಿರುತ್ತೀರಿ.

ಅದ್ರಲ್ಲೂ ನೀವು ಹೆಚ್ಚಾಗಿ ಗೋಬಿ ಮಂಚೂರಿಯನ್, ಮಸಾಲ ಪೂರಿ, ಪಾನಿ ಪೂರಿ, ಬೋಂಡಾ ಬಜ್ಜಿ, ಸಮೋಸಾ, ನೂಡಲ್ಸ್ ಸೇರಿದಂತೆ ಹಲವು ರೀತಿಯ ಸ್ನ್ಯಾಕ್ ಮಾಡಿ ಸವಿಯುವುದು ನಿಮ್ಮ ಅಭ್ಯಾಸ ಆಗಿರಬಹುದು. ಹಾಗೆ ಮನೆಯಲ್ಲಿ ಮಕ್ಕಳಿದ್ದರೆ ಅವರಿಗೆ ರುಚಿ ರುಚಿಯಾಗಿ ಪಾಸ್ತಾದಿಂದಲೂ ಸ್ನ್ಯಾಕ್ಸ್ ಮಾಡಿ ನೀಡಿರುತ್ತೀರಿ. ಈ ಪಾಸ್ತಾದಿಂದ ಹತ್ತು ಹಲವು ರೀತಿಯ ಖಾದ್ಯಗಳ ಮಾಡಿ ಸವಿಯುತ್ತೀರಿ. ಆದ್ರೆ ನಾವಿಂದು ಸುಲಭವಾಗಿ ಮಾಡುವಂತಹ ಹಾಗೆ ಮನೆಯಲ್ಲಿ ಎಲ್ಲರಿಗೂ ಇಷ್ಟವಾಗುವ ಮನೆಯಲ್ಲಿ ಮಾಡುವುದು ಹೇಗೆ ನೋಡೋಣ.

ಅದ್ರಲ್ಲೂ ರಸ್ತೆ ಬದಿಯಲ್ಲಿ ನೀವು ಯಾವಾಗಲು ಸವಿದಿರುವಂತಹ ರುಚಿಯಲ್ಲಿ ಇದನ್ನು ಮನೆಯಲ್ಲೇ ಮಾಡಿ ಸವಿಯಬಹುದು. ಹಾಗಾದ್ರೆ ಈ ಮಸಾಲ ಪಾಸ್ತಾ ಮಾಡುವುದು ಹೇಗೆ? ಚೈನೀಸ್ ಸ್ಟೈಲ್‌ನಲ್ಲಿ ಈ ಮಸಾಲ ಪಾಸ್ತಾ ಮಾಡಿ ಸವಿಯುವುದು ಹೇಗೆ ಅನ್ನೋದನ್ನು ನಾವಿಂದು ತಿಳಿದುಕೊಳ್ಳೋಣ. ಅದ್ರಲ್ಲೂ ಕೆಲವೇ ಕೆಲವು ವಸ್ತು ಬಳಿ ಮಾಡಿ ನೋಡೋಣ. ಮಸಾಲಾ ಪಾಸ್ತಾ ಮಾಡಲು ಯಾವೆಲ್ಲಾ ಪದಾರ್ಥಗಳು ಬೇಕು?, ಮಾಡುವ ವಿಧಾನ ಬೇಕು?, ಮಾಡಲು ಎಷ್ಟು ಸಮಯ ಹಿಡಿಯಲಿದೆ? ಎಂಬುದನ್ನು ನಾವಿಂದು ತಿಳಿದುಕೊಳ್ಳೋಣ.

**ಮಸಾಲ ಪಾಸ್ತಾ ಮಾಡಲು ಯಾವೆಲ್ಲಾ ಪದಾರ್ಥಗಳು ಬೇಕು?**

- ಪಾಸ್ತಾ
- ಎಣ್ಣೆ
- ಉಪ್ಪು
- ಶುಂಠಿ
- ಬೆಳ್ಳುಳ್ಳಿ
- ಹಸಿ ಮೆಣಸು
- ಈರುಳ್ಳಿ
- ಟೊಮೆಟೋ
- ಕ್ಯಾರೆಟ್
- ಕ್ಯಾಪ್ಸಿಕಂ
- ಟೊಮೆಟೋ ಸಾಸ್
- ಗರಂ ಮಸಾಲೆ
- ಧನಿಯ ಪುಡಿ
- ಖಾರದ ಪುಡಿ

**ಮಸಾಲ ಪಾಸ್ತಾ ಮಾಡುವ ವಿಧಾನವೇನು?**

ಮೊದಲು ಒಂದು ಪಾತ್ರೆ ಒಲೆ ಮೇಲೆ ಇಟ್ಟು 2 ಕಪ್ ನೀರು, 1 ಸ್ಪೂನ್ ಎಣ್ಣೆ, ಉಪ್ಪು ಹಾಕಿ ಕುದಿಯಲು ಬಿಡಿ. ಇದು ಚೆನ್ನಾಗಿ ಕುದಿಯಲು ಆರಂಭಿಸಿದಾಗ ನೀವು ಅಂಗಡಿಯಿಂದ ತಂದಿರುವ ಪಾಸ್ತಾವನ್ನು ಹಾಕಿಕೊಂಡು ಬೇಯಲು ಬಿಡಿ. 2ರಿಂದ 3 ನಿಮಿಷದಲ್ಲಿ ಇದು ಬೇಯಲಿದೆ ನಂತರ ಇದನ್ನು ತೆಗೆದಿಟ್ಟುಕೊಳ್ಳಿ.

ಈಗ ಒಂದು ಬಾಣಲೆ ಒಲೆ ಮೇಲೆ ಇಟ್ಟು ಎಣ್ಣೆ ಹಾಕಿಕೊಂಡು ಅದಕ್ಕೆ ಸಣ್ಣದಾಗಿ ಹೆಚ್ಚಿಕೊಂಡಿರುವ ಶುಂಠಿ, ಬೆಳ್ಳುಳ್ಳಿ, ಹಸಿ ಮೆಣಸು ಹಾಕಿಕೊಳ್ಳಿ. ಅನಂತರ ಒಂದು ದೊಡ್ಡ ಈರುಳ್ಳಿ ಸಹ ಹಾಕಿಕೊಂಡು ಫ್ರೈ ಆಗಲು ಬಿಡಿ. 2 ನಿಮಿಷ ಹುರಿದ ಬಳಿಕ ಸಣ್ಣದಾಗಿ ಹೆಚ್ಚಿದ್ದ ಟೊಮೆಟೋ, ಉಪ್ಪು ಹಾಕಿಕೊಂಡು ಮೃದುವಾಗುವವರೆಗೂ ಹುರಿದುಕೊಳ್ಳಿ. ಈಗ ಸಣ್ಣ ತುರಿದ ಕ್ಯಾರೆಟ್ ಹಾಗೂ ಕ್ಯಾಪ್ಸಿಕಂ ಕೂಡ ಹಾಕಿಕೊಂಡು ಹುರಿದುಕೊಳ್ಳಿ. ಈಗ ಒಂದು ಸ್ಪೂನ್ ಖಾರದ ಪುಡಿ, ಗರಂ ಮಸಾಲ, ಧನಿಯಾ ಪುಡಿ ಹಾಕಿಕೊಂಡು ಮಿಕ್ಸ್ ಮಾಡಿಕೊಳ್ಳಿ. 1 ನಿಮಿಷ ಮಿಕ್ಸ್ ಮಾಡಿದ ಬಳಿಕ ಮೂರು ಸ್ಪೂನ್ ಟೊಮೆಟೋ ಸಾಸ್ ಹಾಕಿಕೊಳ್ಳಿ. ಹಾಗೆ ಸೋಯಾ ಸಾಸ್ ಇದ್ದರೂ ಕೂಡ ಹಾಕಿಕೊಳ್ಳಿ. ಸ್ವಲ್ಪ ನೀರು ಹಾಕಿ ಗೊಜ್ಜಿನ ರೀತಿ ಮಾಡಿಕೊಳ್ಳಿ.

ಈಗ ಬೇಯಿಸಿಕೊಂಡಿದ್ದ ಪಾಸ್ತಾವನ್ನು ಹಾಕಿಕೊಂಡು ನಿಧಾನಾಗಿ ಮಿಕ್ಸ್ ಮಾಡಿಕೊಳ್ಳಿ. 1 ನಿಮಿಷ ಮಿಕ್ಸ್ ಮಾಡಿ ಒಲೆ ಆಫ್ ಮಾಡಿಕೊಂಡು ಕೊತ್ತಂಬರಿ ಸೊಪ್ಪು ಹಾಕಿ ಮುಚ್ಚಳ ಮುಚ್ಚಿ 1 ನಿಮಿಷ ಬಿಡಿ. ಇಷ್ಟಾದರೆ ನಿಮ್ಮ ಮುಂದೆ ರುಚಿ ರುಚಿಯ ಈ ಪಾಸ್ತಾ ಸಿದ್ಧವಾಗಲಿದೆ. ಸಂಜೆ ಸಮಯದಲ್ಲಿ ಮನೆಯಿಂದ ಹೊರಹೋಗಿ ಸವಿಯುವ ಬದಲಾಗಿ ಮನೆಯಲ್ಲಿಯೇ ಇದನ್ನು ಮಾಡಿ ಸವಿದು ನೋಡಿ.

# ಕೆಂಪು ಇರುವೆ ಚಟ್ನಿ ತಿನ್ನೋದ್ರಿಂದ ಇಷ್ಟೆಲ್ಲಾ ಲಾಭಗಳಿವೆಯಂತೆ ಹೌದಾ?

ಚಟ್ನಿ ಯಾವುದೇ ಆಹಾರಕ್ಕೆ ರುಚಿಯನ್ನು ನೀಡುತ್ತದೆ. ಆದರೆ ನೀವು ಕೆಂಪು ಇರುವೆಯಿಂದ ತಯಾರಿಸಲಾದ ಚಟ್ನಿಯನ್ನು ಯಾವತ್ತಾದ್ರೂ ಟೇಸ್ಟ್ ಮಾಡಿದ್ದೀರಾ? ಈ ಚಟ್ನಿ ಪೋಷಕಾಂಶಗಳಿಂದ ಸಮೃದ್ಧವಾಗಿದೆ ಎನ್ನಲಾಗುತ್ತದೆ. ಇಡ್ಲಿ, ದೋಸೆಗೆ ಚಟ್ನಿ ಇದ್ರೆ ತಿನ್ನಲು ಚೆನ್ನಾಗಿರುತ್ತದೆ. ಅದರಲ್ಲೂ ಭಾರತೀಯರು ನಾನಾ ರೀತಿಯ ಚಟ್ನಿಗಳನ್ನು ತಯಾರಿಸುತ್ತಾರೆ. ತೆಂಗಿನಕಾಯಿ ಚಟ್ನಿ, ಕೊತ್ತಂಬರಿ ಚಟ್ನಿ, ಪುದೀನಾ ಚಟ್ನಿ, ಕೆಂಪು ಮೆಣಸಿನ ಚಟ್ನಿ, ಬೆಳ್ಳುಳ್ಳಿ ಚಟ್ನಿ ಹೀಗೆ ನಾನಾ ರೀತಿಯ ಚಟ್ನಿಗಳಿವೆ. ನೀವು ಕೆಂಪು ಇರುವೆಯ ಚಟ್ನಿಯ ಬಗ್ಗೆ ಕೇಳಿದ್ದೀರಾ? ಕೆಂಪು ಇರುವೆಯನ್ನು ಸಾಮಾನ್ಯವಾಗಿ ಎಲ್ಲರೂ ನೋಡಿದ್ದೀರಾ. ಭಾರತದ ಕೆಲವು ಭಾಗಗಳಲ್ಲಿ ಈ ಕೆಂಪು ಇರುವೆಯಿಂದ ಚಟ್ನಿಯನ್ನು ತಯಾರಿಸುತ್ತಾರಂತೆ. ಇದು ರೊಟ್ಟಿಯೊಂದಿಗೆ ತಿನ್ನಲು ಬಹಳ ರುಚಿಯಾಗಿರುತ್ತಂತೆ. ಇದು ಆರೋಗ್ಯಕ್ಕೂ ಒಳ್ಳೆಯದು ಎನ್ನಲಾಗುತ್ತದೆ. ಈ ಬಗ್ಗೆ ಒಂದಿಷ್ಟು ಮಾಹಿತಿಯನ್ನು ತಿಳಿಯೋಣ.

**ಬುಡಕಟ್ಟು ಸಮುದಾಯ:** ಒಡಿಶಾ, ಜಾರ್ಖಂಡ್,



ಛತ್ತೀಸ್‌ಗಢ ದಂತಹ ರಾಜ್ಯಗಳಲ್ಲಿ ವಾಸಿಸುವ ಬುಡಕಟ್ಟು ಸಮುದಾಯಗಳ ಜನರು ಈ ಕೆಂಪು ಇರುವೆ ಚಟ್ನಿಯನ್ನು ತಯಾರಿಸುತ್ತಾರೆ. ಈ ಜನರು ಈ ವಿಶಿಷ್ಟವಾದ ಚಟ್ನಿಯನ್ನು ಮಸಾಲೆಗಳೊಂದಿಗೆ ಪುಡಿಮಾಡಿ ತಿನ್ನುತ್ತಾರೆ. ಇದನ್ನು ಕೈ ಚಟ್ನಿ ಅಥವಾ ಚಪ್ರಾ ಎಂದೂ ಕರೆಯುತ್ತಾರಂತೆ. ಇತ್ತೀಚೆಗೆ, ಒಡಿಶಾದ ಈ ಚಟ್ನಿಗೆ ಜಿಐ ಟ್ಯಾಗ್ ಸಿಕ್ಕಿದೆ, ಇದು ಅದರ ವಿಶಿಷ್ಟ ರುಚಿ ಮತ್ತು ಸಾಂಸ್ಕೃತಿಕ ಮಹತ್ವವನ್ನು ತೋರಿಸುತ್ತದೆ. ಇಲ್ಲಿನ ಜನರು ಈ ವಿಶಿಷ್ಟವಾದ ಚಟ್ನಿ ಆರೋಗ್ಯಕ್ಕೆ ತುಂಬಾ ಪ್ರಯೋಜನಕಾರಿ ಎಂದು ನಂಬುತ್ತಾರೆ.

> **ವಿವಿಧ ಸಂಶೋಧನೆ ಮತ್ತು ಅಧ್ಯಯನಗಳ ಆಧಾರದ ಮೇಲೆ, ಪ್ರೋಟೀನ್ ಮೂಲವಾಗಿ ಕೆಂಪು ಇರುವೆಯನ್ನು ನಮ್ಮ ಆಹಾರ ಕ್ರಮದಲ್ಲಿ ಸಂಯೋಜಿಸುವುದನ್ನು ಪರಿಸರ ಸವಾಲುಗಳಿಗೆ ಸಂಭಾವ್ಯ ಪರಿಹಾರವಾಗಿ ಪ್ರಸ್ತಾಪಿಸಲಾಗಿದೆ. ಕೆಂಪು ಇರುವೆ ಹಸುಗಳಂತಹ ಸಾಂಪ್ರದಾಯಿಕ ಪ್ರಾಣಿ ಪ್ರೋಟೀನ್ ಮೂಲಗಳನ್ನು ಬದಲಾಯಿಸಬಹುದು, ಅವು ಇಂಗಾಲದ ಡೈಆಕ್ಸೈಡ್ ಮತ್ತು ಮೀಥೇನ್‌ನಂತಹ ಶಾಖ-ಬಲೆಗೆ ಬೀಳಿಸುವ ಅನಿಲಗಳ ಗಮನಾರ್ಹ ಹೊರಸೂಸುವಿಕೆಗೆ ಹೆಸರುವಾಸಿಯಾಗಿದೆ. ಈ ವಿಧಾನವು ಪರಿಸರದ ಪ್ರಭಾವವನ್ನು ತಗ್ಗಿಸುವ ಮತ್ತು ಹೆಚ್ಚು ಸುಸ್ಥಿರ ಆಹಾರ ವ್ಯವಸ್ಥೆಯನ್ನು ಬೆಳೆಸುವ ಸಾಮರ್ಥ್ಯವನ್ನು ಹೊಂದಿದೆ.**

**ಕೆಂಪು ಇರುವೆ ಚಟ್ನಿಯಲ್ಲಿರುವ ಪೋಷಕಾಂಶಗಳು**

ಈ ಚಟ್ನಿಯು ಪ್ರೋಟೀನ್, ಕ್ಯಾಲ್ಸಿಯಂ, ಸತು, ವಿಟಮಿನ್ ಬಿ-12, ಕಬ್ಬಿಣ, ಮೆಗ್ನೀಸಿಯಮ್, ಪೊಟ್ಯಾಸಿಯಮ್ , ಉತ್ಕರ್ಷಣ, ನಿರೋಧಕಗಳಂತಹ ಪೋಷಕಾಂಶಗಳಿಂದ ಸಮೃದ್ಧವಾಗಿದೆ ಎಂದು ನಂಬಲಾಗಿದೆ. ಈ ವಿಶಿಷ್ಟವಾದ ಚಟ್ನಿಯು ಇದು ಖಿನ್ನತೆ, ಆಯಾಸ ಮತ್ತು ಸ್ಮರಣಶಕ್ತಿ ನಷ್ಟದಂತಹ ಪರಿಸ್ಥಿತಿಗಳ ನಿರ್ವಹಣೆಯಲ್ಲಿ ಸಂಭಾವ್ಯವಾಗಿ ಸಹಾಯ ಮಾಡುತ್ತದೆ.

**ತಿನ್ನುವುದರಿಂದ ಯಾವೆಲ್ಲಾ ಪ್ರಯೋಜನಗಳಿವೆ:** ಇದು ಮೂಳೆಗಳು, ಸ್ನಾಯುಗಳನ್ನು ಬಲಪಡಿಸುತ್ತದೆ, ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸುತ್ತದೆ ಮತ್ತು ಜೀರ್ಣಕ್ರಿಯೆಯನ್ನು ಸುಧಾರಿಸುತ್ತದೆ. ಬುಡಕಟ್ಟು ನಂಬಿಕೆಗಳ ಪ್ರಕಾರ, ಈ ಚಟ್ನಿ ಶೀತ, ಕೆಮ್ಮು, ಕಾಮಾಲೆ, ಮಲೇರಿಯಾ ಮತ್ತು ಕೀಲು ನೋವಿನಿಂದಲೂ ಪರಿಹಾರ ನೀಡುತ್ತದೆ. ಆರೋಗ್ಯಕರ ಮೆದುಳು ಮತ್ತು ನರಮಂಡಲದ ಬೆಳವಣಿಗೆಗೂ ಉತ್ತಮವಾಗಿದೆ. ಕೆಲವು ಜನರು ಜ್ವರವನ್ನು ಕಡಿಮೆ ಮಾಡಲು ಇರುವೆಗಳಿಂದ ಕಚ್ಚಲ್ಪಡುತ್ತಾರೆ, ಏಕೆಂದರೆ ಅವುಗಳ ಕುಟುಕು ದೇಹದ ಉಷ್ಣತೆಯನ್ನು ಕಡಿಮೆ ಮಾಡುತ್ತೆ ಎನ್ನುವ ನಂಬಿಕೆ ಅವರದ್ದು.

# ಲಾಲ್‌ಬಾಗ್‌ನಲ್ಲಿ 218ನೇ ಫಲಪುಷ್ಪ ಪ್ರದರ್ಶನ

• ಉದಯವಾಹಿನಿ, ಬೆಂಗಳೂರು


ಸ್ವಾತಂತ್ರ್ಯ ದಿನಾಚರಣೆ ಹಿನ್ನೆಲೆ ಆ.7 ನಗರದ ಲಾಲ್ ಬಾಗ್‌ನಲ್ಲಿ 218ನೇ ಫಲಪುಷ್ಪ ಪ್ರದರ್ಶನ ನಡೆಯಲಿದೆ. ಬೆಳಿಗ್ಗೆ 10 ಗಂಟೆಗೆ ಸಿಎಂ ಸಿದ್ದರಾಮಯ್ಯ 218ನೇ ಫಲಪುಷ್ಪ ಪ್ರದರ್ಶನವನ್ನು ಉದ್ಘಾಟಿಸಲಿದ್ದಾರೆ. ಪ್ರದರ್ಶನ ಸಂಪೂರ್ಣವಾಗಿ ಕಿತ್ತೂರು ರಾಣಿ ಚೆನ್ನಮ್ಮನ ಆಸ್ಥಾನದ ಪರಿಕಲ್ಪನೆಯಲ್ಲಿ ಆಯೋಜನೆಯಾಗಲಿದೆ. ಆಂಧ್ರಪ್ರದೇಶ, ತಮಿಳುನಾಡು, ಪುಣೆ, ಕೇರಳದಿಂದ ಹೂವುಗಳಿಂದ ತರಿಸಲಾಗಿದ್ದು, 18 ಅಡಿ ಎತ್ತರ ಮತ್ತು 32 ಅಡಿ ಅಗಲದ ಕಿತ್ತೂರು ಕೋಟೆ, ಕಿತ್ತೂರು ರಾಣಿ ಚೆನ್ನಮ್ಮನವರ ಐಕ್ಯ ಮಂಟಪಗಳು ಸಿದ್ಧಗೊಳ್ಳುತ್ತಿವೆ.



ಉದಯವಾಹಿನಿ ಚಿತ್ರ

600ಕ್ಕೂ ಹೆಚ್ಚು ಕಾರ್ಮಿಕರು, ಸಿಬ್ಬಂದಿ ಕೆಲಸ ಮಾಡುತ್ತಿದ್ದು, ಭರ್ಜರಿಯಿಂದ ತಯಾರಿ ನಡೆಯುತ್ತಿದೆ. ಇನ್ನೂ ಪ್ರದರ್ಶನದಲ್ಲಿ ಹೈಡ್ರಾಂಜಿ, ಕ್ಯಾಲಲಿಲಿ, ಆರ್ಕಿಡ್ಸ್, ಟ್ಯೂಬ್ರೆಟ್ಸ್ ಬೆಗೆನಿಯಾ ಸೇರಿದಂತೆ 105ಕ್ಕೂ ವಿಶೇಷವಾದ ವಾರ್ಷಿಕ ಹೂವುಗಳ ಬಳಕೆ ಮಾಡಲಾಗಿದೆ.

# ರಾಮಾಯಣ



## ಶ್ರೀರಾಮನು ಪಾದುಕೆಗಳನ್ನು ಕೊಟ್ಟು ಭರತನನ್ನು ಕಳುಹಿಸಿದ್ದು

• ಹಿಂದಿನ ಸಂಚಿಕೆಯಿಂದ 112 ನೆಯ ಅಧ್ಯಾಯ

ಅವರ ಮಾತನ್ನು ಕೇಳಿ ಶ್ರೀರಾಮನು ಹರ್ಷಪಟ್ಟು ಆ ಋಷಿಗಳು ತನಗೆ ಅನುಕೂಲವಾದ ಮಾತನ್ನಾಡಿದುದಕ್ಕಾಗಿ ಅವರನ್ನು ಸ್ತುತಿಸಿದನು. ಭರತನು ಆ ಋಷಿಗಳು ಶ್ರೀರಾಮನಿಗೆ ಅನುಕೂಲವಾಗಿ ಮಾತನಾಡಿದ್ದನ್ನು ಕೇಳಿ ಕಂಗೆಟ್ಟು ಸ್ವರಗುಂದಿ ಕೈಮುಗಿದುಕೊಂಡು ಅತ್ಯಂತ ದೈನ್ಯಕ್ತಿಯಿಂದ ಶ್ರೀರಾಮನನ್ನು ಕುರಿತು ಅಣ್ಣ. ನೀನು ರಾಜಧರ್ಮವನ್ನೂ ನಮ್ಮ ಕುಲಧರ್ಮವನ್ನೂ ವಿಚಾರಿಸಿ ನನ್ನ ತಾಯಿಯಾದ ಕೈಕೇಯಾದೇವಿಯ ಪ್ರಾರ್ಥನೆಯನ್ನು ಪರಿಪಾಲಿಸು. ನೀನಿಲ್ಲದೆ ನಾನೊಬ್ಬನೇ ರಾಜ್ಯಾಧಿಪತ್ಯವನ್ನು ವಹಿಸುವುದಕ್ಕೆ ಸಮರ್ಥನಲ್ಲ. ಸಮಸ್ತ ಪುರಜನರೂ ಪರಿಜನರೂ ನಿನ್ನನ್ನೇ ಬಯಸುತ್ತಿದ್ದಾರೆ. ಆದಲ್ಲದೆ ನಮ್ಮ ಜ್ಞಾತಿಗಳು, ಮಿತ್ರರು ಪಟುಭಟರು ಮೊದಲಾದವರೂ ವರ್ಷಾಕಾಲದಲ್ಲಿ ಚಾತಕಪಕ್ಷಿಗಳು ಮಳೆಗರೆಯುವ ಮೇಘಗಳನ್ನು ಬಯಸುವಂತೆ ನಿನ್ನನ್ನೇ ಬಯಸುತ್ತಿದ್ದಾರೆ. ಆದಕಾರಣ ನೀನು ಎಲ್ಲರಿಗೂ ಸಂತೋಷವಾಗುವ ರಾಜ್ಯಭಾರವನ್ನು ವಹಿಸಿಕೊಂಡು ಸಮಸ್ತ ಪ್ರಜೆಗಳನ್ನೂ ಪರಿಪಾಲಿಸು.

ಪ್ರಜಾಪಾಲನಕ್ಕೆ ನೀನೇ ಸಮರ್ಥನಲ್ಲದೆ ಮತ್ತೊಬ್ಬರಲ್ಲ ಎಂದು ಆತನ ಪಾದಗಳಿಗೆ ಸಾಷ್ಟಾಂಗವೆರಗಿ ಅತ್ಯಂತ ಪ್ರಿಯವಚನಗಳಿಂದ ಪ್ರಾರ್ಥನೆಮಾಡಿದನು. ಶ್ರೀರಾಮನು ಭರತ, ನಿನಗೆ ಇಂಥ ವಿನಯಬುದ್ಧಿ ಇರುವುದರಿಂದ ನೀನು ಸಮಸ್ತ ಜನಗಳನ್ನೂ ಪರಿಪಾಲಿಸಬಲ್ಲೆ. ನೀನು ಬುದ್ಧಿವಂತರೂ ಮಹಾತ್ಮರೂ ಆದ ಪ್ರಧಾನರೊಡನೆ ಮಂತ್ರಾಲೋಚನೆಯನ್ನು ಮಾಡಿಕೊಂಡು ಅವರ ಸಹಾಯದಿಂದ ರಾಜ್ಯಪಾಲನ ಮಾಡು. ಚಂದ್ರ ಪ್ರಭೆಯು ಚಂದ್ರನನ್ನು ಬಿಟ್ಟು ತೊಲಗಿದರೂ ಹಿಮವತ್ಪರ್ವತವು ಹಿಮವನ್ನು ಬಿಟ್ಟರೂ ಸಮುದ್ರವು ತನ್ನ ಮೇರೆಯನ್ನು ಮೀರಿದರೂ ನಾನು ನಮ್ಮ ತಂದೆಯಾದ ದಶರಥರಾಯನ ಆಜ್ಞೆಯನ್ನು ಮಾತ್ರ ಮೀರಲಾರೆನು. ನಿನ್ನ ತಾಯಿಯಾದ ಕೈಕೇಯಿದೇವಿಯು ನಿನಗೆ ರಾಜ್ಯವಾಗಬೇಕೆಂದು ತನ್ನ ಈ ಕಾರ್ಯವನ್ನು ಮಾಡಿದಳು. ಇವನ್ನು ನಾನು ತಪ್ಪಿಸಲು ಇಚ್ಛಿಸುವವನಲ್ಲ. ನಾನು ಕೈಕೇಯಾ ದೇವಿಯನ್ನು ಕೌಸಲ್ಯಾದೇವಿಯಂತೆಯೇ ಕಾಣತಕ್ಕವನು ಎಂದು ನುಡಿದನು. ಈ ಪ್ರಕಾರವಾಗಿ ನುಡಿದ ಸೂರ್ಯಸದೃಶನೂ ಚಂದ್ರನಂತೆ ಕಾಂತಿಯುಕ್ತನೂ ಆದ ಶ್ರೀರಾಮನನ್ನು ಕುರಿತು ಭರತನು ಅಣ್ಣ, ನಾನು ನಿನ್ನ ಮಾತಿಗೆ ಪ್ರತ್ಯುತ್ತರವನ್ನು ಕೊಡಬಾರದು.

**ಹಾಗೆಯೇ ಆಗಲಿ:** ಮತ್ತೊಂದು ಕಾರ್ಯವನ್ನು ಮಾಡಿಕೊಟ್ಟು ನನಗೆ ಅನುಕೂಲನಾಗು. ನಿನ್ನ ಪಾದಗಳಿಂದ ಮೆಟ್ಟುವ ಪಾದುಕೆಗಳನ್ನು ಕೊಡು. ಅವು ಸಮಸ್ತ ಲೋಕಗಳ ಯೋಗಕ್ಷೇಮಗಳನ್ನೂ ನೋಡಿಕೊಳ್ಳಲು ಸಮರ್ಥವಾಗಿವೆ ಎಂದು ಪ್ರಾರ್ಥಿಸಿದನು. ಆ ಮಾತನ್ನಂಗೀಕರಿಸಿ ಪುರುಷೋತ್ತಮನಾದ ಶ್ರೀರಾಮನು ತನ್ನ ಪಾದುಕೆಗಳನ್ನು ಮಹಾತ್ಮನಾದ ಭರತನಿಗೆ ಕೃಪೆಯಿಂದ ಕೊಟ್ಟನು. ಆಮೇಲೆ ಭರತನು ಆ ಪಾದುಕೆಗಳನ್ನು ಮಹಾಪ್ರಸಾದವೆಂದು ಶಿರಸಾವಹಿಸಿ ತೆಗೆದುಕೊಂಡು ಶ್ರೀರಾಮನನ್ನು ನೋಡಿ ಸ್ವಾಮಿ, ಒಡೆಯನಾದ ನೀನು ಹದಿನಾಲ್ಕು ವರುಷಗಳ ಪರ್ಯಂತ ಜಡೆ ನಾರುಬಟ್ಟೆಗಳನ್ನು ಧರಿಸಿ ವ್ರತನಿಯಮದಿಂದಿರುವುದರಿಂದ ನಾನು ಭೋಗವನ್ನನುಭವಿಸಿ ಕೊಂಡಿರಬಾರದು.

ಮುಂದುವರಿಯುವುದು...

# ಸ್ನೇಹದ ಕಡಲಲ್ಲಿ



☛ ವಿಶ್ವಾಸ್.ಡಿ.ಗೌಡ

ಪ್ರತಿಯೊಬ್ಬ ವ್ಯಕ್ತಿಯ ಜೀವನದಲ್ಲಿ ಸ್ನೇಹ ಎಷ್ಟು ಮುಖ್ಯವೋ ಅದೇ ರೀತಿ ನನ್ನ ಜೀವನದಲ್ಲಿಯೂ ಇದೆ. ನನ್ನ ಸ್ನೇಹಿತರ ಗುಂಪು ನನಗೆ ಎರಡನೇ ಕುಟುಂಬದಂತಿದೆ.

ಜೀವನದಲ್ಲಿ ನಿಜವಾದ ಸ್ನೇಹಿತರನ್ನು ಹೊಂದಿರುವ ವ್ಯಕ್ತಿಯು ಸಾಕಷ್ಟು ಅದೃಷ್ಟಶಾಲಿಯಾಗಿರುತ್ತಾನೆ ಸ್ನೇಹವು ಜೀವನವನ್ನು ರೋಮಾಂಚನಗೊಳಿಸುತ್ತದೆ. ಇದು ಜೀವನವನ್ನು ಸಿಹಿ ಅನುಭವವನ್ನು ನೀಡುತ್ತದೆ. ಸ್ನೇಹವು ಒಳ್ಳೆಯದು ಮತ್ತು ಅವಶ್ಯಕವಾಗಿದೆ. ಮನುಷ್ಯ ಏಕಾಂಗಿಯಾಗಿ ಬದುಕಲು ಸಾಧ್ಯವಿಲ್ಲ. ಅವನೊಬ್ಬ ಸಮಾಜ ಜೀವಿ. ತನ್ನ ಸುಖ-ದುಃಖ ಹಂಚಿಕೊಳ್ಳಲು ಯಾರೋ ಒಬ್ಬರು ಬೇಕು. ಸಾಮಾನ್ಯವಾಗಿ, ಅದೇ ವಯಸ್ಸಿನವರು, ಚಾರಿತ್ರ್ಯ ಮತ್ತು ಹಿನ್ನೆಲೆ, ಮನಸ್ಥಿತಿ ಇತ್ಯಾದಿಗಳನ್ನು ಮಾತ್ರ ಅರ್ಥಮಾಡಿಕೊಳ್ಳಬಹುದು ಮತ್ತು ಅವನ ಸಮಸ್ಯೆಗಳನ್ನು ಅರ್ಥಮಾಡಿಕೊಳ್ಳಬಹುದು. ಬೆಂಬಲಕ್ಕಾಗಿ ಮತ್ತು ಹಂಚಿಕೊಳ್ಳಲು ಸ್ನೇಹಿತರು ಅಗತ್ಯವಿದೆ. ಸ್ನೇಹವು ನಿಮ್ಮನ್ನು ಜೋರಾಗಿ ನಗುವಂತೆ ಮಾಡುತ್ತದೆ, ನಿಮ್ಮನ್ನು ಸ್ವಲ್ಪ ದೊಡ್ಡದಾಗಿ ನಗುವಂತೆ ಮಾಡುತ್ತದೆ ಮತ್ತು ನಿಮ್ಮನ್ನು ಉತ್ತಮವಾಗಿ ಬದುಕುವಂತೆ ಮಾಡುತ್ತದೆ.

ತಾಯಿ ಹತ್ತಿರವಿಲ್ಲದಿದ್ದಾಗ ಸ್ನೇಹಿತ ಅಮ್ಮನಂತೆ ವರ್ತಿಸುತ್ತಾನೆ, ತಂದೆಯಂತೆ ಉಪನ್ಯಾಸ ಮಾಡುತ್ತಾನೆ, ಸಹೋದರನಂತೆ ನಕಲು ಮಾಡುತ್ತಾನೆ, ಸಹೋದರಿಯಂತೆ ಹೀಯಾಳಿಸುತ್ತಾನೆ. ಸ್ನೇಹವು ನಮ್ಮ ಸ್ವಾಭಿಮಾನವನ್ನು ಹೆಚ್ಚಿಸುತ್ತದೆ ಮತ್ತು ನಿರ್ಧಾರ ತೆಗೆದುಕೊಳ್ಳುವಲ್ಲಿ ಸಹಾಯ ಮಾಡುತ್ತದೆ.

**ನಿಜವಾದ ಉತ್ತಮ ಸ್ನೇಹಿತನ ಗುಣಗಳು:** ಅಗತ್ಯವಿರುವ ಸ್ನೇಹಿತ



ಉದಯವಾಹಿನಿ ಚಿತ್ರ

ನಿಜವಾದ ಸ್ನೇಹಿತ ಎಂಬ ಮಾತಿದೆ. ಅಗತ್ಯವಿರುವ ಸಮಯದಲ್ಲಿ ಬೆಂಬಲವಾಗಿ ನಿಲ್ಲುವವನು ಉತ್ತಮ ಸ್ನೇಹಿತ. ಒಳ್ಳೆಯ ಸ್ನೇಹಿತನನ್ನು ಹುಡುಕುವುದು ತುಂಬಾ ಕಷ್ಟ. ನಿಮ್ಮ ಹಿಂದೆ ನಿಮ್ಮ ಬಗ್ಗೆ ಕೆಟ್ಟದಾಗಿ ಮಾತನಾಡುವವನು ಉತ್ತಮ ಸ್ನೇಹಿತನಾಗಲು ಸಾಧ್ಯವಿಲ್ಲ.

ನಿಜವಾದ ಮತ್ತು ಉತ್ತಮ ಸ್ನೇಹಿತ ಎಂದಿಗೂ ನಿಮ್ಮನ್ನು ನೋಡಿ ನಗುವುದಿಲ್ಲ ಅಥವಾ ನಿಮ್ಮ ಭಾವನೆಗಳನ್ನು ಗೇಲಿ ಮಾಡುವುದಿಲ್ಲ ಬದಲಿಗೆ ನಿಸ್ವಾರ್ಥವಾಗಿ ನಿಮ್ಮನ್ನು ಪ್ರೋತ್ಸಾಹಿಸಿ ಮತ್ತು ಬೆಂಬಲಿಸಿ. ಉತ್ತಮ ಸ್ನೇಹಿತ ಸ್ವಾರ್ಥಿಯಾಗಲು ಸಾಧ್ಯವಿಲ್ಲ, ಅವನು ಅಥವಾ ಅವಳು ಎಂದಿಗೂ ಯಾವುದೇ ಸ್ವ-ಕೇಂದ್ರಿತ ಮನೋಭಾವವನ್ನು ತೋರಿಸುವುದಿಲ್ಲ.

ಸ್ನೇಹಿತರನ್ನು ಒಳ್ಳೆಯವರನ್ನಾಗಿ ಮಾಡುವ ಹಲವಾರು ಗುಣಗಳಿವೆ, ಒಳ್ಳೆಯ ಸ್ನೇಹಿತನು ಒಳ್ಳೆಯ ಕೇಳುಗನಾಗಿರುತ್ತಾನೆ. ಅವನು ತನ್ನ ಸ್ನೇಹಿತರ ಮಾತುಗಳನ್ನು ಎಂದಿಗೂ ನಿರ್ಲಕ್ಷಿಸುವುದಿಲ್ಲ, ಅವನು ತನ್ನ ಸ್ನೇಹಿತನನ್ನು ತಾಳ್ಮೆಯಿಂದ ಕೇಳುತ್ತಾನೆ.ಅವನು ಯಾವಾಗಲೂ ಸಹಾನುಭೂತಿ, ನಿಷ್ಠಾವಂತ, ಕಾಳಜಿಯುಳ್ಳ ಮತ್ತು ಪ್ರೀತಿಯ ಸ್ವಭಾವವನ್ನು ಹೊಂದಿರುತ್ತಾನೆ. ಇತಿಹಾಸದಿಂದ ಹಲವಾರು ಉದಾಹರಣೆಗಳಿವೆ, ಅದು ನಮಗೆ ನಿಜವಾದ ಸ್ನೇಹದ ಮೌಲ್ಯಗಳನ್ನು ಕಲಿಸುತ್ತದೆ, ಸ್ವಂತ ಒಳ್ಳೆಯದಕ್ಕಾಗಿ ಅವುಗಳನ್ನು ಪೋಷಿಸುವ ಅಗತ್ಯವನ್ನು ನೀಡುತ್ತದೆ. ಸ್ನೇಹವು ಯಾರಾದರೂ ಬಯಸಬಹುದಾದ ಅತ್ಯುತ್ತಮ ಬಂಧಗಳಲ್ಲಿ ಒಂದಾಗಿದೆ. ಅವರು ನಂಬಬಹುದಾದ ಸ್ನೇಹಿತರನ್ನು ಹೊಂದಿರುವವರು ಅದೃಷ್ಟವಂತರು. ಸ್ನೇಹವು ಇಬ್ಬರು ವ್ಯಕ್ತಿಗಳ ನಡುವಿನ ಸಮರ್ಪಿತ ಸಂಬಂಧವಾಗಿದೆ. ಸ್ನೇಹಿತನ ಸಹವಾಸವು ಜೀವನದುದ್ದಕ್ಕೂ ಆನಂದಿಸುವ ವಿಷಯವಾಗಿದೆ, ಸ್ನೇಹಿತರನ್ನು ಮನುಷ್ಯನು ಹೊಂದಬಹುದಾದ ಅತ್ಯುತ್ತಮ ನಿಧಿ ಎಂದು ಪರಿಗಣಿಸಬೇಕು.

ಜಾಗತಿಕ ಆರೋಗ್ಯ ಸುಧಾರಣೆ, ಮಳೆ ಬೀಳಲು, ಪ್ರಕೃತಿ ವಿಕೋಪ ತಪ್ಪಿಸುವ ಕೀರ್ತಿ ಗಿಡ, ಮರಗಳಿಗೆ ಸಲ್ಲುತ್ತದೆ

# ಜನರಿಗೆ ಧ್ವನಿ ಕೊಟ್ಟ ಶಕ್ತಿ ಮಾಧ್ಯಮದವರಿಗೆ ಸಲ್ಲುತ್ತದೆ: ಈಶ್ವರ ಖಂಡ್ರೆ

• ಉದಯವಾಹಿನಿ ಬೀದರ್

ಜನರಿಗೆ ಧ್ವನಿ ತಂದು ಕೊಟ್ಟ ಶಕ್ತಿ ಮಾಧ್ಯಮಗಳಿಗೆ ಸಲ್ಲುತ್ತದೆ ಎಂದು ರಾಜ್ಯದ ಅರಣ್ಯ, ಪರಿಸರ ಹಾಗೂ ಜೀವಶಾಸ್ತ್ರ ಮತ್ತು ಜಿಲ್ಲಾ ಉಸ್ತುವಾರಿ ಮಂತ್ರಿ ಈಶ್ವರ ಖಂಡ್ರೆ ಅವರು ಹೇಳಿದರು.

ನಗರದ ಮೈಲೂರು ರಸ್ತೆಯಲ್ಲಿರುವ ಜಿ.ಎನ್.ಡಿ ಕಾಲೇಜು ಕ್ಯಾಂಪಸ್‌ನ ಗುರುನಾನಕ ಭವನ ಅವರಣದಲ್ಲಿ ಕರ್ನಾಟಕ ಮಾಧ್ಯಮ ಅಕಾಡೆಮಿ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಗಳ ಸಹಯೋಗದಲ್ಲಿ ಕಲ್ಯಾಣ ಕರ್ನಾಟಕ ಭಾಗದ ಪತ್ರಕರ್ತರಿಗೆ ಒಂದು ದಿನದ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿರುವ ಅವರು, ಶಾಸಕಾಂಗ, ಕಾರ್ಯಾಂಗ ಹಾಗೂ ನ್ಯಾಯಾಂಗಗಳ ಸಂದೇಶವನ್ನು ಸಾರ್ವಜನಿಕರಿಗೆ ತಲುಪಿಸುವುದರ ಜೊತೆಗೆ ಈ ಅಂಗಗಳ ನ್ಯೂನ್ಯತೆಯನ್ನು ಎತ್ತಿ ಹಿಡಿಯುವ, ಪ್ರಗತಿದಾಯಕ ಕಾರ್ಯ ಮಾಡಿದರೆ ಅವನ್ನು ಪ್ರಶಂಸಿಸುವ ಕಾರ್ಯ ಮಾಧ್ಯಮಗಳು ಮಾಡುತ್ತವೆ ಎಂದರು.

ಜಾಗತಿಕ ಆರೋಗ್ಯ ಸುಧಾರಣೆ, ಮಳೆ ಬೀಳಲು, ಪ್ರಕೃತಿ ವಿಕೋಪ ತಪ್ಪಿಸುವ ಕೀರ್ತಿ ಗಿಡ, ಮರಗಳಿಗೆ ಸಲ್ಲುತ್ತದೆ. ಪ್ರಕೃತಿಯನ್ನು ಉಳಿಸಿ, ಬೆಳೆಸುವ ಜವಾಬ್ದಾರಿ ಈ ದೇಶದ ಪ್ರತಿಯೊಬ್ಬ ಪ್ರಜೆಗಳದ್ದು. ಆಮ್ಲಜನಿಕ ನಮ್ಮ ಪಾಲಿನ ಸಂಜೀವಿನಿ. ಕೋವಿಡ ಸಂದರ್ಭದಲ್ಲಿ ಆಮ್ಲಜನಿಕ ಕೊರತೆಯಿಂದ ಸಾವಿರಾರು ಜನರು ತಮ್ಮ ಪ್ರಾಣ ಕಳೆದುಕೊಂಡಿದ್ದಾರೆ. ಮುಂದಿನ ಪೀಳಿಗೆಗೆ ಆಮ್ಲಜನಿಕದ ಕೊರತೆ ಆಗದಂತೆ ತಡೆಯಲು ರಾಜ್ಯದಲ್ಲಿ 15 ಕೋಟಿ ಸಸಿಗಳನ್ನು ನೆಡಲಾಗಿದೆ. ಬೀದರ್ ಜಿಲ್ಲೆಯಲ್ಲಿ ಕಳೆದ ಎರಡು ವರ್ಷಗಳಲ್ಲಿ 35 ಲಕ್ಷ ಸಸಿಗಳನ್ನು ನೆಡಲಾಗಿದೆ. ಬಳ್ಳಾರಿ ಹಾಗೂ ವಿಜಯನಗರ ಹೊರತುಪಡಿಸಿ ಕಲ್ಯಾಣ ಕರ್ನಾಟಕ ಭಾಗದ ಉಳಿದ ಐದು ಜಿಲ್ಲೆಗಳಲ್ಲಿ ಹಸಿರು ಹೊದಿಕೆ ಹೆಚ್ಚಳಕ್ಕೆ ಕ್ರಮ ವಹಿಸಲಾಗಿದೆ. ಪ್ಲಾಸ್ಟಿಕ್ ಮುಕ್ತ



☛ ಉದಯವಾಹಿನಿ ಚಿತ್ರ

ರಾಜ್ಯವನ್ನಾಗಿಸಲು ಎಲ್ಲರು ಕೈಜೋಡಿಸಬೇಕೆಂದು ಕರೆ ನೀಡಿದರು. ಶರಣರು, ಸಂತರ ನಾಡು ಈ ಬೀದರ್‌ನಲ್ಲಿ ಅಕಾಡೆಮಿ ಕಾರ್ಯಕ್ರಮ ಆಯೋಜನೆ ಮಾಡಿದ್ದು ಸಂತಸದ ಸಂಗತಿ. ಮಧ್ಯಮ ಆಡಳಿತದ ನಾಲ್ಕನೇ ಅಂಗ, ಅದನ್ನು ತಿದ್ದುವ ಕೆಲಸ ಮಾಧ್ಯಮ ರಂಗ ಮಾಡುತ್ತದೆ. ಜನಾಭಿಪ್ರಾಯ ಮೂಡಿಸುವ ಕಾರ್ಯ ಮಾಧ್ಯಮ ರಂಗ ಮಾಡುತ್ತಾ ಬಂದಿದೆ. ಇದು ಶ್ರೇಷ್ಠ ಸೇವಾ ಕಾರ್ಯ. ಅನೇಕರು ಮಾಧ್ಯಮ ರಂಗದಲ್ಲಿ ಸೇವೆ ಮಾಡಿದ್ದಾರೆ. ಮಾಧ್ಯಮದಲ್ಲಿ ನಾವು ಎಂದಿಗೂ ಮುಂದೆ ಲೇಖನಿ ಖಡ್ಗಗಿಂತ ಹರಿತವಾದದ್ದು ಅದನ್ನು ಸದ್ಬಳಕೆ ಮಾಡಿಕೊಳ್ಳಬೇಕು. ನಾವು ಇವತ್ತು ನೋಡುತ್ತೇವೆ. ಸತ್ಯ ಮರೆಮಾಚದೆ ಉತ್ತಮ ಕಾರ್ಯ ಮಾಡಬೇಕು. ಕರ್ನಾಟಕ ಮಾಧ್ಯಮ ಅಕಾಡೆಮಿ ಅಧ್ಯಕ್ಷೆ ಆಯೆಶಾಖಾನಂ ಅವರು ಪ್ರಾಸ್ತಾವಿಕವಾಗಿ ಮಾತನಾಡಿ ನಾಡಿನ ಕಿರೀಟ ಹತ್ತಾರು ಸಾಂಪ್ರದಾಯಿಕ ಸಾಂಸ್ಕೃತಿಕ ಮಿಲನ ಈ ಬೀದರ್, ಇಲ್ಲಿನ ನಾಯಕತ್ವ ವಿಶಿಷ್ಟವಾಗಿದೆ, ಇಲ್ಲಿನ ನಾಯಕರು ಸಹ ಈ ಭಾಗದ ಅಭಿವೃದ್ಧಿಗೆ ಪಣ ತೊಟ್ಟಿದ್ದಾರೆ. ಈ ಕಾರ್ಯಕ್ರಮದ ಉದ್ದೇಶ ಪತ್ರಕರ್ತರ ಮಾಧ್ಯಮ ಮಿತ್ರರಿಗೆ ಪ್ರೇರಣೆ ನೀಡುವ ಕೆಲಸ ಮಾಡುವುದು, ಹೊಸ ತಾಂತ್ರಿಕ ಯುಗದಲ್ಲಿ.

ಗ್ರಾಮೀಣ ಪತ್ರಕರ್ತರು ನಿಜವಾದ ಸುದ್ದಿಗಳನ್ನು ಬಿಡುತ್ತಾರೆ. ಧ್ವನಿ ಇಲ್ಲದವರಿಗೆ ಧ್ವನಿ ಕೊಡುತ್ತಾರೆ ಅಂತಹವರಿಗೆ ತರಬೇತಿ ನೀಡುವ ಕಾರ್ಯ ಅಕಾಡೆಮಿ ಮಾಡುತ್ತಿದೆ. ಎಐ ಮಾರಕ ಅಲ್ಲ ಅದು ಪೂರಕವಾಗಿ ಕೆಲಸಮಾಡುತ್ತದೆ. ಪತ್ರಕರ್ತರು ಗುಂಪು ಗಳಾಗಿ ಒಡೆದು ಹೋಗಿದ್ದೇವೆ ನಾವುಗಳು ಒಗ್ಗೂಡುವ ಕಾರ್ಯವಾಗಬೇಕಾಗಿದೆ, ವೃತ್ತಿ ಬಗ್ಗೆ ಆತ್ಮಾವಲೋಕನ ಮಾಡಿಕೊಳ್ಳುವ ಕೆಲಸ ಆಗಬೇಕು. ತರಬೇತಿ ನೀಡುವ ಮೂಲಕ ಮಾಧ್ಯಮ ಅಕಾಡೆಮಿ ತರಬೇತಿ ಯೋಜನೆಗಳನ್ನು ರೂಪಿಸಿ ಕೌಶಲ್ಯ ಅಭಿವೃದ್ಧಿ ಮಾಡಲು ಪಣ ತೊಟ್ಟಿದೆ. ಜರ್ನಲಿಸಂ ಅಂದ್ರೆ ಕೇವಲ ಅಂಕಣ ಬರೆಯುವುದು ಅಲ್ಲ ಅದು ಒಂದು ರೀತಿಯ ನಾಯಕತ್ವ, ಯುವ ಪತ್ರಕರ್ತರು ತರಬೇತಿ ಹೊಂದಿ ಕೌಶಲ್ಯ ಬೆಳೆಸಿಕೊಳ್ಳಬೇಕು, ಮಾಧ್ಯಮ ವೃತ್ತಿ ಶ್ರೇಷ್ಠ ವೃತ್ತಿ ಎಂದು ತಿಳಿಸಿದರು.

ಕ.ಕರ್ನಾಟಕ ಅಭಿವೃದ್ಧಿಗೆ ಮಾಧ್ಯಮದ ಪಾತ್ರ ಏನು ಎನ್ನುವುದು ತಿಳಿಯುವುದು ಅತ್ಯವಶ್ಯಕವಾಗಿದೆ, ಆ ಸಂಬಂಧ ಕಾರ್ಯಕ್ರಮ ಆಯೋಜಿಸಲಾಗಿದೆ. ಫ್ಯಾಕ್ಟ್ ಸರ್ಚ್ ಆಗಬೇಕು ಫೇಕ್ ನ್ಯೂಸ್ ಗಳು ಮಾಧ್ಯಮಕ್ಕೆ ವಿಷಯವಾಗಿ ಕಾರ್ಯ ಮಾಡುತ್ತದೆ.
-ಆಯೆಶಾಖಾನಂ

**ಯೋಜನೆಗಳ ಬಗ್ಗೆ ಜಾಗೃತಿ**

ಜಿಲ್ಲೆಯಲ್ಲಿ ಮಾಧ್ಯಮ ತರಬೇತಿ ಕೇಂದ್ರ ಸ್ಥಾಪನೆಗೆ ಒತ್ತು ನೀಡಿದಲ್ಲಿ ನಿವೇಶನ ನೀಡಿ ತರಬೇತಿ ಕೇಂದ್ರ ಸ್ಥಾಪನೆ ಮಾಡಲು ಅನುಕೂಲವಾಗಿ ಇಲ್ಲಿನ ಪತ್ರಕರ್ತರ ಕೌಶಲ್ಯ ಅಭಿವೃದ್ಧಿಗೆ ಸಹಕಾರಿ ಆಗುತ್ತದೆ ಎಂದು ತಿಳಿಸಿದರುಪರಿಸರ ಸಂರಕ್ಷಣೆ, ಸೇರಿದಂತೆ ಹತ್ತು ಹಲವು ಯೋಜನೆಗಳ ಬಗ್ಗೆ ಜಾಗೃತಿ ಮೂಡಿಸುವ ಕಾರ್ಯ ಮಾಧ್ಯಮ ರಂಗ ಮಾಡುತ್ತಾ ಬರುತ್ತಿದೆ. ಇವತ್ತು ನಾವು ಪ್ಲಾಸ್ಟಿಕ್ ತ್ಯಾಜ್ಯದಿಂದ ಆಗುವ ಅನಾಹುತಗಳ ಬಗ್ಗೆ ಜನರ ಗಮನಕ್ಕೆ ತರಬೇಕು. ಏಕ ಬಳಕೆ ಪ್ಲಾಸ್ಟಿಕ್ ಮುಕ್ತ ಜಿಲ್ಲೆ, ರಾಜ್ಯ ಮಾಡಬೇಕಾಗಿದೆ. ಗಣೇಶ ಚತುರ್ಥಿಗೆ ಪಿಒಪಿ ಗಣೇಶ ಬಳಸದೆ ಮಣ್ಣಿನ ಪರಿಸರ ಸ್ನೇಹಿ ಗಣೇಶ ಕೂರಿಸುವ ಕೆಲಸ ಮಾಡಬೇಕು. ಧಾರ್ಮಿಕ ವಿಚಾರಗಳನ್ನು ಉಳ್ಳವರು ಸಹ ಅನೇಕ ಜನ ಮಣ್ಣಿನ ಗಣಪತಿ ಬಳಸುತ್ತಾರೆ, ಜನರಿಗೆ ಮಾರಕ ಆಗಿರುವ ಪಿಒಪಿ ಗಣಪತಿ ಬಳಸದೆ ಮಣ್ಣಿನ ಗಣಪತಿ ಕೂರಿಸಿ ಪರಿಸರ ಸ್ನೇಹಿ ಗಣೇಶ ಉತ್ಸವ ಆಚರಣೆ ಮಾಡಬೇಕು ಎಂದು ತಿಳಿಸಿದರು.

ಮುದ್ರಣ ಮಾಧ್ಯಮ ವಿಶ್ವಾಸಾರ್ಹತೆ ಉಳಿಸಿಕೊಂಡಿದೆ. ಜಗತ್ತಿನಲ್ಲಿ ಯಾರೂ ಪರಿಪೂರ್ಣ ಅಲ್ಲ ಅದಕ್ಕಾಗಿ ನೀವು ನಿತ್ಯ ಅಧ್ಯಯನ ಮಾಡುವ ಅವಶ್ಯಕತೆ ಇದೆ ಕೃತಕ ಬುದ್ಧಿ ಮತ್ತೆಯಿಂದ ಅನೇಕ ಆತಂಕಗಳು ಇವೆ ನಿರುದ್ಯೋಗ ಸಮಸ್ಯೆ ಆಗುವುದೇ ಎಂದು ಭಯ ಇದೆ ಆದರೆ ಅದು ಆಗುವುದಿಲ್ಲ. ನಮ್ಮ ದೇಶದ ಬುದ್ಧಿಮತ್ತಿಗೆ ಬಹಳ ಬೆಲೆ ಇದೆ. ಸುದ್ದಿಯಲ್ಲಿ ನಿಖರತೆ ಇರುವುದು ಮುಖ್ಯವಾಗಿದೆ, ಬರೆಯುವ ಮುಂಚೆ ಸತ್ಯ ಸತ್ಯತೆ ತಿಳಿದುಕೊಂಡು ಬರೆದರೆ ವಿಶ್ವಾಸಾರ್ಹತೆ ಬೆಳೆಯುತ್ತದೆ. ನಮ್ಮ ಸಂಹವನ ಉತ್ತಮವಾಗಿ ಮಾಡಿದರೆ ಸುದ್ದಿ ಹೆಕ್ಕಿ ತೆಗೆಯಲು ಸಾಧ್ಯ ಆಗುತ್ತದೆ. -ಈಶ್ವರ ಖಂಡ್ರೆ, ಸಚಿವ

## ಮಿನಿ ನ್ಯೂಸ್

### ಅಡಿಕೆಗೆ ಮನಸೋತ ರೈತರು ಕಡಿಮೆಯಾಗುತ್ತಿರುವ ಭತ್ತ

• ಉದಯವಾಹಿನಿ ಬಸವಾಪಟ್ಟಣ

ವರ್ಷ ವರ್ಷವೂ ಅಡಿಕೆ ದರ ಹೆಚ್ಚುತ್ತಿದ್ದು, ರೈತರು ಅಡಿಕೆ ಬೆಳೆಗೆ ಮನಸೋತಿರುವುದರಿಂದ ಈ ಭಾಗದ ಭತ್ತ ಬೆಳೆಯುವ ಭೂಮಿ ಕಡಿಮೆಯಾಗುತ್ತಿದೆ. ಇಲ್ಲಿನ ರೈತ ಸಂಪರ್ಕ ಕೇಂದ್ರದ ವ್ಯಾಪ್ತಿಯಲ್ಲಿ ಈ ವರ್ಷದ ಮಳೆಗಾಲದ ಭತ್ತದ ನಾಟಿ 2,000 ಹೆಕ್ಟೇರ್‌ಗೆ ಇಳಿಕೆಯಾಗಿದೆ.

10 ವರ್ಷದ ಹಿಂದೆ ಬಸವಾಪಟ್ಟಣ ರೈತ ಸಂಪರ್ಕ ಕೇಂದ್ರದ ವ್ಯಾಪ್ತಿಯಲ್ಲಿ 4,000 ಹೆಕ್ಟೇರ್ ಪ್ರದೇಶದಲ್ಲಿ ಭತ್ತ ಬೆಳೆಯಲಾಗುತ್ತಿತ್ತು. ಅದು ಈಗ ಅರ್ಧ ಪ್ರಮಾಣಕ್ಕೆ ಇಳಿದಿದೆ. ಹಿಂದೆ ಕೇವಲ 4,000 ಹೆಕ್ಟೇರ್‌ನಲ್ಲಿ ಬೆಳೆಯುತ್ತಿದ್ದ ಅಡಿಕೆ ಈಗ 18 ಸಾವಿರ ಹೆಕ್ಟೇರ್‌ಗೆ ಏರಿಕೆಯಾಗಿದೆ. ಚನ್ನಗಿರಿ ತಾಲ್ಲೂಕಿನಲ್ಲಿ ಈಗ ಅಂದಾಜು 40,000 ಹೆಕ್ಟೇರ್ ಪ್ರದೇಶದಲ್ಲಿ ಅಡಿಕೆ ಬೆಳೆಯಲಾಗುತ್ತಿದೆ. ಇದಕ್ಕೆ ಅಡಿಕೆ ಕ್ವಿಂಟಲ್‌ಗೆ 50,000ಕ್ಕೆ ಏರಿಕೆಯಾಗಿರುವುದು ಮುಖ್ಯ ಕಾರಣ ಎನ್ನುತ್ತಾರೆ ರೈತ ಜಿ.ಎಂ.ಚನ್ನಬಸಪ್ಪ.

### ಬೇರ್ಪಟ್ಟ ರೈಲಿನ ಎಂಜಿನ್: ತಪ್ಪಿದ ಅವಘಡ


• ಉದಯವಾಹಿನಿ ಶಿವಮೊಗ್ಗ

ಇಲ್ಲಿನ ತುಂಗಾ ನದಿ ಸೇತುವೆ ಮೇಲೆ ತಾಳಗುಪ್ಪದಿಂದ ಮೈಸೂರಿಗೆ ಹೊರಟಿದ್ದ ಇಂಟರ್‌ಸಿಟಿ ಎಕ್ಸ್‌ಪ್ರೆಸ್ (ಸಂಖ್ಯೆ-16205) ರೈಲಿನ ಬೋಗಿಗಳ ನಡುವಿನ ಸಂಪರ್ಕ ಕೊಂಡಿ (ಅನ್ ಕಪ್ಲಿಂಗ್) ಕಳಚಿ ಬುಧವಾರ ಸಂಜೆ ಆತಂಕ ಮೂಡಿಸಿತ್ತು. ಸಂಜೆ 5 ಗಂಟೆಗೆ ಶಿವಮೊಗ್ಗ ರೈಲು ನಿಲ್ದಾಣದಿಂದ ಹೊರಟ ರೈಲು, ಗುಂಡಪ್ಪ ಶೆಡ್-ಸ್ಯಾಂಡಲ್ ಫ್ಯಾಕ್ಟರಿ ನಡುವಿನ ತುಂಗಾ ನದಿ ಸೇತುವೆಯ ಮೇಲೆ ತೆರಳುತ್ತಿದ್ದ ವೇಳೆ ಅದರ 16 ಬೋಗಿಗಳ ಪೈಕಿ 6 ಬೋಗಿಗಳು ಬೇರೆಯಾಗಿವೆ. ಸ್ವಲ್ಪ ದೂರ ತೆರಳಿ ಚಾಲಕ ರೈಲು ನಿಲ್ಲಿಸಿದ್ದಾರೆ. ವಿಷಯ ತಿಳಿದು ರೈಲ್ವೆ ಎಂಜಿನಿಯರಿಂಗ್ ವಿಭಾಗದ ತಂತ್ರಜ್ಞರು ಸ್ಥಳಕ್ಕೆ ತೆರಳಿ ಆರು ಬೋಗಿಗಳನ್ನು ಮರು ಜೋಡಿಸಿದರು.

## ಆ.9 ರಿಂದ ಸಗರನಾಡಿನ ಆರಾಧ್ಯದೈವ ಶ್ರೀ ಹೈಯ್ಯಾಳಲಿಂಗೇಶ್ವರ ಜಾತ್ರೆ

• ಉದಯವಾಹಿನಿ ವಡಗೇರಾ

ತಾಲ್ಲೂಕಿನ ಹೈಯ್ಯಾಳ.ಬಿ.ಗ್ರಾಮದ ಸಗರನಾಡಿನ ಆರಾಧ್ಯದೈವ ಶ್ರೀ ಹೈಯ್ಯಾಳ ಲಿಂಗೇಶ್ವರ ಜಾತ್ರಾ ಮಹೋತ್ಸವ ಆಗಸ್ಟ್ 9.ರಿಂದ 13.ರವರೆಗೆ ಅತ್ಯಂತ ವಿಜ್ರಂಭಣೆಯಿಂದ ನಡೆಯಲಿದೆ ಎಂದು ದೇವಸ್ಥಾನದ ಸಮಿತಿಯವರು ತಿಳಿಸಿದ್ದಾರೆ. ದಿ.9 ಶನಿವಾರ ದಂದು ಬೆಳಿಗ್ಗೆ 10.ಗಂಟೆಗೆ ಹೈಯಾಳಲಿಂಗೇಶ್ವರ ಗದ್ದುಗೆಗೆ ಹೂ ಏರಿಸುವ ಕಾರ್ಯಕ್ರಮ ನೆರವೇರಲಿದೆ ಅಂದು ಸಾಯಂಕಾಲ 5.ಗಂಟೆಗೆ ಹೈಯ್ಯಾಳಲಿಂಗೇಶ್ವರರ ದೇವರ ಪಲ್ಲಕ್ಕಿಯು ಗ್ರಾಮದ ಸಮೀಪವಿರುವ ಕೃಷ್ಣಾ ನದಿಗೆ ಗಂಗಾಸ್ನಾನಕ್ಕೆ ತೆರಳಿ ಅಲ್ಲಿ ಗಂಗಾಸ್ನಾನ ಮುಗಿಸಿ ನಂತರ ಇಡೀ ರಾತ್ರಿ ಕೃಷ್ಣಾ ನದಿ ತಟದಲ್ಲಿ ಡೊಳ್ಳಿನ ಪದ ಹಾಗೂ ಭಜನಾ ಕಾರ್ಯಕ್ರಮಗಳು ಜರುಗಲಿವೆ ದಿ:10 ರಂದು ರವಿವಾರ ಬೆಳಿಗ್ಗೆ 5:ಗಂಟೆಗೆ ದೇವರ ಪಲ್ಲಕ್ಕಿಯು ಗ್ರಾಮದ ಸಮೀಪದಲ್ಲಿರುವ ಆಳ ಮೇಲೆ ಹತ್ತಿರ ಬಂದು ಪೂಜಾರಿಗಳಿಂದ ದೇವರ ಹೇಳಿಕೆ ಜರಗುತ್ತದೆ



☛ ಉದಯವಾಹಿನಿ ಚಿತ್ರ

**ಗದ್ದುಗೆಗೆ ಸಹೂ ಏರಿಸುವ ಕಾರ್ಯಕ್ರಮ**

ತದನಂತರ ಡೊಳ್ಳು ಬಾಜಾ ಭಜಂತ್ರಿಗಳೊಂದಿಗೆ ಹೈಯ್ಯಾಳ ಲಿಂಗೇಶ್ವರ ಪಲ್ಲಕ್ಕಿ ಮೆರವಣಿಗೆಯೊಂದಿಗೆ ದೇವಸ್ಥಾನಕ್ಕೆ ತಲುಪಿ ದೇವಸ್ಥಾನದಲ್ಲಿ ಪಲ್ಲಕ್ಕಿಯು ಮೂರು ಸುತ್ತು ತಿರುಗಿ ಬೆಳಿಗ್ಗೆ 11 ಗಂಟೆಗೆ ದೇವರುಗಳನ್ನು ಕರ್ತೃ ಗದ್ದುಗೆ ಮೇಲೆ ಕೂರಿಸಲಾಗುವುದು ಆ ನಂತರ 21 ದಿನಗಳ ಕಾಲ ದೇವರಿಗೆ ಒಂದೊತ್ತು ಇರುವ ಭಕ್ತರು ಅಂದು ವ್ರತಾ ಕೊನೆಗೊಳಿಸಿ ಹೋಳಿಗೆ ಕರ್ಜಕಾಯಿ ಇನ್ನಿತರ ಸಿಹಿ ಖಾದ್ಯಗಳನ್ನು ತಯಾರಿಸಿ ಮಹಿಳೆಯರು ಬುಟ್ಟಿಯಲ್ಲಿ ತುಂಬಿಕೊಂಡು ತಲೆಯ ಮೇಲೆ ಹೊತ್ತು ತಂದು ದೇವರಿಗೆ ನೈವಿದ್ಯ ಅರ್ಪಿಸುವರು ಅಂದಿನ ದಿನ ಭಕ್ತರು ಜವಳ ದೀಡ ನಮಸ್ಕಾರ ಹರಕೆ ಸಲ್ಲಿಸುವರು.

ಈ ಜಾತ್ರೆಯು ಐದು ದಿನಗಳ ಕಾಲ ಅತ್ಯಂತ ವಿಜ್ರಂಭಣೆಯಿಂದ ಜರಗುತ್ತದೆ ದಿ:13 ರಂದು ಗುಡಿ ತೊಳೆಯುವ ಪೂಜಾ ಕಾರ್ಯಕ್ರಮದೊಂದಿಗೆ ಈ ಜಾತ್ರೆಯು ಸಂಪನ್ನಗೊಳ್ಳಲಿದೆ.

ಈ ಜಾತ್ರೆಗೆ ಜಿಲ್ಲೆ ಹಾಗೂ ಹೊರ ಜಿಲ್ಲೆಗಳಿಂದ ಅತಿ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಭಾಗವಹಿಸಿ ಶ್ರೀ ಹೈಯ್ಯಾಳಲಿಂಗೇಶ್ವರ ಕೃಪೆಗೆ ಪಾತ್ರರಾಗುತ್ತಾರೆ ಪರಸ್ಥಳದಿಂದ ಬಂದಂತ ಭಕ್ತರಿಗೆ ಎಲ್ಲಾ ರೀತಿಯ ಸಕಲ ಸೌಲಭ್ಯಗಳನ್ನು ಒದಗಿಸಲು ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಶ್ರೀ ಹೈಯ್ಯಾಳಲಿಂಗೇಶ್ವರ ದೇವಸ್ಥಾನ ಸಮಿತಿಯವರು ತಿಳಿಸಿದ್ದಾರೆ.

## ಆರೋಗ್ಯವಂತ ಸಮಾಜ ನಿರ್ಮಾಣ ಯುವಕರ ಗುರಿಯಾಗಲಿ: ಪ್ರಾಚಾರ್ಯ ಶ್ರೀನಿವಾಸ ನರಗುಂದ

• ಉದಯವಾಹಿನಿ ಬಾಗಲಕೋಟ

ದುಶ್ಚಟಗಳಿಂದ ದೂರವಿದ್ದು ತಮ್ಮ ಆರೋಗ್ಯ ರಕ್ಷಣೆಯನ್ನು ಮಾಡಿಕೊಂಡು ಆರೋಗ್ಯವಂತ ಸಮಾಜ ನಿರ್ಮಾಣ ಮಾಡುವಲ್ಲಿ ಯುವಕರು ಮಹತ್ವದ ಪಾತ್ರವನ್ನು ನಿರ್ವಹಿಸಬೇಕು ಎಂದು ಪ್ರಾಚಾರ್ಯ ಶ್ರೀನಿವಾಸ ನರಗುಂದ ಹೇಳಿದರು.

ಇಲ್ಲಿನ ವಿದ್ಯಾ ಪ್ರಸಾರಕ ಮಂಡಳದ ಎಸ್.ಆರ್.ನರಸಾಪೂರ ಕಲಾ ಮತ್ತು ಎಂ.ಬಿ.ಶಿರೂರ ವಾಣಿಜ್ಯ ಮಹಾವಿದ್ಯಾಲಯದ ಎನ್‌ಎಸ್‌ಎಸ್‌ಘಟಕ 1 ಮತ್ತು 2 ಹಾಗೂ ಐ.ಕ್ಯೂ.ಎ.ಸಿ ಆಯೋಜಿಸಿದ್ದ 'ವ್ಯಸನಮುಕ್ತ ದಿನಾಚರಣೆ' ಕಾರ್ಯಕ್ರಮದಲ್ಲಿಅವರು ಮಾತನಾಡಿದರು. ದೇಶದ ಭವಿಷ್ಯವಾಗಿರುವ ಯುವಜನತೆ ಉತ್ತಮ ಆರೋಗ್ಯದ ಮಹತ್ವವನ್ನು ಅರಿಯಬೇಕು.



☛ ಉದಯವಾಹಿನಿ ಚಿತ್ರ

ಉತ್ತಮ ಆರೋಗ್ಯವಿದ್ದಾಗ ಮಾತ್ರ ಸಾಧನೆ ಸಾಧ್ಯ ಎಂಬ ಅಂಶವನ್ನು ತಿಳಿದುಕೊಳ್ಳಬೇಕು. ವಿದ್ಯಾರ್ಥಿಗಳು ವ್ಯಸನಗಳಿಂದ ದೂರವಿದ್ದು ಉತ್ತಮ ಹವ್ಯಾಸಗಳಿಂದ ಒಳ್ಳೆಯ ಆರೋಗ್ಯವನ್ನು ಪಡೆದುಕೊಂಡು ಉತ್ತಮ ಸಮಾಜ ನಿರ್ಮಾಣಕ್ಕೆ ಕಾರಣರಾಗಬೇಕು. ಒಳ್ಳೆಯ ಸ್ನೇಹಿತರನ್ನು ಹೊಂದಿ ರಚನಾತ್ಮಕ ಕಾರ್ಯಗಳಲ್ಲಿ ತೊಡಗಿಸಿಕೊಳ್ಳಬೇಕು. ಮಾದಕ ವಸ್ತುಗಳ ಬಳಕೆಯನ್ನು ತಡೆಗಟ್ಟಿ ವ್ಯಕ್ತಿ ಮತ್ತು ಸಮಾಜದ ಆರೋಗ್ಯವನ್ನು ರಕ್ಷಿಸಿಕೊಳ್ಳಬೇಕು ಎಂದರು.

### ಸುಂದರ ಬದುಕಿಗೆ ಶಿಕ್ಷಣ ಅಗತ್ಯ

• ಉದಯವಾಹಿನಿ ಕೂಡಲಸಂಗಮ

ಸುಂದರ ಬದುಕಿಗೆ ಶಿಕ್ಷಣ ಅಗತ್ಯ. ಪ್ರತಿಯೊಬ್ಬ ವಿದ್ಯಾರ್ಥಿಯು ಶಿಕ್ಷಣ, ಸಂಸ್ಕಾರ ಪಡೆಯುವುದರ ಮೂಲಕ ಸುಂದರ ಬದುಕು ನಿರ್ಮಿಸಿಕೊಳ್ಳಬೇಕು ಎಂದು ಬಾಗಲಕೋಟೆ ಬಸವೇಶ್ವರ ವಿದ್ಯಾವರ್ಧಕ ಸಂಘದ ಆಡಳಿತ ಮಂಡಳಿ ಸದಸ್ಯ ಎಸ್.ಆರ್.ಮನಹಳ್ಳಿ ಹೇಳಿದರು. ಕೂಡಲಸಂಗಮದ ಸಂಗಮೇಶ್ವರ ಪದವಿ ಪೂರ್ವ ಕಾಲೇಜುನಲ್ಲಿ ನಡೆದ ಬೀಳೂರು ಗುರುಬಸವ ಸ್ವಾಮೀಜಿಯವರ ಶ್ರಾವಣ ಮಾಸ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.


ಬೀಳೂರು ಗುರುಬಸವ ಸ್ವಾಮೀಜಿ ಉತ್ಸವ ಸಮಿತಿ ಸದಸ್ಯ ಗಂಗಾಧರ ನರೆಗಲ್ಲ ಮುಖ್ಯ ಅತಿಥಿಯಾಗಿದ್ದರು. ಸಂಸ್ಕೃತ ಪಾಠ ಶಾಲೆಯಿಂದ ಆರಂಭವಾದ ಬಸವೇಶ್ವರ ವಿದ್ಯಾವರ್ಧಕ ಸಂಘ ಇಂದು ಶಿಕ್ಷಣ ಕ್ಷೇತ್ರದ ಎಲ್ಲಾ ಕೋರ್ಸಗಳನ್ನು ಹೊಂದಿದೆ. 170 ಅಂಗಸಂಸ್ಥೆಗಳನ್ನು ರಾಜ್ಯದಾದ್ಯಂತ ಹೊಂದಿದ್ದು, ಪ್ರತಿ ವರ್ಷ 3 ಲಕ್ಷಕ್ಕೂ ಅಧಿಕ ವಿದ್ಯಾರ್ಥಿಗಳು ಅಧ್ಯಯನ ಮಾಡುವರು 6 ರಿಂದ 7ಸಾವಿರ ಶಿಕ್ಷಕರು ಸಂಘದಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ. ವೀರಣ್ಣ ಚರಂತಿಮಠ ಅವರ ಶಿಸ್ತುಬದ್ಧ ಆಡಳಿತದಿಂದ ಬಸವೇಶ್ವರ ವಿದ್ಯಾವರ್ಧಕ ಸಂಘ ಹೆಮ್ಮರವಾಗಿ ಬೆಳೆದಿದೆ. ರಾಜ್ಯದಲ್ಲಿಯೇ ಹೆಸರು ಪಡೆದ ಸಂಘ ಇದಾಗಿದ್ದು, ಶತಮಾನೋತ್ಸವವನ್ನು ಆಚರಿಸಿದೆ. ಶಿಕ್ಷಣ ಕ್ಷೇತ್ರಕ್ಕೆ ಅಪಾರ ಕೊಡುಗೆಯನ್ನು ನೀಡಿದೆ ಎಂದರು.

## ಬಡವರಿಗಾಗಿಯೇ ಇಂದಿರಾ ಕ್ಯಾಂಟಿನ್: ರಾಜಾ ವೇಣುಗೋಪಾಲ

• ಉದಯವಾಹಿನಿ ಹುಣಸಗಿ

ಪ್ರತಿನಿತ್ಯ ದುಡಿದು ತಿನ್ನುವ ಜನ ಸಾಮಾನ್ಯರಿಗೆ ಇಂದಿರಾ ಕ್ಯಾಂಟೀನ್‌ಗಳಲ್ಲಿ 5, 10 ರೂ.ಗೆ ಹೊಟ್ಟೆ ತುಂಬ ಅನ್ನ ನೀಡುತ್ತಿದ್ದಾರೆ ಇದರಿಂದ ಬಡವರಿಗೆ ಮತ್ತು ಕೂಲಿಕಾರ್ಮಿಕರಿಗೆ ತುಂಬಾ ಅನುಕೂಲವಾಗುತ್ತಿದೆ ಎಂದು ಸುರಪುರ ವಿಧಾನಸಭಾ ಕ್ಷೇತ್ರದ ಶಾಸಕರಾದ ರಾಜಾ ವೇಣುಗೋಪಾಲ ನಾಯಕ ಹೇಳಿದರು. ಪಟ್ಟಣದ ತಹಶೀಲ್ ಕಾರ್ಯಾಲಯದ ಪಕ್ಕದಲ್ಲಿ ನಿರ್ಮಾಣ ಮಾಡಿರುವ ಇಂದಿರಾ ಕ್ಯಾಂಟೀನ್ ಉದ್ಘಾಟನೆ ಮಾಡಿ ಮಾತನಾಡಿದ ಅವರು, ಇಂದಿರಾ ಕ್ಯಾಂಟಿನ್‌ನಲ್ಲಿ 5 ಮತ್ತು 10 ರೂ. ಹೊಟ್ಟೆ ತುಂಬಾ ಸಿಗುತ್ತದೆ ಎಂದು ಪ್ರತಿನಿತ್ಯ ದುಡಿದು ತಿನ್ನುವ ಕೂಲಿ ಕಾರ್ಮಿಕರು ಮತ್ತು ಬಡವರು ಆಡುವ ಮಾತನ್ನು ಕೇಳಿ ನನಗೆ ತುಂಬ ಸಂತೋಷವಾಯಿತು. ಸುರಪುರ ಮತ್ತು ಹುಣಸಿಗಿ ತಾಲ್ಲೂಕಿನ ಜನರ ಸೇವೆ ಮಾಡಲು ಯಾವಾಗಲೂ ಸಿದ್ದನಾಗಿದ್ದೇನೆ ಎಂದರು.

ಹುಣಸಗಿ ತಾಲ್ಲೂಕಿಗೆ ಪ್ರಮುಖವಾಗಿ ಬೇಕಾಗಿರುವ ಇಲಾಖೆಗಳಾದ ಬಸ್ ಡಿಪೋ, ಅಗ್ನಿ ಶಾಮಕ, ಪ್ರಜಾಸೌಧ, ಬಿಇಒ ಕಚೇರಿಗಳ ಅಡಿಗಲ್ಲು ಸಮಾರಂಭವನ್ನು ಶೀಘ್ರವಾಗಿ ಕೈಗೊಳ್ಳಲು ಪ್ರಯತ್ನ ಮಾಡುತ್ತೇನೆ ಎಂದರು. ಹುಣಸಗಿ



☛ ಉದಯವಾಹಿನಿ ಚಿತ್ರ

ತಾಲ್ಲೂಕಿನ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಚಂದ್ರಶೇಖರ್ ಎನ್ ದಂಡಿನ್ ನಂತರ ಮಾತನಾಡಿದ ಅವರು, ಬಡವರು ಹಸಿವು ಮುಕ್ತರಾಗುವುದರ ಜೊತೆಗೆ ಪೌಷ್ಟಿಕವಾದ ಆಹಾರವನ್ನು ಸೇವನೆ ಮಾಡಿ ಆರೋಗ್ಯವಾಗಿರಬೇಕೆಂದು ಕಾಂಗ್ರೆಸ್ ಸರ್ಕಾರವು ಇಂದಿರಾ ಕ್ಯಾಂಟೀನ್‌ಗಳನ್ನು ಪ್ರಾರಂಭಿಸಿದೆ.

ಈ ಸಂದರ್ಭದಲ್ಲಿ ತಹಶೀಲ್ದಾರರಾದ ಎಂ ಬಸವರಾಜ, ಪ.ಪಂ ಅಧ್ಯಕ್ಷ ತಿಪ್ಪಣ್ಣ ನಾಯ್ಕ ರಾಠೋಡ, ಶರಣು ದಂಡಿನ್, ಕೆಪಿಸಿಸಿ ಸಿದ್ದಣ್ಣ ಮಲಗಲಾದಿನ್ನಿ, ಶಾಂತಣ್ಣ ಮಲಗಲದಿನ್ನಿ, ಕಾಸಿಮಸಾಬ, ಟ್ಟೋಣ್ಣೂರು, ಸಿದ್ದರಾಮಪ್ಪ ಮುದಗಲ್, ಕಾಸಿಮಸಾಬಚೌದ್ರಿ, ರವಿ ಮಲದಿನ್ನಿ,ಪ. ಪಂ ಮುಖ್ಯಾಧಿಕಾರಿ, ಸಿಬ್ಬಂದಿಗಳು, ಪಟ್ಟಣದ ಮುಖಂಡರು ಇತರರು ಇದ್ದರು.

## ಯರಬಳ್ಳಿಯ ಮಾದರಿ ಪ್ರಾಥಮಿಕ ಶಾಲೆ ಈಗ ಉತ್ತಮ ಪಿ.ಎಂ. ಶ್ರೀ ಶಾಲೆಯಾಗಿ ದೇಶಕ್ಕೆ ಸಮರ್ಪಣೆ

• ಉದಯವಾಹಿನಿ ಚಿತ್ರದುರ್ಗ

ಜಿಲ್ಲೆಯ ಹಿರಿಯೂರು ತಾಲ್ಲೂಕಿನ ಯರಬಳ್ಳಿ ಗ್ರಾಮದ ಪಿಎಂ ಶ್ರೀ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯನ್ನು ದಿ. 29-07-2025ರಂದು ಉತ್ತಮ ಪಿ.ಎಂ. ಶ್ರೀ ಶಾಲೆ ಎಂದು ಘೋಷಣೆ ಮಾಡಿರುವುದು ಗ್ರಾಮದ ಜನರಿಗೆ ಹೆಮ್ಮೆ ತಂದಿದೆ. ಸಮೃದ್ಧ ಭಾರತದ ದೇಶದಲ್ಲಿ, ಇಂದು ಭಾರತ ಸರ್ಕಾರದಿಂದ ಹೊಸ ದೆಹಲಿಯಲ್ಲಿ ದೇಶದ ರಾಷ್ಟ್ರೀಯ ಹೊಸ ಶಿಕ್ಷಣ ನೀತಿಯ ಐದು ವರ್ಷಗಳ ಸಂಭ್ರಮಾಚರಣೆಯ ನಿಮಿತ್ತ ಜಿಲ್ಲೆಯ ಉತ್ತಮ ಪಿಎಂಶ್ರೀ ಶಾಲೆಗಳ ದೇಶಕ್ಕೆ ಸಮರ್ಪಣೆ ಕಾರ್ಯಕ್ರಮವನ್ನು ಭಾರತ ಸರ್ಕಾರದ ಕೇಂದ್ರ ಮಂತ್ರಿಗಳಾದ ಧರ್ಮೇಂದ್ರ ಪ್ರಧಾನ್ ಇವರು ಪಿಎಂ ಶ್ರೀ ಶಾಲೆಗಳನ್ನು ದೇಶಕ್ಕೆ ಸಮರ್ಪಣೆಮಾಡಿದರು.

ಸಮರ್ಪಣೆ ಮಾಡಿದ ಉತ್ತಮ ಶಾಲೆಗಳಲ್ಲಿ ಹಿರಿಯೂರು ತಾಲ್ಲೂಕಿನ ಯರಬಳ್ಳಿ ಗ್ರಾಮದ ಪಿಎಂ ಶ್ರೀ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯೂ ಒಂದಾಗಿದ್ದು, ಅದ್ದೂರಿಯಾಗಿ ನಡೆದ ಈ ಕಾರ್ಯಕ್ರಮದ ನೇರಪ್ರಸಾರವನ್ನು ಜಿಲ್ಲಾ ಉಪ ನಿರ್ದೇಶಕರಾದ ಶ್ರೀಯುತ ಮಂಜುನಾಥ್ ರವರು,



☛ ಉದಯವಾಹಿನಿ ಚಿತ್ರ

ವಿದ್ಯಾಧಿಕಾರಿಗಳಾದ ಶ್ರೀ ಯುತ ಸಿದ್ದಪ್ಪರವರು, ಜಿಲ್ಲಾ ಉಪಯೋಜನ ಸಮನ್ವಯಾಧಿಕಾರಿಗಳಾದ ಶ್ರೀ ವೆಂಕಟೇಶಪ್ಪ ರವರು ಜಿಲ್ಲಾ ದೈಹಿಕ ಶಿಕ್ಷಣ ಪರಿವೀಕ್ಷಕರಾದ ಚಿದಾನಂದಪ್ಪ ರವರು ಶಾಲೆಯ ಎಸ್.ಡಿ.ಎಂ.ಸಿ ಅಧ್ಯಕ್ಷರಾದ ತಿಪ್ಪೇಸ್ವಾಮಿ ಯವರು ಉಪಾಧ್ಯಕ್ಷರು ಸದಸ್ಯರು ಪೋಷಕ ವರ್ಗದವರು ಮುಖ್ಯ ಶಿಕ್ಷಕಿಯಾದ ಸವಿತಾ ಎಂವಿ ಹಾಗೂ ಎಲ್ಲಾ ಶಿಕ್ಷಕ ವರ್ಗದವರು ಸೇರಿ ಕಾರ್ಯಕ್ರಮವನ್ನು ವೀಕ್ಷಿಸಿದರು.

ಇದೇ ಸಂದರ್ಭದಲ್ಲಿ ಮಾನ್ಯ ಅದೇ ರೀತಿಯಾಗಿ ಈ ಸಮಯದಲ್ಲಿ ಶಾಲೆಯಲ್ಲಿ ನಿರ್ವಹಿಸಿದ ಕೆಲವು ಚಟುವಟಿಕೆಗಳ ಪಿ.ಪಿ.ಟಿಯನ್ನು ಅನಾವರಣ ಮಾಡಲಾಯಿತು.

ಈ ಶಾಲೆಯಲ್ಲಿ 300ರಿಂದ 400 ಮಕ್ಕಳು ವಿದ್ಯಾಭ್ಯಾಸ ಮಾಡುತ್ತಿದ್ದಾರೆ. ಶಾಲೆಯಲ್ಲಿ ಉತ್ತಮ ಬೆಳವಣಿಗೆಗಳು ಕಂಡು ಬಂದಿದೆ ಹಾಗೂ ಕೇಂದ್ರ ನಿಗದಿ ಪಡಿಸಿದ ಸೃಜನಾತ್ಮಕ ಚಟುವಟಿಕೆಗಳನ್ನು ಉತ್ತಮ ರೀತಿಯಲ್ಲಿ ನಿರ್ವಹಣೆ ಮಾಡಿದ್ದಾರೆ ಆದ್ದರಿಂದ ಜಿಲ್ಲಾ ಮಟ್ಟದ ಉತ್ತಮ ಪಿಎಂಶ್ರೀ ಶಾಲೆಯಾಗಿ ಆಯ್ಕೆಯಾಗಲು ಕಾರಣವಾಗಿದೆ. ಈ ಶಾಲೆಯ ಮುಖ್ಯ ಶಿಕ್ಷಕರು ಮತ್ತು ಎಲ್ಲಾ ಶಿಕ್ಷಕರ ಶ್ರಮಕ್ಕೆ ತಕ್ಕ ಪ್ರತಿಫಲ ಸಿಕ್ಕಿದೆ ಎಂದು ಅಭಿಪ್ರಾಯವನ್ನು ವ್ಯಕ್ತಪಡಿಸಿದರು
-ಡಿಡಿಪಿಐ

### ಮಟಕಾ: ಬಂಧನ

• ಉದಯವಾಹಿನಿ ಕಲಬುರಗಿ

ತಿಮ್ಮಾಪೂರ್ ಸರ್ಕಲ್ ಹತ್ತಿರ ಮಟಕಾ ನಂಬರ್ ಬರೆದುಕೊಳ್ಳಲಾಗುತ್ತಿದೆ ಎಂಬ ಮಾಹಿತಿ ಮೇಲೆ ಸ್ಟೇಷನ್ ಬಜಾರ್ ಪೊಲೀಸ್ ಠಾಣೆ ಎಎಸ್‌ಐ ತಿಮ್ಮಪ್ಪ, ಅಪರಾಧ ವಿಭಾಗದ ಸಿಬ್ಬಂದಿಗಳಾದ ಪ್ರಭಾಕರ, ಯಲ್ಲಪ್ಪಾ, ಶಿವಲಿಂಗ ಅವರು ದಾಳಿ ನಡೆಸಿ ಬ್ರಹ್ಮಪುರ ಬಡಾವಣೆಯ ರೋಕಡಾ ಹನುಮಾನ ಮಂದಿರ ಏರಿಯಾ ನಿವಾಸಿ ರಾಜು ತಂದೆ ಬಸವರಾಜ ಹೂಗಾರ (42) ಎಂಬಾತನನ್ನು ಬಂಧಿಸಿ 1150 ರೂ.ನಗದು, ಎರಡು ಮಟಕಾ ಚೀಟಿ ಮತ್ತು ಒಂದು ಬಾಲ್‌ಪೆನ್ ಜಪ್ತಿ ಮಾಡಿದ್ದಾರೆ. ಸ್ಟೇಷನ್ ಬಜಾರ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಬೀದಿ ಬದಿ ವ್ಯಾಪಾರಸ್ಥರ ಜಿಲ್ಲಾ ಸಮಾವೇಶ ಹಕ್ಕು ಪ್ರಾಪ್ತಿಗೆ ಹೋರಾಟ ಅನಿವಾರ್ಯ: ಬಿ ಎಂ ಭಟ್

• ಉದಯವಾಹಿನಿ ಮಂಗಳೂರು

ಬೀದಿಬದಿ ವ್ಯಾಪಾರಿಗಳ ಸಮಗ್ರ ಅಭಿವೃದ್ಧಿ, ಪ್ರಭುತ್ವದ ಧಾಳಿ, ದಬ್ಬಾಳಿಕೆ ವಿರೋಧಿಸಿ, ವಿವಿಧ ಬೇಡಿಕೆಗಳನ್ನು ಈಡೇರಿಸಲು ಒತ್ತಾಯಿಸಿ ದಕ್ಷಿಣ ಕನ್ನಡ ಜಿಲ್ಲಾ ಬೀದಿ ಬದಿ ವ್ಯಾಪಾರಸ್ಥರ ಸಂಘ (ಸಿಐಟಿಯು) ನೇತೃತ್ವದಲ್ಲಿ ಬೀದಿ ಬದಿ ವ್ಯಾಪಾರಸ್ಥರ ಜಿಲ್ಲಾ ಸಮಾವೇಶವು ನಗರದ ನಾಸಿಕ್ ಬಂಗೇರ ಸಭಾಭವನದಲ್ಲಿ ಜರಗಿತು. ಸುಮಾರು 250ಕ್ಕೂ ಹೆಚ್ಚು ಬೀದಿಬದಿ ವ್ಯಾಪಾರಿಗಳು ಸಮಾವೇಶದಲ್ಲಿ ಭಾಗವಹಿಸಿದ್ದರು.

ಸಿಐಟಿಯು ಜಿಲ್ಲಾ ಉಪಾಧ್ಯಕ್ಷರೂ, ವಕೀಲರೂ ಆದ ಬಿ ಎಂ ಭಟ್ ಸಮಾವೇಶ ಉದ್ಘಾಟಿಸಿ ಮಾತನಾಡುತ್ತಾ ದೇಶದಲ್ಲಿ ಐದು ಕೋಟಿಗೂ ಹೆಚ್ಚು ಬೀದಿ ಬದಿ ವ್ಯಾಪಾರಿಗಳಿದ್ದಾರೆ. ಬೀದಿ ವ್ಯಾಪಾರಿಗಳು ಅತ್ಯಂತ ಶ್ರಮ ಜೀವಿಗಳು ಅವರ ಬೇಡಿಕೆಗಳು ನ್ಯಾಯತವಾಗಿದ್ದು ಹಕ್ಕುಪ್ರಾಪ್ತಿಗೆ ಹೋರಾಟಕ್ಕೆ ಇಳಿಯುವುದು ಅನಿವಾರ್ಯ ಎಂದು ಅವರು ತಿಳಿಸಿದರು. ಮುಂದುವರಿದು ಮಾತನಾಡುತ್ತಾ ಬೀದಿ ವ್ಯಾಪಾರಿಗಳ ಬದುಕುವ



☛ ಉದಯವಾಹಿನಿ ಚಿತ್ರ

ಹಕ್ಕನ್ನು ಕಸಿಯಲು ಯಾರಿಗೂ ಸಾಧ್ಯವಿಲ್ಲ ಸಂಘಟನೆ ಮತ್ತು ಹೋರಾಟದಿಂದ ಬಲಿಷ್ಠ ಚಳುವಳಿ ಕಟ್ಟಬೇಕೆಂದು ಸಲಹೆ ನೀಡಿದರು.

ಸಂಘದ ಗೌರವಾಧ್ಯಕ್ಷ ಬಿ ಕೆ ಇಮ್ತಿಯಾಜ್ ಮಾತನಾಡಿ ಬೀದಿ ಬದಿ ವ್ಯಾಪಾರಿಗಳ ಮೇಲೆ ದೌರ್ಜನ್ಯ ತಡೆಗಟ್ಟಲು ಸರಕಾರ ಕ್ರಮ ಕೈಗೊಳ್ಳಬೇಕು ಮತ್ತು ಜಿಲ್ಲೆಯ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಬೀದಿ ವ್ಯಾಪಾರಿಗಳ ಸಮಗ್ರ ಕಾನೂನು ಜಾರಿಗೊಳಿಸಲು ಪ್ರಾಮಾಣಿಕ ಹೋರಾಟದ ಅಗತ್ಯತೆಯನ್ನು ಒತ್ತಿ ಹೇಳಿದರು.

ಸಿಐಟಿಯು ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸುನಿಲ್ ಕುಮಾರ್ ಬಜಾಲ್ ಮಾತನಾಡಿ ದೇಶದಲ್ಲಿ ಬೀದಿಬದಿ ವ್ಯಾಪಾರಿಗಳ ಜೀವನೋಪಾಯ ಸಂರಕ್ಷಣೆ ಮತ್ತು ನಿಯಂತ್ರಣ ಕಾಯಿದೆ ಜಾರಿಗೆ ಬಂದು ದಶಕಗಳು ಕಳೆದರೂ ಕೂಡ ಸರಕಾರಗಳು ಕಾನೂನಿನ ಸಮಗ್ರ ಅನುಷ್ಠಾನ ಮಾಡಲು ವಿಫಲವಾಗಿದೆ ಪಿ ಎಂ ಸ್ವನಿಧಿ ಸಾಲ ಯೋಜನೆಯನ್ನು ಸ್ಥಗಿತಗೊಳಿಸಿದ್ದು ಇದರಿಂದ ಬೀದಿ ವ್ಯಾಪಾರಿಗಳ ಸ್ವಾವಲಂಬನೆಯ ಬದುಕಿಗೆ ಧಕ್ಕೆ ಆಗಿದೆ ಎಂದು ಅವರು ಟೀಕಿಸಿದರು. -ಸುನಿಲ್ ಕುಮಾರ್

## ಹದಗೆಟ್ಟ ಜೀರಂಕಲಗಿ-ಸೊನ್ನಲಗಿ ರಸ್ತೆ

• ಉದಯವಾಹಿನಿ ಚಡಚಣ

ಸಮೀಪದ ಜೀರಂಕಲಗಿ ಗ್ರಾಮದಲ್ಲಿ ಸುರಿದ ಮಳೆಯಿಂದ ಜೀರಂಕಲಗಿ ಗ್ರಾಮದಿಂದ ಮಹಾರಾಷ್ಟ್ರದ ಗಡಿಗ್ರಾಮ ಸೊನ್ನಲಗಿ ಗ್ರಾಮಕ್ಕೆ ಹೋಗುವ ಮುಖ್ಯ ರಸ್ತೆ ಸಂಪೂರ್ಣ ಜಲಾವೃತಗೊಂಡು ವಾಹನ ಸವಾರರಿಗೆ ತೀವ್ರ ತೊಂದರೆ ಅನುಭಸುತ್ತಿದ್ದಾರೆ.

12 ವರ್ಷಗಳ ಹಿಂದೆ ಈ ರಸ್ತೆಯನ್ನು ನಿರ್ಮಾಣ ಮಾಡಲಾಗಿದ್ದು, ಸಧ್ಯ ಈ ರಸ್ತೆ ಸಂಪೂರ್ಣ ಹದಗೆಟ್ಟು ಹೋಗಿದ್ದು ಈಗಿನ ನಾಗಠಾಣ ಶಾಸಕ ವಿಠ್ಠಲ ಕಟಕಧೋಂಡ ಅವರೇ ನಿರ್ಮಾಣ ಮಾಡಿದ ರಸ್ತೆ ಇದಾಗಿದೆ.ಆದರೆ ಮತ್ತೆ ಶಾಸಕರಾದ ನಂತರ ಈ ರಸ್ತೆಯನ್ನು ಪುನಃ ಡಾಂಬರೀಕರಣ ಮಾಡುತ್ತೇನೆ ಎಂದು ಹೇಳಿದ ಶಾಸಕರು ಈವರೆಗೂ ಇತ್ತ ಕಡೆ ಗಮನ ಹರಿಸಿಲ್ಲ. ರಾತ್ರಿ ಸುರಿದ ಭಾರಿ ಮಳೆಯಿಂದ ಈ ರಸ್ತೆ ಸಂಪೂರ್ಣ ಜಲಾವೃತವಾಗಿ ಇದು ರಸ್ತೆಯೋ ಅಥವಾ ನದಿಯೋ



☛ ಉದಯವಾಹಿನಿ ಚಿತ್ರ

**ರಸ್ತೆ ಡಾಂಬರೀಕರಣಕ್ಕೆ ಗ್ರಾಮಸ್ಥರ ಆಗ್ರಹ**

ಎಂಬಂತಾಗಿದೆ.

ಇನ್ನಾದರೂ ಶಾಸಕ ವಿಠ್ಠಲ ಕಟಕಧೋಂಡ ಅವರು ಚಡಚಣ ತಾಲ್ಲೂಕಿನ ಕಡೆ ಗಮನ ಹರಿಸಿ ರಸ್ತೆಗಳ ಡಾಂಬರೀಕರಣ ಮಾಡಬೇಕು ಎಂದು ದೇವರನಿಂಬರಗಿ, ಜೀರಂಕಲಗಿ ಗ್ರಾಮದ ಮುಖಂಡರಾದ ಭೀಮಾಶಂಕರ ಬಿರಾದಾರ, ಕಮಲಾಬಾಯಿ ಪರಗೊಂಡ ಬಾಲಗಾಂವ, ಶ್ರೀಶೈಲ ಧಂದರಗಿ, ಸಾವಿತ್ರಿಬಾಯಿ ನಿಂಬರಗಿ, ಭಾರತಿ ಮಹಾದೇವ ಕರ್ಲಮಳ, ಅಮೋಘಸಿದ್ಧ ಕೋಟಿ, ಸಂತೋಷ ಧಂದರಗಿ, ಮಲ್ಲಪ್ಪ ಬಡಿಗೇರ, ರೈತರಾದ ಈರಪ್ಪ ಉಮರಾಣಿ, ಭೀಮಾಶಂಕರ ಉಮರಾಣಿ, ರವಿಕುಮಾರ ಕಳ್ಳಿ, ವಿಠ್ಠಲ ನಾವಿ, ಶರಣಪ್ಪ ನಂದಗೊಂಡ, ಭೀಮಣ್ಣ ಕರ್ಲಮಳ, ಕೆ. ಎಸ್. ಬಿರಾದಾರ ಸೇರಿದಂತೆ ಗ್ರಾಮದ ರೈತರು, ಗ್ರಾಮಸ್ಥರು ಆಗ್ರಹಿಸಿದ್ದಾರೆ.

### ಸರಳ ಜೀವನಕ್ಕೆ ಶರಣರ ಸಂದೇಶ

• ಉದಯವಾಹಿನಿ ಬೀದರ

ನಗರದ ಮಾಧವ ನಗರ ಮುಕ್ತಿ ಧಾಮದಲ್ಲಿ ಕರ್ನಾಟಕ ವಚನ ಸಾಹಿತ್ಯ ಪರಿಷತ್ತು ಜಿಲ್ಲಾ ಘಟಕ ಬೀದರ ವತಿಯಿಂದ ಮಾಸಿಕ ಶರಣ ಚಿಂತನಗೋಷ್ಠಿ ಕಾರ್ಯಕ್ರಮ ಜರುಗಿತು. ಬೀದರದ ಸಾಹಿತಿಗಳಾದ ಶ್ರೀಮತಿ ವಿದ್ಯಾವತಿ ಬಲ್ಲೂರ ರವರು ಬಸವ ಗುರುವಿನ ಪೂಜೆ ಸಲ್ಲಿಸಿ, ಬಸವ ಜ್ಯೋತಿ ಪ್ರಜ್ವಲನೆ ಮಾಡಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡುತ್ತ, ವಿಶ್ವದಲ್ಲಿ ಅನೇಕ ಕ್ರಾಂತಿಗಳು ಆಗಿವೆ. ಆದರೆ 12ನೇ ಶತಮಾನದಲ್ಲಿ ಆಗಿರುವ ಕ್ರಾಂತಿ ಹೆಣ್ಣು-ಮಣ್ಣು-ಹೊನ್ನಿಗಾಗಿ ಅಲ್ಲ, ಬಸವಣ್ಣನವರು ಉಡಲು, ಉಣ್ಣಲು, ನಡೆ ನುಡಿ ಕಲಿಸಿದ ಶರಣ -ಧರ್ಮವಾಗಿದೆ. ಅಂತರಂಗ ಬಹಿರಂಗ ಶುದ್ಧಿಗಾಗಿ ಬಸವಣ್ಣನವರು ಕೊಟ್ಟಂತಹ ಸಪ್ತ ಸೂತ್ರವಾದ ಕಳ ಬೇಡ ಕೊಲ ಬೇಡ ವಚನವು ಜನಪರ ಜೀವಪರ ಮಾನವೀಯ ಮೌಲ್ಯದ ಸಿದ್ಧಾಂತವಾಗಿದೆ ಮತ್ತು ಸಕಲ ಜೀವ ರಾಶಿಗಳಿಗೆ ಕಲ್ಯಾಣ ಬಯಸುವುದಾಗಿದೆ.

ಪ್ರಾಣಿ, ಪಕ್ಷಿಗಳ ಮೇಲೆ ದಯಾಪರತೆ ಅಹಿಂಸಾತ್ಮಕ ಮೌಲ್ಯಗಳನ್ನು ಹೊಂದಿರಬೇಕು. ಒಬ್ಬರ ಮನಸ್ಸು ನೊವಾಗದಂತೆ ಸಂತಸದಿಂದಿದ್ದು, ಎಲ್ಲರ ಮನಸ್ಸು ಹೂವಿನಂತೆ ಅರಳಬೇಕು. ಬಸವತತ್ವದ ಸತ್ಯ ಶುದ್ಧ ಕಾಯಕ ಮತ್ತು ದಾಸೋಹ ಸಿದ್ಧಾಂತವು ಉದಾತ್ತತೆಯ ಬದುಕು ಸಾಗಿಸಿಕೊಂಡು ಮುನ್ನಡೆಯಬೇಕೆಂದು ಕರೆ ನೀಡಿದರು.

• ನಕಲಿ ಪರಿಸರವಾದಿಗಳಿಂದ ಮಲೆನಾಡಿಗರ ಬದುಕಿಗೆ ತೊಂದರೆ ಉಂಟಾಗುತ್ತಿದೆ: ಡಿ.ಎನ್. ಜೀವರಾಜ್

# ಕಾಡಾನೆ ಸೆರೆಗೆ ಇಪ್ಪತ್ತು ದಿನಗಳ ಗಡುವು: ಅರಣ್ಯ ಇಲಾಖೆಗೆ ಮನವಿ

• ಉದಯವಾಹಿನಿ ಕೊಪ್ಪ

ತಾಲ್ಲೂಕಿನಲ್ಲಿ ರೈತರ ಜಮೀನಿಗೆ ಹಾನಿ ಮಾಡುತ್ತಿರುವ ಆನೆಯನ್ನು ಶೀಘ್ರ ಸೆರೆ ಹಿಡಿಯುವ ಕೆಲಸ ಮಾಡಬೇಕು. ಆತಂಕದಿಂದ ತೋಟವನ್ನು ಹಾಳು ಬಿಡುವಂತಾಗಿದೆ. ಸತ್ತಾಗ ಮನುಷ್ಯನ ಜೀವಕ್ಕೆ ಕೊಡುವ ಹಣದ ಬದಲು ಆನೆ ಸೆರೆ ಹಿಡಿಯಲು ಖರ್ಚು ಮಾಡಿ. ಆಗ ಜೀವವಾದರೂ ಉಳಿಯುತ್ತದೆ ಎಂದು ಮುಖಂಡ ಡಿ.ಎನ್. ಜೀವರಾಜ್ ಹೇಳಿದರು.

ಉಪ ಅರಣ್ಯ ಸಂರಕ್ಷಣಾಧಿಕಾರಿ ಕಚೇರಿ ಎದುರು ತಾಲ್ಲೂಕಿನ ಮರಿತೊಟ್ಟಿಲು, ನರಸೀಪುರ, ತುಳುವಿನಕೊಪ್ಪ ಗ್ರಾಮಸ್ಥರು ನಡೆಸಿದ ಪ್ರತಿಭಟನೆಯಲ್ಲಿ ಮಾತನಾಡಿದ ಅವರು, ನಕಲಿ ಪರಿಸರವಾದಿಗಳಿಂದ ಮಲೆನಾಡಿಗರ ಬದುಕಿಗೆ ತೊಂದರೆ ಉಂಟಾಗುತ್ತಿದೆ ಎಂದರು. ಕಾಡಾನೆ ರೈತರ ಜಮೀನಿನಲ್ಲಿ ಬೆಳೆ ಹಾನಿ ಮಾಡುತ್ತಿರುವುದು ಮಾತ್ರವಲ್ಲ ಜನರ ಜೀವಕ್ಕೆ ಅಪಾಯ ತಂದೊಡ್ಡಿದೆ.

**ಮಲೆನಾಡಿಗರ ಬದುಕಿಗೆ ತೊಂದರೆ**

ಆನೆಗಳ ಸಂಖ್ಯೆ ಜಾಸ್ತಿಯಾದಲ್ಲಿ ಕಾಡು ಬೆಳೆಯುವುದಿಲ್ಲ. ಭದ್ರಾ ನದಿಯಿಂದ ಕಾಡಾನೆ ಈಚೆ ಬಂದಿವೆ ಎಂದು ನಾನು ಚುನಾವಣೆ ಸೋತ ವರ್ಷ ಎನ್.ಆರ್.ಪುರದ ಸಭೆಯೊಂದರಲ್ಲಿ ಹೇಳಿದ್ದೆ. ಆದರೆ ಅಂದು ನನ್ನ ಮಾತನ್ನು ಕಡೆಗಣಿಸಿದ್ದರು ಎಂದರು.

ಸರ್ಕಾರದ ಮಟ್ಟದಲ್ಲಿ ಕ್ರಮ ಕೈಗೊಳ್ಳಬೇಕಾದ ಶಾಸಕರು, ಇತ್ತೀಚೆಗೆ ಬಾಳೆಹೊನ್ನೂರಿನಲ್ಲಿ ನಾವು ಪ್ರತಿಭಟನೆ ನಡೆಸುವಾಗ ಬಂದು ಕೈಕಟ್ಟಿಕೊಂಡು ನಿಂತಿದ್ದರು. ಅವರ ಜವಾಬ್ದಾರಿ ಅರಿಯಬೇಕು. ಆನೆ ದಾಳಿಯಿಂದ ಸಾವಾದರೆ ಅದಕ್ಕೆ ಅರಣ್ಯ ಇಲಾಖೆಯೇ ಹೊಣೆಯಾಗಬೇಕು. ಮಲೆನಾಡಿನ ಜನರಿಗೆ ಬದುಕಲು ಅವಕಾಶ ಮಾಡಿ



☛ ಉದಯವಾಹಿನಿ ಚಿತ್ರ

ಕೊಡಿ ಇಲ್ಲವೇ ಸಾಮೂಹಿಕವಾಗಿ ವಿಷ ಹಾಕಿ ಬಿಡಿ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕಾಡಾನೆ, ಕಾಡು ಕೋಣ ಕಾಡಿನಲ್ಲಿ ಇರುವುದಕ್ಕೆ ನಮ್ಮ ಅಭ್ಯಂತರವಿಲ್ಲ. ಆದರೆ ಜನವಸತಿ ಪ್ರದೇಶಕ್ಕೆ ಲಗ್ಗೆ ಇಟ್ಟು ರೈತರಿಗೆ ತೀವ್ರ ತೊಂದರೆ ಮಾಡುತ್ತಿವೆ. ಅರಣ್ಯ ಸಚಿವ ಈಶ್ವರ್ ಖಂಡ್ರೆ ಅವರು ಮನೆ ಬಳಿ ಕಟ್ಟಿಕೊಳ್ಳಲಿ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಕೊಟ್ಟಿಗೆ ಇದ್ದರೆ ಅಲ್ಲಿ ಕಟ್ಟಿಹಾಕಲಿ. ಶಾಸಕ ರಾಜೇಗೌಡ ಅವರು ತೋಟದಲ್ಲಿ ಬಿಟ್ಟುಕೊಳ್ಳಲಿ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಹೋರಾಟಗಾರ ಅಭಿಷೇಕ್ ಮಾತನಾಡಿ, ಕಾಡಾನೆ ದಾಳಿಯಿಂದ ಐವರು ಮೃತಪಟ್ಟಿದ್ದರೂ ಇಲಾಖೆ ಹಗುರವಾಗಿ ಪರಿಗಣಿಸಿದೆ. ಇನ್ನೊಂದು ಸಾವು- ನೋವು ಆಗುವ ಮುನ್ನ ಕ್ರಮವಾಗಬೇಕು. ನಿತ್ಯ ತೋಟ ಹಾಳು ಮಾಡುತ್ತಿದೆ ಎಂದರೆ ವಲಯ ಅರಣ್ಯ ಅಧಿಕಾರಿ, ಡಿಸಿಎಫ್ ಸ್ಥಳಕ್ಕೆ ಬರುವುದಿಲ್ಲ ಎಂದರೆ ಏನರ್ಥ ಎಂದು ಪ್ರಶ್ನಿಸಿದರು.

**ಕಾಡಾನೆ ಸೆರೆ ಹಿಡಿಯಲು ಮನವಿ**

ಕಾಡಾನೆ ಸೆರೆ ಹಿಡಿಯುವಂತೆ ಅರಣ್ಯ ಸಚಿವ ಈಶ್ವರ್ ಖಂಡ್ರೆ ಅವರಿಗೆ ಉಪ ಅರಣ್ಯ ಸಂರಕ್ಷಣಾಧಿಕಾರಿ ಶಿವಶಂಕರ್ ಅವರ ಮೂಲಕ ಪ್ರತಿಭಟನಾಕಾರರು ಮನವಿ ಸಲ್ಲಿಸಿದರು. 'ಕಾಡಾನೆಯೊಂದು ಕುಂಚೂರು ಹುಲುಗಾರು ಉಡಾಣ ಅಂದಗಾರು ತನೂಡಿ ಆರೂರು ಕಾಚಗಲ್ ಮರಿತೊಟ್ಟಿಲು ಸೋಮ್ಲಾಪುರ ಭಾಗದಲ್ಲಿ ಕೃಷಿ ಜಮೀನುಗಳಿಗೆ ದಾಳಿ ನಡೆಸಿ ಭತ್ತ ಅಡಿಕೆ ತೆಂಗು ಕಾಫಿ ಮುಂತಾದ ಬೆಳೆ ನಾಶ ಮಾಡಿದೆ' ಎಂದು ಮನವಿ ಪತ್ರದಲ್ಲಿ ತಿಳಿಸಿದ್ದಾರೆ. ಕೃಷಿ ಚಟುವಟಿಕೆಗಳನ್ನು ನಡೆಸಲು ರೈತರು ಕೃಷಿ ಕಾರ್ಮಿಕರು ಜೀವ ಭಯದಿಂದ ಹಿಂದೇಟು ಹಾಕುತ್ತಿದ್ದಾರೆ. ಶೃಂಗೇರಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಇದುವರೆಗೆ ಐವರನ್ನು ಕಾಡಾನೆಗಳು ಸಾಯಿಸಿವೆ. ಮನೆಯಂಗಳಕ್ಕೂ ಕಾಡಾನೆ ಬರುತ್ತಿದ್ದು ಆತಂಕವಾಗಿದೆ. ಈ ಹಿಂದೆಯೂ ಕಾಡಾನೆ ಸೆರೆ ಹಿಡಿಯಲು ಅರಣ್ಯ ಇಲಾಖೆಗೆ ಮನವಿ ಮಾಡಿದರು ಪ್ರಯೋಜನವಾಗಿಲ್ಲ. ಕಾಡಾನೆ ಸೆರೆ ಹಿಡಿದು ನಷ್ಟವಾದ ಜಮೀನು ಬೆಳೆಗಳಿಗೆ ಪರಿಹಾರ ಕೊಡಿಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಿದ್ದಾರೆ.

### ನೌಕರರ ಮುಷ್ಕರ: ಖಾಸಗಿ ವಾಹನ ಅಬ್ಬರ


• ಉದಯವಾಹಿನಿ ಹಾಸನ

ಜಿಲ್ಲೆಯಾದ್ಯಂತ ಕೆಎಸ್‌ಆರ್‌ಟಿಸಿ ಬಸ್‌ಗಳ ಸಂಚಾರ ಸಂಪೂರ್ಣ ಸ್ತಬ್ಧವಾಗಿದ್ದು, ಖಾಸಗಿ ವಾಹನಗಳೇ ಬಸ್ ನಿಲ್ದಾಣಗಳಲ್ಲಿ ಜನರಿಗೆ ಸೇವೆ ಒದಗಿಸುತ್ತಿವೆ. ವೇತನ ಪರಿಷ್ಕರಣೆ ಸೇರಿದಂತೆ ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಸಾರಿಗೆ ನೌಕರರ ಮುಷ್ಕರ ಹಿನ್ನೆಲೆಯಲ್ಲಿ ಜಿಲ್ಲೆಯಾದ್ಯಂತ ಕೆಎಸ್‌ಆರ್‌ಟಿಸಿ ಬಸ್‌ಗಳ ಸಂಚಾರ ಸಂಪೂರ್ಣ ನಿಂತು ಹೋಗಿದ್ದು, ಪ್ರಯಾಣಿಕರು ಪರದಾಡುವಂತಾಗಿದೆ. ಜಿಲ್ಲೆ ಸೇರಿದಂತೆ ತಾಲ್ಲೂಕು ಕೇಂದ್ರಗಳಿಗೆ ಹಾಗೂ ಗ್ರಾಮೀಣ ಭಾಗಗಳಿಗೆ ಸಾರಿಗೆ ಬಸ್‌ಗಳ ಸಂಚಾರ ಸಂಪೂರ್ಣ ಸ್ಥಗಿತಗೊಂಡಿದೆ. ಪ್ರಯಾಣಿಕರು ಖಾಸಗಿ ವಾಹನಗಳ ಮೊರೆ ಹೋಗಿದ್ದಾರೆ. ನೂತನ ಬಸ್ ನಿಲ್ದಾಣ ಸೇರಿದಂತೆ ಡಿಪೋಗಳಲ್ಲಿ ನೂರಾರು ಬಸ್‌ಗಳು ಸಾಲಾಗಿ ನಿಂತಿರುವುದು ಸಾಮಾನ್ಯವಾಗಿತ್ತು.

### ಲೂಲಾ ಕರೆ ಮಾಡಿದರೆ ಮಾತನಾಡ್ತಿನಿ ಎಂದ ಡೊನಾಲ್ಡ್ ಟ್ರಂಪ್; ಸಹವಾಸವೇ ಬೇಡ ಎಂದು ಕೈಮುಗಿದ ಬ್ರೆಜಿಲ್ ಅಧ್ಯಕ್ಷ

# ದೂರವಾಣಿ ಕರೆ ಮಾಡುವಂತೆ ಬ್ರೆಜಿಲ್ ಅಧ್ಯಕ್ಷರಿಗೆ ಸಲಹೆ

**ವಾಷಿಂಗ್ಟನ್:** ರಷ್ಯಾದೊಂದಿಗೆ ತೈಲ ವ್ಯಾಪಾರ ಮಾಡುವ ಬ್ರೆಜಿಲ್, ಭಾರತದ ಆರ್ಥಿಕತೆ ಪುಡಿ ಮಾಡುವ ಬೆದರಿಕೆ ಹಾಕಿರುವ ಅಮೆರಿಕ, ಈ ವಿಚಾರವಾಗಿ ಎದುರಿಸುತ್ತಿರುವ ಭಾರೀ ಟೀಕೆಗಳಿಂದ ಮೆತ್ತಗಾದಂತೆ ಕಂಡುಬರುತ್ತಿದೆ. ಬ್ರೆಜಿಲ್, ಭಾರತದೊಂದಿಗೆ ಸುಂಕ ಚರ್ಚೆಗೆ ಸಿದ್ಧ ಎಂದಿರುವ ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಈ ವಿಚಾರವಾಗಿ ತಮ್ಮ ಜೊತೆ ಬ್ರೆಜಿಲ್ ಅಧ್ಯಕ್ಷ ದೂರವಾಣಿಯಲ್ಲಿ ಮಾತನಾಡಬಹುದು ಎಂದು ಹೇಳಿದ್ದಾರೆ.



ಆದರೆ ಸುಂಕಗಳ ಕುರಿತು ಚರ್ಚಿಸಲು ಯಾವುದೇ ಸಮಯದಲ್ಲಿ ಕರೆ ಮಾಡುವುದಾಗಿ, ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ನೀಡಿರುವ ಪ್ರಸ್ತಾಪವನೆಯನ್ನು ಬ್ರೆಜಿಲ್ ಅಧ್ಯಕ್ಷ ಲೂಯಿಜ್ ಇನಾಸಿಯೊ ಲೂಲಾ ಡಾ ಸಿಲ್ವಾ ಸ್ಪಷ್ಟವಾಗಿ ತಿರಸ್ಕರಿಸಿದ್ದಾರೆ. ಬ್ರೆಸಿಲಿಯಾದಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಮಾತನಾಡಿರುವ ಲೂಲಾ, ರಿಯೊ ಡಿ ಜನ್ಯೆರೊ ತನ್ನ ಹಿತಾಸಕ್ತಿಗಳನ್ನು ಕಾಪಾಡಿಕೊಳ್ಳಲು ವಿಶ್ವ ವ್ಯಾಪಾರ ಸಂಸ್ಥೆ ಸೇರಿದಂತೆ ಲಭ್ಯವಿರುವ ಎಲ್ಲಾ ಸಂಪನ್ಮೂಲಗಳನ್ನು ಬಳಸುತ್ತದೆ ಎಂದು ಸ್ಪಷ್ಟಪಡಿಸಿದ್ದಾರೆ. ಆದರೆ ಯಾವುದೇ ಕಾರಣಕ್ಕೂ ಈ ವಿಚಾರವಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರೊಂದಿಗೆ ನೇರವಾಗಿ ಮಾತನಾಡುವುದಿಲ್ಲ ಎಂದು ಲೂಲಾ ಕಡ್ಡಿ ತುಂಡು ಮಾಡಿದಂತೆ ಹೇಳಿದ್ದಾರೆ. 2022ರಲ್ಲಿ ನಡೆದ ಚುನಾವಣೆಯಲ್ಲಿ ಸೋತ ನಂತರ ದಂಗೆಗೆ ಸಂಚು ರೂಪಿಸಿದ ಆರೋಪದ ಮೇಲೆ, ಬ್ರೆಜಿಲ್ ಮಾಜಿ ಅಧ್ಯಕ್ಷ ಜೈರ್ ಬೋಲ್ಸನಾರೊ ವಿಚಾರಣೆ ಎದುರಿಸುತ್ತಿದ್ದಾರೆ. ಆದರೆ ಡೊನಾಲ್ಡ್ ಟ್ರಂಪ್ ಈ ವಿಚಾರಣೆಯನ್ನು ಟೀಕಿಸಿದ್ದು, ಮಾಟಗಾತಿ ಬೇಟೆ ಎಂದು ಜರೆದಿದ್ದಾರೆ. ಆದರೆ ಆಂತರಿಕ ವಿಚಾರದಲ್ಲಿ ಮೂಗು ತೂರಿಸಿದಂತೆ ಅಮೆರಿಕ ಅಧ್ಯಕ್ಷರಿಗೆ ನೇರ ಎಚ್ಚರಿಕೆ ನೀಡಿರುವ ಬ್ರೆಜಿಲ್ ಅಧ್ಯಕ್ಷ ಲೂಯಿಜ್ ಇನಾಸಿಯೊ ಲೂಲಾ ಡಾ ಸಿಲ್ವಾ, ನಮ್ಮ ಸಾರ್ವಭೌಮತ್ವವನ್ನು ಪ್ರಶ್ನಿಸಬೇಡಿ ಎಂದು ಡೊನಾಲ್ಡ್ ಟ್ರಂಪ್ ಅವರನ್ನು ತಿವಿದಿದ್ದಾರೆ. ಇದರಿಂದ ಕುಪಿತಗೊಂಡಿರುವ ಟ್ರಂಪ್, ಬ್ರೆಜಿಲ್ ಸರಕುಗಳ ಮೇಲೆ ಶೇ. 50ರಷ್ಟು ಸುಂಕ ವಿಧಿಸಿದ್ದಾರೆ. ಈ ಬೆಳವಣಿಗೆಗಳು ವಾಷಿಂಗ್ಟನ್, ರಿಯೊ ಡಿ ಜನ್ಯೆರೊ ನಡುವಿನ ದ್ವಿಪಕ್ಷೀಯ ಸಂಬಂಧ ಹದಗೆಡಲು ಕಾರಣವಾಗಿದೆ.

**ಅಮೆರಿಕ ಅಧ್ಯಕ್ಷರಿಗೆ ನೇರ ಎಚ್ಚರಿಕೆ**

**ಬ್ರಿಕ್ಸ್ ಜಪ ಮಾಡಿದ ಲುಲಾ**

ಇನ್ನು ಅಮೆರಿಕದ ಹೆಚ್ಚುವರಿ ಸುಂಕಗಳನ್ನು ಧೈರ್ಯದಿಂದ ಎದುರಿಸುವುದಾಗಿ ಹೇಳಿರುವ ಬ್ರೆಜಿಲ್ ಅಧ್ಯಕ್ಷ ಲೂಲಾ, ಇದಕ್ಕಾಗಿ ಬ್ರಿಕ್ಸ್ ಒಕ್ಕೂಟದ ದೇಶಗಳ ನೆರವು ದೊರೆಯಲಿದೆ ಎಂದು ಭರವಸೆ ವ್ಯಕ್ತಪಡಿಸಿದ್ದಾರೆ. ಬ್ರಿಕ್ಸ್ ಪಾಲುದಾರರು ಸೇರಿದಂತೆ ಇತರ ರಾಷ್ಟ್ರಗಳೊಂದಿಗೆ ವಿದೇಶಿ ವ್ಯಾಪಾರವನ್ನು ಬಲಪಡಿಸಲು ನಮ್ಮ ಸರ್ಕಾರ ಈಗಾಗಲೇ ಕ್ರಮ ಕೈಗೊಳ್ಳುತ್ತಿದೆ ಎಂದು ಲೂಲಾ ಘೋಷಿಸಿದ್ದಾರೆ. ಇತ್ತೀಚಿಗೆ ಭಾರತದ ಪ್ರಧಾನಮಂತ್ರಿ ನರೇಂದ್ರ ಮೋದಿ ಬ್ರೆಜಿಲ್ ಪ್ರವಾಸ ಕೈಗೊಂಡಾಗ, ಲೂಲಾ ಅವರು ಅದ್ದೂರಿ ಸ್ವಾಗತ ನೀಡಿದ್ದರು.

2025ರಲ್ಲಿ ನಮ್ಮ ವ್ಯಾಪಾರ ಹಿತಾಸಕ್ತಿಗಳನ್ನು ಕಾಪಾಡಿಕೊಳ್ಳಲು ನಾವು WTOನಿಂದ ಪ್ರಾರಂಭಿಸಿ, ಸಾಧ್ಯವಿರುವ ಎಲ್ಲಾ ಕ್ರಮಗಳನ್ನು ಆಶ್ರಯಿಸುತ್ತೇವೆ. ನಮ್ಮ ಸರ್ಕಾರ ಬ್ರಿಕ್ಸ್ ಒಕ್ಕೂಟ, ಇತರ ದೇಶಗಳೊಂದಿಗೆ ವಿದೇಶಿ ವ್ಯಾಪಾರವನ್ನು ಬಲಪಡಿಸಲು ಮತ್ತು ದೇಶೀಯ ಕಂಪನಿಗಳಿಗೆ ಹೊಸ ಅವಕಾಶಗಳನ್ನು ಸೃಷ್ಟಿಸಲು ಕ್ರಮ ಕೈಗೊಳ್ಳುತ್ತಿದೆ ಎಂದು ಬ್ರೆಸಿಲಿಯಾದಲ್ಲಿ ನಡೆದ

> ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರೊಂದಿಗೆ ಮಾತನಾಡಲು ಇಷ್ಟವಿಲ್ಲ ಎಂದಿರುವ ಲೂಲಾ, ಯಾವುದೇ ಕಾರಣಕ್ಕೂ ಸುಂಕ ವಿಚಾರವಾಗಿ ಮಾತನಾಡಲು ನಾನು ಡೊನಾಲ್ಡ್ ಟ್ರಂಪ್ ಅವರಿಗೆ ದೂರವಾಣಿ ಕರೆ ಮಾಡುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಮುಂದುವರೆದು, ನಾನು ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಅವರೊಂದಿಗೆ ಮಾತನಾಡುತ್ತೇನೆ, ಭಾರತದ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರೊಂದಿಗೆ ಮಾತನಾಡುತ್ತೇನೆ.
> –ಲೂಯಿಜ್ ಇನಾಸಿಯೊ ಲೂಲಾ ಡಾ ಸಿಲ್ವಾ
> ಬ್ರೆಜಿಲ್ ಅಧ್ಯಕ್ಷ

ಕಾರ್ಯಕ್ರಮವೊಂದರಲ್ಲಿ ಮಾತನಾಡುತ್ತಾ ಲೂಲಾ ಹೇಳಿದರು.

ಬ್ರೆಜಿಲ್, ರಷ್ಯಾ, ಭಾರತ, ಚೀನಾ ಮತ್ತು ದಕ್ಷಿಣ ಆಫ್ರಿಕಾ ದೇಶಗಳ ಬ್ರಿಕ್ಸ್ ಒಕ್ಕೂಟದ ವಿರುದ್ಧ, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತೀವ್ರ ವಾಗ್ದಾಳಿ ಮಾಡುತ್ತಿದ್ದಾರೆ. ಬ್ರಿಕ್ಸ್ ಒಕ್ಕೂಟ ಅಮೆರಿಕದ ಡಾಲರ್ ಮೌಲ್ಯವನ್ನು ದುರ್ಬಲಗೊಳಿಸಲು ಯತ್ನಿಸುತ್ತಿದೆ ಎಂದು ಆರೋಪಿಸಿರುವ ಡೊನಾಲ್ಡ್ ಟ್ರಂಪ್, ಬ್ರಿಕ್ಸ್ ನೀತಿಗಳನ್ನು ಬೆಂಬಲಿಸುವ ದೇಶಗಳ ಮೇಲೆ ಶೇ. 10ರಷ್ಟು ಹೆಚ್ಚುವರಿ ಶುಲ್ಕ ವಿಧಿಸುವುದಾಗಿ ಬೆದರಿಕೆ ಹಾಕಿದ್ದಾರೆ.

## ವೈದ್ಯಕೀಯ ಸಾರಿಗೆ ವಿಮಾನ ಪತನಗೊಂಡು 4 ಸಾವು

**ಚಿನ್ಲೆ:** ಅಮೆರಿಕದ ಉತ್ತರ ಅರಿಜೋನಾದ ನವಾಜೋ ನೇಷನ್‌ನಲ್ಲಿ ಸಣ್ಣ ವೈದ್ಯಕೀಯ ಸಾರಿಗೆ ವಿಮಾನವೊಂದು ಅಪಘಾತಕ್ಕೀಡಾಗಿ ನಾಲ್ವರು ಸಾವನ್ನಪ್ಪಿದ್ದಾರೆ. ಫೆಡರಲ್ ಏವಿಯೇಷನ್ ಅಡಿನಿಸ್ಟ್ರೇಷನ್, ಸಿಎಸ್‌ಐ ಏವಿಯೇಷನ್ ಪ್ರಕಾರ, ಸಿಎಸ್‌ಐ ಏವಿಯೇಷನ್ ಕಂಪನಿಯ ಬೀಚ್ ಕ್ರಾಫ್ಟ್ ಕಿಂಗ್ ಏರ್ –300 ಇಬ್ಬರು ಪೈಲಟ್‌ಗಳು, ಇಬ್ಬರು ಆರೋಗ್ಯ ರಕ್ಷಣಾ ಪೂರೈಕೆದಾರರೊಂದಿಗೆ ನ್ಯೂ ಮೆಕ್ಸಿಕೋದ ಅಲ್ಬುಕರ್ಕ್‌ನಿಂದ ಹೊರಟಿತು. ಫೀನಿಕ್ಸ್ ನ ಈಶಾನ್ಯಕ್ಕೆ ಸುಮಾರು 300 ಮೈಲಿ ದೂರದಲ್ಲಿರುವ ಚಿನ್ಲೆಯಲ್ಲಿರುವ ವಿಮಾನ ನಿಲ್ದಾಣದ ಬಳಿ ಅಪಘಾತಕ್ಕೀಡಾಗಿದೆ. ನಿಲ್ದಾಣದಲ್ಲಿ ಇಳಿಯುವಾಗ ಏನೋ ತಪ್ಪಾಗಿದೆ ಎಂದು ಜಿಲ್ಲಾ ಪೊಲೀಸ್ ಕಮಾಂಡರ್ ಎಮೆಟ್ ಯಾಝಿ ಹೇಳಿದರು.

ವಿಮಾನ ಅಪಘಾತವಾಗುತ್ತಿದ್ದಂತೆ ಬೆಂಕಿಗೆ ಆಹುತಿಯಾಗಿದೆ. ಚಿನ್ಲೆಯಲ್ಲಿರುವ ಫೆಡರಲ್ ಇಂಡಿಯನ್ ಹೆಲ್ತ್ ಸರ್ವಿಸ್ ಆಸ್ಪತ್ರೆಯಿಂದ ಗಂಭೀರ ಆರೈಕೆಯ ಅಗತ್ಯವಿರುವ ರೋಗಿಯನ್ನು ಕರೆದೊಯ್ಯಲು ಸಿಬ್ಬಂದಿ ಯೋಜಿಸುತ್ತಿದ್ದರು ಎಂದು ನವಾಜೋ ತುರ್ತು ನಿರ್ವಹಣಾ ವಿಭಾಗದ ನಿರ್ದೇಶಕಿ ಶರೆನ್ ಸ್ಯಾಂಡೋವಲ್ ಹೇಳಿದರು.

ಅಲ್ಬುಕರ್ಕ್‌ಗೆ ಹಿಂತಿರುಗುವ ಯೋಜನೆ ಇತ್ತು ರೋಗಿಯ ಸ್ಥಳ, ಸ್ಥಿತಿ ತಿಳಿದುಬಂದಿಲ್ಲ. ವಿಮಾನ



ನಿಲ್ದಾಣದಲ್ಲಿ ಕಪ್ಪು ಹೊಗೆಯ ಬಗ್ಗೆ ಬುಡಕಟ್ಟು ಅಧಿಕಾರಿಗಳಿಗೆ ವರದಿಗಳು ಮಾಡಿದಾಗ ಘಟನೆ ಗೊತ್ತಾಗಿದೆ. ಅಪಘಾತದ ಕಾರಣ ತಿಳಿದುಬಂದಿಲ್ಲ ರಾಷ್ಟ್ರೀಯ ಸಾರಿಗೆ ಸುರಕ್ಷತಾ ಮಂಡಳಿ ತನಿಖೆ ನಡೆಸುತ್ತಿದೆ. ವಿಮಾನಯಾನ ಅಧಿಕಾರಿಗಳು ಮೃತರ ಕುಟುಂಬಗಳು, ಸ್ನೇಹಿತರು, ಪ್ರೀತಿಪಾತ್ರರಿಗೆ ಸಂತಾಪ ಸೂಚಿಸಿದರು.


ಅವರ ಹೆಸರುಗಳನ್ನು ಬಿಡುಗಡೆ ಮಾಡಲಾಗಿಲ್ಲ. ಚಿನ್ಲೆ ವಿಮಾನ ನಿಲ್ದಾಣವು ಬುಡಕಟ್ಟು ಜನಾಂಗದವರು ಹೊಂದಿರುವ ಮತ್ತು ನಿರ್ವಹಿಸುವ ಕೆಲವೇ ವಿಮಾನ ನಿಲ್ದಾಣಗಳಲ್ಲಿ ಒಂದಾಗಿದೆ, ಇದು ಅರಿಜೋನಾ, ನ್ಯೂ ಮೆಕ್ಸಿಕೊ, ಉತಾಹ್‌ವರೆಗೆ ವ್ಯಾಪಿಸಿರುವ ವಿಶಾಲವಾದ ಮೀಸಲು ಪ್ರದೇಶದಲ್ಲಿದೆ ಸ್ಥಳೀಯ ಅಮೆರಿಕನ್ ಬುಡಕಟ್ಟಿನ ಅತಿದೊಡ್ಡ ಭೂ ನೆಲೆಯಾಗಿದೆ.

## ಉಕ್ಕು ವಲಯ ಅಭಿವೃದ್ಧಿ ಒಡಿಶಾ ಸಿಎಂ ಜೊತೆ ಹೆಚ್‌ಡಿಕೆ ಚರ್ಚೆ

**ನವದೆಹಲಿ:** ಒಡಿಶಾದ ರೂರ್ಕೆಲಾ ಉಕ್ಕು ಸ್ಥಾವರದ ಅಭಿವೃದ್ಧಿ, ಉಕ್ಕು ಕ್ಷೇತ್ರದಲ್ಲಿ ಹೆಚ್ಚು ಉದ್ಯೋಗವಕಾಶ ಸೃಷ್ಟಿ ಸೇರಿದಂತೆ ಹಲವಾರು ಮಹತ್ವದ ವಿಷಯಗಳ ಬಗ್ಗೆ ಒಡಿಶಾ ಮುಖ್ಯಮಂತ್ರಿ ಮೋಹನ್ ಚರಣ್ ಮಾಹಜಿ ಅವರು ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವರಾದ ಹೆಚ್‌ಡಿ ಕುಮಾರಸ್ವಾಮಿ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು.

ನವದೆಹಲಿಯ ತಮ್ಮ ನಿವಾಸಕ್ಕೆ ಆಗಮಿಸಿದ

> ಕೈಗಾರಿಕಾ ಬೆಳವಣಿಗೆ, ಖನಿಜ ಅಭಿವೃದ್ಧಿ, ಉಕ್ಕಿನ ಶ್ರೇಷ್ಠತೆಯಲ್ಲಿ ಒಡಿಶಾವನ್ನು ಮಾದರಿ ರಾಜ್ಯವನ್ನಾಗಿ ಮಾಡುವ ಬಗ್ಗೆ ಆ ರಾಜ್ಯದ ಮುಖ್ಯಮಂತ್ರಿಗಳಿಗೆ ಸ್ಪಷ್ಟ ಭರವಸೆ ನೀಡಿದ ಸಚಿವರು, ಆತ್ಮನಿರ್ಭರ ಭಾರತ, 2047ರ ವೇಳೆಗೆ ವಿಕಸಿತ ಭಾರತ ಸಾಕಾರ ಹಾಗೂ 2030ರ ವೇಳೆಗೆ ಪ್ರಧಾನಿ ಮೋದಿಯವರ ಗುರಿಯಂತೆ ವಾರ್ಷಿಕ 300 ದಶಲಕ್ಷ ಟನ್ ಉಕ್ಕು ಉತ್ಪಾದನೆ ಮಾಡುವ ನಿಟ್ಟಿನಲ್ಲಿ ಒಡಿಶಾ ಸರ್ಕಾರದ ಜೊತೆ ನಿಕಟವಾಗಿ ಕೆಲಸ ಮಾಡುವುದಾಗಿ ಹೇಳಿದರು.





ಒಡಿಶಾ ಮುಖ್ಯಮಂತ್ರಿಗಳನ್ನು ಆತ್ಮೀಯವಾಗಿ ಬರ ಮಾಡಿಕೊಂಡ ಕೇಂದ್ರ ಸಚಿವರು, ಆ ರಾಜ್ಯದ ಉಕ್ಕು ಕ್ಷೇತ್ರದ ಆಮೂಲಾಗ್ರ ಅಭಿವೃದ್ಧಿ ಮತ್ತು ವಿವಿಧ ಯೋಜನೆಗಳ ಬಗ್ಗೆ ಸಮಾಲೋಚನೆ ನಡೆಸಿದರು.

ವಿಕಸಿತ ಒಡಿಶಾ ಕಾರ್ಯಕ್ರಮದ ಅಡಿಯಲ್ಲಿ ರಾಜ್ಯದ ಅಭಿವೃದ್ಧಿಗೆ ಉಕ್ಕು ಕ್ಷೇತ್ರ ಅತಿದೊಡ್ಡ ಕೊಡುಗೆ ನೀಡುತ್ತಿದೆ. ಈ ನಿಟ್ಟಿನಲ್ಲಿ ಕೇಂದ್ರ ಸರ್ಕಾರದ ಸಹಕಾರ ಅತ್ಯಗತ್ಯವಾಗಿದೆ ಎಂದು ಮಾಹಜಿ ಅವರು ಕೋರಿದರು. ಇದಕ್ಕೆ ಸಕಾರಾತ್ಮಕವಾಗಿ ಸ್ಪಂದಿಸಿದ ಕೇಂದ್ರ ಸಚಿವರು, ಉಕ್ಕು ಉತ್ಪಾದನೆಯಲ್ಲಿ ಒಡಿಶಾ ಮಹತ್ವದ ಕೊಡುಗೆ ನೀಡುತ್ತಿದೆ.

> ಭಾರತೀಯ ಉಕ್ಕು ಕ್ಷೇತ್ರದ ಪರಿವರ್ತನಾತ್ಮಕ ಅಭಿವೃದ್ಧಿಗೆ ನಾಯಕತ್ವ ವಹಿಸುವ ಶಕ್ತಿ ಒಡಿಶಾಗೆ ಇದೆ ಎಂದು ಹೇಳಿದ ಕೇಂದ್ರ ಸಚಿವರು, ರಾಜ್ಯ ಸರ್ಕಾರದೊಂದಿಗೆ ಮೂಲಸೌಕರ್ಯ, ಹೂಡಿಕೆ ಮತ್ತು ಉದ್ಯೋಗ ಸೃಷ್ಟಿ ಇನ್ನಿತರ ಕ್ಷೇತ್ರಗಳಲ್ಲಿ ವೇಗವಾಗಿ ಬೆಳೆಯುವ ನಿಟ್ಟಿನಲ್ಲಿ ಕೇಂದ್ರವು ಸಹಕಾರ ನೀಡುತ್ತದೆ ಎಂದು ತಿಳಿಸಿದರು.

ಈಗಾಗಲೇ ಭಾರತೀಯ ಉಕ್ಕು ಪ್ರಾಧಿಕಾರದ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ ರೂರ್ಕೆಲಾ ಉಕ್ಕು ಸ್ಥಾವರ ಅತ್ಯುತ್ತಮವಾಗಿ ಕಾರ್ಯನಿರ್ವಹಿಸುತ್ತಿದ್ದು, ಅದರಲ್ಲಿ ಉತ್ಪಾದನೆ ಹೆಚ್ಚಿಸಲು ಕ್ರಮ ಕೈಗೊಳ್ಳಲಾಗಿದೆ. ರಾಜ್ಯದಲ್ಲಿ ಇನ್ನೂ ಹೆಚ್ಚಿನ ಉದ್ಯೋಗಾವಕಾಶ ಸೃಷ್ಟಿಸಲು ಬದ್ಧರಾಗಿದ್ದೇವೆ. ರಾಜ್ಯದ ಅಭಿವೃದ್ಧಿಗೆ ಪೂರಕವಾಗಿ ಕೇಂದ್ರವು ಸದಾ ಸಹಕಾರ ನೀಡುತ್ತದೆ ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಉಕ್ಕು ಸಚಿವಾಲಯ ಹಾಗೂ ಒಡಿಶಾ ಸರ್ಕಾರದ ಉನ್ನತ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಆ.31ರಿಂದ ನರೇಂದ್ರ ಮೋದಿ ಚೀನಾ ಪ್ರವಾಸ

**ಹೊಸದಿಲ್ಲಿ:** ಆಗಸ್ಟ್ 31ರಿಂದ ಸೆಪ್ಟೆಂಬರ್ 1ರವರೆಗೆ ಚೀನಾದ ಟಿಯಾಂಜಿನ್ ನಗರದಲ್ಲಿ ನಡೆಯಲಿರುವ ಶಾಂಘೈ ಸಹಕಾರ ಸಂಸ್ಥೆ ಪ್ರಾದೇಶಿಕ ಶೃಂಗಸಭೆಯಲ್ಲಿ ಭಾಗವಹಿಸಲು, ಪ್ರಧಾನಮಂತ್ರಿ ನರೇಂದ್ರ ಮೋದಿ ಚೀನಾಕ್ಕೆ ಭೇಟಿ ನೀಡಲಿದ್ದಾರೆ. 2020ರ ಗಲ್ವಾನ್ ಘರ್ಷಣೆ ಬಳಿಕ ಇದೇ ಮೊದಲ ಬಾರಿಗೆ ಭಾರತದ ಪ್ರಧಾನಿ ಅವರು ಚೀನಾಗೆ ಭೇಟಿ ನೀಡಲಿದ್ದಾರೆ. ಪ್ರಧಾನಿ ಮೋದಿ ಕೊನೆಯಬಾರಿಗೆ 2019ರಲ್ಲಿ ಚೀನಾಕ್ಕೆ ಭೇಟಿ ನೀಡಿದ್ದರು.

ಎಸ್‌ಸಿಒ ಸದಸ್ಯ ರಾಷ್ಟ್ರಗಳೊಂದಿಗೆ ಪ್ರಾದೇಶಿಕ ಭದ್ರತೆ, ಭಯೋತ್ಪಾದನೆ ಮತ್ತು ವ್ಯಾಪಾರದ ಕುರಿತು ಚರ್ಚೆ ನಡೆಸಲಿರುವ ಪ್ರಧಾನಿ ಮೋದಿ, ಭಾರತ–ಚೀನಾ ಸಂಬಂಧಗಳಲ್ಲಿ ಸ್ಥಿರತೆ ಮತ್ತು ಸಂವಾದವನ್ನು ಪುನಃಸ್ಥಾಪಿಸುವ ಕುರಿತೂ ಚೀನೀ ನಾಯಕತ್ವದೊಂದಿಗೆ ಚರ್ಚೆ




ನಡೆಸಲಿದ್ದಾರೆ ಎಂದು ಕೇಂದ್ರ ಸರ್ಕಾರದ ಉನ್ನತ ಮೂಲಗಳು ಖಚಿತಪಡಿಸಿವೆ. ಎಸ್‌ಸಿಒ ಶೃಂಗಸಭೆಯ ಸಮಯದಲ್ಲಿ ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಮತ್ತು ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಅವರೊಂದಿಗೆ, ಪ್ರಧಾನಿ ಮೋದಿ ಅನೌಪಚಾರಿಕೆ ಸಭೆ ನಡೆಸುವ ಸಾಧ್ಯತೆ ಇದೆ. ಇದಕ್ಕೂ ಮೊದಲು, ಅಕ್ಟೋಬರ್ 2024ರಲ್ಲಿ, ಪ್ರಧಾನಿ ಮೋದಿ, ಕ್ಸಿ ಜಿನ್‌ಪಿಂಗ್ ಅವರು ಕಜಾನ್‌ನಲ್ಲಿ ನಡೆದ ಬ್ರಿಕ್ಸ್ ಶೃಂಗಸಭೆಯಲ್ಲಿ ನೇರವಾಗಿ ಭೇಟಿ ಮಾಡಿ ಮಾತುಕತೆ ನಡೆಸಿದ್ದರು. ಈ ಭೇಟಿ ವೇಳೆ ಉದ್ವಿಗ್ನಗೊಂಡಿದ್ದ ಭಾರತ–ಚೀನಾ ಸಂಬಂಧಗಳನ್ನು ತಿಳಿಗೊಳಿಸುವ ಕುರಿತು ಉಭಯ ನಾಯಕರು ಚರ್ಚೆ ನಡೆಸಿದ್ದರು. ಇದರ ಪರಿಣಾಮವಾಗಿ ಎರಡೂ ದೇಶಗಳ ನಡುವಿನ ಗಡಿ ಉದ್ವಿಗ್ನತೆಯನ್ನು ಕಡಿಮೆ ಮಾಡುವ ಪ್ರಯತ್ನಗಳು ವೇಗ ಪಡೆದುಕೊಂಡವು. ಉಭಯ ದೇಶಗಳ ನಡುವೆ ಹಲವು ಸುತ್ತಿನ ರಾಜತಾಂತ್ರಿಕ ಸಭೆಗಳು ನಡೆದು, ಸಂಬಂಧವನ್ನು ಸಹಜ ಸ್ಥಿತಿಗೆ ತರಲು ಅನೇಕ ಕ್ರಮಗಳನ್ನು ಜಾರಿಗೊಳಿಸಲಾಗಿದೆ.

ಈ ಪೈಕಿ ಚೀನೀ ಪ್ರವಾಸಿಗರಿಗೆ ಭಾರತದ ಪ್ರವಾಸಿ ವೀಸಾ ಪ್ರಕ್ರಿಯೆ ಪುನರಾರಂಭ ಕೂಡ ಸೇರಿದೆ.ಈಗಾಗಲೇ ಭಾರತದ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಎಸ್‌ಸಿಒ ರಕ್ಷಣಾ ಸಚಿವರ ಸಭೆಯಲ್ಲಿ ಭಾಗವಹಿಸಿದ್ದು, ಭಯೋತ್ಪಾದನೆ ನಿರ್ಮೂಲನೆಯಾಗದ ಹೊರತು ಪ್ರಾದೇಶಿಕ ಶಾಂತಿ ಅಸಾಧ್ಯ ಎಂದು ದೃಢವಾಗಿ ಹೇಳಿದ್ದಾರೆ. ಅದೇ ರೀತಿ ಎಸ್‌ಸಿಒ ವಿದೇಶಾಂಗ ಸಚಿವರ ಸಭೆಯಲ್ಲಿ ಭಾಗವಹಿಸಿದ್ದ ಭಾರತದ ವಿದೇಶಾಂಗ ಸಚಿವ ಎಸ್.ಜೈಶಂಕರ್, ಭಯೋತ್ಪದನೆಗೆ ಬೆಂಬಲ ನೀಡುವ ರಾಷ್ಟ್ರಗಳ ವಿರುದ್ಧ ಕ್ರಮಕ್ಕೆ ಆಗ್ರಹಿಸದ್ದರು.

## ರೆಪೊ ದರದಲ್ಲಿ ಯಥಾಸ್ಥಿತಿ ಕಾಯ್ದುಕೊಂಡ ಆರ್‌ಬಿಐ

**ಮುಂಬೈ:** ಸತತ ಮೂರು ಬಡ್ಡಿ ಕಡಿತಗಳ ನಂತರ ರಿಸರ್ವ್ ಬ್ಯಾಂಕ್ ರೆಪೊ ದರವನ್ನು ಯಥಾಸ್ಥಿತಿಯಲ್ಲಿಡಲು ನಿರ್ಧರಿಸಿದೆ ಮತ್ತು ಶೇ 5.5ರ ರೆಪೊ ದರವನ್ನು ಮುಂದಿನ ಮೂರು ತಿಂಗಳವರೆಗೆ ಮುಂದುವರೆಸಲು ತೀರ್ಮಾನಿಸಿದೆ. ಸುಂಕದ ಅನಿಶ್ಚಿತತೆಗಳ ಬಗ್ಗೆ ಕಳವಳದಿಂದಾಗಿ ಇಂತಹ ತಟಸ್ಥ ನಿಲುವನ್ನು ಕಾಯ್ದುಕೊಳ್ಳಲಾಗಿದೆ ಎಂದು ಆರ್‌ಬಿಐ ಗವರ್ನರ್ ಸಂಜಯ್ ಮಲ್ಹೋತ್ರಾ ಸುದ್ದಿಗೋಷ್ಠಿಯಲ್ಲಿಂದು ತಿಳಿಸಿದರು. ಹಣದುಬ್ಬರ ಮುನ್ಸೂಚನೆಗೆ ಸಂಬಂಧಿಸಿದಂತೆ, ಗವರ್ನರ್ ಪ್ರಸ್ತುತ ಹಣಕಾಸು ವರ್ಷಕ್ಕೆ ಹಿಂದಿನ ಅಂದಾಜಿನ 3.7 ಪ್ರತಿಶತದಿಂದ 3.1 ಪ್ರತಿಶತಕ್ಕೆ ಇಳಿಸಿದ್ದಾರೆ. ಫೆ. 2025 ರಿಂದ, ಆರ್‌ಬಿಐ ನೀತಿ ದರವನ್ನು 100 ಬೇಸಿಸ್ ಪಾಯಿಂಟ್‌ಗಳಿಂದ ಕಡಿಮೆ ಮಾಡಿತ್ತು.

ಜೂ.ನಲ್ಲಿ ನಡೆದ ಹಿಂದಿನ ನೀತಿ ಪರಿಶೀಲನೆಯಲ್ಲಿ, ಅದು ರೆಪೊ ದರವನ್ನು 50 ಬೇಸಿಸ್ ಪಾಯಿಂಟ್‌ಗಳಿಂದ 5.5 ಪ್ರತಿಶತಕ್ಕೆ ಇಳಿಸಿತ್ತು. ಗ್ರಾಹಕ ಬೆಲೆ ಸೂಚ್ಯಂಕ (ಸಿಪಿಐ) ಆಧಾರಿತ ಚಿಲ್ಲರೆ ಹಣದುಬ್ಬರವು ಎರಡೂ ಕಡೆಗಳಲ್ಲಿ ಶೇ. 2 ರ ಅಂತರದಲ್ಲಿ ಶೇ. 4ರಷ್ಟಿದ್ದು, ಎರಡೂ ಕಡೆ ಶೇ. 2 ರ ಅಂತರದಲ್ಲಿ ಉಳಿಯುವಂತೆ ನೋಡಿಕೊಳ್ಳುವ ಕಾರ್ಯವನ್ನು ಸರ್ಕಾರಕೇಂದ್ರ ಬ್ಯಾಂಕ್‌ಗೆ ವಹಿಸಿದೆ. ಮಾನಿಟರಿ ಪಾಲಿಸಿ ಸಮಿತಿ ಶಿಫಾರಸಿನ ಆಧಾರದ ಮೇಲೆ, ಫೆಬ್ರವರಿ ಮತ್ತು ಏಪ್ರಿಲ್‌ನಲ್ಲಿ ರೆಪೊ ದರವನ್ನು ತಲಾ 25 ಬೇಸಿಸ್ ಪಾಯಿಂಟ್‌ಗಳಷ್ಟು ಮತ್ತು



> ಗ್ರಾಹಕ ಬೆಲೆ ಸೂಚ್ಯಂಕ ಬುಟ್ಟಿಯ ಸುಮಾರು ಅರ್ಧದಷ್ಟು ಪಾಲನ್ನು ಹೊಂದಿರುವ ಆಹಾರ ಹಣದುಬ್ಬರವು ಮೇ ತಿಂಗಳಲ್ಲಿ ಶೇ. 0.99ರಿಂದ ಜೂನ್‌ನಲ್ಲಿ ಶೇ. 1.06ಕ್ಕೆ ಇಳಿದಿದೆ. ತರಕಾರಿಗಳು, ಬೇಳೆಕಾಳುಗಳು, ಮಾಂಸ, ಮೀನು, ಧಾನ್ಯಗಳು, ಸಕ್ಕರೆ, ಹಾಲು, ಮಸಾಲೆಗಳಂತಹ ಪ್ರಮುಖ ವರ್ಗಗಳಲ್ಲಿನ ಕಡಿಮೆ ಬೆಲೆಗಳು ಈ ಕುಸಿತಕ್ಕೆ ಪ್ರಮುಖ ಕಾರಣವಾಗಿವೆ.

ಜೂನ್‌ನಲ್ಲಿ 50 ಬೇಸಿಸ್ ಪಾಯಿಂಟ್‌ಗಳಷ್ಟು ಕಡಿಮೆ ಮಾಡಿತು, ಚಿಲ್ಲರೆ ಹಣದುಬ್ಬರವನ್ನು ಸಡಿಲಿಸುವ ಮೂಲಕ. ಈ ವರ್ಷದ ಫೆಬ್ರವರಿಯಿಂದ ಚಿಲ್ಲರೆ ಹಣದುಬ್ಬರವು ಶೇ. 4ಕ್ಕಿಂತ ಕಡಿಮೆಯಾಗಿದೆ. ಆಹಾರ ಬೆಲೆಗಳ ಸಡಿಲಿಕೆ ಮತ್ತು ಅನುಕೂಲಕರ

> ಪ್ರಸಕ್ತ ಹಣಕಾಸು ವರ್ಷದ ಮೂರನೇ ದ್ವೈಮಾಸಿಕ ಹಣಕಾಸು ನೀತಿಯನ್ನು ಪ್ರಕಟಿಸಿದ ಅವರು ಹಣಕಾಸು ವರ್ಷ 26 ರ ಬೆಳವಣಿಗೆಯ ದರದ ಮುನ್ಸೂಚನೆಯನ್ನು ಶೇಕಡಾ 6.5 ರಷ್ಟು ಉಳಿಸಿಕೊಳ್ಳಲಾಗಿದೆ ಎಂದು ಹೇಳಿದರು. ಹಣಕಾಸು ನೀತಿ ಸಮಿತಿ ಅಲ್ಪಾವಧಿಯ ಸಾಲ ದರ ಅಥವಾ ರೆಪೊ ದರವನ್ನು ಶೇಕಡಾ 5.5 ರಷ್ಟು ಯಥಾಸ್ಥಿತಿಯಲ್ಲಿ ಇರಿಸಲು ಸರ್ವಾನುಮತದಿಂದ ನಿರ್ಧರಿಸಿದೆ ಎಂದು ಅವರು ಹೇಳಿದರು.

ಮೂಲ ಪರಿಣಾಮದಿಂದಾಗಿ ಜೂನ್‌ನಲ್ಲಿ ಆರು ವರ್ಷಗಳ ಕನಿಷ್ಠ ಮಟ್ಟವಾದ 2.1 ಶೇಕಡಾಕ್ಕೆ ಇಳಿದಿದೆ.

ಮಾನಿಟರಿ ಪಾಲಿಸಿ ಸಮಿತಿಯು ಮೂವರು ಅಧಿಕಾರಿಗಳನ್ನು ಒಳಗೊಂಡಿದೆ ಸಂಜಯ್ ಮಲ್ಹೋತ್ರಾ, ಪೂನಂ ಗುಪ್ತಾ ರಾಜೀವ್ ರಂಜನ್, ಮೂವರು ಬಾಹ್ಯ ಸದಸ್ಯರಾಗಿನಾಗೇಶ್ ಕುಮಾರ್ (ನಿರ್ದೇಶಕರು, ಮುಖ್ಯ ಕಾರ್ಯನಿರ್ವಾಹಕರು, ಕೈಗಾರಿಕಾ ಅಭಿವೃದ್ಧಿ ಸಂಸ್ಥೆ, ನವದೆಹಲಿ), ಸೌಗತ ಭಟ್ಟಾಚಾರ್ಯ (ಅರ್ಥಶಾಸ್ತ್ರಜ್ಞ), ರಾಮ್ ಸಿಂಗ್ (ನಿರ್ದೇಶಕರು, ದೆಹಲಿ ಸ್ಕೂಲ್ ಆಫ್ ಎಕನಾಮಿಕ್ಸ್ ) ಇದ್ದಾರೆ.

## ಉಗ್ರರ ದಾಳಿ ಬಗ್ಗೆ ಗುಪ್ತಚರ ಮಾಹಿತಿ, ದೇಶದ ವಿಮಾನ ನಿಲ್ದಾಣಗಳಿಗೆ ಬಿಗಿ ಭದ್ರತೆ

**ನವದೆಹಲಿ:** ಮುಂದಿನ ಸೆಪ್ಟೆಂಬರ್ 22 ಮತ್ತು ಅಕ್ಟೋಬರ್ 2ರ ನಡುವೆ ಭಯೋತ್ಪಾದಕರು ಅಥವಾ ಸಮಾಜ ವಿರೋಧಿ ಘಾತಕರಿಂದ ಸಂಭಾವ್ಯ ಬೆದರಿಕೆಗಳ ಬಗ್ಗೆ ಗುಪ್ತಚರ ಮಾಹಿತಿಯ ಎಚ್ಚರಿಕೆ ನಂತರ ನಾಗರಿಕ ವಿಮಾನಯಾನ ಭದ್ರತಾ ಬ್ಯೂರೋ ದೇಶದ ಎಲ್ಲಾ ಭಾರತೀಯ ವಿಮಾನ ನಿಲ್ದಾಣಗಳಲ್ಲಿ ಹೈ ಅಲರ್ಟ್ ಘೋಷಿಸಿದೆ.

ಪಾಕಿಸ್ತಾನ ಮೂಲದ ಭಯೋತ್ಪಾದಕ ಸಂಘಟನೆಗಳಿಂದ ಭಾರತದ ವಿಮಾನ ನಿಲ್ದಾಣಗಳ ಮೇಲೆ ದಾಳಿ ನಡೆಸುವ ಬೆದರಿಕೆ ಕರೆ ಬಂದ ಹಿನ್ನಲೆಯಲ್ಲಿ ವಿಮಾನ ನಿಲ್ದಾಣಗಳಲ್ಲಿ ಭದ್ರತೆ ಹೆಚ್ಚಿಸುವಂತೆ ನಾಗರಿಕ ವಿಮಾನಯಾನ ಭದ್ರತಾ ಬ್ಯೂರೋ ರಾಜ್ಯ ಪೊಲೀಸರು, ವಿಮಾನ ನಿಲ್ದಾಣಗಳು ಮತ್ತು ವಿಮಾನಯಾನ ಸಂಸ್ಥೆಗಳು ಸೇರಿದಂತೆ ಎಲ್ಲಾ ಪಾಲುದಾರರಿಗೆ ಸೂಚನೆ ನೀಡಿದೆ. ಬಿಸಿಎಎಸ್ ಪ್ರಕಾರ, ಈ ಬೆದರಿಕೆಯು ಪಾಕಿಸ್ತಾನಿ ಭಯೋತ್ಪಾದಕ ಗುಂಪಿನ ಚಟುವಟಿಕೆಗಳಿಗೆ ಸಂಬಂಧಿಸಿದೆ. ವಿಮಾನ ನಿಲ್ದಾಣಗಳು, ವಾಯುನೆಲೆಗಳು, ವಾಯುನೆಲೆಗಳು, ವಾಯುಪಡೆಯ ಕೇಂದ್ರಗಳು ಮತ್ತು ಹೆಲಿಪ್ಯಾಡ್‌ಗಳನ್ನು ಸಲಹೆಯ ಪ್ರಕಾರ ಜಾಗರೂಕತೆಯಲ್ಲಿ ಇರಿಸಲಾಗಿದೆ.

ಸೆ. 22 ರಿಂದ ಅಕ್ಟೋಬರ್ 2ರವರೆಗೆ ಸಮಾಜ ವಿರೋಧಿ ಶಕ್ತಿಗಳು ಅಥವಾ ಭಯೋತ್ಪಾದಕ ಗುಂಪುಗಳಿಂದ ವಿಮಾನ ನಿಲ್ದಾಣಗಳಿಗೆ ಸಂಭಾವ್ಯ ಬೆದರಿಕೆ ಇದೆ ಎಂದು ಸೂಚಿಸುವ ಕೇಂದ್ರ ಭದ್ರತಾ ಸಂಸ್ಥೆಯಿಂದ ಇತ್ತೀಚೆಗೆ ಬಂದಿರುವ ಮಾಹಿತಿಗಳನ್ನು ಗಮನದಲ್ಲಿಟ್ಟುಕೊಂಡು, ಎಲ್ಲಾ ವಿಮಾನ ನಿಲ್ದಾಣಗಳಲ್ಲಿನ ಎಲ್ಲಾ ಏರ್‌ಸ್ಟ್ರಿಪ್‌ಗಳು,





ಏರ್‌ಫೀಲ್ಡ್‌ಗಳು, ವಾಯುಪಡೆಯ ನಿಲ್ದಾಣಗಳು, ಹೆಲಿಪ್ಯಾಡ್‌ಗಳಂತಹ ಎಲ್ಲಾ ನಾಗರಿಕ ವಿಮಾನಯಾನ ಸ್ಥಾಪನೆಗಳಲ್ಲಿ ಭದ್ರತಾ ಕ್ರಮಗಳನ್ನು ಹೆಚ್ಚಿಸಲು ನಿರ್ದೇಶಿಸಲಾಗಿದೆ. ಸಂಭಾವ್ಯ ಬೆದರಿಕೆಯ ದೃಷ್ಟಿಯಿಂದ ಸಂಬಂಧಪಟ್ಟ ನಾಗರಿಕ ವಿಮಾನಯಾನ ಸಿಬ್ಬಂದಿ ಸದಸ್ಯರು ಸ್ಥಳೀಯ ಪೊಲೀಸರು, ಕೇಂದ್ರ ಕೈಗಾರಿಕಾ ಭದ್ರತಾ ಪಡೆ ಗುಪ್ತಚರ ಬ್ಯೂರೋ ಮತ್ತು ಇತರ ಸಂಬಂಧಿತ ಸಂಸ್ಥೆಗಳೊಂದಿಗೆ ನಿಕಟ ಸಂವಹನ ಕಾಯ್ದುಕೊಳ್ಳಬೇಕೆಂದು ಸೂಚಿಸಿದೆ.


ಸ್ವೀಕರಿಸಿದ ಕರೆಗಳನ್ನು ಯಾವುದೇ ಗುಪ್ತಚರ ಅಥವಾ ಎಚ್ಚರಿಕೆಗಳನ್ನು ಪಾಲುದಾರರಿಗೆ ತಕ್ಷಣವೇ ತಿಳಿಸಬೇಕು ಎಂದು ಸೂಚಿಸಲಾಗಿದೆ. ಸಿಬ್ಬಂದಿ, ಗುತ್ತಿಗೆದಾರರು ಮತ್ತು ಸಂದರ್ಶಕರಿಗೆ ಕಟ್ಟುನಿಟ್ಟಾದ ಐಡಿ ಪರಿಶೀಲನೆಗಳು ಇರಬೇಕು ಎಂದು ಭದ್ರತಾ ಸಂಸ್ಥೆ ಹೇಳಿದೆ.

ಎಲ್ಲಾ ಸಿಸಿಟಿವಿ ವ್ಯವಸ್ಥೆಗಳು ಕಾರ್ಯನಿರ್ವಹಿಸುತ್ತಿರಬೇಕು ಮತ್ತು ನಿರಂತರವಾಗಿ ಮೇಲ್ವಿಚಾರಣೆ ಮಾಡಬೇಕು. ರಾಜ್ಯ ಪೊಲೀಸರು, ವಿಮಾನ ನಿಲ್ದಾಣಗಳು ಮತ್ತು ವಿಮಾನಯಾನ ಸಂಸ್ಥೆಗಳು ಸೇರಿದಂತೆ ಸಂಬಂಧಪಟ್ಟವರಿಗೆ ಬಿಸಿಎಎಸ್ ಸಲಹೆ ನೀಡಲಾಗಿದೆ.

# ಕೇರಳದಲ್ಲಿ ಇನ್ನು ಹಿಂಬದಿ ಬೆಂಚಿನ ಮಕ್ಕಳ ಪರಿಕಲ್ಪನೆ ಇರೊಲ್ಲ

### ನೋ ಮೋರ್ ಬ್ಯಾಕ್ ಬೆಂಚರ್ಸ್; ಸಮಾನ ಶಿಕ್ಷಣಕ್ಕಾಗಿ ಕೇರಳ ಶಿಕ್ಷಣ ಇಲಾಖೆ ಹೊಸ ಯೋಜನೆ ತರಲು ಸಿದ್ಧತೆ

**ತಿರುನಂತಪುರಂ:** ಹಿಂದಿನ ಕಾಲದಲ್ಲಿ ಮಾತ್ರವಲ್ಲ.. ಈ ಕಾಲದಲ್ಲಿಯೂ ಈ ಪದ್ಧತಿ ರೂಢಿಯಲ್ಲಿದೆ. ಓದಿನಲ್ಲಿ ಆಸಕ್ತಿ ಇಲ್ಲದವರು, ಪಾಠದ ಬಗ್ಗೆ ಗಮನ ಕೊಡದೆ ಮಾತನಾಡುವವರು, ತುಂಟರನ್ನು ಹಿಡಿದೆಳೆದು ಬ್ಯಾಕ್ ಬೆಂಚ್‌ನಲ್ಲಿ ಕೂರಿಸುವುದು. ಅವರಿಗೆ ಅವಹೇಳನಕಾರಿಯಾಗಿ ಮಾತನಾಡುವುದು ಆಗಲಿಂದಲೂ ಪಾಲಿಸಿಕೊಂಡು ಬರಲಾಗುತ್ತಿದೆ. ಸದ್ಯ ಇಂತದ್ದೊಂದು ಪ್ರಕ್ರಿಯೆಗೆ ಕೇರಳ ಸರ್ಕಾರ ಬ್ರೇಕ್ ಹಾಕಲು ಮುಂದಾಗಿದೆ. ನೋ ಮೋರ್ ಬ್ಯಾಕ್ ಬೆಂಚರ್ ಜಾರಿ ಮಾಡಲು ಸಮಿತಿ ರಚಿಸಿದೆ. ಬ್ಯಾಕ್ ಬೆಂಚರ್ಸ್ ಎನ್ನುವ ಪದ ವಿದ್ಯಾರ್ಥಿಗಳ ಮೇಲೆ ಪರೋಕ್ಷವಾಗಿ ಪರಿಣಾಮ ಬೀಳುತ್ತದೆ. ಹಿಂಬದಿ ಕೂರುವ ಮಕ್ಕಳು ಏನನ್ನೂ ಓದೋದೆ ಇಲ್ಲ ಎಂದು ಪ್ರತಿ ಬಾರಿ ಟೀಕಿಸುವ ಶಿಕ್ಷಕರು. ಅದನ್ನು ಕಂಡು ಅವರಿಗೆ ಗೇಲಿ ಮಾಡುವ ಇತರ ವಿದ್ಯಾರ್ಥಿಗಳಿಂದ ಕೆಲವರು ಖಿನ್ನತೆಗೆ ಗುರಿಯಾಗುವಂತಹ ಪರಿಸ್ಥಿತಿ ನಿರ್ಮಾಣವಾದರೆ, ಇನ್ನೂ ಕೆಲವರು ಗುಂಪುಗಳನ್ನು ಕಟ್ಟಿಕೊಂಡು ಬೇರೆಯವರನ್ನು ಛೇಡಿಸಿಕೊಂಡು ಬೇರೆ ಚಟುವಟಿಕೆಗಳಲ್ಲಿ ತೊಡಗಿಕೊಳ್ಳು ಉದಾಹರಣೆಯೂ ಇದೆ. ರ್‍ಯಾಗಿಂಗ್, ತರ್ಲೆ,



**ಎಲ್ಲಾ ಸಮಸ್ಯೆಗೆ ಮುಕ್ತಿ**

ತಮಾಷೆ ಎಲ್ಲದಕ್ಕು ಇವರೆ ರುವಾರಿಗಳು. ಹೀಗಾಗಿ ಈ ಎಲ್ಲಾ ಸಮಸ್ಯೆಗಳಿಗೂ ಮುಕ್ತಿ ನೀಡಲಿದೆ. ಹಿಂಬದಿ ಬೆಂಚು ಎಂಬ ಹಣೆಪಟ್ಟಿ ವಿದ್ಯಾರ್ಥಿಗಳ ಆತ್ಮವಿಶ್ವಾಸ ಮತ್ತು ಶೈಕ್ಷಣಿಕ ಬೆಳವಣಿಗೆಯ ಮೇಲೆ ನಕಾರಾತ್ಮಕ ಪರಿಣಾಮ ಬೀರಬಹುದು ಎಂದು ಕೇರಳದ ಶಿಕ್ಷಣ ಸಚಿವ ವಿ. ಶಿವನ್‌ಕುಟ್ಟಿ ಹೇಳಿದ್ದಾರೆ.

ಕೇರಳ ಸರ್ಕಾರವು ಶೀಘ್ರದಲ್ಲೇ ಸರ್ಕಾರಿ ಶಾಲೆಗಳಲ್ಲಿ ಹಿಂಬದಿ ಬೆಂಚಿನಲ್ಲಿ ಕೂರಿಸುವ ಪದ್ಧತಿ ತೆಗೆದುಹಾಕಲು ತೀರ್ಮಾನಿಸಿದೆ. ಈ ಬಗ್ಗೆ ಪರಿಶೀಲನೆ ನಡೆಸಲು ತಜ್ಞರ ಸಮಿತಿಯನ್ನು ರಚಿಸಲಾಗುವುದು.

> ಸಾರ್ವಜನಿಕ ಶಿಕ್ಷಣ ಕ್ಷೇತ್ರದಲ್ಲಿ ಹಲವು ಬದಲಾವಣೆಗಳು ನಡೆಯುತ್ತಿವೆ, ಜಗತ್ತು ಬದಲಾಗುತ್ತಿದೆ. ಬದಲಾವಣೆಗಳಿಗೆ ಅನುಗುಣವಾಗಿ ಶಿಕ್ಷಣ ವ್ಯವಸ್ಥೆಯಲ್ಲಿಯೂ ಬದಲಾವಣೆಗಳಾಗಬೇಕು. ಪಠ್ಯಪುಸ್ತಕ ಪರಿಷ್ಕರಣೆ, ಪರೀಕ್ಷೆಗಳ ನಿರ್ವಹಣೆ, ಶೈಕ್ಷಣಿಕೇತರ ವಿಷಯಗಳಂತಹ ಶೈಕ್ಷಣಿಕ ವಿಷಯಗಳಲ್ಲಿ ನಮ್ಮ ಮಕ್ಕಳು ಬದಲಾವಣೆಯ ಭಾಗವಾಗಲು ಅವಕಾಶ ಸಿಗಬೇಕು.
> – ವಿ. ಶಿವನ್‌ಕುಟ್ಟಿ, ಕೇರಳದ ಶಿಕ್ಷಣ ಸಚಿವ

ಈ ಕ್ರಮವು ವಿದ್ಯಾರ್ಥಿಗಳ ಕಲಿಕೆಯ ಮೇಲೆ ಸಕಾರಾತ್ಮಕ ಪರಿಣಾಮ ಬೀರುತ್ತದೆ ಎಂದು ಶಿಕ್ಷಣ ಸಚಿವ ವಿ. ಶಿವನ್‌ಕುಟ್ಟಿ ಅವರು ಈ ವಿಷಯವನ್ನು ಫೇಸ್‌ಬುಕ್ ಪೋಸ್ಟ್ ಹಂಚಿಕೊಂಡಿದ್ದಾರೆ. ತರಗತಿಯಲ್ಲಿ ಶಿಕ್ಷಕರು ಬೋಧನೆ ಮಾಡುವಾಗ ಪ್ರತಿಯೊಬ್ಬ ವಿದ್ಯಾರ್ಥಿಗೂ ಕೇಳಲು ಮತ್ತು ಸಂವಹನ ನಡೆಸಲು ಸಾಧ್ಯವಾಗಬೇಕು. ಈಗಿನ ಪರಿಸ್ಥಿತಿಯಲ್ಲಿ ಶಿಕ್ಷಕರು ಬೋರ್ಡ್ ಮುಂದೆ ನಿಂತರೆ, ಕೊನೆಯಲ್ಲಿ ಕುಳಿತಿರುವ ಮಗು ಕಾಣಿಸುವುದಿಲ್ಲ. ಇದರಿಂದಾಗಿ ಹಿಂಬದಿಯಲ್ಲಿ

**ಸಮಾನವಾದ ಶಿಕ್ಷಣ ಸಿಗಬೇಕು**

> ಹಿಂಬದಿ ಬೆಂಚು ಎಂಬ ಪರಿಕಲ್ಪನೆಯು ವಿದ್ಯಾರ್ಥಿಯ ಆತ್ಮವಿಶ್ವಾಸ ಮತ್ತು ಕಲಿಕೆಯ ಮೇಲೆ ಕೆಟ್ಟ ಪರಿಣಾಮ ಬೀರಬಹುದು. ಯಾವುದೇ ಮಗುವು ಶಿಕ್ಷಣದಲ್ಲಿ ಅಥವಾ ಜೀವನದಲ್ಲಿ ಹಿಂದೆ ಉಳಿಯಬಾರದು. ಎಲ್ಲಾ ಮಕ್ಕಳಿಗೆ ಸಮಾನ ಅವಕಾಶಗಳನ್ನು ನೀಡುವುದು ನಮ್ಮ ಗುರಿ. ಇದನ್ನು ಹೇಗೆ ಕಾರ್ಯಗತಗೊಳಿಸುವುದು ಎಂದು ನಾವು ಯೋಚಿಸುತ್ತಿದ್ದೇವೆ. ಹಿಂಬದಿ ಬೆಂಚು ಎಂಬ ಕಾರಣಕ್ಕೆ ಯಾವ ವಿದ್ಯಾರ್ಥಿಯೂ ಕೀಳರಿಮೆ ಅನುಭವಿಸಬಾರದು. ಎಲ್ಲರಿಗೂ ಸಮಾನ ಅವಕಾಶ ಸಿಗಬೇಕು? ಎಂಬುದು ಸರ್ಕಾರದ ಆಶಯ ಎಂದು ಶಿವನ್‌ಕುಟ್ಟಿ ಹೇಳಿದ್ದಾರೆ.

ಕುಳಿತಿರುವ ಮಗುವಿಗೆ ಅನೇಕ ನಷ್ಟಗಳು ಉಂಟಾಗುತ್ತವೆ ಹೀಗಾಗಿ ಆದಷ್ಟು ಬೇಗ ನೋ ಮೋರ್ ಬ್ಯಾಕ್‌ಬೆಂಚರ್ಸ್ ಪದ್ಧತಿ ಜಾರಿಗೆ ಬರುವ ಸಾಧ್ಯತೆ ಇದೆ ಎಂದು ಹೇಳಿದ್ದಾರೆ.

## ಮಿನಿ ನ್ಯೂಸ್

### ಅಮಿತ್ ಶಾ ಕುರಿತು ಅವಹೇಳನಕಾರಿ ಹೇಳಿಕೆ ಪ್ರಕರಣದಲ್ಲಿ ರಾಹುಲ್‌ಗೆ ಜಾಮೀನು

**ಚೈಬಾಸಾ:** ಕಳೆದ 2018ರ ರ್‍ಯಾಲಿಯಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ವಿರುದ್ಧ ಅವಹೇಳನಕಾರಿ ಹೇಳಿಕೆ ನೀಡಿದ ಪ್ರಕರಣದಲ್ಲಿ ಲೋಕಸಭೆಯ ಪ್ರತಿಪಕ್ಷದ ನಾಯಕ ರಾಹುಲ್‌ಗಾಂಧಿ ಅವರಿಗೆ ಜಾರ್ಖಂಡ್‌ನ ಚೈಬಾಸಾದ ವಿಶೇಷ ನ್ಯಾಯಾಲಯಜಾಮೀನು ನೀಡಿದೆ. ಜಾರ್ಖಂಡ್ ಹೈಕೋರ್ಟ್ ನಿರ್ದೇಶನದಂತೆ ಬೆಳಗ್ಗೆ 10.55ರ ಸುಮಾರಿಗೆ ನ್ಯಾಯಾಲಯದ ಮುಂದೆ ಹಾಜರಾದ ರಾಹುಲ್ ಗಾಂಧಿ ಅವರು ಜಾಮೀನು ಕೋರಿದ್ದರು. ಅದು ಮಂಜೂರಾಗಿದೆ. ನಾವು ಈಗ ಪ್ರಕ್ರಿಯೆಯನ್ನು ಮುಂದುವರಿಸುತ್ತೇವೆ ಎಂದು ಕಾಂಗ್ರೆಸ್ ಸಂಸದರ ಪರ ವಕೀಲರು ಹೇಳಿದ್ದಾರೆ. ಜೂನ್ 2ರಂದು ಗಾಂಧಿ ಅವರು ಜಾರ್ಖಂಡ್ ಹೈಕೋರ್ಟ್‌ನ ಮೊರೆ ಹೋಗಿದ್ದರು. ಇಲ್ಲಿನ ವಿಶೇಷ ನ್ಯಾಯಾಲಯದ ಹಿಂದಿನ ಆದೇಶವನ್ನು ಪ್ರಶ್ನಿಸಿ, ಜೂನ್ 26ರಂದು ತನ್ನ ಮುಂದೆ ಹಾಜರಾಗುವಂತೆ ಸೂಚಿಸಿತ್ತು. ಕಾಂಗ್ರೆಸ್ ಸಂಸದರ ವಕೀಲರು ತಮ ಕಕ್ಷಿದಾರರು ನಿಗದಿತ ದಿನದಂದು ಹಾಜರಾಗಲು ಸಾಧ್ಯವಾಗುವುದಿಲ್ಲ ಎಂದು ಜೂನ್ 10ರಂದು ಹೈ ಕೋರ್ಟ್‌ಗೆ ತಿಳಿಸಿದ್ದರು, ಬದಲಿಗೆ ಆಗಸ್ಟ್ 6ರಂದು ಹಾಜರಾಗಲು ಅವಕಾಶ ನೀಡುವಂತೆ ಮನವಿ ಮಾಡಿದರು. ಅವರ ಮನವಿಯನ್ನು ಹೈಕೋರ್ಟ್ ಪುರಸ್ಕರಿಸಿತ್ತು. 2018ರಲ್ಲಿ ಚೈಬಾಸಾದಲ್ಲಿ ನಡೆದ ರ್‍ಯಾಲಿಯಲ್ಲಿ ಕೇಂದ್ರ ಗೃಹ ಸಚಿವರ ವಿರುದ್ಧ ಅವಹೇಳನಕಾರಿ ಹೇಳಿಕೆಗಳನ್ನು ನೀಡಿದ ಆರೋಪದ ಮೇಲೆ ಪ್ರತಾಪ್‌ಕುಮಾರ್ ಎಂಬ ವ್ಯಕ್ತಿ ಗಾಂಧಿ ವಿರುದ್ಧ ಮಾನನಷ್ಟ ಮೊಕದ್ದಮೆ ಹೂಡಿದ್ದರು.

ಕುಮಾರ್ ಅವರು ಚೈಬಾಸಾದ ಮ್ಯಾಜಿಸ್ಟ್ರೇಟ್ ನ್ಯಾಯಾಲಯಕ್ಕೆ ಸಲ್ಲಿಸಿದ ಅರ್ಜಿಯಲ್ಲಿ, ಗಾಂಧಿಯವರ ಹೇಳಿಕೆಗಳು ಮಾನಹಾನಿಕರ ಮತ್ತು ಉದ್ದೇಶಪೂರ್ವಕವಾಗಿ ಷಾ ಅವರ ಘನತೆಗೆ ಧಕ್ಕೆ ತರಲು ಮಾಡಲಾಗಿದೆ ಎಂದು ಆರೋಪಿಸಿದ್ದರು.ಲೋಕಸಭೆಯ ವಿರೋಧ ಪಕ್ಷದ ನಾಯಕ ಗಾಂಧಿ ಅವರು ಮಂಗಳವಾರ ಜಾರ್ಖಂಡ್‌ಗೆ ಆಗಮಿಸಿದ್ದು, ಹಿರಿಯ ಬುಡಕಟ್ಟು ನಾಯಕ ಮತ್ತು ಮಾಜಿ ಮುಖ್ಯಮಂತ್ರಿ ಶಿಬು ಸೊರೆನ್ ಅವರ ಅಂತ್ಯಕ್ರಿಯೆಯಲ್ಲಿ ಪಾಲ್ಗೊಳ್ಳಲು ಪಕ್ಕದ ರಾಮಗಢ ಜಿಲ್ಲೆಯ ನೆಮ್ರಾ ಅವರ ಪೂರ್ವಜರ ಗ್ರಾಮವಾಗಿದೆ. ಅಧಿಕಾರಿಗಳ ಪ್ರಕಾರ, ಗಾಂಧಿ ರಾಂಚಿಯಿಂದ ಹೆಲಿಕಾಪ್ಟರ್‌ನಲ್ಲಿ ಚೈಬಾಸಾಗೆ ತಲುಪಿದರು.ಈ ಉದ್ದೇಶಕ್ಕಾಗಿ ಟಾಟಾ ಕಾಲೇಜು ಮೈದಾನದಲ್ಲಿ ಹೆಲಿಪ್ಯಾಡ್ ಸ್ಥಾಪಿಸಲಾಗಿದೆ ಎಂದು ಅವರು ಹೇಳಿದರು.

### ಮಾವೋವಾದಿ ಮಾರ್ಟಿನ್ ಖತಂ

**ಗುಮ್ಲಾ:** ಜಾರ್ಖಂಡ್‌ನಲ್ಲಿ ನಿಷೇಧಿತ ಮಾವೋವಾದಿ ಸಂಘಟನೆ ಪೀಪಲ್ಸ್ ಲಿಬರೇಶನ್ ಫ್ರಂಟ್ ಆಫ್ ಇಂಡಿಯಾನ ಏರಿಯಾ ಕಮಾಂಡರ್‌ನನ್ನು ಹತ್ಯೆ ಮಾಡಲಾಗಿದೆ. ಆತನ ತಲೆಗೆ 15 ಲಕ್ಷ ರೂ. ಬಹುಮಾನವನ್ನು ಹೊಂದಿದ್ದ ಮಾವೋವಾದಿ ಗುಮ್ಲಾ ಜಿಲ್ಲೆಯಲ್ಲಿ ಭದ್ರತಾ ಪಡೆಗಳೊಂದಿಗೆ ನಡೆದ ಗುಂಡಿನ ಚಕಮಕಿಯಲ್ಲಿ ಸಾವನ್ನಪ್ಪಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ. ರಾತ್ರಿ 9.30 ರ ಸುಮಾರಿಗೆ ಕಾಮದಾರ ಪೊಲೀಸ್ ಠಾಣೆ ವ್ಯಾಪ್ತಿಯ ಚಂಗಬಾದಿ ಉಪಟೋಲಿ ಪ್ರದೇಶದಲ್ಲಿ ಪಡೆಗಳು ಶೋಧ ಕಾರ್ಯಾಚರಣೆ ನಡೆಸುತ್ತಿದ್ದಾಗ ಪಿಎಲ್‌ಎಫ್‌ಐ ಸದಸ್ಯರು, ಭದ್ರತಾ ಪಡೆಗಳ ನಡುವೆ ಗುಂಡಿನ ಚಕಮಕಿ ನಡೆಯಿತು ಎಂದು ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಭದ್ರತಾ ಪಡೆಗಳು ಚಂಗಬಾದಿ ಉಪಟೋಲಿಯನ್ನು ತಲುಪುತ್ತಿದ್ದಂತೆ, ಮಾವೋವಾದಿಗಳು ಅವರ ಮೇಲೆ ಗುಂಡು ಹಾರಿಸಲು ಪ್ರಾರಂಭಿಸಿದರು. ಭದ್ರತಾ ಸಿಬ್ಬಂದಿ ಕೂಡ ಪ್ರತಿದಾಳಿ ನಡೆಸಿದರು, ಇದರಲ್ಲಿ ಪಿಎಲ್‌ಎಫ್‌ಐ ಏರಿಯಾ ಕಮಾಂಡರ್ ಮಾರ್ಟಿನ್ ಕೆರ್ಕೆಟ್ಟಾ ಕೊಲ್ಲಲ್ಪಟ್ಟರು. ಅವರ ಬಳಿಯಿಂದ ಒಂದು ಆಯುಧವನ್ನು ಸಹ ವಶಪಡಿಸಿಕೊಳ್ಳಲಾಗಿದೆ ಎಂದು ಗುಮ್ಲಾ ಪೊಲೀಸ್ ಸೂಪರಿಂಟೆಂಡೆಂಟ್ ಹರಿಸ್ ಬಿನ್ ಜಮಾನ್ ಪಿಟಿಐಗೆ ತಿಳಿಸಿದ್ದಾರೆ. ಗುಮ್ಲಾ ಎಸ್ಪಿ ಅವರು ಈ ಪ್ರದೇಶದಲ್ಲಿ ಕೆಲವು ಮಾವೋವಾದಿಗಳು ಇರುವ ಬಗ್ಗೆ ಸುಳಿವು ಪಡೆದಿದ್ದು, ಅದರ ಪ್ರಕಾರ, ಕಾರ್ಯಾಚರಣೆ ನಡೆಸಲು ವಿಶೇಷ ತಂಡವನ್ನು ರಚಿಸಲಾಗಿದೆ ಎಂದು ಹೇಳಿದರು. ಶೋಧ ಕಾರ್ಯಾಚರಣೆ ಇನ್ನೂ ಮುಂದುವರೆದಿದೆ ಎಂದು ಎಸ್‌ಪಿ ಹೇಳಿದರು.

### ಜಾಗತಿಕ ಸೈಬರ್ ವಂಚನೆ : ಕೋಟಿ ಕೋಟಿ ವಂಚಿಸಿದವರ ಬೆನ್ನತ್ತಿದ ಇಡಿ

**ನವದೆಹಲಿ:** ಜಾಗತಿಕ ಸೈಬರ್ ವಂಚನೆ ಜಾಲಕ್ಕೆ ಸಂಬಂಧಿಸಿದ ಹಣ ವರ್ಗಾವಣೆ ತನಿಖೆಯ ಭಾಗವಾಗಿ, ಜಾರಿ ನಿರ್ದೇಶನಾಲಯವು ಇಂದು ರಾಷ್ಟ್ರ ರಾಜಧಾನಿ, ಉತ್ತರಾಖಂಡದ ಅನೇಕ ಸ್ಥಳಗಳಲ್ಲಿ ಶೋಧ ನಡೆಸಿದ್ದು, ಈ ಪ್ರಕರಣದಲ್ಲಿ ಭಾರತೀಯ, ವಿದೇಶಿ ಪ್ರಜೆಗಳಿಗೆ ಕೋಟ್ಯಂತರ ರೂಪಾಯಿಗಳ ಹಣವನ್ನು ವಂಚಿಸಲಾಗಿದೆ ಎಂದು ಅಧಿಕೃತ ಮೂಲಗಳು ತಿಳಿಸಿವೆ. ಹಣ ವರ್ಗಾವಣೆ ತಡೆ ಕಾಯ್ದೆ ಅಡಿಯಲ್ಲಿ ದಾಳಿ ನಡೆಸಲಾಗುತ್ತಿದ್ದು, ದೆಹಲಿ, ನೋಯ್ಡಾ, ಗುರುಗ್ರಾಮ್ ಮತ್ತು ಡೆಹ್ರಾಡೂನ್‌ನಲ್ಲಿರುವ ಕನಿಷ್ಠ 11 ಆವರಣಗಳನ್ನು ಒಳಗೊಂಡಿದೆ ಎಂದು ಮೂಲಗಳು ತಿಳಿಸಿವೆ. ಈ ನಗರಗಳಲ್ಲಿ ನೆಲೆಸಿರುವ ವಂಚಕರು ಪೊಲೀಸ್ ಅಥವಾ ತನಿಖಾ ಸಂಸ್ಥೆಯ ಅಧಿಕಾರಿಗಳಂತೆ ನಟಿಸುವ ಮೂಲಕ ಭಾರತೀಯ ಮತ್ತು ವಿದೇಶಿ ಪ್ರಜೆಗಳನ್ನು ವಂಚಿಸುತ್ತಿದ್ದರು ಮತ್ತು ಬಂಧನದ ಪರಿಣಾಮಗಳನ್ನು ಎದುರಿಸುವುದಾಗಿ ಬೆದರಿಕೆ ಹಾಕುವ ಮೂಲಕ ಅವರು ಹಣವನ್ನು ಸುಲಿಗೆ ಮಾಡುತ್ತಿದ್ದರು ಎಂದು ಅವರು ಹೇಳಿದರು.

ವಂಚಕರು ಮೈಕ್ರೋಸಾಫ್ಟ್, ಅಮೆಜಾನ್ ತಾಂತ್ರಿಕ ಬೆಂಬಲ ಸೇವಾ ಏಜೆಂಟ್‌ಗಳಂತೆ ಸೋಗು ಹಾಕಿ ಬಲಿಪಶುಗಳನ್ನು ವಂಚಿಸಲು ಸಹ ಪ್ರಯತ್ನಿಸಿದರು. ಬಲಿಪಶುಗಳ ವಿತ್ತೀಯ ಸ್ವತ್ತುಗಳನ್ನು ಕ್ರಿಪ್ಟೋ ಕರೆನ್ಸಿಗಳಾಗಿ ಪರಿವರ್ತಿಸಿ ಆರೋಪಿಗಳಿಗೆ ವರ್ಗಾಯಿಸಲಾಗಿದೆ ಎಂದು ಸಂಸ್ಥೆ ಕಂಡುಹಿಡಿದಿದೆ. ಆರೋಪಿಗಳು ಬಹು ಕ್ರಿಪ್ಟೋ–ವ್ಯಾಲೆಟ್‌ಗಳಲ್ಲಿ ಸುಮಾರು 260 ಕೋಟಿ ರೂ. ಬಿಟ್‌ಕಾಯಿನ್‌ಗಳ ರೂಪದಲ್ಲಿ ಗಳಿಸಿದ್ದಾರೆ. ನಂತರ ಅವುಗಳನ್ನು ಯುಎಇ ಮೂಲದ ಅನೇಕ ಹವಾಲಾ ನಿರ್ವಾಹಕರು, ವ್ಯಕ್ತಿಗಳ ಮೂಲಕ ಪರಿವರ್ತಿಸುವ ಮೂಲಕ ನಗದು ರೂಪದಲ್ಲಿ ಪರಿವರ್ತಿಸಲಾಗಿದೆ ಎಂದು ಏಜೆನ್ಸಿ ಮೂಲಗಳು ತಿಳಿಸಿವೆ. ಸಿಬಿಐ, ದೆಹಲಿ ಪೊಲೀಸರು ದಾಖಲಿಸಿದ ಎಫ್‌ಐಆರ್‌ಗಳಿಂದ ಹಣ ವರ್ಗಾವಣೆ ಪ್ರಕರಣ ಹುಟ್ಟಿಕೊಂಡಿದೆ.

### ಮೊದಲರಾತ್ರಿಯೇ ಆತ್ಮಹತ್ಯೆಗೆ ಶರಣಾದ ವಧು

**ಆಂಧ್ರಪ್ರದೇಶ:** ತನ್ನ ಮೊದಲ ರಾತ್ರಿಯೇ ವಧು ಆತಹತ್ಯೆ ಮಾಡಿಕೊಂಡಿರುವ ಘಟನೆ ಆಂಧ್ರ ಪ್ರದೇಶದ ಸತ್ಯಸಾಯಿ ಜಿಲ್ಲೆಯಲ್ಲಿ ನಡೆದಿದೆ. ಪೆನುಕೊಂಡದ ಸೋಮಂಡೆಪಲ್ಲಿಯಲ್ಲಿ ಈ ಘಟನೆ ನಡೆದಿದ್ದು, ಹರ್ಷಿತಾ ಎಂಬ 22 ವರ್ಷದ ವಧು ತನ್ನ ಮದುವೆಯ ಮೊದಲ ರಾತ್ರಿಯೇ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಹರ್ಷಿತಾ ಕರ್ನಾಟಕದ ನಾಗೇಂದ್ರ ಎಂಬುವವರನ್ನು ಮದುವೆಯಾಗಿದ್ದರು. ದಂಪತಿ ವಧುವಿನ ಮನೆಯಲ್ಲಿದ್ದರು. ಮೊದಲ ರಾತ್ರಿಗೆ ಎಲ್ಲಾ ವ್ಯವಸ್ಥೆಗಳು ನಡೆಯುತ್ತಿದ್ದವು.

ನಾಗೇಂದ್ರ ಸಿಹಿತಿಂಡಿ ತರಲು ಹೊರಗೆ ಹೋಗಿದ್ದರು. ಅವರು ಹಿಂದಿರುಗಿದಾಗ ಕೋಣೆ ಲಾಕ್ ಆಗಿತ್ತು.ಪದೇ ಪದೆ ಬಾಗಿಲು ಬಡಿದರೂ ಯಾರೂ ಉತ್ತರಿಸಲಿಲ್ಲ,ಕುಟುಂಬ ಸದಸ್ಯರು ಮತ್ತು ಸಂಬಂಧಿಕರು ಬಾಗಿಲು ಒಡೆದು ನೋಡಿದಾಗ ಹರ್ಷಿತಾ ಮೃತಪಟ್ಟಿರುವುದು ಕಂಡುಬಂದಿದೆ. ಅವರು ಆಕೆಯನ್ನು ಪೆನುಕೊಂಡ ಸರ್ಕಾರಿ ಆಸ್ಪತ್ರೆಗೆ ಕರೆದೊಯ್ದರು, ಅಲ್ಲಿ ವೈದ್ಯರು ಆಕೆ ಮೃತಪಟ್ಟಿರುವುದಾಗಿ ಘೋಷಿಸಿದರು.

# ರಾಜವರ್ಧನ್ ದಿವ್ಯ ದಂಪತಿ ಆ್ಯನಿವರ್ಸರಿ ಸೆಲಬ್ರೇಷನ್



ಸ್ಯಾಂಡಲ್‌ವುಡ್‌ನ ನಟ, ಡಿಂಗ್ರಿ ನಾಗರಾಜ್ ಪುತ್ರ ರಾಜವರ್ಧನ್ ಹಾಗೂ ಪತ್ನಿ ದಿವ್ಯ ಮಾಲ್ಡೀವ್‌ಕಡಲ ಕಿನಾರೆಯಲ್ಲಿ ತಮ್ಮ ವಿವಾಹ ವಾರ್ಷಿಕೋತ್ಸವವನ್ನ ಆಚರಿಸಿಕೊಂಡಿದ್ದಾರೆ. ವಿವಾಹ ವಾರ್ಷಿಕೋತ್ಸವ ಆಚರಣೆಯ ಬ್ಯೂಟಿಫುಲ್ ಮುಮೆಂಟ್ಸ್‌ಳನ್ನ ಕ್ಯಾಮೆರಾದಲ್ಲಿ ಸೆರೆಹಿಡಿದು ತಮ್ಮ ಸೋಷಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದಾರೆ. ಸಿನಿಮಾಗಳ ನಟನೆಯ ಜೊತೆಗೆ ನಿರ್ಮಾಣಕ್ಕೂ ಕೈಹಾಕಿರುವ ರಾಜವರ್ಧನ್ ಇದರ ಮಧ್ಯದಲ್ಲಿಯೂ ಫ್ಯಾಮಿಲಿಗೆ ಕೂಡ ಟೈಂ ಕೊಟ್ಟಿದ್ದಾರೆ. ಸ್ಪೆಷಲ್ ಡೇಯನ್ನ ಸ್ಪೆಷಲ್ ಜಾಗದಲ್ಲಿ ಕಳೆಯೋಕೆ ವಿದೇಶಕ್ಕೆ ಹಾರಿದ್ದಾರೆ. ಇದೇ ವರ್ಷ ತೆರೆಕಂಡ ಗಜರಾಮ ಸಿನಿಮಾ ಬಳಿಕ ಜಾವಾ ಸಿನಿಮಾದಲ್ಲಿ ತೊಡಗಿಸಿಕೊಂಡಿದ್ದಾರೆ ರಾಜವರ್ಧನ್. ಬಿಚ್ಚುಗತ್ತಿ, ಹಿರಣ್ಯ ಹಾಗೂ ಗಜರಾಮ ಸಿನಿಮಾದಲ್ಲಿ ನಟಿಸಿರುವ ರಾಜವರ್ಧನ್ ಕನ್ನಡ ಚಿತ್ರರಂಗದಲ್ಲಿ ಹೊಸ ಪ್ರಯತ್ನಕ್ಕೆ ಕೈಹಾಕಿದ್ದಾರೆ. ತಮ್ಮ ನಿರ್ಮಾಣ ಸಂಸ್ಥೆಯ ಮೂಲಕ ಹೊಸ ಹೊಸ ಪ್ರಯತ್ನ ಮಾಡಲು ಮುಂದಾಗಿದ್ದಾರೆ. ಸದ್ಯ ಸುಂದರ ಮಾಲ್ಡೀವ್ಸ್‌ನ ತಾಣದಲ್ಲಿ ಪತ್ನಿ ಜೊತೆ ಆ್ಯನಿವರ್ಸರಿ ಸೆಲಬ್ರೇಷನ್ ಮಾಡ್ತಿದ್ದಾರೆ.

# ಧನುಶ್ ಜೊತೆ ಮೃಣಾಲ್ ಡೇಟಿಂಗ್



ತಮಿಳು ನಟ ಧನುಶ್ ಹಾಗೂ ಸೀತಾ ರಾಮಂ ಬೆಡಗಿ ಮೃಣಾಲ್ ಠಾಕೂರ್ ಪ್ರೀತಿಯಲ್ಲಿ ಬಿದ್ದಿದ್ದಾರೆ ಎಂಬ ಸುದ್ದಿ ವೈರಲ್ ಆಗಿದೆ. ಇದಕ್ಕೆ ಸಾಕ್ಷಿ ಇಬ್ಬರ ನಡುವಿನ ಭಾರೀ ಅನ್ಯೋನ್ಯತೆ. ಇಬ್ಬರೂ ಒಟ್ಟಿಗೆ ಸಿನಿಮಾದಲ್ಲಿ ನಟಿಸದಿದ್ದರೂ ಈ ಮಟ್ಟಿಗೆ ಸ್ನೇಹ ಹೇಗೆ ಉಂಟಾಯಿತು ಎಂದು ಪ್ರಶ್ನೆ ಹುಟ್ಟುಹಾಕಿದೆ. ಮೃಣಾಲ್ ಕೈ ಹಿಡಿದಿರುವ ಧನುಶ್ ಫೋಟೋ ವೈರಲ್ ಆಗಿದೆ. ಅಷ್ಟಕ್ಕೂ ಇದು ನಡೆದಿದ್ದು ತೇರೆ ಇಷ್ಕ್ ಮೆ ಚಿತ್ರದ ಶೂಟಿಂಗ್ ರಯಾಪ್ ಅಪ್ ಪಾರ್ಟಿಯಲ್ಲಿ ಎಂದು ಹೇಳಲಾಗುತ್ತಿದೆ. ಈ ಚಿತ್ರಕ್ಕೂ ಮೃಣಾಲ್‌ಗೂ ಯಾವುದೇ ಸಂಬಂಧ ಇಲ್ಲದಿದ್ದರೂ ಮೃಣಾಲ್ ಈ ಪಾರ್ಟಿಯಲ್ಲಿದ್ದರು ಎನ್ನಲಾಗುವ ಫೋಟೋ ವೈರಲ್ ಆಗಿದೆ. ಇಬ್ಬರ ನಡುವಿನ ಆಪ್ತತೆ ನೋಡುಗರಲ್ಲಿ ಪ್ರೇಮ ಸಂಬಂಧವನ್ನೇ ಕಲ್ಪಿಸುತ್ತಿದೆ.

ಈ ಹಿಂದೆ ಮೃಣಾಲ್ ಅಭಿನಯದ ಸನ್ ಆಫ್ ಸರ್ದಾರ್ 2 ಚಿತ್ರದ ಸ್ಪೆಷಲ್ ಸ್ಕ್ರೀನಿಂಗ್‌ನಲ್ಲಿ ಪಾಲ್ಗೊಳ್ಳಲು ಚೆನ್ನೈನಿಂದ ಮುಂಬೈಗೆ ಧನುಶ್ ಬಂದಿದ್ದರು. ಈ ಎರಡು ಘಟನೆಗಳು ಅನುಮಾನಕ್ಕೆ ಇನ್ನಷ್ಟು ಪುಷ್ಠಿ ನೀಡಿದೆ. ಇಬ್ಬರ ಮೊದಲ ಭೇಟಿ ಸೀತಾರಾಮಂ ಸಕ್ಸಸ್ ಇವೆಂಟ್‌ನಲ್ಲಿ ನಡೆದಿತ್ತು. ಅಲ್ಲಿಂದ ಸ್ನೇಹ ಶುರುವಾಗಿದೆ ಎಂಬ ಮಾತು ಕೇಳಿಬರುತ್ತಿದೆ.

ಅಂದಹಾಗೆ ಧನುಶ್ ಈಗಾಗಲೇ ರಜನಿಕಾಂತ್ ಪುತ್ರಿ ಐಶ್ವರ್ಯರನ್ನು ವಿವಾಹವಾಗಿ ವಿಚ್ಛೇದನವನ್ನು ನೀಡಿದ್ದರು.

# ಉಪೇಂದ್ರಾಗೆ ಮಾಲಾಶ್ರೀ ಮಗಳು ಆರಾಧನಾ ಜೋಡಿ

ಕಾಟೇರ ಚಿತ್ರದ ಮೂಲಕ ನಾಯಕಿಯಾಗಿ ಎಂಟ್ರಿ ಕೊಟ್ಟಿದ್ದ ಮಾಲಾಶ್ರೀ ಪುತ್ರಿ ಆರಾಧನಾ ಇದೀಗ ಬಹಳ ಗ್ಯಾಪ್ ಬಳಿಕ ಎರಡನೇ ಚಿತ್ರವನ್ನು ಒಪ್ಪಿಕೊಂಡಿದ್ದಾರೆ. ಉಪೇಂದ್ರ ಅಭಿನಯದ ನೆಕ್ಸ್ಟ್ ಲೆವೆಲ್ ಚಿತ್ರಕ್ಕೆ ನಾಯಕಿಯಾಗಿ ಎಂಟ್ರಿಯಾಗಿದ್ದಾರೆ ತರುಣ್ ಸ್ಟುಡಿಯೋಸ್ ಬ್ಯಾನರ್‌ನಲ್ಲಿ ತರುಣ್ ಶಿವಪ್ಪ ಬಿಗ್ ಬಜೆಟ್ ಪ್ಯಾನ್ ಇಂಡಿಯಾ ಚಿತ್ರವನ್ನು ನಿರ್ಮಿಸುತ್ತಿದ್ದಾರೆ. ಈ ಚಿತ್ರವನ್ನು ಅರವಿಂದ್ ಕೌಶಿಕ್ ನಿರ್ದೇಶಿಸುತ್ತಿದ್ದು ಶೀರ್ಷಿಕೆ, ಕಾಂಬಿನೇಷನ್ ಎಲ್ಲವೂ ಘೋಷಣೆಯಾದಾಗಲೇ ಹೊಸ ವೈಬ್ ಸೃಷ್ಟಿಸಿತ್ತು. ಇದೀಗ ನಾಯಕಿ ಆಯ್ಕೆಯಲ್ಲೂ ಆರಂಭದಲ್ಲೇ ಸಿನಿಮಾ ಟೀಮ್ ಸೆನ್ಸೇಷನ್ ಕ್ರಿಯೇಟ್ ಮಾಡಿದೆ. ಉಪೇಂದ್ರಾಗೂ ಆರಾಧನಾಗೂ ವಯಸ್ಸಿನ ಭಾರೀ ಅಂತರವಿದ್ದು ಈ ಜೋಡಿ ತೆರೆ ಮೇಲೆ ಹೇಗೆ ಕಾಣಿಸಿಕೊಳ್ಳುತ್ತದೆ ಎನ್ನುವುದೇ ಕುತೂಹಲ. ಈ ಪ್ರಶ್ನೆಗೆ ಉತ್ತರಿಸಿದ ಚಿತ್ರತಂಡ, ಸಿನಿಮಾ ಕಥೆಯಲ್ಲಿ ಇಬ್ಬರ ವಯಸ್ಸಿಗೂ ನ್ಯಾಯ ಕೊಡುವ ಪಾತ್ರ ಹೆಣೆಯಲಾಗಿದ್ದು ಸಿನಿಮಾ ನೋಡಿದ ಬಳಿಕ ಅದರ ರಹಸ್ಯ ತಿಳಿಯಲಿದೆ ಎಂದಿದೆ. ನೆಕ್ಸ್ಟ್ ಲೆವೆಲ್ ಈ ಚಿತ್ರದ ಶೂಟಿಂಗ್ ಇದೇ ಬರುವ ನವೆಂಬರ್‌ನಿಂದ ಪ್ರಾರಂಭವಾಗಲಿದ್ದು ಸದ್ಯಕ್ಕೆ ಪ್ರೀಪ್ರೊಡಕ್ಷನ್ ತಯಾರಿ ನಡೆಯುತ್ತಿದೆ. ಕಾಟೇರ ಚಿತ್ರದ ಬಳಿಕ ಆ ಪಾತ್ರಕ್ಕಿಂತ ಭಿನ್ನ ಕ್ಯಾರೆಕ್ಟರ್ ಹುಡುಕುತ್ತಿದ್ದ ನಟಿ ಆರಾಧನಾ ಅಪ್ರೋಚ್ ಆಗಿದ್ದ ಬೇರೆಲ್ಲಾ ಆಫರ್‌ಗಳನ್ನ ಫಿಲ್ಟರ್ ಮಾಡಿ ನೆಕ್ಸ್ಟ್ ಲೆವೆಲ್ ಸಿನಿಮಾವನ್ನು ಒಪ್ಪಿಕೊಂಡಿದ್ದಾರೆ. ಇಲ್ಲಿ ಆರಾಧನಾ ಕಾಟೇರದ ನಾಯಕಿ ಪ್ರಭಾ ಪಾತ್ರದ ವಿರುದ್ಧ ಪಾತ್ರದಲ್ಲಿ ನಟಿಸುತ್ತಿದ್ದು ಗ್ಲ್ಯಾಮರ್ ಆಗಿ ಕಾಣಿಸಿಕೊಳ್ಳಲಿದ್ದಾರೆ. ಲುಕ್ ಟೆಸ್ಟ್ ಫೋಟೋಶೂಟ್ ಕೂಡ ಮಾಡಿಸಲಾಗಿದ್ದು ಆರಾಧನಾ ಸಖತ್ ಆಗಿ ಮಿಂಚಿದ್ದಾರೆ.



ಸದ್ಯಕ್ಕೆ ಪ್ರೀಪ್ರೊಡಕ್ಷನ್ ತಯಾರಿ

# ಮತ್ತೆ ವಿವಾದದಲ್ಲಿ ಕಮಲ್ ಹಾಸನ್

ತಮಿಳುನಾಡಿನಲ್ಲಿ ಸಿನಿಮಾ ನಿಷೇಧಕ್ಕೆ ಆಗ್ರಹ

ಕಮಲ್ ಹಾಸನ್ ಇತ್ತೀಚೆಗೆ ತಮ್ಮ ಸಿನಿಮಾಗಳಿಗಿಂತಲೂ ವಿವಾದಗಳಿಂದಲೇ ಹೆಚ್ಚಾಗಿ ಸುದ್ದಿ ಆಗುತ್ತಿದ್ದಾರೆ. 'ಥಗ್ ಲೈಫ್' ಸಿನಿಮಾ ಬಿಡುಗಡೆ ಸಮಯದಲ್ಲಿ ಕಮಲ್ ಹಾಸನ್ ಆಡಿದ್ದ ಮಾತುಗಳು ಕರ್ನಾಟಕದಲ್ಲಿ ಕಿಚ್ಚು ಹಚ್ಚಿದ್ದವು. ಇದೀಗ ಮತ್ತೊಮ್ಮೆ ತಮ್ಮ ಮಾತುಗಳಿಂದ ಅಂಥಹುದೇ ಒಂದು ವಿವಾದಕ್ಕೆ ಸಿಲುಕಿದ್ದಾರೆ. ಭಾರತದ ಸ್ಟಾರ್ ನಟರುಗಳಲ್ಲಿ ಒಬ್ಬರಾಗಿರುವ ಕಮಲ್ ಹಾಸನ್ ಇತ್ತೀಚೆಗೆ ತಮ್ಮ ಸಿನಿಮಾಗಳಿಗಿಂತಲೂ ಹೇಳಿಕೆಗಳಿಂದ ಹೆಚ್ಚು ಸುದ್ದಿಯಾಗುತ್ತಿದ್ದಾರೆ. 'ಥಗ್ ಲೈಫ್' ಸಿನಿಮಾ ಬಿಡುಗಡೆ ಸಮಯದಲ್ಲಿ ಕಮಲ್ ಹಾಸನ್ ಕನ್ನಡ ಭಾಷೆಯ ಉಗಮದ ಬಗ್ಗೆ ಆಡಿದ್ದ ಮಾತು ಭಾರಿ ವಿವಾದಕ್ಕೆ ಕಾರಣವಾಗಿತ್ತು. ಕಮಲ್ ಹಾಸನ್ ಆಡಿದ ಮಾತಿನಿಂದಾಗಿ ಅವರ 'ಥಗ್ ಲೈಫ್' ಸಿನಿಮಾ ಕರ್ನಾಟಕದಲ್ಲಿ ಬಿಡುಗಡೆ ಆಗಲಿಲ್ಲ, ಜೊತೆಗೆ ಸಿನಿಮಾ ಧಾರುಣವಾಗಿ ಸೋಲು ಕಂಡಿತು. ಆದರೆ ಇದೀಗ ಮತ್ತೊಮ್ಮೆ ಕಮಲ್ ಹಾಸನ್ ತಮ್ಮ ಮಾತಿನ ಕಾರಣಕ್ಕೆ ವಿವಾದದ ಕೇಂದ್ರವಾಗಿದ್ದಾರೆ.


ಕಮಲ್ ಹಾಸನ್ ಅವರು ಆಡಿರುವ ಮಾತಿಗೆ ಅವರ ರಾಜ್ಯದಲ್ಲಿಯೇ ವಿರೋಧ ವ್ಯಕ್ತವಾಗಿದೆ.ಮಾತ್ರವಲ್ಲದೆ ತಮಿಳುನಾಡಿನಲ್ಲಿ ಕಮಲ್ ಹಾಸನ್ ಅವರ ಸಿನಿಮಾಗಳಿಗೆ ನಿಷೇಧ ಹೇರುವಂತೆ ಒತ್ತಾಯ ಕೇಳಿ ಬರುತ್ತಿದೆ.

ಈ ಹಿಂದೆ ಕನ್ನಡ ಭಾಷೆಯ ಬಗ್ಗೆ ಮಾತನಾಡಿ ಕೈಸುಟ್ಟುಕೊಂಡಿದ್ದ ಕಮಲ್ ಹಾಸನ್ ಈ ಬಾರಿ ಧರ್ಮದ ಬಗ್ಗೆ ಮಾತನಾಡಿ ವಿವಾದವನ್ನು ಮೈಮೇಲೆ ಎಳೆದುಕೊಂಡಿದ್ದಾರೆ. ತಮಿಳಿನ ಸ್ಟಾರ್ ನಟ ಸೂರ್ಯ ಅವರು ಅರಗಂ ಹೆಸರಿನ ಫೌಂಡೇಶನ್ ಹೊಂದಿದ್ದು, ಆ ಫೌಂಡೇಶನ್ ಮೂಲಕ ಅದ್ಭುತ ಕೆಲಸಗಳನ್ನು ಅವರು ಮಾಡುತ್ತಿದ್ದಾರೆ. 6700ಕ್ಕೂ ಹೆಚ್ಚು ಮಕ್ಕಳಿಗೆ ಈ ಫೌಂಡೇಶನ್ ಮೂಲಕ ಉಚಿತ ಶಿಕ್ಷಣ ನಿಡಲಾಗಿದೆ. ಈ ಫೌಂಡೇಶನ್ ನೆರವು ಪಡೆದು 51 ಮಂದಿ ಡಾಕ್ಟರ್‌ಗಳಾಗಿದ್ದಾರೆ. ನೂರಾರು ಮಂದಿ ಎಂಜಿನಿಯರ್‌ಗಳು ಹಾಗೂ ಇತರೆ ಕ್ಷೇತ್ರದಲ್ಲಿ ಉದ್ಯೋಗ ಮಾಡುತ್ತಿದ್ದಾರೆ. ಇತ್ತೀಚೆಗಷ್ಟೆ ಫೌಂಡೇಶನ್‌ನ 15ನೇ ವಾರ್ಷಿಕೋತ್ಸವ ಆಯೋಜಿಸಲಾಗಿತ್ತು. ಕಾರ್ಯಕ್ರಮದಲ್ಲಿ ಕಮಲ್ ಹಾಸನ್ ಅತಿಥಿಯಾಗಿ ಭಾಗಿ ಆಗಿದ್ದರು. ಕಾರ್ಯಕ್ರಮದಲ್ಲಿ ಸೂರ್ಯ ಅವರ ಈ ಮಹತ್ ಕಾರ್ಯವನ್ನು ಕೊಂಡಾಡಿದ ಕಮಲ್ ಹಾಸನ್, ಅದೇ ಕಾರ್ಯಕ್ರಮದಲ್ಲಿ ನೀಟ್ ವ್ಯವಸ್ಥೆಯನ್ನು ವಿರೋಧಿಸಿದರು. 'ನೀಟ್, ಹೆಚ್ಚಿನ ವಿದ್ಯಾರ್ಥಿಗಳಿಗೆ ವಿಶೇಷವಾಗಿ ಕೆಳಹಂತದಿಂದ ಬರುವ ವಿದ್ಯಾರ್ಥಿಗಳಿಗೆ ವೈದ್ಯಕೀಯ ಕೋರ್ಸ್‌ನ ಕನಸನ್ನು ನನಸಾಗಲು ಬಿಡುತ್ತಿಲ್ಲ. ಇದೇ ಕಾರಣಕ್ಕೆ ನಾವು ಅದನ್ನು ವಿರೋಧಿಸುತ್ತಾ ಬಂದಿದ್ದೇವೆ. ಈಗ ಯುದ್ಧ ನಡೆಯುತ್ತಿದೆ. ಈ ಯುದ್ಧವನ್ನು ಕೇವಲ ಶಿಕ್ಷಣದಿಂದ ಮಾತ್ರವೇ ಗೆಲ್ಲಲು ಸಾಧ್ಯ. ಸರಪಳಿಗಳನ್ನು ಒಡೆಯುವ ಆಯುಧ ಶಿಕ್ಷಣವೊಂದೇ, ಸರ್ವಾಧಿಕಾರಿ ಹಾಗೂ ಸನಾತನವನ್ನು ಸೋಲಿಸುವ ಶಕ್ತಿ ಶಿಕ್ಷಣಕ್ಕೆ ಮಾತ್ರವೇ ಇದೆ' ಎಂದಿದ್ದಾರೆ ಕಮಲ್ ಹಾಸನ್. ಇದೀಗ ತಮಿಳುನಾಡು ಬಿಜೆಪಿಯು ಕಮಲ್ ಹಾಸನ್ ಅವರ ಈ ಹೇಳಿಕೆಯನ್ನು ವಿರೋಧಿಸಿದ್ದು, ತಮಿಳುನಾಡು ಬಿಜೆಪಿ ಕಾರ್ಯದರ್ಶಿ ಅಮರ್ ಪ್ರಸಾದ್ ರೆಡ್ಡಿ ಮಾತನಾಡಿ, ಕಮಲ್ ಹಾಸನ್ ಸನಾತನ ಧರ್ಮವನ್ನು ಮುಗಿ



# ವಿದೇಶದಲ್ಲೂ 'ಸು ಫ್ರಮ್ ಸೋ' ಸಿನಿಮಾ ಅಬ್ಬರ

'ಸು ಫ್ರಮ್ ಸೋ' ಸಿನಿಮಾ ಕರ್ನಾಟಕದಲ್ಲಿ ಅಪಾರ ಯಶಸ್ಸು ಕಂಡ ನಂತರ ವಿದೇಶಗಳಲ್ಲೂ ಭರ್ಜರಿ ಪ್ರದರ್ಶನ ಕಾಣುತ್ತಿದೆ. ಮಲಯಾಳಂ ಡಬ್ಬಿಂಗ್ ಜೊತೆಗೆ ಇತರ ರಾಜ್ಯಗಳಲ್ಲೂ ಪ್ರದರ್ಶನಗೊಂಡಿರುವ ಈ ಚಿತ್ರ ಈಗಾಗಲೇ ವಿದೇಶದಲ್ಲಿ 5 ಲಕ್ಷ ಡಾಲರ್‌ಗೂ ಹೆಚ್ಚು ಕಲೆಕ್ಷನ್ ಮಾಡಿದೆ. ಕರ್ನಾಟಕದಲ್ಲೂ ಸಿನಿಮಾ ಅಬ್ಬರಿಸುತ್ತಿದೆ. 'ಸು ಫ್ರಮ್ ಸೋ' ಸಿನಿಮಾ ಕರ್ನಾಟಕದಲ್ಲಿ ಅಬ್ಬರಿಸುತ್ತಿರುವ ಸಂದರ್ಭದಲ್ಲೇ ಕೇರಳಕ್ಕೆ ತೆರಳಿದೆ. ಮಲಯಾಳಂ ಭಾಷೆಗೆ ಸಿನಿಮಾ ಡಬ್ ಆಗಿ ತೆರೆ ಕಂಡಿದೆ. ಇದರ ಜೊತೆಗೆ ಮುಂಬೈ, ಹೈದರಾಬಾದ್ ಮೊದಲಾದ ಕಡೆಗಳಲ್ಲಿ ಕನ್ನಡ ಭಾಷೆಯಲ್ಲಿ ಸಿನಿಮಾ ಪ್ರದರ್ಶನ ಕಾಣುತ್ತಿದೆ. ಈ ಚಿತ್ರ ಈಗ ವಿದೇಶದಲ್ಲಿ ಅಬ್ಬರಿಸುತ್ತಿದೆ. ಭಾರತದಲ್ಲಿ



ಹೊಸ ಅಲೆ ಸೃಷ್ಟಿಸಿದ ಈ ಚಿತ್ರ, ಈಗ ವಿದೇಶಿ ಪ್ರೇಕ್ಷಕರಿಗೆ ಇಷ್ಟ ಆಗಿದೆ. ಈ ಚಿತ್ರನ್ನು ಅಲ್ಲಿಯ ಜನರು ಇಷ್ಟಪಟ್ಟಿದ್ದಾರೆ. 'ಸು ಫ್ರಮ್ ಸೋ' ಸಿನಿಮಾ ವಿದೇಶದಲ್ಲಿ ಆಗಸ್ಟ್ 1ರಿಂದ ರಿಲೀಸ್ ಆಗಿದೆ. ಕಳೆದ ಐದು ದಿನಗಳಲ್ಲಿ ಸಿನಿಮಾ ಅಲ್ಲಿ ಬರೋಬ್ಬರಿ 5 ಲಕ್ಷ ಡಾಲರ್ ಕಲೆಕ್ಷನ್ ಮಾಡಿದೆ. ಅಂದರೆ, ಭಾರತೀಯ ರೂಪಾಯಿ ಪ್ರಕಾರ ಸುಮಾರು 4.38 ಕೋಟಿ ರೂಪಾಯಿ ಆಗಲಿದೆ. ಸಿನಿಮಾದ ಬಜೆಟ್ ನಾಲ್ಕು ಕೋಟಿ ರೂಪಾಯಿ ಆಸುಪಾಸಿನಲ್ಲಿ ಇದೆ. ಈಗ ಈ ಸಿನಿಮಾ ವಿದೇಶ ಒಂದರಲ್ಲೇ ಬಜೆಟ್‌ಗೂ ಮೀರಿದ ಕಲೆಕ್ಷನ್ ಮಾಡಿದೆ. 'ಸು ಫ್ರಮ್ ಸೋ' ಚಿತ್ರವನ್ನು ಜನರು ಕೊಂಡಾಡುತ್ತಾ ಇದ್ದಾರೆ. ಸಿನಿಮಾ ಪ್ರೇಕ್ಷಕರಿಗೆ ಇಷ್ಟ ಆಗಲು ಹಲವು ಕಾರಣಗಳು ಇವೆ. ಈ ಸಿನಿಮಾದ ಮೇಕಿಂಗ್ ಪ್ರೇಕ್ಷಕರಿಗೆ ಇಷ್ಟ ಆಗಿದೆ. ಹಳ್ಳಿಯಲ್ಲಿ ನಡೆಯೋ ಕಥೆ ಮನಸ್ಸಿಗೆ ನಾಟುವಂತೆ ಇದೆ. ಅಲ್ಲದೆ, ಹಾಸ್ಯದ ಮೂಲಕ ಒಂದು ಗಂಭೀರ ವಿಚಾರವನ್ನು ನಿರ್ದೇಶಕರು ಹೇಳಿದ್ದಾರೆ. 'ಸು ಫ್ರಮ್ ಸೋ' ಚಿತ್ರಕ್ಕೆ ರಾಜ್ ಬಿ. ಶೆಟ್ಟಿ ನಿರ್ಮಾಣ ಇದೆ.

# 11 ಸಿಕ್ಸ್, ಕೇವಲ 1 ಫೋರ್: ಸ್ಫೋಟಕ ಸೆಂಚುರಿ ಸಿಡಿಸಿದ ಆರ್‌ಸಿಬಿ ಆಟಗಾರ

ಬರೋಬ್ಬರಿ 13 ಸಿಕ್ಸ್

ಸ್ವಸ್ತಿಕ ಚಿಕಾರ ಈ ಬಾರಿಯ ಐಪಿಎಲ್‌ನಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡದಲ್ಲಿ ಕಾಣಿಸಿಕೊಂಡಿದ್ದರು. ಇದಾಗ್ಯೂ ಯುವ ಆಟಗಾರನಿಗೆ ಚೊಚ್ಚಲ ಪಂದ್ಯವಾಡುವ ಅವಕಾಶ ಸಿಕ್ಕಿರಲಿಲ್ಲ. ಇದೀಗ ದೇಶೀಯ ಅಂಗಳದಲ್ಲಿ ಕಣಕ್ಕಿಳಿದಿರುವ ಸ್ವಸ್ತಿಕ್ ಭರ್ಜರಿ ಸೆಂಚುರಿ ಸಿಡಿಸುವ ಮೂಲಕ ಎಲ್ಲರ ಗಮನ ಸೆಳೆದಿದ್ದಾರೆ.

54ನೇ ಅಖಿಲ ಭಾರತ ಎಫ್‌ಸಿಐ ಅಂತರ ವಲಯ ಕ್ರಿಕೆಟ್ ಟೂರ್ನಮೆಂಟ್‌ನ ಫೈನಲ್ ಪಂದ್ಯದಲ್ಲಿ ಉತ್ತರ ವಲಯ ತಂಡ ಭರ್ಜರಿ ಗೆಲುವು ಸಾಧಿಸಿದೆ. ಈ ಗೆಲುವಿನ ರೂವಾರಿ ರಾಯಲ್ ಚಾಲೆಂಜರ್ಸ್ ಬೆಂಗಳೂರು (ಆರ್‌ಸಿಬಿ) ತಂಡದ ಆಟಗಾರ ಸ್ವಸ್ತಿಕ್ ಚಿಕಾರ.




ತಮಿಳುನಾಡಿನ ಸೇಲಂನಲ್ಲಿನ ಜಿವಿಎಸ್ ಕ್ಲಬ್ ಮೈದಾನದಲ್ಲಿ ನಡೆದ ಫೈನಲ್ ಪಂದ್ಯದಲ್ಲಿ ಉತ್ತರ ವಲಯ ಹಾಗೂ ಪಶ್ಚಿಮ ವಲಯ ತಂಡಗಳು ಮುಖಾಮುಖಿಯಾಗಿದ್ದವು. ಈ ಪಂದ್ಯದಲ್ಲಿ ಟಾಸ್ ಗೆದ್ದ ಪಶ್ಚಿಮ ವಲಯ ಬೌಲಿಂಗ್ ಆಯ್ದುಕೊಂಡರು. ಅದರಂತೆ ಮೊದಲು ಬ್ಯಾಟ್ ಮಾಡಿದ ಉತ್ತರ ವಲಯ ಪರ ಸ್ವಸ್ತಿಕ್ ಚಿಕಾರ ಹಾಗೂ ನಿತಿನ್ ಸೈನಿ ಆರಂಭಿಕರಾಗಿ ಕಣಕ್ಕಿಳಿದಿದ್ದರು.

ಆರಂಭದಿಂದಲೇ ಬಿರುಸಿನ ಬ್ಯಾಟಿಂಗ್‌ಗೆ ಒತ್ತು ನೀಡಿದ ಈ ಜೋಡಿಯು ಮೊದಲ ವಿಕೆಟ್‌ಗೆ 145 ರನ್‌ಗಳ ಜೊತೆಯಾಟವಾಡಿದರು.

ಈ ಹಂತದಲ್ಲಿ ಬಿರುಸಿನ ಹೊಡೆತಕ್ಕೆ ಮುಂದಾಗಿ ನಿತಿನ್ ಸೈನಿ (55) ವಿಕೆಟ್ ಒಪ್ಪಿಸಿದರು. ಇದಾಗ್ಯೂ ಮತ್ತೊಂದೆಡೆ ಆರ್ಭಟ ಮುಂದುವರೆಸಿದ ಸ್ವಸ್ತಿಕ್ ಚಿಕಾರ ಪಶ್ಚಿಮ ವಲಯ ಬೌಲರ್‌ಗಳ ಬೆಂಡೆತ್ತಿದರು. ಈ ಮೂಲಕ ಕೇವಲ 62 ಎಸೆತಗಳಲ್ಲಿ ಶತಕ ಪೂರೈಸಿದರು. ಶತಕದ ಬಳಿಕ 6 ಎಸೆತಗಳನ್ನು ಎದುರಿಸಿದ ಸ್ವಸ್ತಿಕ್ ಚಿಕಾರ ಮತ್ತೆರಡು ಸಿಕ್ಸ್ ಸಿಡಿಸಿದರು. ಈ ಮೂಲಕ ಕೇವಲ 68 ಎಸೆತಗಳಲ್ಲಿ 11 ಸಿಕ್ಸ್ ಹಾಗೂ 1 ಫೋರ್‌ನೊಂದಿಗೆ 114 ರನ್ ಚಚ್ಚಿದರು. ಸ್ವಸ್ತಿಕ್ ಚಿಕಾರ ಅವರ ಈ ಸ್ಫೋಟಕ ಸೆಂಚುರಿ ನೆರವಿನೊಂದಿಗೆ ಉತ್ತರ ವಲಯ ತಂಡ 20 ಓವರ್‌ಗಳಲ್ಲಿ 2 ವಿಕೆಟ್ ಕಳೆದುಕೊಂಡು 197 ರನ್ ಕಲೆಹಾಕಿತು. 198 ರನ್‌ಗಳ ಕಠಿಣ ಗುರಿ ಬೆನ್ನತ್ತಿದ ಪಶ್ಚಿಮ ವಲಯ ತಂಡಕ್ಕೆ ಸಾಹಿಲ್ ಪರಕ್ (46) ಹಾಗೂ ಓಂಕಾರ್ ಗೌರವ್ (23) ಉತ್ತಮ ಆರಂಭ ಒದಗಿಸಿದ್ದರು. ಇನ್ನು ಮಧ್ಯಮ ಕ್ರಮಾಂಕದಲ್ಲಿ ದಶರತ್ ಚಾವನ್ 29 ಎಸೆತಗಳಲ್ಲಿ 47 ರನ್ ಬಾರಿಸಿದರು. ಆದರೆ ಆ ಬಳಿಕ ದಿಢೀರ್ ಕುಸಿತಕ್ಕೊಳಗಾದ ಪಶ್ಚಿಮ ವಲಯ ತಂಡವು 18.3 ಓವರ್‌ಗಳಲ್ಲಿ 160 ರನ್‌ಗಳಿಸಿ ಆಲೌಟ್ ಆಯಿತು. ಈ ಮೂಲಕ ಉತ್ತರ ವಲಯ ತಂಡವು 37 ರನ್‌ಗಳ ಭರ್ಜರಿ ಜಯ ಸಾಧಿಸಿ ಅಖಿಲ ಭಾರತ ಎಫ್‌ಸಿಐ ಅಂತರ ವಲಯ ಕ್ರಿಕೆಟ್ ಟೂರ್ನಮೆಂಟ್‌ನಲ್ಲಿ ಚಾಂಪಿಯನ್ ಪಟ್ಟ ಅಲಂಕರಿಸಿದೆ. ಇನ್ನು ಈ ಪಂದ್ಯದಲ್ಲಿ ಭರ್ಜರಿ ಸೆಂಚುರಿ ಸಿಡಿಸಿ ಮಿಂಚಿದ

# ಜೈಸ್ವಾಲ್‌ಗೆ ಮುಂಬಡ್ತಿ, ಗಿಲ್ ಟಾಪ್ 10ರಿಂದ ಔಟ್!



ಇಂಗ್ಲೆಂಡ್ ವಿರುದ್ಧದ ಟೆಸ್ಟ್ ಸರಣಿಯ ನಂತರ ಟೀಂ ಇಂಡಿಯಾದ ಆಟಗಾರರ ಐಸಿಸಿ ಶ್ರೇಯಾಂಕದಲ್ಲಿ ಏರುಪೇರು ಕಂಡುಬಂದಿದೆ. ಯಶಸ್ವಿ ಜೈಸ್ವಾಲ್ ಐದನೇ ಸ್ಥಾನಕ್ಕೇರಿದರೆ, ಶುಭ್‌ಮನ್ ಗಿಲ್ 13ನೇ ಸ್ಥಾನಕ್ಕೆ ಕುಸಿದಿದ್ದಾರೆ. ರಿಷಭ್ ಪಂತ್ ಎಂಟನೇ ಸ್ಥಾನಕ್ಕೆ ಕುಸಿದಿದ್ದಾರೆ. ಜೈಸ್ವಾಲ್ ಅವರ ಅದ್ಭುತ ಪ್ರದರ್ಶನ ಮತ್ತು ಗಿಲ್ ಅವರ ಶ್ರೇಯಾಂಕದಲ್ಲಿನ ಇಳಿಕೆ ಚರ್ಚೆಯ ವಿಷಯವಾಗಿದೆ. ಇಂಗ್ಲೆಂಡ್ ಪ್ರವಾಸವನ್ನು ಡ್ರಾದೊಂದಿಗೆ ಮುಗಿಸಿರುವ ಟೀಂ ಇಂಡಿಯಾ ಭಾರತಕ್ಕೆ ವಾಪಸ್ಸಾಗಿದೆ. ಆದಾಗ್ಯೂ ಸರಣಿಯಲ್ಲಿ ಉತ್ತಮ ಪ್ರದರ್ಶನ ನೀಡಿದ ಕೆಲವು ಆಟಗಾರರಿಗೆ ಇದೀಗ ಐಸಿಸಿ ನೂತನ ರ್‍ಯಾಂಕಿಂಗ್ ಪಟ್ಟಿಯಲ್ಲಿ ಆಘಾತ ಎದುರಾಗಿದೆ.

ಇನ್ನು ಕೆಲವರಿಗೆ ಮುಂಬಡ್ತಿಯೂ ಸಿಕ್ಕದೆ. ಆದರೆ ಸರಣಿಯುದ್ದಕ್ಕೂ ಅಮೋಘ ಪ್ರದರ್ಶನ ನೀಡಿದ್ದ ನಾಯಕ ಗಿಲ್ 4 ಸ್ಥಾನ ಕುಸಿತ ಕಂಡಿದ್ದು, ಟಾಪ್ 10 ರೊಳಗಿಂದ ಹೊರಬಿದ್ದಿದ್ದಾರೆ. ಟಾಪ್ 10 ರೊಳಗೆ ಸ್ಥಾನ ಪಡೆದಿರುವ ಟೀಂ ಇಂಡಿಯಾ ಆಟಗಾರರ ಪಟ್ಟಿಯಲ್ಲಿ ಯಶಸ್ವಿ ಜೈಸ್ವಾಲ್ ಅಗ್ರಸ್ಥಾನದಲ್ಲಿದ್ದಾರೆ. ಓವಲ್ ಟೆಸ್ಟ್ ಪಂದ್ಯದಲ್ಲಿ ಭರ್ಜರಿ ಶತಕ ಸಿಡಿಸಿದ್ದ ಜೈಸ್ವಾಲ್ ಇದೀಗ ಐಸಿಸಿ ಟೆಸ್ಟ್ ಬ್ಯಾಟಿಂಗ್ ಶ್ರೇಯಾಂಕದಲ್ಲಿ ಐದನೇ ಸ್ಥಾನವನ್ನು ತಲುಪಿದ್ದಾರೆ. ಉಳಿದಂತೆ ಟೆಸ್ಟ್ ರ್‍ಯಾಂಕಿಂಗ್‌ನಲ್ಲಿ ಜೋ ರೂಟ್ ಮೊದಲ ಸ್ಥಾನದಲ್ಲಿದ್ದರೆ, ಅವರ ತಂಡದ ಸಹ ಆಟಗಾರ ಹ್ಯಾರಿ ಬ್ರೂಕ್ ಎರಡನೇ ಸ್ಥಾನದಲ್ಲಿದ್ದಾರೆ. ನ್ಯೂಜಿಲೆಂಡ್‌ನ ಕೇನ್ ವಿಲಿಯಮ್ಸನ್ ಪಟ್ಟಿಯಲ್ಲಿ ಮೂರನೇ ಸ್ಥಾನದಲ್ಲಿದ್ದರೆ, ಆಸ್ಟ್ರೇಲಿಯಾದ ಸ್ಟೀವ್ ಸ್ಮಿತ್ ನಾಲ್ಕನೇ ಸ್ಥಾನದಲ್ಲಿದ್ದಾರೆ. ಇಂಜುರಿಯಿಂದಾಗಿ ಸರಣಿಯ ಕೊನೆಯ ಪಂದ್ಯದಿಂದ ಹೊರಗುಳಿದಿದ್ದ ರಿಷಭ್ ಪಂತ್ ಎಂಟನೇ ಸ್ಥಾನಕ್ಕೆ ಕುಸಿದಿದ್ದಾರೆ. ಹಾಗೆಯೇ ಇಂಗ್ಲೆಂಡ್ ವಿರುದ್ಧದ ಟೆಸ್ಟ್ ಸರಣಿಯಲ್ಲಿ 754 ರನ್ ಗಳಿಸಿದ್ದರೂ ನಾಯಕ ಶುಭ್‌ಮನ್ ಗಿಲ್ ದೊಡ್ಡ ಹಿನ್ನಡೆ ಅನುಭವಿಸಿದ್ದಾರೆ. ಅವರ ಶ್ರೇಯಾಂಕ ಕುಸಿದಿದ್ದು ಇದೀಗ 13 ನೇ ಸ್ಥಾನಕ್ಕೆ ಜಾರಿದ್ದಾರೆ. ಇದಕ್ಕೂ ಮೊದಲು ಅವರು 9 ನೇ ಸ್ಥಾನದಲ್ಲಿದ್ದರು. ಇಂಗ್ಲೆಂಡ್ ವಿರುದ್ಧದ ಟೆಸ್ಟ್ ಸರಣಿಯಲ್ಲಿ ಆಡಿದ 5 ಪಂದ್ಯಗಳಲ್ಲಿ 41.10 ಸರಾಸರಿಯಲ್ಲಿ 411 ರನ್ ಗಳಿಸಿದ ಯಶಸ್ವಿ ಜೈಸ್ವಾಲ್ ಈ ಸರಣಿಯಲ್ಲಿ ಎರಡು ಶತಕ ಮತ್ತು ಎರಡು ಅರ್ಧಶತಕಗಳನ್ನು ಸಿಡಿಸಿದ್ದಾರೆ. ಇದರಲ್ಲಿ ಅವರ ಅತ್ಯುತ್ತಮ ಸ್ಕೋರ್ 118 ರನ್‌ಗಳಾಗಿದೆ. ಟೀಂ ಇಂಡಿಯಾ ಪರ ಇದುವರೆಗೆ 24 ಟೆಸ್ಟ್ ಪಂದ್ಯಗಳನ್ನಾಡಿರುವ ಜೈಸ್ವಾಲ್ 50.2 ಸರಾಸರಿಯಲ್ಲಿ 2209 ರನ್‌ಗಳನ್ನು ಗಳಿಸಿದ್ದಾರೆ. ಇದರಲ್ಲಿ ಆರು ಶತಕಗಳು, ಎರಡು ದ್ವಿಶತಕಗಳು ಮತ್ತು 12 ಅರ್ಧಶತಕಗಳು ಸೇರಿವೆ. ಭವಿಷ್ಯದಲ್ಲಿ ನಡೆಯಲಿರುವ ಪಂದ್ಯಗಳಲ್ಲಿಯೂ ಅವರಿಂದ ಬಲವಾದ ಪ್ರದರ್ಶನವನ್ನು ಭಾರತೀಯ ಅಭಿಮಾನಿಗಳು ನಿರೀಕ್ಷಿಸುತ್ತಾರೆ.

# ಏಷ್ಯಾ ಕಪ್‌ಗೆ ಭಾರತದ ಸಂಭಾವ್ಯ ತಂಡ

ಯುಎಇನಲ್ಲಿ ನಡೆಯಲಿರುವ ಈ ಬಾರಿಯ ಏಷ್ಯಾಕಪ್‌ನಲ್ಲಿ ಒಟ್ಟು 8 ತಂಡಗಳು ಕಣಕ್ಕಿಳಿಯಲಿವೆ. ಈ ತಂಡಗಳಲ್ಲಿ ಭಾರತ, ಪಾಕಿಸ್ತಾನ್, ಒಮಾನ್ ಮತ್ತು ಯುಎಇ ಗ್ರೂಪ್ ಎ ನಲ್ಲಿದ್ದರೆ, ಬಾಂಗ್ಲಾದೇಶ್, ಅಫ್ಘಾನಿಸ್ತಾನ್, ಹಾಂಗ್ ಕಾಂಗ್ ಹಾಗೂ ಶ್ರೀಲಂಕಾ ಬಿ ಗ್ರೂಪ್‌ನಲ್ಲಿದೆ. ಹೀಗಾಗಿ ಮೊದಲ ಸುತ್ತಿನಲ್ಲೇ ಭಾರತ ಮತ್ತು ಪಾಕಿಸ್ತಾನ್ ತಂಡಗಳ ಮುಖಾಮುಖಿಯನ್ನು ಎದುರು ನೋಡಬಹುದು. ಏಷ್ಯಾಕಪ್ ಟಿ20 ಟೂರ್ನಿಗೆ ದಿನಗಣನೆ ಶುರುವಾಗಿದೆ. ಸೆಪ್ಟೆಂಬರ್ 9 ರಿಂದ ಶುರುವಾಗಲಿರುವ ಈ ಟೂರ್ನಿಗಾಗಿ ಆಗಸ್ಟ್ ಮೂರನೇ ವಾರದಲ್ಲಿ ತಂಡವನ್ನು ಪ್ರಕಟಿಸಲು ಬಿಸಿಸಿಐ ನಿರ್ಧರಿಸಿದೆ. ಏಷ್ಯನ್ ರಾಷ್ಟ್ರಗಳ ನಡುವಣ ಈ ಕ್ರಿಕೆಟ್ ಕದನಕ್ಕಾಗಿ ಯುವ ಪಡೆಯನ್ನು ಆಯ್ಕೆ ಮಾಡಲು ನಿರ್ಧರಿಸಲಾಗಿದ್ದು, ಹೀಗಾಗಿ ಈ ಬಾರಿಯ ಟೀಮ್ ಇಂಡಿಯಾದಲ್ಲಿ ಹಿರಿಯ ಆಟಗಾರರಿಗೆ ಅವಕಾಶ ಸಿಗುವುದಿಲ್ಲ. ಅಲ್ಲದೆ ಕಳೆದ ಫೆಬ್ರವರಿಯಲ್ಲಿ ನಡೆದ ಇಂಗ್ಲೆಂಡ್ ವಿರುದ್ಧದ ಟಿ20 ಸರಣಿಯ ವೇಳೆ ಹೊರಗುಳಿದಿದ್ದ ಶುಭ್‌ಮನ್ ಗಿಲ್ ಹಾಗೂ ಯಶಸ್ವಿ ಜೈಸ್ವಾಲ್ ಮತ್ತೆ ಟಿ20 ತಂಡದಲ್ಲಿ ಕಾಣಿಸಿಕೊಳ್ಳಲಿದ್ದಾರೆ.

ಅದರಂತೆ ಏಷ್ಯಾಕಪ್‌ನಲ್ಲಿ ಭಾರತ ತಂಡದ ಆರಂಭಿಕರಾಗಿ ಯಶಸ್ವಿ ಜೈಸ್ವಾಲ್ ಹಾಗೂ ಅಭಿಷೇಕ್ ಶರ್ಮಾ ಆಯ್ಕೆಯಾಗುವುದು ಖಚಿತ. ಇನ್ನು ಮೂರನೇ ಕ್ರಮಾಂಕದ ಬ್ಯಾಟರ್ ಆಗಿ ಶುಭ್‌ಮನ್ ಗಿಲ್ ತಂಡದಲ್ಲಿ ಸ್ಥಾನ ಪಡೆಯಲಿದ್ದಾರೆ. ಹಾಗೆಯೇ ನಾಯಕನಾಗಿ ಸೂರ್ಯಕುಮಾರ್ ಯಾದವ್ ಕಾಣಿಸಿಕೊಳ್ಳುವುದು ಖಚಿತ. ಇನ್ನು ವಿಕೆಟ್ ಕೀಪರ್ ಬ್ಯಾಟರ್‌ಗಳಾಗಿ ಸಂಜು ಸ್ಯಾಮ್ಸನ್ ಹಾಗೂ ರಿಷಭ್ ಪಂತ್‌ಗೆ ಅವಕಾಶ ನೀಡುವ ಸಾಧ್ಯತೆಯಿದೆ. ಆದರೆ ಇಂಗ್ಲೆಂಡ್ ವಿರುದ್ಧದ ಟೆಸ್ಟ್ ಸರಣಿ ವೇಳೆ ಗಾಯಗೊಂಡಿರುವ ಪಂತ್ ಸಂಪೂರ್ಣ ಫಿಟ್ ಆಗದಿದ್ದರೆ, ಜಿತೇಶ್ ಶರ್ಮಾಗೆ ಚಾನ್ಸ್ ಸಿಗಬಹುದು. ಹಾಗೆಯೇ ಮಧ್ಯಮ ಕ್ರಮಾಂಕದ ಬ್ಯಾಟರ್‌ಗಳಾಗಿ ತಿಲಕ್ ವರ್ಮಾ ಹಾಗೂ ಶ್ರೇಯಸ್ ಅಯ್ಯರ್ ಅವರನ್ನು ಆಯ್ಕೆ ಮಾಡಬಹುದು.



ಆಲ್‌ರೌಂಡರ್‌ಗಳ ಪಟ್ಟಿಯಲ್ಲಿ ಹಾರ್ದಿಕ್ ಪಾಂಡ್ಯ, ವಾಷಿಂಗ್ಟನ್ ಸುಂದರ್ ಹಾಗೂ ಅಕ್ಷರ್ ಪಟೇಲ್ ತಂಡದಲ್ಲಿ ಕಾಣಿಸಿಕೊಳ್ಳಲಿದ್ದಾರೆ.

# ಸಂಜು ಸ್ಯಾಮ್ಸನ್ ಸಿಎಸ್‌ಕೆ ಎಂಟ್ರಿಗೆ ಬ್ರೇಕ್

ಸ್ಯಾಮ್ಸನ್ ಮೇಲೆ ಕಣ್ಣಿಟ್ಟಿರುವುದು ನಿಜ

ಚೆನ್ನೈ ಸೂಪರ್ ಕಿಂಗ್ಸ್ ಫ್ರಾಂಚೈಸಿಯು ಮಹೇಂದ್ರ ಸಿಂಗ್ ಧೋನಿಯ ಉತ್ತರಾಧಿಕಾರಿಯನ್ನು ಹುಡುಕುತ್ತಿದೆ. ಈ ಹುಡುಕಾಟದ ನಡುವೆ ಸಿಎಸ್‌ಕೆ ಜೊತೆ ಸಂಜು ಸ್ಯಾಮ್ಸನ್ ಹೆಸರು ತಳುಕು ಹಾಕಿಕೊಂಡಿತ್ತು. ಇದರ ಬೆನ್ನಲ್ಲೇ ಸ್ಯಾಮ್ಸನ್ ಖರೀದಿಗಾಗಿ ನಾವು ಆಸಕ್ತರಾಗಿದ್ದೇವೆ ಎಂಬುದನ್ನು ಸಹ ಸಿಎಸ್‌ಕೆ ಫ್ರಾಂಚೈಸಿ ಮೂಲಗಳು ಖಚಿತಪಡಿಸಿದ್ದರು. ಆದರೀಗ. ಇಂಡಿಯನ್ ಪ್ರೀಮಿಯರ್ ಲೀಗ್ ಸೀಸನ್-19 ರ ಮಿನಿ ಹರಾಜಿಗೂ ಮುನ್ನ ಚೆನ್ನೈ ಸೂಪರ್ ಕಿಂಗ್ಸ್ ಬಿಗ್ ಡೀಲ್ ಕುದುರಿಸಿಕೊಳ್ಳುವ ಸಾಧ್ಯತೆಯಿದೆ. ಅದು ಕೂಡ ರಾಜಸ್ಥಾನ್ ರಾಯಲ್ಸ್ ತಂಡದ ನಾಯಕ ಸಂಜು ಸ್ಯಾಮ್ಸನ್ ಅವರನ್ನು ಖರೀದಿಸುವ ಮೂಲಕ..! ಇಂತಹದೊಂದು ಸುದ್ದಿಯೊಂದು ಕಳೆದ ಕೆಲ ದಿನಗಳಿಂದ ಹರಿದಾಡುತ್ತಿದ್ದವು. ಈ ಸುದ್ದಿ ಬೆನ್ನಲ್ಲೇ ಐಪಿಎಲ್ 2026ರ ಟ್ರೇಡ್ ವಿಂಡೋ ಮೂಲಕ ಸಂಜು ಸ್ಯಾಮ್ಸನ್ ಅವರನ್ನು ಆಯ್ಕೆ ಮಾಡಲು ನಾವು ಆಸಕ್ತರಾಗಿದ್ದೇವೆ ಎಂಬುದನ್ನು ಚೆನ್ನೈ ಸೂಪರ್ ಕಿಂಗ್ಸ್ ಫ್ರಾಂಚೈಸಿಯ ಅಧಿಕಾರಿಯೊಬ್ಬರು ಖಚಿತಪಡಿಸಿದ್ದರು. ಸ್ಯಾಮ್ಸನ್ ಅವರ ಆಯ್ಕೆಯನ್ನು ನಾವು ಖಂಡಿತವಾಗಿಯೂ ಎದುರು ನೋಡುತ್ತಿದ್ದೇವೆ. ಏಕೆಂದರೆ ಅವರು ಪರಿಪೂರ್ಣ ಆಟಗಾರ. ಹೀಗಾಗಿ ಅವರನ್ನು ತಂಡಕ್ಕೆ ಕರೆತರಲು ಉತ್ಸುಕರಾಗಿದ್ದೇವೆ ಎಂದು ತಿಳಿಸಿದ್ದರು. ಸಂಜು ಸ್ಯಾಮ್ಸನ್ ಭಾರತೀಯ ಬ್ಯಾಟ್ಸ್‌ಮನ್. ಅಷ್ಟೇ ಅಲ್ಲದೆ ವಿಕೆಟ್ ಕೀಪರ್ ಮತ್ತು ಓಪನರ್. ಅವರು ಆಯ್ಕೆಗೆ ಲಭ್ಯವಿದ್ದರೆ, ನಮ್ಮ ತಂಡಕ್ಕೆ ಸೇರಿಸಿಕೊಳ್ಳುವ ಆಯ್ಕೆಯನ್ನು ನಾವು ಖಂಡಿತವಾಗಿಯೂ ಪರಿಗಣಿಸುತ್ತೇವೆ.

ಆದರೆ ಯಾರನ್ನು ನೀಡಿ ಸಂಜು ಸ್ಯಾಮ್ಸನ್ ಅವರನ್ನು ಖರೀದಿಸುತ್ತೇವೆ ಎಂಬ ಬಗ್ಗೆ ನಾವು ಯಾವುದೇ ನಿರ್ಧಾರವನ್ನು ತೆಗೆದುಕೊಂಡಿಲ್ಲ. ಇದಾಗ್ಯೂ ನಾವು ಸ್ಯಾಮ್ಸನ್ ಮೇಲೆ ಕಣ್ಣಿಟ್ಟಿರುವುದು ನಿಜ ಎಂದು ಚೆನ್ನೈ ಸೂಪರ್ ಕಿಂಗ್ಸ್ ಫ್ರಾಂಚೈಸಿ ಅಧಿಕಾರಿಯೊಬ್ಬರು ಸ್ಪಷ್ಟಪಡಿಸಿದ್ದರು. ಹೀಗಾಗಿ ಸಂಜು ಸ್ಯಾಮ್ಸನ್ ಚೆನ್ನೈ ಸೂಪರ್ ಕಿಂಗ್ಸ್ ಪಾಲಾಗಲಿದ್ದಾರೆ ಎಂಬ ಸುದ್ದಿ ಮಹತ್ವ ಪಡೆದುಕೊಂಡಿತ್ತು. ಆದರೀಗ ಈ ಸುದ್ದಿಗಳಿಗೆ ರಾಜಸ್ಥಾನ್ ರಾಯಲ್ಸ್ ಫ್ರಾಂಚೈಸಿ ಬ್ರೇಕ್ ಹಾಕಿದೆ. ಸ್ಯಾಮ್ಸನ್ ಮುಂದಿನ ಸೀಸನ್‌ನಲ್ಲೂ ರಾಜಸ್ಥಾನ್ ರಾಯಲ್ಸ್ ಪರ ಕಣಕ್ಕಿಳಿಯಲಿದ್ದಾರೆ ಎಂಬುದನ್ನು ಖಚಿತಪಡಿಸಿದ್ದಾರೆ.



ಇತ್ತ ಆರ್‌ಆರ್ ತಂಡದ ಈ ಖಚಿತಪಡಿಸುವಿಕೆ ಟ್ರೇಡ್ ಡೀಲ್ ವಿಫಲವಾಗಿರುವುದರ ಭಾಗವಾ ಅಥವಾ ಸ್ಯಾಮ್ಸನ್ ಅವರನ್ನು ತಂಡದಲ್ಲೇ ಉಳಿಸಿಕೊಳ್ಳುವ ನಿರ್ಧಾರವಾ ಎಂಬುದು ಬಹಿರಂಗವಾಗಿಲ್ಲ.

ಇದಾಗ್ಯೂ ಸಂಜು ಸ್ಯಾಮ್ಸನ್ ಅವರು ರಾಜಸ್ಥಾನ್ ರಾಯಲ್ಸ್ ತಂಡದಲ್ಲೇ ಉಳಿಯಲಿದ್ದಾರೆ ಎಂಬುದನ್ನು ಮಾತ್ರ ಖಚಿತಪಡಿಸಿದ್ದಾರೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966